ಸಂಪುಟ: 05 ಸಂಚಿಕೆ: 181 ಪುಟಗಳು: 08 ಭಾನುವಾರ 14 ಸೆಪ್ಟೆಂಬರ್ 2025
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5


**ಮುಂಜಾನೆ ಮಾತು**
ನಿಮ್ಮ ಅಹಂಕಾರ ನಿಮ್ಮೆದುರಿಗೆ ಮುರಿದು ಬೀಳುವಾಗ ಆಗುವ ಸಂಕಟ ಹೇಳಿ ಮುಗಿಯುವುದಲ್ಲ. ಅದಕ್ಕೇ ಅಧಿಕಾರವಿದ್ದಾಗ ತಗ್ಗಿ-ಬಗ್ಗಿ ನಡೆಯುವುದು ಒಳ್ಳೆಯದು!

# ಉದಯ ವಾಹಿನಿ

UV
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ಡ್ರಗ್ಸ್ ಪೆಡ್ಲರ್ಸ್ ಜೊತೆಗೆ ಖಾಕಿ ನಂಟು 11 ಪೊಲೀಸರ ಮಾನತು

**ಇಲಾಖೆಯೇ ಮುಖ ಮುಚ್ಚಿಕೊಳ್ಳುವಂಥ ಪರಿಸ್ಥಿತಿ**



• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಡ್ರಗ್ ಪೆಡ್ಲರ್‌ಗಳ ಜೊತೆಗೆ ಹಲವು ಪೊಲೀಸ್ ಅಧಿಕಾರಿಗಳು ಶಾಮೀಲಾಗಿರುವುದು ಕಂಡು ಬಂದಿದೆ. ಡ್ರಗ್ ಪೆಡ್ಲರ್ಸ್ ಜೊತೆಗೆ ಪಾರ್ಟಿ ಮಾಡಿದ ಎರಡು ಪೊಲೀಸ್ ಠಾಣೆಗಳ ಒಟ್ಟು 11 ಅಧಿಕಾರಿಗಳು, ಸಿಬ್ಬಂದಿಗಳನ್ನು ಅಮಾನತು ಮಾಡಲಾಗಿದೆ.

ಒಂದು ಕಡೆ ರಾಜ್ಯ ಸರ್ಕಾರ ಡ್ರಗ್ಸ್ ಮುಕ್ತ ಬೆಂಗಳೂರು ಕನಸು ಕಾಣುತ್ತಿದೆ. ಇನ್ನೊಂದು ಕಡೆ ಕೆಲವು ಪೊಲೀಸರೇ ಈ ದುಷ್ಕರ್ಮಿಗಳಿಗೆ ಬೆಂಬಲವಾಗಿ ನಿಂತಿದ್ದು, ಇಲಾಖೆಯೇ ಮುಖ ಮುಚ್ಚಿಕೊಳ್ಳುವಂಥ ಪರಿಸ್ಥಿತಿ ತಂದಿಟ್ಟಿದ್ದಾರೆ. ಚಾಮರಾಜಪೇಟೆ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಟಿ. ಮಂಜಣ್ಣ ಹೆಡ್ ಕಾನ್ಸ್‌ಟೇಬಲ್‌ಗಳಾದ ರಮೇಶ್ ಶಿವರಾಜ್ ಪಿಸಿ ಮಧುಸೂದನ್, ಪ್ರಸನ್ನ, ಶಂಕರ್ ಬೆಳಗಲಿ, ಆನಂದ್ ಸಸ್ಪೆಂಡ್ ಮಾಡಿ ಆದೇಶ ಹೊರಡಿಸಲಾಗಿದೆ. ಇನ್ನು ಜಯನಗರ ಠಾಣೆಯ ಎ ಎಸ್ ಐ ಕುಮಾರ್ ಹೆಡ್ ಕಾನ್ಸ್‌ಟೇಬಲ್ ಆನಂದ್ ಸಿಬ್ಬಂದಿಗಳಾದ ಬಸವನಗೌಡ ಸೇರಿದಂತೆ ನಾಲ್ವರನ್ನು ಅಮಾನತು ಮಾಡಿ ಆದೇಶ ಹೊರಡಿಸಲಾಗಿದೆ. ಇವರು ಡ್ರಗ್ಸ್ ಪೆಡ್ಲರುಗಳ ಜೊತೆಗೆ ನೇರವಾಗಿ ನಂಟು ಹೊಂದಿರುವುದಲ್ಲದೆ ಅವರ ಜೊತೆಗೆ ಪಾರ್ಟಿ ಸಹ ಮಾಡಿದ್ದಾರೆ. ತಿಂಗಳಿಗೆ 1.5 ರಿಂದ 2 ಲಕ್ಷದವರೆಗೆ ಮಾಮೂಲಿ ಪಡೆಯುತ್ತಿದ್ದರು ಎಂದು ತಿಳಿದುಬಂದಿದೆ. ಆಗಸ್ಟ್ 22ರಂದು ಆರ್ ಆರ್ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಡ್ರಗ್ಸ್ ಮಾರಾಟ ಮಾಡುತ್ತಿದ್ದ ಆರು ಜನರನ್ನು ಬಂಧಿಸಲಾಗಿತ್ತು. ಇವರು ಕಾಲೇಜು ವಿದ್ಯಾರ್ಥಿಗಳಿಗೆ ಮತ್ತು ಬರುವ ಟೈಡಲ್-100 ಮಾತ್ರೆಗಳನ್ನು ಮಾರಾಟ ಮಾಡುತ್ತಿದ್ದರು. ಸಲ್ಮಾನ್, ನಯಾಜ್ ಉಲ್ಲಾ ನಯಾಜ್ ಖಾನ್ ಸೇರಿದಂತೆ ಆರು ಜನರನ್ನು ಪೊಲೀಸರು ಅರೆಸ್ಟ್ ಮಾಡಿದ್ದರು. ಆರೋಪಿಗಳ ಬಳಿ 1000 ಟೈಡಲ್-100 ಮಾತ್ರೆಗಳು ಪತ್ತೆಯಾಗಿದ್ದವು. ಬಂಧಿತ ಆರೋಪಿಗಳ ಮೊಬೈಲ್ ಪರಿಶೀಲನೆಯ ವೇಳೆ ಅಧಿಕಾರಿಗಳಿಗೆ ಶಾಕ್ ಆಗಿದೆ. ಪೊಲೀಸರ ಜೊತೆಗೆ ಪೆಡ್ಲರ್‌ಗಳು ನಿರಂತರ ಸಂಪರ್ಕದಲ್ಲಿದ್ದರು. ಹಣಕಾಸಿಗೆ ಸಂಬಂಧಿಸಿದ ಮೆಸೇಜ್ ಮತ್ತು ಆಡಿಯೋಗಳು ಸಹ ಪತ್ತೆಯಾಗಿದೆ. ಆರೋಪಿಗಳ ಜೊತೆಗೆ ಪೊಲೀಸರು ಪಾರ್ಟಿ ಮಾಡಿದ ಫೋಟೋಗಳು ಪತ್ತೆಯಾಗಿವೆ.

ತನಿಖೆಗಾಗಿ ಎಸಿಪಿ ಭರತ್ ರೆಡ್ಡಿ ನೇತೃತ್ವದಲ್ಲಿ ತಂಡ ರಚಿಸಲಾಗಿತ್ತು. ಪೊಲೀಸರು ಮಾಮೂಲಿ ಪಡೆಯುತ್ತಿದ್ದ ಸಂಗತಿ ತನಿಖೆಯಲ್ಲಿ ಬಯಲಾಗಿದೆ. ಕಡಿಮೆ ಬೆಲೆಗೆ ಟೈಡಲ್ ಮಾತ್ರೆ ಖರೀದಿಸಿ 300 400 ರೂಪಾಯಿಗೆ ಮಾರಾಟ ಮಾಡುತ್ತಿದ್ದರು. ಕಡಿಮೆ ಬೆಲೆಗೆ ಖರೀದಿಸಿ ಪೊಲೀಸರು ಹೆಚ್ಚಿನ ಬೆಲೆಗೆ ಮಾರಾಟ ಮಾಡಿಸುತ್ತಿದ್ದರು. ಪ್ರತಿ ತಿಂಗಳು ಇನ್ಸ್‌ಪೆಕ್ಟರ್ ಸೇರಿದಂತೆ ಸಿಬ್ಬಂದಿಗಳಿಗೆ ಹಣ ನೀಡುತ್ತಿದ್ದರು. ತಮ್ಮ ಸಂಬಂಧಿಕರ ಖಾತೆಗೂ ಕೂಡ ಪೊಲೀಸರು ಹಣ ಹಾಕಿಸಿಕೊಂಡಿದ್ದಾರೆ. ಪೊಲೀಸರ ಕಳ್ಳಾಟಕ್ಕೆ ಸಂಬಂಧಿಸಿದಂತೆ ಪಶ್ಚಿಮ ವಿಭಾಗ ಡಿಸಿಪಿ ಗಿರೀಶ್ ಅವರಿಗೆ ಎಸಿಪಿ ಭರತ್ ರೆಡ್ಡಿ ವರದಿ ನೀಡಿದ್ದಾರೆ.

1 ರಾಜ್ಯದಲ್ಲಿ ಡ್ರಗ್ಸ್ ದಂಧೆಗೆ ಕಡಿವಾಣ ಹಾಕಲು ಏನು ಕ್ರಮ
2 ಶಾಲಾ-ಕಾಲೇಜುಗಳನ್ನು ಟಾರ್ಗೆಟ್ ಮಾಡುತ್ತಿದ್ದಾರೆ ದಂಧೆಕೋರರು
3 ಡ್ರಗ್ಸ್ ದಂಧೆ ನಿಯಂತ್ರಣ ಮಾಡಲು ಪೊಲೀಸ್ ಇಲಾಖೆ ಪ್ರಯತ್ನ

## ಎಸಿಪಿ ಭರತ್ ರೆಡ್ಡಿ ನೇತೃತ್ವದಲ್ಲಿ ವಿಶೇಷ ತಂಡ






ತನಿಖೆಗಾಗಿ ಎಸಿಪಿ ಭರತ್ ರೆಡ್ಡಿ ನೇತೃತ್ವದಲ್ಲಿ ವಿಶೇಷ ತಂಡ ರಚನೆ ಮಾಡಲಾಗಿತ್ತು. ಈ ತನಿಖೆಯಲ್ಲಿ, ಪೊಲೀಸರ ಕಳ್ಳಾಟ ಪತ್ತೆಯಾಗಿ, ಕಡಿಮೆ ಬೆಲೆಗೆ ಟೈಡಲ್ ಮಾತ್ರೆ ಖರೀದಿಸಿ, 300-400 ರೂ.ಗೆ ಮಾರಾಟ ಮಾಡುತ್ತಿದ್ದುದರ ಬಗ್ಗೆ ಮಾಹಿತಿ ಲಭ್ಯವಾಗಿದೆ ಎನ್ನಲಾಗ್ತಿದೆ. ಪ್ರತಿ ತಿಂಗಳು ಇನ್ಸ್‌ಪೆಕ್ಟರ್ ಮತ್ತು ಸಿಬ್ಬಂದಿಗಳಿಗೆ ಆರೋಪಿಗಳು ಹಣ ನೀಡುತ್ತಿದ್ದರೆಂದು ತಿಳಿದುಬಂದಿದೆ.

ಪೊಲೀಸರ ಭಾಗಿ ಬಗ್ಗೆ ಪಶ್ಚಿಮ ವಿಭಾಗ ಡಿಸಿಪಿ ಗಿರೀಶ್ ಗೆ ವರದಿ ನೀಡಿದ ಎಸಿಪಿ ಭರತ್ ರೆಡ್ಡಿ, ಮತ್ತೊಮ್ಮೆ ಪರಿಶೀಲನೆಗಾಗಿ ಎಸಿಪಿ ಚಂದನ್‌ಗೂ ಸೂಚನೆ ನೀಡಿದ್ದರು. ಈ ವೇಳೆ ಟೈಡಲ್ ಮಾತ್ರೆ ಮಾರಾಟ ಮಾಡಿಸುತ್ತಿದ್ದ ಪತ್ತೆಯಾಗಿದ್ದಾರೆ. ಚಾಮರಾಜಪೇಟೆಯಲ್ಲಿಯೇ ಡ್ರಗ್ಸ್ ಮಾರಾಟ ಮಾಡುತ್ತಿದ್ದ ಆರೋಪಿಗಳು ಪತ್ತೆಯಾಗಿದ್ದು, ಪಶ್ಚಿಮ ವಿಭಾಗ ಡಿಸಿಪಿ ಗಿರೀಶ್ ಸಿಬ್ಬಂದಿ ಸಸ್ಪೆಂಡ್ ಮಾಡಿ ಆದೇಶ ಹೊರಡಿಸಿದ್ದಾರೆ. ಇನ್ಸ್‌ಪೆಕ್ಟರ್ ಟಿ. ಮಂಜಣ್ಣನ್ನು ಅಮಾನತುಗೊಳಿಸಿ, ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಆದೇಶಿಸಿದ್ದಾರೆ.

ಈ ಪ್ರಕರಣದಲ್ಲಿ, ಡ್ರಗ್ಸ್ ಪೆಡ್ಲರ್ಸ್ ಜೊತೆ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಪಾರ್ಟಿ ಮಾಡಿದ್ದು, ಡ್ರಗ್ಸ್ ಮಾರಾಟ ಮಾಡಲು ಪೊಲೀಸರೇ ಸಹಕಾರ ನೀಡ್ತಿದ್ದಾರೆ ಎನ್ನಲಾಗ್ತಿದೆ. ತಿಂಗಳಿಗೆ 1.5 ಲಕ್ಷದಿಂದ 2 ಲಕ್ಷ ರೂಪಾಯಿ ಮಾಮೂಲಿ ವಸೂಲಿ ಮಾಡ್ತಿದ್ರು ಎನ್ನಲಾಗ್ತಿದೆ. ಈ ಕಾರಣಕ್ಕಾಗಿ ಅಮಾನತು ಮಾಡಿದ್ದಾರೆ ಎಂದು ವರದಿ ಆಗಿದೆ.

**1 ರಿಂದ 2 ಲಕ್ಷ ಮಾಮೂಲಿ ವಸೂಲಿ**

- ಲಕ್ಷ, ಲಕ್ಷ ಮಾಮೂಲಿ ವಸೂಲಿ
- 11 ಮಂದಿ ಪೊಲೀಸರು ಸಸ್ಪೆಂಡ್
- ಡ್ರಗ್ಸ್ ದಂಧೆಕೋರರಿಗೆ ಶಾಲಾ – ಕಾಲೇಜುಗಳೇ ಟಾರ್ಗೆಟ್
- ಮಾದಕ ವಸ್ತು ಮಾರಾಟದ ವಿರುದ್ಧ 3 ವರ್ಷಗಳಲ್ಲಿ 94 ಪ್ರಕರಣ ದಾಖಲು

### ಸಂಬಂಧಿಕರಿಗೂ ಹಣ

ಡ್ರಗ್ ಪೆಡ್ಲರ್ಸ್‌ಗಳಿಂದ ಪೊಲೀಸರು ತಮ್ಮ ಸಂಬಂಧಿಕರ ಖಾತೆಗೂ ಕೂಡ ಹಣ ಹಾಕಿಸಿಕೊಂಡಿರುವ ವಿವರಗಳು ಪತ್ತೆಯಾಗಿ ಪೊಲೀಸರು ದಂಧೆಯಲ್ಲಿ ಭಾಗಿಯ ಸಂಬಂಧ ವಿಸ್ತೃತ ತನಿಖೆಯನ್ನು ಕೈಗೊಂಡ ಎಸಿಪಿ ಭರತ್ ರೆಡ್ಡಿ ಅವರು ಡಿಸಿಪಿ ಗಿರೀಶ್ ಗೆ ವಿವರವಾದ ವರದಿಯನ್ನು ಲಿಖಿತ ರೂಪದಲ್ಲಿ ನೀಡಿದರು. ವರದಿಯನ್ನು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ನೀಡಿ ಪರಿಶೀಲನೆ ನಡೆಸಿದ ಗಿರೀಶ್ 10 ಮಂದಿಯನ್ನು ಸಸ್ಪೆಂಡ್ ಮಾಡಿ ಆದೇಶ ಹೊರಡಿಸಿದ್ದಾರೆ. ಡಿಸಿಪಿ ಗಿರೀಶ್ ಅವರು ನೀಡಿದ ವರದಿಯನ್ನು ಆಧರಿಸಿ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಇನ್ಸ್‌ಪೆಕ್ಟರ್ ಟಿ ಮಂಜಣ್ಣ ಅವರನ್ನು ಅಮಾನತು ಮಾಡಿ ಆದೇಶ ಹೊರಡಿಸಿದ್ದಾರೆ.

### ಗಡಿಭಾಗದಲ್ಲೂ ಕಟ್ಟೆಚ್ಚರ

ವಿವಿಧ ರಾಜ್ಯಗಳಿಂದ ರಾಜ್ಯಕ್ಕೆ ಬರುವ ಮಾದಕ ದ್ರವ್ಯಗಳ ನಿಯಂತ್ರಣಕ್ಕಾಗಿ ಜಿಲ್ಲೆಗಳಾದ ಬೀದರ್, ರಾಯಚೂರು, ಬೆಂಗಳೂರು ಗ್ರಾಮಾಂತರ, ಮತ್ತು ಕೋಲಾರ ಜಿಲ್ಲೆಗಳಲ್ಲಿನ ಪೊಲೀಸ್ ಘಟಕಾಧಿಕಾರಿಗಳಿಗೆ ವಿಶೇಷ ಸೂಚನೆಗಳನ್ನು ನೀಡಲಾಗಿದೆ. ಒರಿಸ್ಸಾ ರಾಜ್ಯದಿಂದ ಆಂಧ್ರಪ್ರದೇಶ ರಾಜ್ಯದ ಮೂಲಕ ಕರ್ನಾಟಕ ರಾಜ್ಯಕ್ಕೆ ಕಳ್ಳ ಸಾಗಾಣಿಕೆ ಮೂಲಕ ಬರುವ ಮಾದಕ ವಸ್ತು ಸರಬರಾಜನ್ನು ತಡೆಯಲು ಒರಿಸ್ಸಾ ಮತ್ತು ಆಂಧ್ರ ಪ್ರದೇಶ ರಾಜ್ಯಗಳ ಪೊಲೀಸರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಕಾರ್ಯತಂತ್ರ ರೂಪಿಸಲಾಗಿದೆ ಎಂದು ಗೃಹ ಇಲಾಖೆ ತಿಳಿಸಿದೆ.

## ಪೊಲೀಸರ ವೈಫಲ್ಯವೇ ದುರಂತಕ್ಕೆ ಕಾರಣ : ರೇವಣ್ಣ ಆಕ್ರೋಶ

• ಉದಯವಾಹಿನಿ, ಹಾಸನ

ಗಣೇಶೋತ್ಸವದ ಮೇಲೆ ಲಾರಿ ಹರಿದು 9 ಮಂದಿ ಮೃತಪಟ್ಟ ಘಟನೆಗೆ ಪೊಲೀಸರ ವೈಫಲ್ಯವೇ ಕಾರಣ ಎಂದು ಜೆಡಿಎಸ್ ಶಾಸಕ ಎಚ್.ಡಿ.ರೇವಣ್ಣ ಆಕ್ರೋಶ ವ್ಯಕ್ತಪಡಿಸಿದ್ದಾರೆ. ನಿನ್ನೆ ರಾತ್ರಿಯೇ ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ಅವರೊಂದಿಗೆ ಸ್ಥಳಕ್ಕೆ ಭೇಟಿ ನೀಡಿದ್ದ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಸುಮಾರು 2 ಸಾವಿರ ಮಂದಿ ಗಣೇಶೋತ್ಸವದ ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ಬ್ಯಾರಿಕೇಡ್‌ಗಳನ್ನು ಹಾಕಿ ಸೂಕ್ತ ಭದ್ರತೆ ಒದಗಿಸಬೇಕಾಗಿತ್ತು. ಆದರೆ ಪೊಲೀಸರು ಆ ರೀತಿಯ ಕ್ರಮಗಳನ್ನು ಕೈಗೊಂಡಿಲ್ಲ ಎಂದು ರೇವಣ್ಣ ಆರೋಪಿಸಿದ್ದಾರೆ. ಒಂದು ಕಡೆ ವಾಹನ ಸಂಚಾರಕ್ಕೂ ಅವಕಾಶ ನೀಡಲಾಗಿದೆ. ಮತ್ತೊಂದು ಕಡೆ ಗಣೇಶೋತ್ಸವ ಮೆರವಣಿಗೆ ಸಾಗಿದೆ. ಚಾಲಕ ಕುಡಿದು ವಾಹನ ಚಲಾಯಿಸಿದ್ದಾನೆ. ಅತಿಯಾದ ವೇಗದಲ್ಲಿ ಬಂದಿದ್ದರಿಂದ ಲಾರಿ ನಿಯಂತ್ರಣಕ್ಕೆ ಸಿಗದೆ ದುರಂತ ಸಂಭವಿಸಿದೆ ಎಂದು ಹೇಳಿದರು. ಮೃತಪಟ್ಟವರ ಕುಟುಂಬಕ್ಕೆ 20 ಲಕ್ಷ ರೂ.ಗಳ ಪರಿಹಾರ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

## ಗಣೇಶೋತ್ಸವ ದುರಂತ : 10 ಲಕ್ಷ ಪರಿಹಾರಕ್ಕೆ ಅಶೋಕ್ ಆಗ್ರಹ

• ಉದಯವಾಹಿನಿ, ಬೆಂಗಳೂರು

ಹಾಸನ ಜಿಲ್ಲೆ ಹೊಳೆನರಸೀಪುರ ತಾಲ್ಲೂಕಿನ ಮೊಸಳೆ ಹೊಸಳ್ಳಿ ಬಳಿ ಗಣೇಶ ಉತ್ಸವದ ವೇಳೆ ಸಂಭವಿಸಿದ ಅಪಘಾತದಲ್ಲಿ ಮೃತಪಟ್ಟವರು ಹಳ್ಳಿಯವರು, 10 ಲಕ್ಷ ರೂ. ಪರಿಹಾರ ಕೊಟ್ಟರೆ, ಒಳ್ಳೆಯದು ಎಂದು ವಿಪಕ್ಷ ನಾಯಕ ಆರ್.ಅಶೋಕ್ ಸರ್ಕಾರಕ್ಕೆ ಮನವಿ ಮಾಡಿಕೊಂಡಿದ್ದಾರೆ.


ಸುದ್ದಿಗಾರರ ಜೊತೆ ಮಾತನಾಡಿದ ಅವರು, ಈ ರೀತಿಯ ಘಟನೆ ಆಗಬಾರದಿತ್ತು. ಗಣೇಶೋತ್ಸವ ಸಂದರ್ಭದಲ್ಲಿ ಹೀಗೆ ಆಗಿದ್ದು ನೋವು ತಂದಿದೆ. ಮೃತರ ಆತ್ಮಕ್ಕೆ ಶಾಂತಿ ಸಿಗಲಿ. ಸರ್ಕಾರ ಮೃತರ ಕುಟುಂಬಸ್ಥರಿಗೆ 5 ಲಕ್ಷ ರೂ. ಪರಿಹಾರ ಘೋಷಿಸಿದೆ. ಮೃತರೆಲ್ಲ ಹಳ್ಳಿಯವರು, ಹೀಗಾಗಿ 10 ಲಕ್ಷ ರೂ. ಪರಿಹಾರ ಘೋಷಣೆ ಮಾಡಬೇಕು ಎಂದು ವಿನಂತಿ ಮಾಡಿಕೊಳ್ಳುತ್ತೇನೆ ಎಂದು ಹೇಳಿದರು. ನಾನು ಹಾಸನಕ್ಕೆ ಹೋಗುವೆ. ಡಿಸಿ, ಅಧಿಕಾರಿಗಳಿಂದ ಮಾಹಿತಿ ಪಡೆಯುತ್ತೇನೆ. ಆಸ್ಪತ್ರೆಗೂ ಭೇಟಿ ನೀಡುತ್ತೇನೆ. ಸರ್ಕಾರ ಗಾಯಾಳುಗಳನ್ನು ಬೆಂಗಳೂರು, ಮೈಸೂರಿಗೆ ಕರೆದುಕೊಂಡು ಹೋಗಿ ಚಿಕಿತ್ಸೆಕೊಡಿಸಬೇಕು ಎಂದು ಒತ್ತಾಯ ಮಾಡಿದರು.

## ಯಾರಿಗೂ ಹೇಳದೆ ರಾಹುಲ್ ಗಾಂಧಿ ವಿದೇಶಕ್ಕೆ ಹೋಗೋದೇಕೆ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಇಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ತೀವ್ರವಾಗಿ ಟೀಕಿಸಿದ್ದಾರೆ.

ರಾಹುಲ್ ಗಾಂಧಿಯಾವಾಗಲೂ 'ಅಸಂಬದ್ಧ ಮಾತುಗಳನ್ನಾಡುತ್ತಾರೆ' ಎಂದು ಪ್ರಲ್ಹಾದ್ ಜೋಶಿ ಆರೋಪಿಸಿದ್ದಾರೆ. ಭದ್ರತಾ ಸಂಸ್ಥೆಗಳಿಗೆ ತಿಳಿಸದೆ ರಾಹುಲ್ ಗಾಂಧಿ ಆಗಾಗ ವಿದೇಶ ಪ್ರವಾಸ ಮಾಡುವುದನ್ನು ಪ್ರಲ್ಹಾದ್ ಜೋಶಿ ಪ್ರಶ್ನಿಸಿದ್ದಾರೆ. ಇತ್ತೀಚೆಗೆ ಬಿಹಾರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಅವರು ಕೇಂದ್ರ ಸರ್ಕಾರ ಹಾಗೂ ಪ್ರಧಾನಿ ಮೋದಿ ವಿರುದ್ಧ ಆಧಾರರಹಿತ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ರಾಹುಲ್ ಗಾಂಧಿ ಅಸಂಬದ್ಧ ಮಾತುಗಳನ್ನಾಡುವುದರಿಂದ ನಾನು ಪ್ರತಿಕ್ರಿಯಿಸಲು ಬಯಸುವುದಿಲ್ಲ. ಅವರು ಬಿಹಾರಕ್ಕೆ ಹೋಗಿ ಹಲವಾರು ಆರೋಪಗಳನ್ನು ಮಾಡಿದರು. ನಂತರ ಅವರು ದೇಶದ ಹೊರಗೆ ಎಲ್ಲೋ ಹೋದರು. ಈಗ, ಅವರು ಎಲ್ಲಿಗೆ ಹೋಗಿದ್ದಾರೆಂದು ಯಾರಿಗೂ ತಿಳಿದಿಲ್ಲ. ಅವರು ವಿದೇಶಕ್ಕೆ ಏಕೆ ಆಗಾಗ ಹೋಗುತ್ತಾರೆ ಎಂಬುದು ಯಾರಿಗೂ ತಿಳಿದಿಲ್ಲ. ಭದ್ರತಾ ಸಂಸ್ಥೆಗಳಿಗೆ ತಿಳಿಸದೆ ಅವರು ದೇಶದ ಹೊರಗೆ ಹೋಗುತ್ತಿದ್ದಾರೆ. ಅದರ ನಡುವೆ ತಮಗೆ ತುಂಬಾ ಬಿಗಿ ಭದ್ರತೆ ನೀಡಬೇಕು ಎಂದು ಅವರು ನಿರೀಕ್ಷಿಸುತ್ತಾರೆ. ಅವರು ವಿರೋಧ ಪಕ್ಷದ ನಾಯಕರಾಗಿರುವುದರಿಂದ ಸರ್ಕಾರ ಭದ್ರತೆಯನ್ನು ಒದಗಿಸುತ್ತಿದೆ. ಆದರೆ ಭದ್ರತಾ ಸಂಸ್ಥೆಗಳಿಗೆ ತಿಳಿಸದೆ ಹೊರಗೆ ಹೋದರೆ ಏನು ಮಾಡಬಹುದು ಎಂದು ಪ್ರಲ್ಹಾದ್ ಜೋಶಿ ಪ್ರಶ್ನಿಸಿದ್ದಾರೆ.



## ಸ್ಥಳೀಯರೊಂದಿಗೆ ಚರ್ಚಿಸಿ ಆನೆ ವಿಹಾರಧಾಮ ಸ್ಥಾಪನೆ: ಈಶ್ವರ ಖಂಡ್ರೆ

• ಉದಯವಾಹಿನಿ, ಬೆಂಗಳೂರು

ಆನೆ-ಮಾನವ ಸಂಘರ್ಷ ತಡೆಗಟ್ಟುವ ನಿಟ್ಟಿನಲ್ಲಿ ಆನೆ ವಿಹಾರಧಾಮ ಸೂಕ್ತವೆಂದು ತಜ್ಞರು ಅಭಿಪ್ರಾಯಪಟ್ಟಿದ್ದು, ಸ್ಥಳೀಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದರು.


ಬೆಂಗಳೂರಿನಲ್ಲಿಂದು ವನ್ಯಜೀವಿ-ಮಾನವ ಸಂಘರ್ಷ ಹಾಗೂ ರೈಲ್ವೆ ಬ್ಯಾರಿಕೇಡ್ ಯೋಜನೆಗಳನ್ನು ಅಂತಿಮಗೊಳಿಸುವ ಸಂಬಂಧ ನಡೆದ ವೀಡಿಯೋ ಕಾನ್ಫರೆನ್ಸ್ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಈ ವೇಳೆ ಮಾತನಾಡಿದ ಅವರು ಚಿಕ್ಕಮಗಳೂರಿನ ಮುತ್ತೋಡಿಗಿಂತಲೂ ತಣಿಗೆಬೈಲು ಸೂಕ್ತ ಪ್ರದೇಶ ಎಂದು ತಜ್ಞರು ವರದಿ ನೀಡಿದ್ದು, ಈ ಕುರಿತಂತೆ ಸ್ಥಳೀಯರ ಸಭೆ ಕರೆದು ಚರ್ಚಿಸಲಾಗುವುದು ಎಂದರು.

**ಕಮಾಂಡ್ ಕೇಂದ್ರ:** ವನ್ಯಜೀವಿ-ಮಾನವ ಸಂಘರ್ಷ ತಡೆಗೆ ಸಮಗ್ರ ಕಮಾಂಡ್ ಸೆಂಟರ್ ಸ್ಥಾಪಿಸಲು ತಾವು ಸೂಚನೆ ನೀಡಿದ್ದರೂ, ವಿಳಂಬವಾಗುತ್ತಿದೆ. ಕೂಡಲೇ ಈ ಬಗ್ಗೆ ಕಾರ್ಯಯೋಜನೆ ರೂಪಿಸಿ, ಆನೆ ಸೇರಿದಂತೆ ವನ್ಯಜೀವಿಗಳ ಸಂಚಾರದ ಬಗ್ಗೆ ನಿಗಾ ಇಟ್ಟು ಸ್ಥಳೀಯರಿಗೆ ಕಾಲ ಕಾಲಕ್ಕೆ ಮುನ್ನೆಚ್ಚರಿಕೆ ನೀಡಲು ಮತ್ತು ವನ್ಯಮೃಗಗಳು ನಾಡಿಗೆ ಬಂದಿರುವ ಬಗ್ಗೆ ಸ್ವೀಕರಿಸುವ ದೂರಿಗೆ ತತ್ಕ್ಷಣವೇ ಸ್ಪಂದಿಸಲಾಗಿದೆಯೇ ಇಲ್ಲವೇ ಎಂಬುದನ್ನು ಕೇಂದ್ರ ಸ್ಥಾನದಲ್ಲಿ ಕುಳಿತು ಮೇಲ್ವಿಚಾರಣೆ ನಡೆಸುವ ವ್ಯವಸ್ಥೆ ರೂಪಿಸುವಂತೆ ತಿಳಿಸಿದರು.

**ಸನ್ನಾ, ಲ್ಯಾಂಟೆನ ಸಮಸ್ಯೆ ಪರಿಹರಿಸಿ:** ಸನ್ನಾ ಮತ್ತು ಲ್ಯಾಂಟೆನ ಕಳೆಗಳು ವಿಪರೀತವಾಗಿ ಕಾಡನ್ನು ಆವರಿಸುತ್ತಿವೆ. ನೆರೆಯ ತಮಿಳುನಾಡು ಮತ್ತು ಕೇರಳದಲ್ಲಿ ಇದನ್ನು ಹೇಗೆ ನಿರ್ವಹಿಸಲಾಗಿದೆ ಎಂಬ ಮಾಹಿತಿ ಪಡೆದು, ದೊಡ್ಡ ಪ್ರಮಾಣದಲ್ಲಿ ಈ ಕಳೆ ನಾಶಕ್ಕೆ ಕ್ರಮ ಕೈಗೊಳ್ಳಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

**ಹೊರಗುತ್ತಿಗೆ ಸಿಬ್ಬಂದಿ ಮಾಹಿತಿ ಕೇಳಿದ ಸಚಿವರು:** ಮಲೆ ಮಹದೇಶ್ವರ ಬೆಟ್ಟದಲ್ಲಿ 5 ಹುಲಿಗಳ ಸಾವಿನ ನಂತರ ಹೊರಗುತ್ತಿಗೆ ಸಿಬ್ಬಂದಿಗೆ ಸಕಾಲದಲ್ಲಿ ವೇತನ ಪಾವತಿ ಆಗುತ್ತಿಲ್ಲ. ನೌಕರರ ಭವಿಷ್ಯ ನಿಧಿ ಹಣವನ್ನು ಸಂದಾಯ ಮಾಡುತ್ತಿಲ್ಲ ಎಂಬ ದೂರುಗಳು ಬಂದಿದ್ದು, ರಾಜ್ಯದಲ್ಲಿ ಎಷ್ಟು ಹೊರಗುತ್ತಿಗೆ ಸಿಬ್ಬಂದಿ ಇದ್ದಾರೆ. ಅವರಿಗೆ ವೇತನ, ಭತ್ಯೆ ಎಷ್ಟು ತಿಂಗಳಿನಿಂದ ಪಾವತಿಯಾಗಿಲ್ಲ. ವಿಳಂಬಕ್ಕೆ ಕಾರಣ ಏನು, ಗುತ್ತಿಗೆದಾರ ಸಂಸ್ಥೆ ಇಪಿಎಫ್ ಪಾವತಿಸಿದೆಯೇ ಇತ್ಯಾದಿ ಎಲ್ಲಾ ಅಂಶಗಳ ವರದಿಯನ್ನು ವಿಳಂಬ ಮಾಡದೆ ಸಲ್ಲಿಸುವಂತೆ ಸೂಚಿಸಿದರು.

> ಆನೆಗಳ ಸಮಸ್ಯೆ ಯಾವ ವಲಯದಲ್ಲಿ ಹೆಚ್ಚಾಗಿದೆ. ಆನೆಗಳ ದಾಳಿ ನಡೆಯುತ್ತಿರುವ ಸಮಯ, ಕಾರಣ ಕುರಿತಂತೆ ಅಧ್ಯಯನ ನಡೆಸಿ, ಸ್ಥಳೀಯರಿಗೆ ಮುನ್ನೆಚ್ಚರಿಕೆ ನೀಡಬೇಕು. ಆನೆ ಧಾಮ ಬಹುಪಾಲು ಆನೆ-ಮಾನವ ಸಂಘರ್ಷ ತಗ್ಗಿಸುವ ಭರವಸೆ ಇದೆ. ಮುಂದಿನ ವಾರ ತಾವು ದೆಹಲಿಯಲ್ಲಿ ಕೇಂದ್ರ ಅರಣ್ಯ, ಪರಿಸರ ಮತ್ತು ಹವಾಮಾನ ಬದಲಾವಣೆ ಸಚಿವರನ್ನು ಭೇಟಿ ಮಾಡುತ್ತಿದ್ದು, ಈ ಸಂದರ್ಭದಲ್ಲಿ ಆನೆ ವಿಹಾರಧಾಮ ಕುರಿತಂತೆ ಸಮಗ್ರವಾಗಿ ಚರ್ಚಿಸಲಾಗುವುದು. ಕಾಂಪಾದಿಂದ ಹಣ ಬಿಡುಗಡೆ ಮಾಡುವಂತೆ ಕೋರಲಾಗುವುದು
> -ಈಶ್ವರ ಖಂಡ್ರೆ
> ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ



## ನನ್ನ ಮತ, ನನ್ನ ಹಕ್ಕು ಘೋಷವಾಕ್ಯದಡಿ ಪ್ರಜಾಪ್ರಭುತ್ವ ದಿನಾಚರಣೆ : ಡಾ. ಎಚ್.ಸಿ ಮಹದೇವಪ್ಪ

• ಉದಯವಾಹಿನಿ, ಬೆಂಗಳೂರು

ಸೆಪ್ಟೆಂಬರ್ 15 ರಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ 'ನನ್ನ ಮತ, ನನ್ನ ಹಕ್ಕು' ಎಂಬ ಘೋಷಣೆಯೊಂದಿಗೆ ಕಾಂಗ್ರೆಸ್ ಸರ್ಕಾರವು ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಆಚರಿಸಲಿದೆ. ಸೆ.15ರ ಬೆಳಗ್ಗೆ 11 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮಾರಂಭವನ್ನು ಉದ್ಘಾಟಿಸಲಿದ್ದಾರೆ ಎಂದು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ತಿಳಿಸಿದರು.



ಈ ವಿಷಯವು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾರರ ಪಾತ್ರವನ್ನು ಒತ್ತಿ ಹೇಳುತ್ತದೆ. ಮತದಾನವು ಬರೀ ಹಕ್ಕು ಮಾತ್ರವಲ್ಲ, ಬದಲಾಗಿ ಅದೊಂದು ಹೊಣೆಗಾರಿಕೆಯೂ ಆಗಿದೆ ಎಂಬ ಸಂದೇಶವನ್ನು ಸಾರಲಿದೆ ಎಂದು ಹೇಳಿದರು. ಈ ಕಾರ್ಯಕ್ರಮವು ಯುವಜನರಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸುವ, ನಾಗರಿಕ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸುವ ಹಾಗೂ ಸಂವಿಧಾನಿಕ ಮೌಲ್ಯಗಳನ್ನು ಬಲಪಡಿಸುವ ಉದ್ದೇಶವನ್ನು ಹೊಂದಿದೆ ಎಂದು ಮಹದೇವಪ್ಪ ತಿಳಿಸಿದರು. ಕೆಸೆಟ್, ನೀಟ್ ಮತ್ತು ಜೆಇಇ ಪರೀಕ್ಷೆಗಳಲ್ಲಿ ಉತ್ತಮ ಸ್ಥಾನಗಳನ್ನು ಗಳಿಸಿದ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಕೋರ್ಸುಗಳಿಗೆ ಪ್ರವೇಶ ಪಡೆದ ಒಂದು ಸಾವಿರ ಪ್ರತಿಭಾನ್ವಿತ ಪಿಯು ವಿದ್ಯಾರ್ಥಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇದೇ ಕಾರ್ಯಕ್ರಮದಲ್ಲಿ ನೇರ ನಗದು ವರ್ಗಾವಣೆ ಮೂಲಕ 6 ಕೋಟಿ ರೂ.ಗಳ ಪ್ರೋತ್ಸಾಹ ಧನವನ್ನು ವಿತರಿಸಲಿದ್ದಾರೆ ಎಂದು ಅವರು ಹೇಳಿದರು. ಜಿಲ್ಲಾಡಳಿತದ ನೇತೃತ್ವದಲ್ಲಿ ಪ್ರತಿ ಜಿಲ್ಲೆಗಳಲ್ಲೂ ಸೈಕಲ್ ಜಾಥಾ ಹಮ್ಮಿಕೊಳ್ಳಲಾಗಿದೆ. ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಶ್ರಯದಲ್ಲಿ ಪ್ರಜಾಪ್ರಭುತ್ವ ಮತ್ತು ಏಕತೆಯ ಸಂದೇಶಗಳನ್ನು ಹೊತ್ತ ಬೈಕ್‌ಗಳು ಎಲ್ಲಾ ಜಿಲ್ಲಾ ಕೇಂದ್ರಗಳಿಂದ ಬೆಂಗಳೂರಿನವರೆಗೆ ಬೈಕ್ ಜಾಥಾ ನಡೆಸಲಿವೆ ಎಂದು ಅವರು ಹೇಳಿದರು.

ಪ್ರಜಾಪ್ರಭುತ್ವದ ಮೌಲ್ಯಗಳ ಸೃಜನಶೀಲ ಅಭಿವ್ಯಕ್ತಿತ್ವವನ್ನು ಉತ್ತೇಜಿಸುವ ನಿಟ್ಟಿನಲ್ಲಿ ಶಿಕ್ಷಣ ಇಲಾಖೆಯ ನೇತೃತ್ವದಲ್ಲಿ ಹಾಗೂ ಲಿಡ್ಕರ್ ಪ್ರಾಯೋಜಕತ್ವದಲ್ಲಿ ತಾಲ್ಲೂಕು, ಜಿಲ್ಲೆ ಮತ್ತು ರಾಜ್ಯಮಟ್ಟದಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಚಿತ್ರಕಲೆ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಹದೇವಪ್ಪ ಹೇಳಿದರು.

# ಪ್ರಚೋದನಾಕಾರಿ ಭಾಷಣ ಮಾಡುವವರ ವಿರುದ್ಧ ಎಫ್‌ಐಆರ್ ಅನಿವಾರ್ಯ

**• ಶಾಂತಿ, ನೆಮದಿ, ಸೌಹಾರ್ದತೆ ಪಾಲನೆ ಸರ್ಕಾರದ ಕರ್ತವ್ಯ, ಈ ನಿಟ್ಟಿನಲ್ಲಿ ಪ್ರಕರಣಗಳನ್ನು ದಾಖಲಿಸಲಾಗುತ್ತದೆ: ಸಿಎಂ**

• ಉದಯವಾಹಿನಿ, ಮೈಸೂರು

ಶಾಂತಿ ಭಂಗಕ್ಕೆ ಪ್ರಯತ್ನಿಸಿ, ಪ್ರಚೋದನಕಾರಿ ಭಾಷಣ ಮಾಡುವವರ ವಿರುದ್ಧ ಎಫ್‌ಐಆರ್ ದಾಖಲಿಸುವುದು ಅನಿವಾರ್ಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥಿಸಿಕೊಂಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ ಸರ್ಕಾರ ರಾಜಕೀಯ ದ್ವೇಷಕ್ಕಾಗಿ ಯಾವುದೇ ಕ್ರಮಗಳನ್ನು ಕೈಗೊಳ್ಳುತ್ತಿಲ್ಲ, ಬಿಜೆಪಿ ನಾಯಕರು ದಿನಕ್ಕೊಂದು ಹೇಳಿಕೆಗಳನ್ನು ನೀಡಿ, ಪ್ರಚೋದನೆ ಮಾಡತ್ತಿದ್ದಾರೆ. ಶಾಂತಿ, ನೆಮದಿ, ಸೌಹಾರ್ದತೆ ಪಾಲನೆ ಸರ್ಕಾರದ ಕರ್ತವ್ಯ. ಈ ನಿಟ್ಟಿನಲ್ಲಿ ಪ್ರಕರಣಗಳನ್ನು ದಾಖಲಿಸಲಾಗುತ್ತದೆ ಎಂದರು.

ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸುವ ಮೂಲಕ ಹಿಂದೂ ನಾಯಕರನ್ನು ಗುರಿಯಾಗಿಸಿಕೊಳ್ಳಲಾಗಿದೆ ಎಂಬ ಆರೋಪದಲ್ಲಿ ಹುರುಳಿಲ್ಲ. ನಾನು ಹಿಂದೂ ಅಲ್ಲವೇಸ ನನ್ನ ಹೆಸರಿನಲ್ಲಿ ಇಬ್ಬರು ದೇವರ ಹೆಸರುಗಳಿವೆ. ಸಿದ್ದ ಎಂದರೆ ಈಶ್ವರನ ಹೆಸರು, ರಾಮ ವಿಷ್ಣುವಿನ ಹೆಸರು ಎಂದು ತಿರುಗೇಟು ನೀಡಿದರು.

ದಸರಾ ಮುಗಿಯುವವರೆಗೂ ಮಾಜಿ ಸಂಸದ ಪ್ರತಾಪ್ ಸಿಂಹನನ್ನು ಜಿಲ್ಲೆಯಿಂದ ಗಡಿಪಾರು ಮಾಡಬೇಕು ಎಂಬ ವಿವಿಧ ಸಂಘಟನೆಗಳ ಬೇಡಿಕೆಯನ್ನು ಪೊಲೀಸರು ಪರಿಶೀಲಿಸುತ್ತಾರೆ ಎಂದು ಹೇಳಿದರು. ದಸರಾ ಉದ್ಘಾಟನೆಗೆ ಸಾಹಿತಿ ಬಾನು ಮಷ್ತಾಕ್‌ರನ್ನು ಆಯ್ಕೆ ಮಾಡಿರುವುದರ ವಿರುದ್ಧ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದವರು, ಯಾವ ಕಾರಣಕ್ಕೆ ನ್ಯಾಯಾಲಯದ ಮೊರೆ ಹೋಗಿದ್ದೇವೆ ಎಂಬುದನ್ನು ವಿವರಣೆ ನೀಡಬೇಕು. ನ್ಯಾಯಾಲಯ ನೀಡುವ ತೀರ್ಮಾನವನ್ನು ಸರ್ಕಾರ ನಿರೀಕ್ಷಿಸುತ್ತಿದೆ. ದಸರಾ ಸಾಂಸ್ಕೃತಿಕ ಆಚರಣೆಯಾಗಿದ್ದು, ಇಂತಹದ್ದೇ ಧರ್ಮದವರು ಭಾಗವಹಿಸಬೇಕೆಂಬ ನಿಯಮಗಳಿಲ್ಲ ಎಂದರು.

**ನಾನು ಹಿಂದೂ ಅಲ್ಲವೇ**

**ತನಿಖೆ ವಿಳಂಬವಿಲ್ಲ:** ಧರ್ಮಸ್ಥಳದ ಪ್ರಕರಣದಲ್ಲಿ ಎಸ್‌ಐಟಿ ತನಿಖೆ ನಡೆಯುತ್ತಿದೆ. ಸರ್ಕಾರ ಯಾವುದೇ ಹಸ್ತಕ್ಷೇಪ ಮಾಡುತ್ತಿಲ್ಲ. ತನಿಖೆಯಲ್ಲಿ ವಿಳಂಬವಾಗುತ್ತಿಲ್ಲ, ಅನಗತ್ಯವಾಗಿ ವಿಳಂಬ ಮಾಡುವಂತೆಯೂ ಇಲ್ಲ ಎಂದು ಹೇಳಿದರು. **ಮತಾಂತರ ಶೋಷಿತರ ಹಕ್ಕು:** ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯಲ್ಲಿ ಹೊಸ ಜಾತಿಗಳನ್ನು ಹುಟ್ಟುಹಾಕಲಾಗುತ್ತಿದೆ ಎಂದು ಬಿಜೆಪಿಯವರು ಮಾಡುತ್ತಿರುವ ಆರೋಪ ಅರ್ಥಹೀನ. ಮುಂದೆ ಕೇಂದ್ರ ಸರ್ಕಾರ ಕೂಡ ಜಾತಿಗಣತಿ ಮಾಡುತ್ತದೆ. ಆಗ ಬಿಜೆಪಿಯವರು ಇದೇ ರೀತಿ ಮಾತನಾಡುತ್ತಾರೆಯೇ ಎಂದು ಪ್ರಶ್ನಿಸಿದರು.



ಮತಾಂತರ ಬೇಡವೆಂದು ನಾವು ಹೇಳಿದರೂ ವ್ಯವಸ್ಥೆಯ ಪರಿಣಾಮದಿಂದಾಗಿ ಮತಾಂತರವಾಗುತ್ತಾರೆ. ನಮ ಹಿಂದೂ ಸಮಾಜದಲ್ಲಿ ಎಲ್ಲರಿಗೂ ಸಮಾನತೆ ಹಾಗೂ ಸಮಾನ ಅವಕಾಶಗಳಿಲ್ಲ ಅದಕ್ಕಾಗಿ ಮತಾಂತರವಾಗುತ್ತಿವೆ. ಅಸ್ಪೃಶ್ಯತೆ ಏಕೆ ಬಂತು. ಯಾವುದೇ ಧರ್ಮದಲ್ಲಿ ಅಸಮಾನತೆ ಇದ್ದರೂ ಶೋಷಣೆಗೆ ಒಳಗಾದವರಿಗೆ ಮತಾಂತರವಾಗುವ ಹಕ್ಕುಗಳಿರುತ್ತವೆ ಎಂದರು. ಮತಾಂತರಗೊಂಡಿರುವವರು ಅದೇ ಧರ್ಮ ಅಥವಾ ಜಾತಿಯನ್ನು ಸಮೀಕ್ಷೆಯಲ್ಲಿ ಬರೆಸುತ್ತಾರೆ. ಒಂದು ವೇಳೆ ನಾನು ಹಿಂದೂ ಧರ್ಮದಿಂದ ಮುಸ್ಲಿಂ ಧರ್ಮಕ್ಕೆ ಮತಾಂತರವಾಗಿದ್ದೇನೆ ಎಂದು ಭಾವಿಸುವುದಾರೆ ಮತಾಂತರವಾಗುವುದಿಲ್ಲ ಹಾಗೆ ಭಾವಿಸುವುದಾದರೆ ಸಮೀಕ್ಷೆಯಲ್ಲಿ ಮತಾಂತರವಾಗಿರುವ ಧರ್ಮವನ್ನೇ ಬರೆಸಬೇಕಾಗುತ್ತದೆ ಎಂದರು.

**ವಿಪಕ್ಷಗಳ ಒತ್ತಡಕ್ಕೆ ಮಣಿದ ಪ್ರಧಾನಿ:** ಪ್ರಧಾನ ಮಂತ್ರಿ ನರೇಂದ್ರ ಮೋದಿ ವಿರೋಧ ಪಕ್ಷಗಳ ಒತ್ತಡಕ್ಕೆ ಮಣಿದು ಮಣಿಪುರಕ್ಕೆ ಭೇಟಿ ನೀಡಿದ್ದಾರೆ. ಈ ಹಿಂದೆ ಗಲಾಟೆ ನಡೆಯುತ್ತಿದ್ದಾಗ ಅಲ್ಲಿಗೆ ಹೋಗಲಿಲ್ಲ. ಈಗ ಪರಿಸ್ಥಿತಿ ತಿಳಿಗೊಳ್ಳುತ್ತಿರುವಾಗ ಭೇಟಿ ನೀಡಿದ್ದಾರೆ. ಎರಡು ವರ್ಷಗಳಿಂದ ಏಕೆ ಸುಮನಿದ್ದರು ಎಂದು ಪ್ರಶ್ನಿಸಿದರು.

### ಅಪಘಾತಕ್ಕೆ ಸರ್ಕಾರ ಹೊಣೆಯಲ್ಲ

ಹಾಸನ ಗಣೇಶೋತ್ಸವದ ವೇಳೆ ಲಾರಿ ಹರಿದಿರುವ ಪ್ರಕರಣಕ್ಕೆ ಸಂಬಂಧಪಟ್ಟಂತೆ ಈಗಾಗಲೇ ಮೃತಪಟ್ಟವರ ಕುಟುಂಬಕ್ಕೆ ತಲಾ 5 ಲಕ್ಷ ರೂ. ಪರಿಹಾರ ನೀಡಲಾಗಿದೆ. ಈಗ ಪ್ರತಿ ಕುಟುಂಬಕ್ಕೆ 10 ಲಕ್ಷ ರೂ. ನೀಡಬೇಕೆಂದು ಒತ್ತಾಯಿಸುತ್ತಿರುವ ಬಿಜೆಪಿಯವರು ಅಧಿಕಾರದಲ್ಲಿದ್ದಾಗ ಎಷ್ಟು ಪರಿಹಹಾರ ಕೊಟ್ಟಿದ್ದರು ಎಂದು ಪ್ರಶ್ನಿಸಿದರು.

### ಬಿಜೆಪಿ ಮುಖ್ಯಮಂತ್ರಿಗಳಿಗೆ ತಿಳಿ ಹೇಳಲಿ

ಮಹದಾಯಿ ನದಿಗೆ ಅಡ್ಡಲಾಗಿ ಕಳಸಾ ಬಂಡೂರಿ ಅಣೆಕಟ್ಟೆ ನಿರ್ಮಿಸಲು ಗೋವಾ ಸರ್ಕಾರ ಅಡ್ಡಿ ಪಡಿಸುತ್ತಿದೆ. ಆಲಮಟ್ಟಿ ಆಣೆಕಟ್ಟೆಯ ಎತ್ತರವನ್ನು 519 ಮೀಟರ್‌ನಿಂದ 524 ಮೀಟರ್‌ಗೆ ಹೆಚ್ಚಿಸಲು 2010ರಲ್ಲಿ 15 ವರ್ಷಗಳ ಹಿಂದೆಯೇ ನ್ಯಾಯಾಧೀಕರಣ ಆದೇಶ ನೀಡಿದೆ. ಆದರೆ, ಮಹಾರಾಷ್ಟ್ರ ಸರ್ಕಾರ ವಿರೋಧ ವ್ಯಕ್ತಪಡಿಸುತ್ತದೆ.

ಕಾವೇರಿ ನದಿ ಅಡ್ಡಲಾಗಿ ಮೇಕೆದಾಟು ಬಳಿ ಸಮತೋಲಿತ ಆಣೆಕಟ್ಟು ನಿರ್ಮಿಸಲು ತಮಿಳುನಾಡು ವಿರೋಧ ವ್ಯಕ್ತಪಡಿಸುತ್ತಿದೆ. ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ರಾಜ್ಯಗಳ ಮುಖ್ಯಮಂತ್ರಿಯವರಿಗೆ ತಿಳಿ ಹೇಳಿ ನೀರಾವರಿ ಯೋಜನೆಗಳನ್ನು ಕೈಗೆತ್ತಿಕೊಳ್ಳಲು ಅವಕಾಶ ಮಾಡಿಕೊಡಬೇಕು. ಮಹಾರಾಷ್ಟ್ರ ಮತ್ತು ಗೋವಾದಲ್ಲಿ ಬಿಜೆಪಿಯ ಮುಖ್ಯಮಂತ್ರಿಗಳಿದ್ದಾರೆ ಅವರಿಗೆ ಬುದ್ಧಿ ಹೇಳಲಿ ಎಂದರು.

**ಈ ದಿನದ ದರ** | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹11,117 /Gram(24ct) ₹10,190/Gram(22ct) | ಬೆಳ್ಳಿ: ₹133.00/Gram

## ಟ್ರಕ್-ಕಾರು, ಆಟೋ ಮಧ್ಯೆ ಡಿಕ್ಕಿ; ಮೂವರು ಸಾವು, ಇಬ್ಬರ ಸ್ಥಿತಿ ಗಂಭೀರ

• ಉದಯವಾಹಿನಿ, ಬೆಂಗಳೂರು

ಹಾಸನದಲ್ಲಿ ಗಣೇಶ ಮೆರವಣಿಗೆ ವೇಳೆ ದುರಂತ ನಡೆದ ಬೆನ್ನಲ್ಲೇ ಬೆಂಗಳೂರಿನ ಸುಮ್ಮನಹಳ್ಳಿ ಜಂಕ್ಷನ್ ರಸ್ತೆಯಲ್ಲಿ ಟ್ರಕ್, ಕಾರು, ಆಟೋ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಮೂವರು ಸಾವಿಗೀಡಾಗಿದ್ದಾರೆ. ಅಪಘಾತದಲ್ಲಿ ಇಬ್ಬರಿಗೆ ಗಾಯವಾಗಿದ್ದು ಸ್ಥಿತಿ ಗಂಭೀರವಾಗಿದೆ. ಮೃತರನ್ನು ಯೇಸು.ಡಿ ಮತ್ತು ಜೆನ್ನಿಫರ್ ಎಂದು ಗುರುತಿಸಲಾಗಿದೆ. ಇವರಿಬ್ಬರು ಆಟೋದಲ್ಲಿದ್ದರು ಎಂದು ತಿಳಿದುಬಂದಿದೆ. ಅಡ್ಡದಾರಿಯಿಂದ ಬಂದ ಟ್ರಕ್ ಸುಮ್ಮನಹಳ್ಳಿ ರಸ್ತೆಗೆ ಇಳಿದಾಗ ಬ್ರೇಕ್ ಫೇಲ್ ಆಗಿ ಮುಂದೆ ಇದ್ದ ಆಟೋ ಮತ್ತು ಕಾರಿಗೆ ಡಿಕ್ಕಿಯಾಗಿದೆ. ಇದರಿಂದ ಈ ಅಪಘಾತ ಸಂಭವಿಸಿದೆ. ಡಿಕ್ಕಿಯ ರಭಸಕ್ಕೆ ಆಟೋ ಎರಡು ತುಂಡಾಗಿದೆ. ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡ ಮತ್ತಿಬ್ಬರು ಸಾವು ಬದುಕಿನ ನಡುವೆ ಹೋರಾಡುತ್ತಿದ್ದಾರೆ. ಕಾಮಾಕ್ಷಿಪಾಳ್ಯ ಸಂಚಾರಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಸರ್ಕಾರದ 32 ಮಸೂದೆಗಳಿಗೆ ರಾಜ್ಯಪಾಲರ ಅಂಕಿತ

• ಉದಯವಾಹಿನಿ, ಬೆಂಗಳೂರು

ದೇವದಾಸಿ ಪದ್ಧತಿ ನಿರ್ಮೂಲನೆ ಸೇರಿದಂತೆ 32 ಮಸೂದೆಗಳಿಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಂಕಿತ ಹಾಕಿದ್ದಾರೆ. ರಾಜ್ಯಪಾಲರಿಗೆ ಸರ್ಕಾರ 37 ಮಸೂದೆಗಳನ್ನು ಕಳಿಸಿತ್ತು. ಈ ಪೈಕಿ 32 ಮಸೂದೆಗಳಿಗೆ ರಾಜ್ಯಪಾಲರು ಸಹಿ ಹಾಕಿದ್ದಾರೆ. ರಾಜ್ಯಪಾಲರು ಅನುಮೋದಿಸಿದ ಮಸೂದೆಗಳು ಕಾಯ್ದೆಗಳಾಗಿ ಜಾರಿಯಾಗಲಿವೆ. ಸರ್ಕಾರದ ಗೆಜೆಟ್‌ನಲ್ಲಿ ಪ್ರಕಟಣೆ ಹೊರಡಿಸಲಾಗಿದೆ. ರಾಷ್ಟ್ರಪತಿಗಳ ಅಂಗಳಕ್ಕೆ ರಾಜ್ಯದ ಮೂರು ಮಸೂದೆಗಳು ಮೂರು ಮಸೂದೆಗಳನ್ನು ರಾಷ್ಟ್ರಪತಿಗಳಿಗೆ ರಾಜ್ಯಪಾಲರು ಕಳುಹಿಸಿದ್ದಾರೆ. ಕರ್ನಾಟಕ ದೇವದಾಸಿ ಪದ್ಧತಿ (ತಡೆಗಟ್ಟುವಿಕೆ, ನಿಷೇಧ, ಪರಿಹಾರ ಮತ್ತು ಪುನರ್ವಸತಿ) ಮಸೂದೆ- 2025, ಬಾಲ್ಯ ವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ಮಸೂದೆ- 2025, ನೋಂದಣಿ ಮಸೂದೆ-2025 ಮಸೂದೆಗಳು ರಾಷ್ಟ್ರಪತಿಗಳ ಬಳಿಗೆ ಹೋಗಿವೆ.

## ಟೀ ಚೆನ್ನಾಗಿಲ್ಲ ಎಂದಿದ್ದಕ್ಕೆ ಬಿಎಂಟಿಸಿ ಬಸ್ ಚಾಲಕನ ಮೇಲೆ ಫ್ಲಾಸ್ಕ್‌ನಿಂದ ಹಲ್ಲೆ

• ಉದಯವಾಹಿನಿ, ಬೆಂಗಳೂರು

ಟೀ ಚೆನ್ನಾಗಿಲ್ಲ ಎಂದಿದ್ದಕ್ಕೆ ಬಿಎಂಟಿಸಿ ಬಸ್ ಚಾಲಕನ ಮೇಲೆ ಟೀ ಶಾಪ್ ಸಿಬ್ಬಂದಿ ಹಲ್ಲೆ ಮಾಡಿದ ಘಟನೆ ಮೆಜೆಸ್ಟಿಕ್ ಬಸ್ ನಿಲ್ದಾಣದಲ್ಲಿ ನಡೆದಿದೆ. 46ನೇ ಚಾಲಕ ಮೂಗಪ್ಪ ಅವರ ಮೇಲೆ ಟೀ ಸ್ಟಾಲ್ ಸಿಬ್ಬಂದಿ ಗುರುರಾಜ್ ಫ್ಲಾಸ್ಕ್‌ನಿಂದ ಹೊಡೆದು ಹಲ್ಲೆ ಮಾಡಿದ್ದಾನೆ. ಚಾಲಕ ಟೀ ಚೆನ್ನಾಗಿಲ್ಲ ಎಂದಿದ್ದಕ್ಕೆ ರೊಚ್ಚಿಗೆದ್ದ ಗುರುರಾಜ್ ರಕ್ತ ಬರುವಂತೆ ಫ್ಲಾಸ್ಕ್‌ನಿಂದ ತಲೆಗೆ ಹೊಡೆದಿದ್ದಾನೆ. ಹಲ್ಲೆಗೊಳಗಾದ ಚಾಲಕ ಉಪ್ಪಾರಪೇಟೆ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪೊಲೀಸರು ಹಲ್ಲೆ ಮಾಡಿದ ಗುರುರಾಜ್‌ನನ್ನು ಬಂಧಿಸಿ, ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ.

## ವಾಹನ್ ತಂತ್ರಾಂಶದಲ್ಲಿ ಮಾಹಿತಿ ತುಂಬಿದರೆ ಮಾತ್ರ ಎನ್‌ಒಸಿ, ಸಿಸಿ

• ಉದಯವಾಹಿನಿ, ಬೆಂಗಳೂರು

ವಾಹನ ಮಾಲೀಕರು ತಮ್ಮ ವಾಹನಗಳಿಗೆ ಸಂಬಂಧಿಸಿದ ಎಲ್ಲಾ ಮಾಹಿತಿಗಳನ್ನು ವಾಹನ್ ತಂತ್ರಾಂಶದಲ್ಲಿ ತುಂಬಿದರೆ ಮಾತ್ರ ಕ್ಲಿಯರೆನ್ಸ್ ಪ್ರಮಾಣ ಪತ್ರ (ಸಿಸಿ), ನಿರಾಕ್ಷೇಪಣ ಪ್ರಮಾಣ ಪತ್ರ (ಎನ್‌ಒಸಿ) ಸಿಗಲಿದೆ. ಎನ್‌ಒಸಿ, ಸಿಸಿ ಮಾತ್ರ ನೀಡಲು ಎನ್‌ಐಸಿ ಅನುವು ಮಾಡಿಕೊಡುವುದಿಲ್ಲ ಎಂದು ಸಾರಿಗೆ ಮತ್ತು ರಸ್ತೆ ಸುರಕ್ಷತೆ ಆಯುಕ್ತರು ತಿಳಿಸಿದ್ದಾರೆ. ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದ ನಿರ್ದೇಶನದಂತೆ ಎನ್‌ಐಸಿ ಅಭಿವೃದ್ಧಿಪಡಿಸಿರುವ ಕೇಂದ್ರೀಕೃತ ವೆಬ್ ಆಧಾರಿತ ವಾಹನ್ ತಂತ್ರಾಂಶಗಳನ್ನು 2019ರಿಂದ ಅನ್ವಯವಾಗುವಂತೆ ಕರ್ನಾಟಕ ರಾಜ್ಯ ಸಾರಿಗೆ ಇಲಾಖೆಯಲ್ಲಿ ಅಳವಡಿಸಲಾಗಿದೆ. ಎಲ್ಲಾ ಪ್ರಾದೇಶಿಕ ಸಾರಿಗೆ ಕಚೇರಿಗಳಲ್ಲಿ ಈ ತಂತ್ರಾಂಶ ಬಳಕೆಯಲ್ಲಿದೆ. ವಾಹನ್ ತಂತ್ರಾಂಶದಲ್ಲಿ ಹಾರ್ಸ್ ಪವರ್, ಕ್ಯುಬಿಕ್ ಕೆಪಾಸಿಟಿ. ವೀಲ್ ಬೇಸ್ ಸಹಿತ ಎಲ್ಲಾ ಮಾಹಿತಿಗಳನ್ನು ಸಂಬಂಧಿಸಿದ ಪ್ರಾದೇಶಿಕ ಸಾರಿಗೆ ಕಚೇರಿಗಳಿಗೆ ಹಾಜರುಪಡಿಸಿ ವಾಹನದ ಮಾಹಿತಿಯನ್ನು ಅಪ್‌ಲೋಡ್ ಮಾಡಬೇಕು ಎಂದು ಅವರು ತಿಳಿಸಿದ್ದಾರೆ.

## ಸಂಚಾರ ನಿಯಮ ಉಲ್ಲಂಘನೆ: ರೂ.90 ಕೋಟಿ ದಂಡ ಸಂಗ್ರಹ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಶೇ.50ರ ರಿಯಾಯಿತಿ ಅಡಿ ದಂಡ ಪಾವತಿಸಲು ರಾಜ್ಯ ಸರ್ಕಾರವು ಕಲ್ಪಿಸಿದ್ದ ಅವಕಾಶವನ್ನು ಬಳಸಿಕೊಂಡು 30 ಲಕ್ಷ ವಾಹನಗಳ ಮಾಲೀಕರು ದಂಡ ಪಾವತಿಸಿದ್ದಾರೆ. ರೂ.90 ಕೋಟಿಗೂ ಹೆಚ್ಚು ದಂಡ ಸಂಗ್ರಹವಾಗಿದೆ ಎಂದು ಸಂಚಾರ ಪೊಲೀಸ್


ಉದಯವಾಹಿನಿ ಚಿತ್ರ

ವಿಭಾಗದ ಮೂಲಗಳು ಹೇಳಿವೆ. ಆ.22ರಿಂದ ದಂಡ ಪಾವತಿ ಮಾಡಲು ಅವಕಾಶ ಕಲ್ಪಿಸಲಾಗಿತ್ತು. (ಸೆ.12) ಕೊನೆಯ ದಿನವಾಗಿತ್ತು. ಕೊನೆಯ ದಿನ ಸರ್ವರ್ ಸಮಸ್ಯೆಯಿಂದಾಗಿ ಹಲವರು ದಂಡ ಪಾವತಿಸಲು ಪರದಾಡಿದರು. ಬಿಟಿಪಿ ಅಸ್ತ್ರಂ, ಕರ್ನಾಟಕ ರಾಜ್ಯ ಪೊಲೀಸ್ (ಕೆಎಸ್‌ಪಿ) ಆ್ಯಪ್, ಬೆಂಗಳೂರು ಸಂಚಾರ ಪೊಲೀಸ್ ಅಥವಾ ಕರ್ನಾಟಕ ಒನ್ ವೆಬ್‌ಸೈಟ್‌ನಲ್ಲಿ ವಾಹನದ ನೋಂದಣಿ ಸಂಖ್ಯೆ ನಮೂದಿಸಿ ಸಂಚಾರ ಉಲ್ಲಂಘನೆ ಪ್ರಕರಣಗಳನ್ನು ತಿಳಿದುಕೊಂಡು ವಾಹನ ಮಾಲೀಕರು ದಂಡ ಪಾವತಿಸಿದ್ದಾರೆ.

## ಬಿಜೆಪಿಯವ್ರ ಧರ್ಮರಕ್ಷಣೆಯ ನಾಟಕ 4 ದಿನದ ಪ್ರದರ್ಶನಕ್ಕೆ ಮಾತ್ರ ಸೀಮಿತ: ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರು

ಬಿಜೆಪಿಯವರ ಧರ್ಮರಕ್ಷಣೆಯ ನಾಟಕವು ನಾಲ್ಕು ದಿನದ ಪ್ರದರ್ಶನಕ್ಕೆ ಮಾತ್ರ ಸೀಮಿತ ಎಂದು ಸಚಿವ ಪ್ರಿಯಾಂಕ್ ಖರ್ಗೆ ವ್ಯಂಗ್ಯವಾಡಿದ್ದಾರೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಅವರು, ಧರ್ಮಸ್ಥಳ ಚಲೋ ಮಾಡಿದ್ದ ಬಿಜೆಪಿಯವರು ಧರ್ಮಸ್ಥಳವನ್ನು ಮರೆತು ಮದ್ದೂರು ಚಲೋ ಮಾಡುತ್ತಿದ್ದಾರೆ. ಬಿಜೆಪಿ ನಾಯಕರು ಧರ್ಮಸ್ಥಳ ಪ್ರಕರಣದಲ್ಲಿ ಏಕಾಏಕಿ


ಉದಯವಾಹಿನಿ ಚಿತ್ರ

ಮೌನಕ್ಕೆ ಜಾರಿರುವುದು ಏಕೆ ಎಂದು ಪ್ರಶ್ನಿಸಿದ್ದಾರೆ.

ಬಿಜೆಪಿಯವರ ಧರ್ಮರಕ್ಷಣೆಯ ನಾಟಕವು ನಾಲ್ಕು ದಿನದ ಪ್ರದರ್ಶನಕ್ಕೆ ಮಾತ್ರ ಸೀಮಿತವೇ ಸೌಜನ್ಯ ಸಂಬಂಧಿ ವಿಠಲ ಗೌಡರವರು ಧರ್ಮಸ್ಥಳದ ಬಂಗ್ಲೆಗುಡ್ಡದಲ್ಲಿ ಅಸ್ಥಿಪಂಜರಗಳ ರಾಶಿಯೇ ಕಂಡಿದೆ ಎಂಬ ಆಘಾತಕಾರಿ ವಿಷಯಗಳನ್ನು ಬಹಿರಂಗಪಡಿಸಿದ್ದಾರೆ.

ಆ ಸ್ಥಳವು ಅಕ್ಷರಶಃ ಯುದ್ಧಕಣದಂತೆ ಭಾಸವಾಗುತ್ತದೆ ಎಂದು ವರದಿಗಳು ಹೇಳುತ್ತವೆ ಎಂದಿದ್ದಾರೆ.

ಸೌಜನ್ಯಳ ಮನೆಗೆ ಭೇಟಿ ನೀಡಿದ್ದ ಬಿಜೆಪಿಯವರು ಆ ಕುಟುಂಬದವರ ಹೇಳಿಕೆಯ ಬಗ್ಗೆ ಏನು ಹೇಳುತ್ತಾರೆ ವಿಠಲ ಗೌಡರ ಹೇಳಿಕೆಯ ಬಗ್ಗೆ ಬಿಜೆಪಿಯವರ ಮೌನವೇಕೆ ಬಿಜೆಪಿ ನಾಯಕರು ತಾವು ಸೌಜನ್ಯ ಕುಟುಂಬದವರ ಪರವೋ ಅಥವಾ ಅವರು ಆರೋಪಿಸುತ್ತಿರುವವರ ಪರವೋ ಎಂಬುದನ್ನು ಸ್ಪಷ್ಟಪಡಿಸುವ ಅಗತ್ಯವಿದೆ ಎಂದು ಹೇಳಿದ್ದಾರೆ.

# ಬೆಂಗಳೂರಿನಲ್ಲಿ 3 ದಿನ ಕಾವೇರಿ ನೀರು ಬಂದ್!

## ಸೆಪ್ಟೆಂಬರ್ 15, 16 ಮತ್ತು 17 ರಂದು ಕಾವೇರಿ ನೀರು ಪೂರೈಕೆ ಸ್ಥಗಿತ

• ಉದಯವಾಹಿನಿ, ಬೆಂಗಳೂರು

ಕಾಮಗಾರಿ ಹಿನ್ನೆಲೆ ಬೆಂಗಳೂರಿನಲ್ಲಿ 3 ದಿನ ಪೂರೈಕೆಯಲ್ಲಿ ನೀರು ವ್ಯತ್ಯಯ ಉಂಟಾಗಲಿದೆ. ಆ ದಿನಗಳಂದು ನೀರು ಸಂಗ್ರಹಿಸಿಟ್ಟುಕೊಳ್ಳಲು ಜಲಮಂಡಳಿ ಮನವಿ ಮಾಡಿದೆ.

ಈ ಬಗ್ಗೆ ಬೆಂಗಳೂರು ಜಲಮಂಡಳಿ ಅಧ್ಯಕ್ಷ ಡಾ.ವಿ.ರಾಮ್ ಪ್ರಸಾತ್ ಮನೋಹರ್ ಮಾಹಿತಿ ನೀಡಿದ್ದಾರೆ. ನಿಯಮಿತ ತುರ್ತು ನಿರ್ವಹಣಾ ಕಾಮಗಾರಿಗಳನ್ನು ಕೈಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಕಾವೇರಿ ನೀರು ಸರಬರಾಜು ಯೋಜನೆಯ ವಿವಿಧ ಹಂತಗಳ ಜಲರೇಚಕ ಯಂತ್ರಾಗಾರಗಳನ್ನು ಸೆಪ್ಟೆಂಬರ್ 15, 16 ಮತ್ತು 17 ರಂದು ಸ್ಥಗಿತಗೊಳಿಸಲಾಗುತ್ತಿದೆ.

ಈ ಜಲರೇಚಕ ಯಂತ್ರಾಗಾರಗಳ ಸ್ಥಗಿತತೆಯಿಂದ ಕಾವೇರಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಅಧ್ಯಕ್ಷರು ತಿಳಿಸಿದ್ದಾರೆ.

**ಏನಿದು ಕಾಮಗಾರಿ:** ಬೆಂಗಳೂರು ನಗರದ ಜನತೆಗೆ


ಉದಯವಾಹಿನಿ ಚಿತ್ರ

ಯಾವುದೇ ಅಡೆತಡೆಯಿಲ್ಲದೇ ಕುಡಿಯುವ ನೀರನ್ನು ಸರಬರಾಜು ಮಾಡಲು, ಕಾವೇರಿ ನೀರು ಸರಬರಾಜು ಯೋಜನೆಯ ಜಲರೇಚಕ ಯಂತ್ರಾಗಾರಗಳು, ಮುಖ್ಯ ಕೊಳವೆ ಮಾರ್ಗಗಳ ಸುಲಲಿತ ಚಾಲನೆಯನ್ನು ಖಚಿತ ಪಡಿಸಿಕೊಳ್ಳಲು ಮತ್ತು ಸುಸ್ಥಿತಿಯಲ್ಲಿಡುವ ಉದ್ದೇಶದಿಂದ ಜಲಮಂಡಳಿಯ ವಿವಿಧೆಡೆ ನಿಯಮಿತ ತುರ್ತು ನಿರ್ವಹಣೆಯ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.

**ಎಲ್ಲೆಲ್ಲಿ ಯಾವಾಗ ನೀರು ಬಂದ್:** ಕಾವೇರಿ 5ನೇ ಹಂತ – ಸೆಪ್ಟೆಂಬರ್ 15 ರ ಬೆಳಗ್ಗೆ 1 ರಿಂದ ಸೆಪ್ಟೆಂಬರ್ 17ರ ಮಧ್ಯಾಹ್ನ 1ರವರೆಗೆ ಒಟ್ಟು 60 ಗಂಟೆಗಳು. ಕಾವೇರಿ ಹಂತ 1, 2, 3, 4 ರಲ್ಲಿ – ಸೆಪ್ಟೆಂಬರ್ 16 ರ ಬೆಳಗ್ಗೆ 6ರಿಂದ ಸೆಪ್ಟೆಂಬರ್ 17 ರ ಬೆಳಗ್ಗೆ 6ರವರೆಗೆ ಒಟ್ಟು 24 ಗಂಟೆಗಳು.

**ಅಗತ್ಯ ನೀರು ಸಂಗ್ರಹಿಸಿಟ್ಟುಕೊಳ್ಳಿ:** ಕಾವೇರಿ ನೀರು ಸರಬರಾಜು ಯೋಜನೆಯ ಜಲರೇಚಕ ಯಂತ್ರಾಗಾರಗಳ ಸ್ಥಗಿತತೆಯಿಂದ ಕಾವೇರಿ ನೀರು ಸರಬರಾಜುವಿನಲ್ಲಿ ವ್ಯತ್ಯಯವಾಗಲಿದೆ. ಕಾವೇರಿ ನೀರು ಸರಬರಾಜಾಗುವ ಪ್ರದೇಶಗಳ ನಾಗರಿಕರು ಮುಂಜಾಗ್ರತೆಯಾಗಿ ಅಗತ್ಯವಿರುವ ನೀರನ್ನು ಸಂಗ್ರಹಣೆ ಮಾಡಿಕೊಳ್ಳಲು ಬೆಂಗಳೂರು ಜಲಮಂಡಳಿ ಅಧಿಕಾರಿಗಳು ಕೋರಿದ್ದಾರೆ.

### ಟ್ಯಾಂಕರ್‌ಗಳ ಮೂಲಕ ತುರ್ತು ನೀರು ಸರಬರಾಜು

**ಜಲರೇಚಕ ಯಂತ್ರಾಗಾರಗಳ ಸ್ಥಗಿತತೆಯಿಂದ ಕಾವೇರಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾದಾಗ ಆ ಮೂರು ದಿನಗಳಲ್ಲಿ ಸಂಚಾರಿ ಕಾವೇರಿಯ ಯೋಜನೆಯ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಸೇವೆಯನ್ನು ಸ್ಥಗಿತಗೊಳಿಸಿ, ಈ ಟ್ಯಾಂಕರ್‌ಗಳನ್ನು ತುರ್ತು ನೀರು ಸರಬರಾಜಿಗಾಗಿ ಬಳಸಿಕೊಳ್ಳಲಾಗುವುದು ಎಂದು ಬೆಂಗಳೂರು ಜಲಮಂಡಳಿ ಅಧ್ಯಕ್ಷರಾದ ಡಾ.ವಿ.ರಾಮ್ ಪ್ರಸಾತ್ ಮನೋಹರ್ ಅವರು ತಿಳಿಸಿದ್ದಾರೆ.**

## ಕಂಡ ಕಂಡಲ್ಲಿ ಕಸ ಎಸೆದರೆ 2000 ರೂ. ದಂಡ ಗ್ಯಾರಂಟಿ!

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ ನಗರದಲ್ಲಿ ಕಂಡ ಕಂಡಲ್ಲಿ ಕಸ ಎಸೆಯುವವರಿಗೆ ಭಾರಿ ಪ್ರಮಾಣದ ದಂಡ ವಿಧಿಸಲು ನಿರ್ಧರಿಸಿದ್ದು, ಸಾರ್ವಜನಿಕರು ರಸ್ತೆ ಬದಿ ಕಸ ಸುರಿಯುವ ಮುನ್ನ ಮತ್ತು ಏಕ-ಬಳಕೆ ಪ್ಲಾಸ್ಟಿಕ್ ನಿಷೇಧವನ್ನು ಉಲ್ಲಂಘಿಸುವ ಮೊದಲು ಒಮ್ಮೆ ಯೋಚಿಸಿ.

ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಲಿಮಿಟೆಡ್ ಪದೆಪದೇ ಕಂಡ ಕಂಡಲ್ಲಿ ಕಸ ಎಸೆಯುವ ಪುನರಾವರ್ತಿತ ಅಪರಾಧಿಗಳಿಗೆ 2,000 ರೂ. ದಂಡ ವಿಧಿಸಲು ತೀರ್ಮಾನಿಸಿದೆ. ಇನ್ನೂ ಏಕ-ಬಳಕೆಯ ಪ್ಲಾಸ್ಟಿಕ್ ವಿರುದ್ಧದ ಅಭಿಯಾನದ ಸಮಯದಲ್ಲಿ ಈಗಾಗಲೇ ತನ್ನ ಸಿಬ್ಬಂದಿಗೆ ಕನಿಷ್ಠ 2,000 ರೂ. ದಂಡ ವಿಧಿಸಲು ಅಧಿಕಾರ ನೀಡಿದೆ.

ಮನೆ ಮುಂದೆ ಕಸದ ವಾಹನ ಬಂದರೂ ಕಸ ಹಾಕದೆ ರಸ್ತೆ ಬದಿಗಳಲ್ಲಿ ಎಲ್ಲೆಂದರಲ್ಲಿ ಕಸ ಎಸೆಯುವವರಿಗೆ ಬಿಸಿ ಮುಟ್ಟಿಸಬೇಕು ಎಂಬ ಉದ್ದೇಶದಿಂದ ಇಂತಹ ಕಠಿಣ ತೀರ್ಮಾನ ಕೈಗೊಳ್ಳಲು ತೀರ್ಮಾನಿಸಲಾಗಿದೆ ಎಂದು BSWML ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕರೀಗೌಡ ಅವರು ತಿಳಿಸಿದ್ದಾರೆ. ಅದೇ


ಉದಯವಾಹಿನಿ ಚಿತ್ರ

ರೀತಿ ನಗರದಲ್ಲಿ ಹೆಚ್ಚಾಗ್ತಿರೋ ಪ್ಲಾಸ್ಟಿಕ್ ಹಾವಳಿ ಸಮರ್ಪಕ ಕಸ ನಿರ್ವಹಣೆಗೆ ಅಡ್ಡಿಯಾಗುತ್ತಿರುವ ಹಿನ್ನೆಲೆಯಲ್ಲಿ ಏಕಬಳಕೆ ಪ್ಲಾಸ್ಟಿಕ್‌ಗೆ ಸಂಪೂರ್ಣ ಕಡಿವಾಣ ಹಾಕುವ ನಿರ್ಧಾರ ಕೈಗೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದರು. ನಗರದಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ತಡೆಯಲು ಬಿಎಸ್‌ಡಬ್ಲ್ಯೂಎಂಎಲ್‌ನ ಸಹಾಯಕ ಪ್ರಧಾನ ವ್ಯವಸ್ಥಾಪಕರ ನೇತೃತ್ವದಲ್ಲಿ ನಾವು 27 ವಿಶೇಷ ಜಾರಿ ತಂಡಗಳನ್ನು ರಚಿಸಿದ್ದೇವೆ ಮತ್ತು ಪ್ರತಿ ವಾರ ಐದು ವಾರ್ಡ್‌ಗಳಲ್ಲಿ ತಪಾಸಣೆ ನಡೆಸಲು ಸೂಚನೆ ನೀಡಿದ್ದೇವೆ ಎಂದು ಕರೀಗೌಡ ಹೇಳಿದರು. ಕೇಂದ್ರ ಕಚೇರಿಯಿಂದ ಕಾರ್ಯನಿರ್ವಹಿಸುವ ಈ ತಂಡಗಳು ಸೆಪ್ಟೆಂಬರ್ 8 ರಿಂದ ವಾರದಲ್ಲಿ ಐದು ದಿನ ಪ್ಲಾಸ್ಟಿಕ್ ತಯಾರಕರು ಸಗಟು ವ್ಯಾಪಾರಿಗಳು ಸೇರಿದಂತೆ ಹಲವು ಸ್ಥಳಗಳಲ್ಲಿ ದಾಳಿ ನಡೆಸುತ್ತಿವೆ ಎಂದರು. ಹೆಚ್ಚುವರಿಯಾಗಿ, ವಾರ್ಡ್ ಮಟ್ಟದಲ್ಲಿ ವಾರ್ಡ್ ಮಾರ್ಷಲ್‌ಗಳು ಮತ್ತು ಕಿರಿಯ ಆರೋಗ್ಯ ನಿರೀಕ್ಷಕರು ಪ್ರತಿದಿನ ಪ್ಲಾಸ್ಟಿಕ್ ದಾಳಿ ನಡೆಸಿ ಪ್ರತಿ ಪ್ರಕರಣಕ್ಕೂ ಕನಿಷ್ಠ 2,000 ರೂ. ದಂಡ ವಿಧಿಸಲು ನಿರ್ದೇಶಿಸಲಾಗಿದೆ ಎಂದು ಅವರು ಹೇಳಿದರು.

ಸೆಪ್ಟೆಂಬರ್ 3 ರಂದು ಪ್ಲಾಸ್ಟಿಕ್ ವಿರುದ್ಧ ಕ್ರಮ ಕೈಗೊಂಡಾಗಿನಿಂದ, 281 ಸಗಟು ವ್ಯಾಪಾರಿಗಳಿಂದ ಒಟ್ಟು 19.66 ಲಕ್ಷ ರೂ. 2,842 ಚಿಲ್ಲರೆ ವ್ಯಾಪಾರಿಗಳಿಂದ 18.41 ಲಕ್ಷ ರೂ. ದಂಡ ಸಂಗ್ರಹಿಸಲಾಗಿದೆ ಎಂದು ಅವರು ತಿಳಿಸಿದರು.

**ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಕರೀಗೌಡ ಅವರು, ಎಲ್ಲೆಂದರಲ್ಲಿ ಕಸ ಎಸೆಯುವವರಿಗೆ ಮೊದಲ ಬಾರಿಗೆ 500 ರೂ. ದಂಡ ವಿಧಿಸಲಾಗುವುದು ಮತ್ತೆ ಅವರು ಇಂತಹದ್ದೇ ಧೋರಣೆ ಮುಂದುವರೆಸಿದರೆ 2000 ರೂ.ಗಳ ದಂಡ ವಿಧಿಸಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ.**

## ನಾಗರಿಕರ ಸಂಕಷ್ಟ; ಯುವ ಕಾಂಗ್ರೆಸ್ ಸಮಿತಿ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ಜಯನಗರ 4ನೇಬ್ಲಾಕ್ ನಾಗರಿಕರ ಮೂಲಭೂತ ಸೌಲಭ್ಯಗಳಾದ ಫುಟ್ ಪಾತ್ ಮತ್ತು ಚರಂಡಿ , ಡಾಂಬರೀಸ್ ವಿಲೇವಾರಿಯಾಗದೇ ಇರುವುದು ಖಂಡಿಸಿ ಜಯನಗರ ವಿಧಾನಸಭಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಪೋಸ್ಟರ್ ಹಿಡಿದು ಪ್ರದರ್ಶನ ಮಾಡಿ ಜನಜಾಗೃತಿ ಮೂಡಿಸಿದರು.

ಬೆಂಗಳೂರುನಗರ ಪ್ರತಿಷ್ಟಿತ ಬಡಾವಣೆಯಾದ ಜಯನಗರ ಅಭಿವೃದ್ಧಿ ಕಾಣದೇ ಅಧೋಗತಿಗೆ ಇಳಿದಿದೆ. ಕೊಟ್ಯಂತರ ರೂಪಾಯಿ ತೆರಿಗೆ ಕಟ್ಟುವ ನಾಗರಿಕರಿಗೆ ಮೂಲಭೂತ ಸೌಲಭ್ಯಗಳು ಸಿಗುತ್ತಿಲ್ಲ.



ಉದಯವಾಹಿನಿ ಚಿತ್ರ

ಜಯನಗರ 4ನೇ ಬ್ಲಾಕ್ ಸಾವಿರಾರು ಅಂಗಡಿ, ವಾಣಿಜ್ಯ ವ್ಯಾಪಾರ ಮಾಡುವವರು ಹಾಗೂ ಹಿರಿಯ ನಾಗರಿಕರು, ಮಹಿಳೆಯರು ಮಕ್ಕಳು ವಾಕಿಂಗ್ ಮಾಡುತ್ತಾರೆ. ನಡೆಯಲು ಸರಿಯಾದ ಫುಟ್ ಪಾತ್ ಇಲ್ಲ, ಮಳೆ ನೀರು ಹರಿದು ಹೋಗಲು ಸಮರ್ಪಕ ಚರಂಡಿ ವ್ಯವಸ್ಥೆ ಇಲ್ಲ. ರಸ್ತೆಗಳಲ್ಲಿ ಮಣ್ಣು, ಕಸದ ರಾಶಿಗಳು ಬಿದ್ದಿದೆ.

ಹಲವಾರು ತಿಂಗಳಿಂದ ಇಂತಹ ದುಸ್ಥಿತಿ ಜಯನಗರ ನಾಗರಿಕರು ಅನುಭವಿಸುತ್ತಿದ್ದಾರೆ. ಜನಪ್ರತಿನಿಧಿಗೆ ಮತ್ತು ಅಧಿಕಾರಿಗಳಿಗೆ ಹಿಡಿಶಾಪ ಹಾಕುತ್ತಿದ್ದಾರೆ. ಸಾರ್ವಜನಿಕರು ಎಷ್ಟೆ ದೂರು ನೀಡಿದರು ಸ್ಥಳೀಯ ಶಾಸಕರು, ಅಧಿಕಾರಿಗಳು ನಿರ್ಲಕ್ಷ್ಯ ಧೋರಣೆ ತೋರುತ್ತಿದ್ದಾರೆ ಇದನ್ನ ಖಂಡಿಸಿ ಜಯನಗರ ವಿಧಾನಸಭಾ ಕ್ಷೇತ್ರದ ಯುವ ಕಾಂಗ್ರೆಸ್ ಸಮಿತಿ ವಿನೂತನವಾಗಿ ಪೋಸ್ಟರ್ ಹಿಡಿದು ಜನಜಾಗೃತಿ ಮೂಡಿಸಲಾಗುತ್ತಿದೆ ಎಂದು ಹೇಳಿದರು.

## ತನಿಖೆಗೆ ಎಸ್‌ಐಟಿ ರಚಿಸುವಂತೆ ಕೈ ನಾಯಕರಿಂದಲೇ ಸಿಎಂಗೆ ಪತ್ರ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಭೋವಿ ನಿಗಮದಲ್ಲಿ ಭ್ರಷ್ಟಾಚಾರ ಆರೋಪ ಪ್ರಕರಣ ತಣ್ಣಗಾಗುವ ಮುನ್ನವೇ ಮತ್ತೊಂದು ಭಾರೀ ಅಕ್ರಮ ಬೆಳಕಿಗೆ ಬಂದಿದೆ. ಖುದ್ದು ಕಾಂಗ್ರೆಸ್‌ನ ಹಿರಿಯ ನಾಯಕರೇ ಅಕ್ರಮದ ಬಗ್ಗೆ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದು, ತನಿಖೆಗೆ ಒತ್ತಾಯಿಸಿದ್ದಾರೆ.



ರಾಜ್ಯದಲ್ಲಿ 1 ಲಕ್ಷ ಕೋಟಿ ಮೊತ್ತದ ಗಣಿ ಹಗರಣ ನಡೆದಿದೆ. ಈ ಸಂಬಂಧ ತನಿಖೆ ನಡೆಸಲು ವಿಶೇಷ ತನಿಖಾ ತಂಡ ರಚಿಸಬೇಕು ಎಂದು ಮಾಜಿ ಸಂಸದರು, ಮಾಜಿ ಎಂಎಲ್‌ಸಿಗಳು ಹಾಗೂ ಮಾಜಿ ಸಚಿವರು ಸೇರಿ 20ಕ್ಕೂ ಹೆಚ್ಚು ನಾಯಕರು ಪತ್ರ ಬರೆದಿದ್ದಾರೆ. ಡಿಸಿಎಂ ಡಿಕೆ ಶಿವಕುಮಾರ್, ಹೆಚ್.ಕೆ ಪಾಟೀಲ್, ಎಸ್‌ಎಸ್ ಮಲ್ಲಿಕಾರ್ಜುನ್ ಅವರಿಗೂ ಪತ್ರದಲ್ಲಿ ಮನವಿ ಮಾಡಿದ್ದಾರೆ. ರಾಜ್ಯದಲ್ಲಿ ಬಳ್ಳಾರಿ ತುಮಕೂರು ಚಿತ್ರದುರ್ಗದಲ್ಲಿ ಗಣಿಗಾರಿಕೆಯಲ್ಲಿ ಭಾರೀ ಅಕ್ರಮ ನಡೆದಿರುವ ವರದಿ ಕೊಟ್ಟಿದೆ. ವರದಿ ಅನ್ವಯ 1 ಲಕ್ಷ ಕೋಟಿ ಗಣಿ ಅಕ್ರಮ ನಡೆದಿದೆ. ಈ ಬಗ್ಗೆ ಎಸ್‌ಐಟಿ ರಚನೆ ಮಾಡಿ ತನಿಖೆ ನಡೆಸಬೇಕೆಂದು ಸಿಎಂಗೆ ಆಗ್ರಹಿಸಿದ್ದಾರೆ.

**ಪತ್ರದಲ್ಲಿ ಏನಿದೆ?:** ರಾಜ್ಯದ ಬಳ್ಳಾರಿ, ತುಮಕೂರು, ಚಿತ್ರದುರ್ಗ, ಇನ್ನಿತರ ಭಾಗಗಳಲ್ಲಿ ಅತ್ಯಂತ ಉತ್ಕೃಷ್ಟವಾದ ಕಬ್ಬಿಣದ ಅದಿರು ಲಭ್ಯವಾಗುತ್ತಿರುವುದನ್ನು ಗಮನಿಸಿದ ಕೆಲವು ಗಣಿ ಮಾಲೀಕರು 2000 ಇಸವಿಯಿಂದ ಅಕ್ರಮವಾಗಿ ಗಣಿ ಲೂಟಿ ಮಾಡುತ್ತಿದ್ದರು. ಇದನ್ನು ಗಮನಿಸಿದ ಕಾಂಗ್ರೆಸ್ ಪಕ್ಷದ ನಾಯಕತ್ವವು ವಿಧಾನ ಪರಿಷತ್‌ನಲ್ಲಿ ಹೋರಾಟ ಮಾಡಿ ಹಗರಣವನ್ನು ನ್ಯಾ. ಮೂರ್ತಿ ಯು.ಎಲ್ ಭಟ್ ಆಯೋಗಕ್ಕೆ ತನಿಖೆ ಮಾಡಲು ಒಪ್ಪಿಸಲಾಗಿತ್ತು.

## ಮೆಟ್ರೋ ಪ್ರಯಾಣ ದರ ಏರಿಕೆ: ಶೇ. 51.5 ರಷ್ಟು ಹೆಚ್ಚಳಕ್ಕೆ ದರ ನಿಗದಿ ಸಮಿತಿ ಶಿಫಾರಸು


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೊ ಪ್ರಯಾಣ ದರ ಏರಿಕೆಯಾದ ಏಳು ತಿಂಗಳ ಬಳಿಕ ಬಿಎಂಆರ್‌ಸಿಎಲ್ ತನ್ನ ವೆಬ್‌ಸೈಟ್‌ನಲ್ಲಿ ದರ ನಿಗದಿ ಸಮಿತಿ ನೀಡಿರುವ ವರದಿಯನ್ನು ಪ್ರಕಟಿಸಿದೆ.

ಬಿಎಂಆರ್‌ಸಿಎಲ್ ಶೇ 105.5ರಷ್ಟು ದರ ಏರಿಕೆ ಮಾಡುವಂತೆ ಬೇಡಿಕೆ ಇಟ್ಟಿದ್ದು, ಶೇ 51.55ರಷ್ಟು ಹೆಚ್ಚಳ ಮಾಡಲು ದರ ನಿಗದಿ ಸಮಿತಿ ಶಿಫಾರಸು ಮಾಡಿತ್ತು. ಆದರೆ ಸಮಿತಿ ಶಿಫಾರಸ್ಸು ಬದಿಗೊತ್ತಿ ಬೆಂಗಳೂರು ಮೆಟ್ರೋ ರೈಲು ನಿಗಮ ಲಿಮಿಟೆಡ್ ಶೇ. 71 ರಷ್ಟು ಬೆಲೆ ಹೆಚ್ಚಿಸಿದೆ ಎಂಬುದು ಬಹಿರಂಗವಾಗಿದೆ.

ಸುಮಾರು ಏಳು ತಿಂಗಳುಗಳ ಕಾಲ ನಂತರ ಅಂತಿಮವಾಗಿ ಸಮಿತಿಯ ವರದಿಯನ್ನು ಸಾರ್ವಜನಿಕಗೊಳಿಸಿದೆ. ಪ್ರಯಾಣಿಕರು, ಚುನಾಯಿತ ಪ್ರತಿನಿಧಿಗಳು ಮತ್ತು RTI ಅರ್ಜಿದಾರರಿಂದ ನಿರಂತರ ಒತ್ತಡದ ನಂತರ ವರದಿ ಬಿಡುಗಡೆ ಮಾಡಲಾಯಿತು. ಫೆಬ್ರವರಿಯಲ್ಲಿ ಮೆಟ್ರೋ ಪ್ರಯಾಣ ದರ ಏರಿಕೆ ಮಾಡಲಾಗಿತ್ತು. ದರ ನಿಗದಿ ಸಮಿತಿ ಶಿಫಾರಸುಗಳಿಗೆ ಅನುಗುಣವಾಗಿ ಪರಿಷ್ಕರಣೆಯಾಗಿದೆ ಎಂದು ಹೇಳಿತ್ತು, ಆದರೆ ವರದಿಯನ್ನು ಇಲ್ಲಿಯವರೆಗೆ ಸಾರ್ವಜನಿಕರ ಗಮನಕ್ಕೆ ತರಲಾಗಿಲ್ಲ.

ಸಮಿತಿಯು 7.5 ವರ್ಷಗಳಲ್ಲಿ ಶೇ. 51.5 ದರ ಹೆಚ್ಚಳವನ್ನು ಪ್ರಸ್ತಾಪಿಸಿತ್ತು, ಸುಮಾರು ಶೇ. 6.87ರಷ್ಟು ವಾರ್ಷಿಕವಾಗಿ ಏರಿಕೆ ಮಾಡಿದೆ. ಸಿಬ್ಬಂದಿ ವೆಚ್ಚಗಳು (ಗ್ರಾಹಕ ಬೆಲೆ ಸೂಚ್ಯಂಕಕ್ಕೆ ಸಂಬಂಧಿಸಿದೆ), ಇಂಧನ ಶುಲ್ಕಗಳು ಮತ್ತು ನಿರ್ವಹಣಾ ವೆಚ್ಚಗಳ ಆಧಾರದ ಮೇಲೆ ವಾರ್ಷಿಕವಾಗಿ ದರಗಳನ್ನು ಸ್ವಯಂಚಾಲಿತವಾಗಿ ಪರಿಷ್ಕರಿಸುವ ಪಾರದರ್ಶಕ, ಕಾರ್ಯವಿಧಾನವನ್ನು ಶಿಫಾರಸು ಮಾಡಿತು. ಇದಕ್ಕೆ ವ್ಯತಿರಿಕ್ತವಾಗಿ, ಬಿಎಂಆರ್‌ಸಿಎಲ್ ಆರಂಭದಲ್ಲಿ ಶೇ 105.5ರಷ್ಟು ದರ ಏರಿಕೆ ಮಾಡುವಂತೆ ಕೋರಿತ್ತು, ಆದರೆ ಅದನ್ನು ಎಫ್‌ಎಫ್‌ಸಿ ಅಸಮಂಜಸವೆಂದು ತಿರಸ್ಕರಿಸಿತು.

ಅಂತಿಮವಾಗಿ ನಿಗಮವು ಶೇ, 71 ರಷ್ಟು ಹೆಚ್ಚಿಸಿತು. ಇನ್ನು ಪ್ರತಿ ವರ್ಷ ದರ ಏರಿಕೆ ಮಾಡಲು ಬಿಎಂಆರ್‌ಸಿಎಲ್ ನಿರ್ಧಾರ ಮಾಡಿದೆ. ಪ್ರತಿ ವರ್ಷ ಫೆಬ್ರವರಿಯಲ್ಲಿ ಶೇಕಡಾ 5ರಷ್ಟು ದರ ಏರಿಕೆಗೆ ನಿರ್ಧಾರ ಮಾಡಲಾಗಿದೆ.

ದರ ಹೆಚ್ಚಳಕ್ಕಾಗಿ ಸಮಿತಿ ಮಾಡಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲು ರಾಜ್ಯ ಸರ್ಕಾರವನ್ನು ಬಿಎಂಆರ್‌ಸಿಎಲ್ ಕೋರಿತ್ತು. ಅದರಂತೆ ರಾಜ್ಯ ಮೂಲಸೌಕರ್ಯ ಇಲಾಖೆಯು ಕೇಂದ್ರಕ್ಕೆ ಪ್ರಸ್ತಾವ ಸಲ್ಲಿಸಿತ್ತು. ಕೇಂದ್ರ ಸರ್ಕಾರವು ದರ ನಿಗದಿ ಸಮಿತಿಯನ್ನು ನೇಮಕ ಮಾಡಿತ್ತು. ಸಮಿತಿಯು ಸಾರ್ವಜನಿಕರಿಂದ, ಬಿಎಂಆರ್‌ಸಿಎಲ್ ಅಧಿಕಾರಿಗಳಿಂದ, ತಜ್ಞರಿಂದ ಅಭಿಪ್ರಾಯ ಸಂಗ್ರಹಿಸಿತ್ತು. ಕನಿಷ್ಠದರ 21 ರೂ ಹಾಗೂ ಗರಿಷ್ಠ ದರ ರೂ.123ಕ್ಕೆ ಏರಿಸಬೇಕು ಎಂದು ತಿಳಿಸಿತ್ತು. ದೇಶದ ವಿವಿಧ ಮೆಟ್ರೊಗಳಲ್ಲಿ ಇರುವ ದರ, ವಿದೇಶಗಳಲ್ಲಿ ಇರುವ ದರ ಪರಿಷ್ಕರಣೆ ವ್ಯವಸ್ಥೆ ಎಲ್ಲಾವನ್ನೂ ಅಧ್ಯಯನ ನಡೆಸಿದ ದರ ನಿಗದಿ ಸಮಿತಿಯು 12 ಸ್ಲ್ಯಾಬ್‌ಗಳ ಬದಲು 10 ಸ್ಲ್ಯಾಬ್‌ಗಳನ್ನು ಮಾಡಿತ್ತು. ಅಲ್ಲದೇ ಕನಿಷ್ಠ ದರವನ್ನು 10 ರು. ಇರುವುದನ್ನು ಹಾಗೇ ಉಳಿಸಿಕೊಂಡು ಗರಿಷ್ಠ ದರವನ್ನು ರೂ.90ಕ್ಕೆ ನಿಗದಿ ಮಾಡಿತ್ತು. ಶುಲ್ಕ ಏರಿಕೆಯ ವಿರುದ್ಧ ಪ್ರತಿಭಟಿಸಿದ ಸಂಸದ ತೇಜಸ್ವಿ ಸೂರ್ಯ ದರ ಏರಿಕೆ ಪ್ರಶ್ನಿಸಿ ಕರ್ನಾಟಕ ಹೈಕೋರ್ಟ್‌ಗೆ ಮೆಟ್ಟಿಲೇರಿದ್ದರು. ಹೈಕೋರ್ಟ್ ಅರ್ಜಿಯನ್ನು ವಿಚಾರಣೆಗೆ ನಿಗದಿಪಡಿಸುವ ಒಂದು ದಿನ ಮೊದಲು ಹಾಗೂ ದರ ಏರಿಕೆಯ ಏಳು ತಿಂಗಳ ನಂತರ, ಬಿಎಂಆರ್‌ಸಿಎಲ್ ತನ್ನ ವೆಬ್‌ಸೈಟ್‌ನಲ್ಲಿ ಎಫ್‌ಎಫ್‌ಸಿ ವರದಿಯನ್ನು ಪ್ರಕಟಿಸಿದೆ.

**ಏತನ್ಮಧ್ಯೆ, ಬೆಂಗಳೂರು ಕೇಂದ್ರ ಸಂಸದ ಪಿಸಿ ಮೋಹನ್, ಬಿಎಂಆರ್‌ಸಿಎಲ್ ದರ ಏರಿಕೆಯನ್ನು ಹಿಂಪಡೆಯಬೇಕು ಅಥವಾ ಸಮಿತಿ ಮಾಡಿದ ಶಿಫಾರಸುಗಳನ್ನು ಪಾಲಿಸಬೇಕು ಶೇ. 51.5ರಷ್ಟ ಪ್ರಮಾಣದಲ್ಲಿ ಮೆಟ್ರೋ ದರ ಏರಿಸಬೇಕು ಎಂದು ಹೇಳಿದ್ದಾರೆ.**

# 5 ನಗರ ಪಾಲಿಕೆಗಳ ರಸ್ತೆ, ಪಾದಚಾರಿ ಮಾರ್ಗಗಳಲ್ಲಿ ಕಾರ್ಯಾಚರಣೆ

## ಉತ್ತರ ನಗರ ಪಾಲಿಕೆ ವ್ಯಾಪ್ತಿಯ ಎಚ್ ಬಿಆರ್ ಲೇಔಟ್ ಉಪ ವಿಭಾಗದಲ್ಲಿ ಅನಧಿಕೃತ ಜಾಹೀರಾತು ಫಲಕಗಳನ್ನು ತೆರವು

• ಉದಯವಾಹಿನಿ, ಬೆಂಗಳೂರು

ಐದೂ ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಸ್ವಚ್ಛತಾ ಅಭಿಯಾನ ಹಾಗೂ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ನಡೆಯಿತು. ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ ಚಿಕ್ಕಪೇಟೆ, ದೊಮ್ಮಲೂರು ಮೇಲೇತುವೆ, ಚಾಮರಾಜಪೇಟೆ. ದೊಮ್ಮಲೂರು ಮೊದಲನೇ ಹಂತ, ಗಾಂಧಿನಗರ, ಮೆಜೆಸ್ಟಿಕ್ ಸುತ್ತಲಿನ ಪ್ರದೇಶ, ಇಂದಿರಾನಗರದ 80 ಅಡಿ ರಸ್ತೆ (ವಿವೇಕಾನಂದ ಮೆಟ್ರೊ ನಿಲ್ದಾಣದ ಕಡೆ) ಹಾಗೂ ವಸಂತನಗರ ಉಪ ವಿಭಾಗ ವ್ಯಾಪ್ತಿಯಲ್ಲಿ ಸ್ವಚ್ಛತಾ ಅಭಿಯಾನ ಕಾರ್ಯಾಚರಣೆ ನಡೆಯಿತು.

ಬೆಂಗಳೂರು ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯ ಮೂಡಲ ಪಾಳ್ಯ, ಕಿತ್ತೂರು ರಾಣಿ ಚನ್ನಮ್ಮ ಉದ್ಯಾನ ಹತ್ತಿರ, ಹೇರೋಹಳ್ಳಿ ಉಪ ವಿಭಾಗದ ವ್ಯಾಪ್ತಿ, ಕಾವೇರಿಪುರ, ಕೊಮ್ಮಘಟ್ಟ ರಸ್ತೆ ಕಡೆ ಮಾರುತಿ ಮಂದಿರ ವಾರ್ಡ್ ವ್ಯಾಪ್ತಿಯಲ್ಲಿ ಸ್ವಚ್ಛತಾ ಅಭಿಯಾನ ಕಾರ್ಯಾಚರಣೆ ನಡೆಸಲಾಯಿತು.

ನಿಷೇಧಿತ ಏಕಬಳಕೆ ಪ್ಲಾಸ್ಟಿಕ್ ತಪಾಸಣೆ ನಡೆಸಿ, ಎರಡು ಪ್ರಕರಣಗಳಲ್ಲಿ ರೂ.80 ಸಾವಿರ ದಂಡ ವಸೂಲಿ ಮಾಡಿ, 650 ಕೆ.ಜಿ ಏಕಬಳಕೆ ಪ್ಲಾಸ್ಟಿಕ್ ವಶಕ್ಕೆ ಪಡೆಯಲಾಯಿತು.

ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯ ಎಚ್ ಬಿಆರ್ ಲೇಔಟ್ ಉಪ ವಿಭಾಗದಲ್ಲಿ ಅನಧಿಕೃತ ಜಾಹೀರಾತು ಫಲಕಗಳನ್ನು ತೆರವುಗೊಳಿಸಲಾಯಿತು. ವಾಣಿಜ್ಯ ಮಳಿಗೆಗಳಲ್ಲಿ ಅಧಿಕಾರಿಗಳು ಏಕಬಳಕೆ ಪ್ಲಾಸ್ಟಿಕ್ ತಪಾಸಣೆ ನಡೆಸಿ, 1 ಲಕ್ಷ ದಂಡ ವಸೂಲಿ ಮಾಡಿ 414 ಕೆ.ಜಿ ಏಕಬಳಕೆ ಪ್ಲಾಸ್ಟಿಕ್ ವಶಕ್ಕೆ ಪಡೆದು. ಇನ್ನು ಮುಂದೆ ಬಳಸದಂತೆ ಎಚ್ಚರಿಕೆ ನೀಡಿದರು.

ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ಅವಲಹಳ್ಳಿ 80 ಅಡಿ ರಸ್ತೆಯ ಟಿಪ್ಪು ವೃತ್ತದಿಂದ ಅಂಜನಾಪುರದ 80 ಅಡಿ ರಸ್ತೆಯವರೆಗೆ, ಜಯನಗರದ 32ನೇ ಇ-ಅಡ್ಡರಸ್ತೆಯ 18ನೇ ಮುಖ್ಯರಸ್ತೆಯಿಂದ ಈಸ್ಟ್ ಎಂಡ್ ಮುಖ್ಯರಸ್ತೆಯವರೆಗೆ, ಪದ್ಮನಾಭನಗರದ ಪುಟ್ಟಲಿಂಗಯ್ಯ ರಸ್ತೆಯ ದೇವೇಗೌಡ ಪೆಟ್ರೋಲ್ ಬಂಕ್‌ನಿಂದ ಗೌಡನಪಾಳ್ಯದ ಶ್ರೀನಿವಾಸ ಟಾಕೀಸ್‌ವರೆಗೆ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮ ನಡೆಸಲಾಯಿತು.

ಅಧಿಕಾರಿಗಳ ತಂಡ ವಾಣಿಜ್ಯ ಮಳಿಗೆಗಳಿಗೆ ಭೇಟಿ ನೀಡಿ ನಿಷೇಧಿತ ಏಕಬಳಕೆ ಪ್ಲಾಸ್ಟಿಕ್ ತಪಾಸಣೆ ನಡೆಸಿ, 19 ಪ್ರಕರಣಗಳಲ್ಲಿ ರೂ.1.40 ದಂಡ ವಸೂಲಿ ಮಾಡಿ, 120 ಕೆ.ಜಿ ಏಕಬಳಕೆ ಪ್ಲಾಸ್ಟಿಕ್ ವಶಕ್ಕೆ ಪಡೆದರು.


ಉದಯವಾಹಿನಿ ಚಿತ್ರ

**ರಸ್ತೆ ಗುಂಡಿ ಮುಚ್ಚಿ:** ವೆಟ್ ಮಿಕ್ಸ್ ಮ್ಯಾಕಡಮ್ ಬಳಸಿ ರಸ್ತೆ ಗುಂಡಿ ಮುಚ್ಚುವಂತೆ ಬೆಂಗಳೂರು ಉತ್ತರ ನಗರ ಪಾಲಿಕೆ ಆಯುಕ್ತ ಪೊಮ್ಮಲ ಸುನಿಲ್ ಕುಮಾರ್ ಅವರು ಅಧಿಕಾರಿಗಳಿಗೆ ಸೂಚಿಸಿದರು. ಇಂದಿರಾ ಕ್ಯಾಂಟೀನ್‌ಗೆ ಭೇಟಿ ನೀಡಿ ಕಾಮಗಾರಿಗಳ ಸ್ಥಿತಿಯನ್ನು ಪರಿಶೀಲಿಸಿದ ಆಯುಕ್ತರು, ಪಾಲಿಕೆಯ ವ್ಯಾಪ್ತಿಯಲ್ಲಿರುವ ಎಲ್ಲಾ ಇಂದಿರಾ ಕ್ಯಾಂಟೀನ್‌ಗಳ ಸಂಪೂರ್ಣ ವರದಿ ನೀಡಲು ತಿಳಿಸಿದರು. ಕ್ಯಾಂಟೀನ್‌ನಲ್ಲಿ ಹಾಗೂ ಕ್ಯಾಂಟೀನ್ ಸುತ್ತ ಸ್ವಚ್ಛತೆ ಕಾಪಾಡಲು ಸಿಬ್ಬಂದಿಗೆ ನಿರ್ದೇಶನ ನೀಡಿದರು.

### ರಸ್ತೆ ದುರಸ್ತಿಗೆ ಸೂಚನೆ

**ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಸೂಚನೆ**

**ಜಿಬಿಎ ವ್ಯಾಪ್ತಿಯಲ್ಲಿ ವೈಟ್ ಟಾಪಿಂಗ್ ಬ್ಲ್ಯಾಕ್ ಟಾಪಿಂಗ್ ಪ್ರಗತಿಯಲ್ಲಿರುವ ರಸ್ತೆಗಳಲ್ಲಿ ಗುತ್ತಿಗೆ ಪಡೆದಿರುವವರಿಂದಲೇ ದುರಸ್ತಿ ಕಾರ್ಯ ಕೈಗೊಳ್ಳಬೇಕೆಂದು ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. 400 ಕಿ.ಮೀ ಉದ್ದದ ರಸ್ತೆಯಲ್ಲಿ ಬ್ಲ್ಯಾಕ್ ಟಾಪಿಂಗ್ ಹಾಗೂ 150 ಕಿ.ಮೀ ಉದ್ದದ ರಸ್ತೆಯಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಕೈಗೆತ್ತಿಕೊಂಡಿದ್ದು ಆ ಎಲ್ಲಾ ರಸ್ತೆಗಳನ್ನು ಗುಂಡಿಗಳಿಲ್ಲದಂತೆ ನಿರ್ವಹಣೆ ಮಾಡಲು ಗುತ್ತಿಗೆದಾರರಿಗೆ ಜವಾಬ್ದಾರಿ ನೀಡಬೇಕು ಎಂದರು. ಸಂಚಾರ ಪೊಲೀಸ್ ವಿಭಾಗದಿಂದ ಹೊಸದಾಗಿ 4822 ರಸ್ತೆ ಗುಂಡಿಗಳನ್ನು ಗುರುತಿಸಲಾಗಿದ್ದು ಈ ಪೈಕಿ 1861 ರಸ್ತೆ ಗುಂಡಿಗಳನ್ನು ಮುಚ್ಚಲಾಗಿದೆ. ಬಾಕಿಯಿರುವ 2961 ರಸ್ತೆ ಗುಂಡಿಗಳನ್ನು ಮುಚ್ಚಬೇಕಿದ್ದು ಯಾವ ಯಾವ ಇಲಾಖೆಗಳಿಗೆ ಬರಲಿದೆ ಎಂಬುದನ್ನು ಪರಿಶೀಲಿಸಿ ಆ ಇಲಾಖೆಗಳ ಜೊತೆ ಸಮನ್ವಯ ಮಾಡಿಕೊಂಡು ಆಯಾ ನಗರ ಪಾಲಿಕೆಗಳಲ್ಲಿ ಕ್ರಮ ಕೈಗೊಳ್ಳಬೇಕು ಎಂದರು.**

# ಬಿಜೆಪಿಯವರು ಅಧಿಕಾರದಲ್ಲಿದ್ದಾಗ ಹೆಚ್ಚಿನ ಪರಿಹಾರ ಕೊಟ್ಟಿದ್ರಾ?

## ಗಣೇಶ ವಿಸರ್ಜನಾ ಮೆರವಣಿಗೆ ಮೇಲೆ ಲಾರಿ ನುಗ್ಗಿದ್ದರಿಂದ ಮೃತಪಟ್ಟವರ ಕುಟುಂಬಗಳಿಗೆ ನಾವು ತಲಾ ರೂ.5 ಲಕ್ಷ ಪರಿಹಾರ

• ಉದಯವಾಹಿನಿ, ಮೈಸೂರು

ಹಾಸನ ತಾಲ್ಲೂಕಿನ ಮೊಸಳೆ ಹೊಸಹಳ್ಳಿಯಲ್ಲಿ ಗಣೇಶ ಮೂರ್ತಿ ವಿಸರ್ಜನಾ ಮೆರವಣಿಗೆ ಮೇಲೆ ಲಾರಿ ನುಗ್ಗಿದ್ದರಿಂದ ಮೃತಪಟ್ಟವರ ಕುಟುಂಬಗಳಿಗೆ ನಾವು ತಲಾ ರೂ.5 ಲಕ್ಷ ಪರಿಹಾರ ಘೋಷಿಸಿದ್ದೇವೆ.

ಬಿಜೆಪಿಯವರು ಅಧಿಕಾರದಲ್ಲಿದ್ದಾಗ ಎಷ್ಟು ಕೊಟ್ಟಿದ್ದರು, ಅವರೇನಾದರೂ ಹೆಚ್ಚಾಗಿ ಕೊಟ್ಟಿದ್ದರೆ ಪರವಾಗಿಲ್ಲ ಎನ್ನಬಹುದಿತ್ತು. ಆದರೆ, ಅವರು ಮಾಡಿಲ್ಲವಲ್ಲ, ತಲಾ ರೂ.10 ಲಕ್ಷ ಪರಿಹಾರ ನೀಡುವಂತೆ ಬಿಜೆಪಿಯವರು ಒತ್ತಾಯಿಸಿರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೇಲಿನಂತೆ ಪ್ರತಿಕ್ರಿಯಿಸಿದರು. ಇಲ್ಲಿನ ಮಂಡಕಳ್ಳಿ ವಿಮಾನನಿಲ್ದಾಣದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಪರಿಹಾರ ಕೊಡುವುದು, ಸತ್ತವರನ್ನು ವಾಪಸ್ ಕರೆತರುತ್ತೇವೆ ಎಂದಲ್ಲ. ಇಂತಹ ಘಟನೆಗಳಾದಾಗ ಸರ್ಕಾರ ಹಿಂದಿನಿಂದಲೂ ಪರಿಹಾರ ನೀಡುತ್ತಾ ಬಂದಿದೆ. ಕುಟುಂಬದವರಿಗೆ ಸಾಂತ್ವನ ಹೇಳುವ ಕೆಲಸವಿದು.

**ಯಾರೋ ಒಬ್ಬರಿಗೆ ವಿಶೇಷವಾಗಿ ಹೆಚ್ಚಿಸುವಂಥದ್ದಲ್ಲ**; ಎಲ್ಲಾರಿಗೂ ಸಮಾನವಾಗಿ ಕೊಡಬೇಕಾಗುತ್ತದೆ ಎಂದು ಪ್ರತಿಪಾದಿಸಿದರು. ಅಪಘಾತಗಳನ್ನು ತಡೆಯಲೆಂದೇ ರಸ್ತೆ ಸುರಕ್ಷತಾ ಕಾನೂನುಗಳನ್ನು ಮಾಡಿದ್ದೇವೆ. ಚಾಲಕರ ತಪ್ಪುಗಳಿಂದ ಅಪಘಾತಗಳಾದರೆ ಸರ್ಕಾರ ಹೇಗೆ ಹೊಣೆ ಆಗುತ್ತದೆ? ಮೆರವಣಿಗೆಗಳ ವೇಳೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುತ್ತೇವೆ. ಹಾಸನದಲ್ಲಿ ಲಾರಿ ಮೆರವಣಿಗೆ ಮೇಲೆ ನುಗ್ಗಿದ್ದರಿಂದ ಅನಾಹುತ ಸಂಭವಿಸಿದೆ. ಮೃತರಿಗೆ ಗೌರವ ಸಲ್ಲಿಸಿದ್ದೇವೆ. ಪರಿಶೀಲಿಸುವಂತೆ ಸಚಿವ ಕೃಷ್ಣ ಬೈರೇಗೌಡ ಅವರನ್ನು ಸ್ಥಳಕ್ಕೆ ಕಳುಹಿಸಿದ್ದೇನೆ ಎಂದರು. ಪ್ರಧಾನಿ ನರೇಂದ್ರ ಮೋದಿ ಮಣಿಪುರದಲ್ಲಿ ಗಲಾಟೆ ನಡೆಯುತ್ತಿದ್ದಾಗ ಹೋಗಿರಲಿಲ್ಲ. ಈಗ ಭೇಟಿ ಕೊಟ್ಟಿದ್ದಾರೆ. ಈವರೆಗೆ ಹೋಗಿರಲಿಲ್ಲವೇಕೆ ಎಂದು ಕೇಳಿದರು. 'ವಿರೋಧಪಕ್ಷದವರು ಒತ್ತಡ ಹಾಕಿದ ಪರಿಣಾಮ ಈಗ ಭೇಟಿ ಕೊಟ್ಟಿದ್ದಾರೆ' ಎಂದು ಟೀಕಿಸಿದರು. ಧರ್ಮಸ್ಥಳದ ಪ್ರಕರಣದಲ್ಲಿ ತನಿಖೆ ವಿಳಂಬ ಆಗುತ್ತಿಲ್ಲ. ಸರ್ಕಾರ ಅನಗತ್ಯವಾಗಿ ಹಸ್ತಕ್ಷೇಪ ಮಾಡುವುದಿಲ್ಲ. ಹಾಗೆಂದು ಅನಗತ್ಯವಾಗಿ ವಿಳಂಬ ಮಾಡಬಾರದು. ನನಗೆ ತಿಳಿದ ಮಟ್ಟಿಗೆ, ವಿಳಂಬ ಆಗುತ್ತಿಲ್ಲ ಎಂದು ಸ್ಪಷ್ಟಪಡಿಸಿದರು. ನಾನೂ ಹಿಂದೂನೇ. ನನ್ನ ಹೆಸರಿನಲ್ಲಿ ಈಶ್ವರ ಹಾಗೂ ವಿಷ್ಣು ಎಂಬ ಎರಡು ದೇವರುಗಳಿವೆ. ಸಿದ್ದ ಎಂದರೆ ಈಶ್ವರ, ರಾಮ ಎಂದರೆ ವಿಷ್ಣು ಎಂದು ಹೇಳಿದರು.



**ಮತಾಂತರ ಆಗುವುದು ಬೇಡ ಎಂದು ಹೇಳಿದರೂ, ಕೆಲವರು ವ್ಯವಸ್ಥೆಯ ಪರಿಣಾಮವಾಗಿ ಮತಾಂತರ ಆಗುತ್ತಾರೆ. ನಮ್ಮ ಹಿಂದೂ ಸಮಾಜದಲ್ಲಿ ಸಮಾನತೆ ಇದ್ದಿದ್ದರೆ, ಸಮಾನ ಅವಕಾಶಗಳು ಎಲ್ಲಾರಿಗೂ ಸಿಕ್ಕಿದ್ದರೆ ಏಕೆ ಮತಾಂತರ ಆಗುತ್ತಿದ್ದರು ಅಸ್ಪೃಶ್ಯತೆ ಏಕೆ ಬಂತು ನಾವು ಹುಟ್ಟು ಹಾಕಿದ್ದಾ ಅಸಮಾನತೆ ಯಾವುದೇ ಧರ್ಮದಲ್ಲಾದರೂ ಇರಲಿ. ಮತಾಂತರ ಆಗುವಂತೆ ನಾವಾಗಲಿ ಅಥವಾ ಬಿಜೆಪಿಯವರಾಗಲಿ ಹೇಳಿಲ್ಲ. ಮತಾಂತರ ಆಗುವುದು ಅವರವರ ಹಕ್ಕು' ಎಂದು ಹೇಳಿದರು.**

**ರೂ.10 ಲಕ್ಷ ಪರಿಹಾರಕ್ಕೆ ಒತ್ತಾಯ**

**ಬಿಜೆಪಿ ಮುಖಂಡರ ಮೇಲೆ ಎಫ್ ಐಆರ್ ದಾಖಲಿಸಿರುವ ಕುರಿತು ಪ್ರತಿಕ್ರಿಯಿಸಿದ ಅವರು, 'ಬಾಯಿಗೆ ಬಂದಂತೆ ಮಾತನಾಡಿದರೆ, ಪ್ರಚೋದನಕಾರಿ ಭಾಷಣ ಮಾಡಿದರೆ ಏನು ಮಾಡಬೇಕು? ನೆಮ್ಮದಿ, ಶಾಂತಿ ಕಾಪಾಡುವುದು ಅತ್ಯಂತ ಅವಶ್ಯ. ಹೀಗಾಗಿ, ಪ್ರಚೋದನಕಾರಿಯಾಗಿ ಮಾತನಾಡುವವರ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ. ಇದು ರಾಜಕಾರಣ ಅಲ್ಲ' ಎಂದು ಪ್ರತಿಕ್ರಿಯಿಸಿದರು. 'ಪ್ರಚೋದನಕಾರಿ ಹೇಳಿಕೆ ನೀಡುವವರ ವಿರುದ್ಧ ಪೊಲೀಸರು ಕ್ರಮ ವಹಿಸುತ್ತಾರೆ' ಎಂದು ಹೇಳಿದರು.**


ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ, ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್, ಶಾಸಕ ದರ್ಶನ್ ಧ್ರುವನಾರಾಯಣ, ವಿಧಾನಪರಿಷತ್ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ರಾಜ್ಯ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್, ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಕಾಂಗ್ರೆಸ್ ಗ್ರಾಮಾಂತರ ಜಿಲ್ಲಾ ಸಮಿತಿಯ ಅಧ್ಯಕ್ಷ ಬಿ.ಜೆ. ವಿಜಯ್‌ಕುಮಾರ್, ನಗರ ಜಿಲ್ಲಾ ಸಮಿತಿಯ ಅಧ್ಯಕ್ಷ ಆರ್.ಮೂರ್ತಿ ಪಾಲ್ಗೊಂಡಿದ್ದರು.

# ರೈತರ ಆರ್ಥಿಕ ಪ್ರಗತಿಗೆ ಸಾಲ ಸೌಲಭ್ಯ: ಚೆಕ್ ವಿತರಣೆ

• ಉದಯವಾಹಿನಿ, ಕನಕಪುರ

ನಗರದ ಮಳಗಾಳು ರಸ್ತೆಯಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಬೆಂಗಳೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್, ತಾಲ್ಲೂಕು ಕೃಷಿ ಪತ್ತಿನ ಸಹಕಾರ ಸಂಘದ ವತಿಯಿಂದ ಕೆಸಿಸಿ ಬೆಳೆ ಸಾಲ, ಸ್ತ್ರೀ ಶಕ್ತಿ ಸ್ವಸಹಾಯ ಸಂಘ ಮತ್ತು ಹಸು ಸಾಕಾಣಿಕೆ ಸಾಲದ ಚೆಕ್ ವಿತರಣೆ ಕಾರ್ಯಕ್ರಮ ನಡೆಯಿತು.ರೈತರ ಆರ್ಥಿಕ ಪ್ರಗತಿ ಹಾಗೂ ಹಾಲಿನ ಉತ್ಪಾದನೆ ಹೆಚ್ಚಿಸಲು ಹೈನುಗಾರಿಕೆ ರೈತರಿಗೆ ರೂ.1.80 ಲಕ್ಷ ಸಾಲ ವಿತರಿಸಲಾಗುತ್ತಿದೆ. ಇದನ್ನು ರೈತರು ಸದ್ಬಳಕೆ ಮಾಡಿಕೊಂಡು ಹೆಚ್ಚು ಹಾಲು ಉತ್ಪಾದಿಸಿ ಜಿಲ್ಲೆಯಲ್ಲಿ ಪ್ರಥಮ ಸ್ಥಾನ ಪಡೆಯಿರಿ ಎಂದು ಬಮೂಲ್ ಅಧ್ಯಕ್ಷ ಡಿ.ಕೆ. ಸುರೇಶ್ ಕರೆ ನೀಡಿದರು.

ರೈತರು ಸ್ವಾವಲಂಬಿಯಾಗಲು ಹೈನುಗಾರಿಕೆ ಮತ್ತು ರೇಷ್ಮೆ ಕೃಷಿ ಪ್ರಮುಖವಾಗಿವೆ. ಹೈನುಗಾರಿಕೆಯಲ್ಲಿ ಹೆಚ್ಚಿನ ಪ್ರಗತಿ ಸಾಧಿಸಲು ಸೊಸೈಟಿ ಮೂಲಕ ಎರಡು ಹಸುಗಳ ಖರೀದಿಗೆ ಎರಡು ಕಂತಿನಲ್ಲಿ ರೂ.1.80 ಲಕ್ಷ ನೀಡಲಾಗುತ್ತಿದೆ ಎಂದರು.



☛ ಉದಯವಾಹಿನಿ ಚಿತ್ರ

ರೈತರಿಗೆ ವಾರ್ಷಿಕವಾಗಿ ಶೇ 3ರ ಬಡ್ಡಿ ದರದಲ್ಲಿ ರೂ.15 ಲಕ್ಷದವರೆಗೆ ಸಾಲ ವಿತರಿಸಲಾಗುತ್ತಿದೆ. ಮಿನಿ ಡೇರಿ ಮಾಡುವವರಿಗೆ ರೂ.15 ಲಕ್ಷ ನೀಡಲಾಗುತ್ತದೆ. ಹಾಗಾಗಿ ತಾಲ್ಲೂಕಿನ ರೈತರು ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ವಿಧಾನ ಪರಿಷತ್ತು ಸದಸ್ಯ ಎಸ್.ರವಿ ಮಾತನಾಡಿ, ಕೃಷಿ ಸಾಲವನ್ನು ಬಿಡಿಸಿಸಿ ಬ್ಯಾಂಕ್ ಹೆಚ್ಚು ನೀಡುತ್ತಿದೆ. ರೈತರ ಮನೆ ಬಾಗಿಲಿಗೆ ಹೋಗಿ ಅವರ ಸಾಲದ ಅವಶ್ಯಕತೆ ಅರಿತು ತ್ವರಿತವಾಗಿ ಸಾಲ ಮಂಜೂರು ಮಾಡಲಾಗುತ್ತಿದೆ. ಹಾಗಾಗಿ ರೈತರು ಸಕಾಲಕ್ಕೆ ಸಾಮ ಮರುಪಾವತಿಸಬೇಕು ಎಂದರು. ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಕೆ.ಎನ್.ದಿಲೀಪ್, ಬಸಪ್ಪ, ಹೇಮರಾಜು, ಹರೀಶ್ ಗೌಡ, ಕಿರಣ್ ಕುಮಾರ್, ವಿಜಯ್.ಜಿ. ರವಿ ಪ್ರಸಾದ್, ಪ್ರದೀಪ್, ಆನಂದ್, ಕುಮಾರ್, ಬ್ಯಾಂಕ್ ಸಿಬ್ಬಂದಿ, ಎಲ್ಲಾ ಸೊಸೈಟಿಗಳ ಅಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

**ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಎಂ.ಡಿ.ವಿಜಯದೇವ್ ಮಾತನಾಡಿ, ರಾಷ್ಟ್ರೀಕೃತ ಬ್ಯಾಂಕ್ ರೀತಿಯಲ್ಲಿ ಬಿಡಿಸಿಸಿ ಬ್ಯಾಂಕ್ ಕೆಲಸ ನಿರ್ವಹಿಸುತ್ತಿದೆ. ನಮ್ಮಲ್ಲಿಯೂ ಯುಪಿಎ ಸೌಲಭ್ಯ ಒದಗಿಸಿದ್ದು, ಡಿಜಿಟಲ್ ಟ್ರಾನ್ಸಾಕ್ಷನ್ ಗೆ ಅವಕಾಶ ಕಲ್ಪಿಸಲಾಗಿದೆ. ಜೊತೆಗೆ ?10 ಲಕ್ಷದವರೆಗೂ ಸಾಲ ಮಂಜೂರು ಮಾಡಲಾಗುವುದು ಎಂದು ತಿಳಿಸಿದರು.**

# ದಲಿತನ ಕೊಲೆ ಖಂಡಿಸಿ ಪ್ರತಿಭಟನೆ

• ಉದಯವಾಹಿನಿ, ಮಧುಗಿರಿ

ಕೊಡಿಗೇನಹಳ್ಳಿ ಹೋಬಳಿ ಪೋಲೇನಹಳ್ಳಿಯಲ್ಲಿ ದಲಿತ ವ್ಯಕ್ತಿಯ ಕೊಲೆ ಖಂಡಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪದಾಧಿಕಾರಿಗಳು ಪಟ್ಟಣದ ಬಿ.ಆರ್. ಅಂಬೇಡ್ಕರ್ ಪುತ್ಥಳಿ ಮುಂಭಾಗ ಪ್ರತಿಭಟನೆ ನಡೆಸಿದರು.

ಪೋಲೇನಹಳ್ಳಿಯಲ್ಲಿ ಮಾದಿಗ ಸಮುದಾಯದ ಆನಂದ್ ಎಂಬುವವರ ಮೇಲೆ ವಾಹನ ಹತ್ತಿಸಿ ಕೊಲೆ ಮಾಡಲಾಗಿತ್ತು. ಈವರೆಗೆ ಎಫ್‌ಐಆರ್ ದಾಖಲಿಸಲು ಪೊಲೀಸರು ಹಿಂದೇಟು ಹಾಕುತ್ತಿದ್ದಾರೆ.

ಈ ಪ್ರಕರಣಕ್ಕೆ ರಾಮಕೃಷ್ಣಪ್ಪ ಅವರ ಹೆಸರು ಸೇರಿಸಿ ಕೂಡಲೇ ಬಂಧಿಸಬೇಕು. ಬೇರೆ ತನಿಖಾಧಿಕಾರಿಯನ್ನು ನೇಮಿಸಬೇಕು. ಕಾನೂನಾತ್ಮಕವಾಗಿ ದಲಿತ ಸಂಘಟನೆ ಮತ್ತು ಕುಟುಂಬಸ್ಥರ ಸಮ್ಮುಖದಲ್ಲಿ ಶವಸಂಸ್ಕಾರ ನಡೆಸಬೇಕು. ಇಲ್ಲದಿದ್ದಲ್ಲಿ ಸಂಘಟನೆ ವತಿಯಿಂದ ಹೋರಾಟದ ನಡೆಸಲಾಗುವುದು ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

ಮಾಜಿ ಸಚಿವ ಎನ್.ಮಹೇಶ್ ಮಾತನಾಡಿ, ದಲಿತನೊಬ್ಬನ ಕೊಲೆಗೆ ಸಂಬಂಧಿಸಿದಂತೆ ಯಾರೇ ಅಪರಾಧಿಗಳಾದರೂ ಅವರು ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು.



☛ ಉದಯವಾಹಿನಿ ಚಿತ್ರ

ಮೃತಪಟ್ಟಿರುವ ಯುವಕನ ಕುಟುಂಬಕ್ಕೆ ಸರ್ಕಾರದಿಂದ ದೊರೆಯಬಹುದಾದ ಸವಲತ್ತುಗಳನ್ನು ನೀಡಬೇಕು. ಮೃತರ ಪತ್ನಿಗೆ ಸರ್ಕಾರಿ ಉದ್ಯೋಗ ನೀಡಬೇಕು. ಪ್ರಕರಣದ ಆರೋಪಿಗಳ ಪಟ್ಟಿಯಲ್ಲಿ ಕೆಲವರ ಹೆಸರು ಬಿಟ್ಟು ಹೋಗಿದ್ದು, ಅವರನ್ನು ಸೇರ್ಪಡೆ ಮಾಡಬೇಕು ಎಂದು ಆಗ್ರಹಿಸಿದರು.

# ಹಾಲು ಉತ್ಪಾದಕರ ಹಿತ ಕಾಯಲು ಚಾಮೂಲ್ ಬದ್ಧ: ನಂಜುಂಡಸ್ವಾಮಿ

• ಉದಯವಾಹಿನಿ, ಸಂತೇಮರಹಳ್ಳಿ

ಹಾಲು ಉತ್ಪಾದಕರ ಹಿತ ಕಾಯಲು ಒಕ್ಕೂಟ ಹೆಚ್ಚು ಆದ್ಯತೆ ನೀಡುತ್ತಿದೆ. ಈ ನಿಟ್ಟಿನಲ್ಲಿ ಉತ್ಪಾದಕರು ಡೇರಿಗೆ ಗುಣಮಟ್ಟದ ಹಾಲು ಪೂರೈಕೆ ಮಾಡಲು ಮುಂದಾಗಬೇಕು ಎಂದು ಚಾಮರಾಜನಗರ ಜಿಲ್ಲಾ ಹಾಲು ಒಕ್ಕೂಟದ ಅಧ್ಯಕ್ಷ ಎಂ.ನಂಜುಂಡಸ್ವಾಮಿ ಹೇಳಿದರು. ಸಮೀಪದ ಕುದೇರು ಗ್ರಾಮದಲ್ಲಿರುವ ಚಾಮರಾಜನಗರ ಜಿಲ್ಲಾ ಹಾಲು ಒಕ್ಕೂಟ ಚಾಮೂಲ್ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 2024 25ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾ ಸಭೆಯಲ್ಲಿ ಅವರು ಮಾತನಾಡಿದರು.

ಕಳೆದ 8 ವರ್ಷಗಳಿಂದ ಚಾಮರಾಜನಗರಕ್ಕೆ ಪ್ರತ್ಯೇಕ ಹಾಲು ಒಕ್ಕೂಟ ರಚನೆಯಾಗಿದ್ದು, 2ನೇ ಆಡಳಿತ ಮಂಡಳಿ ಕೂಡ ಉತ್ತಮ ರೀತಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ನಿಟ್ಟಿನಲ್ಲಿ ಈ ಬಾರಿ ಒಕ್ಕೂಟಕ್ಕೆ ರೂ.3.34 ಕೋಟಿ ಲಾಭಾಂಶ ದೊರಕಿದೆ. ಚಾಮೂಲ್ ಕೇಂದ್ರದಲ್ಲಿ ಐಸ್‌ಕ್ರೀಂ ಘಟಕ ಸ್ಥಾಪಿಸಲು ಹಾಗೂ ಒಕ್ಕೂಟದ ಅಭಿವೃದ್ಧಿಯಲ್ಲಿ ಸರ್ವ ಸದಸ್ಯರು ಒಳ್ಳೆಯ ಅಭಿಪ್ರಾಯ ನೀಡಿದ್ದಾರೆ. ಎಲ್ಲಾರ ಸಹಕಾರದೊಂದಿಗೆ ಒಕ್ಕೂಟವನ್ನು ಮನ್ನೆಡೆಸಲು ಕ್ರಮ ಕೈಗೊಳ್ಳಲಾಗುವುದು' ಎಂದು ತಿಳಿಸಿದರು.




☛ ಉದಯವಾಹಿನಿ ಚಿತ್ರ

**ಚಾಮೂಲ್ ವತಿಯಿಂದ ವರ್ಷದಿಂದ ವರ್ಷಕ್ಕೆ ಹಾಲಿನ ಮಾರಾಟ ಪ್ರಮಾಣ ಹೆಚ್ಚಳ ಮಾಡಲಾಗುತ್ತಿದೆ. ಚಾಮರಾಜನಗರ ಜಿಲ್ಲೆಯಲ್ಲಿ 45 ಸಾವಿರ ಲೀಟರ್, 5 ಸಾವಿರ ಲೀಟರ್ ಮೊಸರು, ಕೇರಳದಲ್ಲಿ 22 ಸಾವಿರ ಹಾಗೂ ತಮಿಳುನಾಡಿನಲ್ಲಿ 7 ಸಾವಿರ ಲೀಟರ್ ಹಾಲು ಸೇರಿದಂತೆ ದಿನಕ್ಕೆ 75 ಸಾವಿರ ಲೀಟರ್ ಹಾಲು ಮಾರಾಟವಾಗುತ್ತಿದೆ. ಜಿಲ್ಲೆ ವ್ಯಾಪ್ತಿಗೆ ಒಳಪಡುವ ಹಿಮವದ್ ಗೋಪಾಲ್‌ಸ್ವಾಮಿ ಬೆಟ್ಟ, ಬಿಳಿಗಿರಿರಂಗನಬೆಟ್ಟ, ಬಂಡೀಪುರ ಸೇರಿದಂತೆ ವಿವಿಧೆಡೆಗಳಲ್ಲಿ ನಂದಿನಿ ಪಾರ್ಲರ್ ತೆರೆದು ನಂದಿನಿ ಉತ್ಪನ್ನಗಳನ್ನು ಮಾರಾಟ ಮಾಡಲಾಗುತ್ತಿದೆ ಎಂದು ತಿಳಿಸಿದರು.**

**ಚಾಮೂಲ್ ವ್ಯವಸ್ಥಾಪಕ ನಿರ್ದೇಶಕ ರಾಜ್‌ಕುಮಾರ್**

# ಆಸ್ಪತ್ರೆ ಕಟ್ಟಡ ಕಾಮಗಾರಿ ಪರಿಶೀಲನೆ



☛ ಉದಯವಾಹಿನಿ ಚಿತ್ರ

• ಉದಯವಾಹಿನಿ, ಯಳಂದೂರು

ಪಟ್ಟಣದಲ್ಲಿ ನಿರ್ಮಾಣ ಹಂತದ ಸಾರ್ವಜನಿಕ ಆಸ್ಪತ್ರೆ ಕಟ್ಟಡ ಕಾಮಗಾರಿಯನ್ನು ಎ.ಆರ್.ಕೃಷ್ಣಮೂರ್ತಿ ಭೇಟಿ ನೀಡಿ ಪರಿಶೀಲಿಸಿದರು. 100 ಹಾಸಿಗೆಗಳ ಗುಣಮಟ್ಟದ ಕಾಮಗಾರಿ ನಡೆಯುತ್ತಿದೆ. ನಿಗದಿತ ಸಮಯದಲ್ಲಿ ಕಟ್ಟಡ ನಿರ್ಮಾಣ ಮುಗಿಯಲಿದೆ. ಜತೆಗೆ ಶವಾಗಾರದ ಕಾಮಗಾರಿಯನ್ನು ಆರಂಭಿಸಲು ಸೂಚಿಸಲಾಗಿದೆ. ಕೊಳ್ಳೇಗಾಲದಲ್ಲಿ 250 ಹಾಸಿಗೆಗಳ ಆಸ್ಪತ್ರೆ ನಿರ್ಮಿಸಲು ಯೋಜನೆ ರೂಪಿಸಿ ಸ್ಥಳವನ್ನು ನಿಗದಿ ಮಾಡಲಾಗಿದೆ ಎಂದರು. ಗ್ಯಾರಂಟಿ ಯೋಜನೆ ಜಿಲ್ಲಾ ಘಟಕದ ಅಧ್ಯಕ್ಷ ಎಚ್.ವಿ. ಚಂದ್ರು, ಮುಖಂಡರಾಧ ಜೆ. ಯೋಗೇಶ್, ಪಟ್ಟಣ ಪಂಚಾಯಿತಿ ಸದಸ್ಯರಾದ ಮಹೇಶ್, ವೈ.ಜಿ.ರಂಗನಾಥ, ರಘು, ವೈದ್ಯಾಧಿಕಾರಿ ಡಾ.ಶ್ರೀಧರ್ ಹಾಗೂ ಇತರರು ಇದ್ದರು.

# ಮಲೆ ಮಹದೇಶ್ವರ ಕ್ಷೇತ್ರ: ಕಾಮಗಾರಿ ತ್ವರಿತ ಪೂರ್ಣಗೊಳಿಸಿ

• ಉದಯವಾಹಿನಿ, ಚಾಮರಾಜನಗರ

ಹನೂರು ತಾಲ್ಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಭಕ್ತರ ಅನುಕೂಲಕ್ಕಾಗಿ ಪ್ರಾಧಿಕಾರದಿಂದ ಕೈಗೆತ್ತಿಕೊಂಡಿರುವ ಅಭಿವೃದ್ಧಿ ಕಾಮಗಾರಿಗಳು ತ್ವರಿತವಾಗಿ ಪೂರ್ಣಗೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಕೆ.ವೆಂಕಟೇಶ್ ಅಧಿಕಾರಿಳಿಗೆ ಸೂಚಿಸಿದರು. ಬೆಂಗಳೂರಿನ ವಿಕಾಸಸೌಧದಲ್ಲಿ ಮಲೆಮಹದೇಶ್ವರ ಬೆಟ್ಟ ಕ್ಷೇತ್ರದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳ ಕುರಿತ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ರೂ. 45.85 ಕೋಟಿ ವೆಚ್ಚದಲ್ಲಿ ಮಲೆ ಮಹದೇಶ್ವರ ದೇವಸ್ಥಾನದ ಹಿಂಭಾಗ ಕೈಗೊಂಡಿರುವ ಸರತಿ ಸಾಲಿನ ಸಂಕೀರ್ಣ ನಿರ್ಮಾಣ ಕಾಮಗಾರಿ ಶೀಘ್ರ ಮುಗಿಯಬೇಕು, ಕಟ್ಟಡಕ್ಕೆ ಬಣ್ಣ ಬಳಿಯುವ, ಕಾರಿಡಾರ್‌ಗಳಿಗೆ ಗ್ರಾನೈಟ್ ಫ್ಲೋರಿಂಗ್ ಕಾಮಗಾರಿ ಪೂರ್ಣಗೊಳಿಸಬೇಕು. ಕ್ಷೇತ್ರದ ಆವರಣದಲ್ಲಿ ರೂ. 9.35 ಕೋಟಿ ವೆಚ್ಚದಲ್ಲಿ 6 ಕೂಡು ರಸ್ತೆಗಳ ಅಭಿವೃದ್ಧಿ ಕಾಮಗಾರಿ ಪೂರ್ಣಗೊಳಿಸಬೇಕು. ದಾಸೋಹ ಭವನದ ಎದುರು ಶೌಚಾಲಯ ಹಾಗೂ ಸ್ನಾನ ಗೃಹ ನಿರ್ಮಾಣ ಕಾಮಗಾರಿ ವೇಗವಾಗಬೇಕು, ಬಸ್ ನಿಲ್ದಾಣದ ಬಳಿ ಕೈಗೆತ್ತಿಕೊಂಡಿರುವ ಸ್ನಾನಗೃಹ, ಶೌಚಾಲಯ ನಿರ್ಮಾಣ ಕಾಮಗಾರಿ ಕೂಡ ತ್ವರಿತವಾಗಿ ಮುಗಿಯಬೇಕು' ಎಂದರು.



☛ ಉದಯವಾಹಿನಿ ಚಿತ್ರ

ಭಕ್ತರ ವಾಸ್ತವ್ಯಕ್ಕಾಗಿ ನಿರ್ಮಾಣ ಹಂತದಲ್ಲಿರುವ ಡಾರ್ಮೆಟರಿ ಕಾಮಗಾರಿ ಕಾಲಮಿತಿಯೊಳಗೆ ಪೂರ್ಣಗೊಳಿಸಿ ಭಕ್ತರ ವಾಸ್ತವ್ಯಕ್ಕೆ ಅನುಕೂಲ ಮಾಡಿಕೊಡಬೇಕು. ದೀಪದಗಿರಿ ಒಡ್ಡುವಿನಲ್ಲಿ ಮಲೆಮಹದೇಶ್ವರಸ್ವಾಮಿ ಪ್ರತಿಮೆಯ ಹೊರ ಆವರಣದ ಸುತ್ತಲು ತಡೆಗೋಡೆ ನಿರ್ಮಾಣವಾಗಬೇಕು. ತಾಳ ಬೆಟ್ಟದಿಂದ ಮಲೆ ಮಹದೇಶ್ವರಸ್ವಾಮಿ ದೇವಸ್ಥಾನದವರೆಗಿನ ಕಾಲ್ನಡಿಗೆ ಮಾರ್ಗದಲ್ಲಿ ಮೆಟ್ಟಿಲುಗಳ ನಿರ್ಮಾಣ, ಬಾಕಿ ಮೂಲಸೌಕರ್ಯ ಕಾಮಗಾರಿ ಮುಗಿಸಬೇಕು' ಎಂದು ಸಚಿವರು ಸೂಚನೆ ನೀಡಿದರು.

**ಕ್ಷೇತ್ರದಲ್ಲಿರುವ ನಿರಾಶ್ರಿತರಿಗೆ ಪುನರ್ವಸತಿ ಕೇಂದ್ರದ ಅವಶ್ಯಕತೆ ಇದ್ದು ಸಮಾಜ ಕಲ್ಯಾಣ ಇಲಾಖೆಯ ಅನುದಾನದ ನೆರವು ಪಡೆದು ನಿರ್ಮಾಣ ಮಾಡಬೇಕಿದೆ. ಸುಸಜ್ಜಿತ ದಾಸೋಹ ಭವನಕ್ಕೆ ಪ್ರತ್ಯೇಕ ಜನರೇಟರ್ ಅಗತ್ಯವಿದೆ**

**ಸಿ.ಟಿ.ಶಿಲ್ಪಾ ನಾಗ್ ಜಿಲ್ಲಾಧಿಕಾರಿ**

ಕಾಲಮಿತಿಯೊಳಗೆ ಕಾಮಗಾರಿ ಪೂರ್ಣಗೊಳಿಸಲು ಸೂಚನೆ ದಾಸೋಹ ಪ್ರಸಾದ ಭವನ ವಿಶಾಲವಾಗಿರಲು ಸಲಹೆ ಭಕ್ತರಿಗಾಗಿ ಡಾರ್ಮೆಟರಿ ನಿರ್ಮಾಣ ತ್ಯಾಜ್ಯ ವಿಲೇವಾರಿ ಘಟಕ ಇರಲಿ ಉದ್ದೇಶಿತ ದಾಸೋಹ ಭವನದಲ್ಲಿ ವೈಜ್ಞಾನಿಕವಾದ ತ್ಯಾಜ್ಯ ವಿಲೇವಾರಿ ಘಟಕ ಇರಬೇಕು. ಅಡುಗೆಗೆ ಬಳಸಿದ ನಂತರ ಉಳಿಯುವ ತ್ಯಾಜ್ಯ ಸೂಕ್ತವಾಗಿ ವಿಲೇವಾರಿ ಮಾಡಬೇಕು ಜೈವಿಕ ಘಟಕ ನಿರ್ಮಾಣ ಮಾಡಿ ಕ್ಷೇತ್ರದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳು ತ್ವರಿತವಾಗಿ ಮುಗಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಎಂ.ವಿ.ವೆಂಕಟೇಶ್ ಸೂಚನೆ ನೀಡಿದರು.

# ಮದ್ದೂರು ಘಟನೆ ಖಂಡಿಸಿ ಪ್ರತಿಭಟನೆ

## ರಾಜ್ಯ ಸರ್ಕಾರ, ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ವಿರುದ್ಧ ಘೋಷಣೆ

• ಉದಯವಾಹಿನಿ, ರಾಮನಗರ

ಜಿಲ್ಲೆಯ ಮದ್ದೂರಿನಲ್ಲಿ ಗಣೇಶ ಮೂರ್ತಿ ವಿಸರ್ಜನೆ ಮೆರವಣಿಗೆ ಮೇಲೆ ಅನ್ಯ ಕೋಮಿನವರು ನಡೆಸಿದ ಕಲ್ಲು ತೂರಾಟ ಹಾಗೂ ಘಟನೆ ಬೆನ್ನಲ್ಲೇ ಗಣೇಶೋತ್ಸವ ಮೆರವಣಿಗೆಗೆ ನಿರ್ಬಂಧ ವಿಧಿಸಿರುವುದನ್ನು ವಿಶ್ವ ಹಿಂದೂ ಪರಿಷತ್, ಬಜರಂಗದಳ, ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಜಮಾಯಿಸಿದ ಕಾರ್ಯಕರ್ತರು ರಾಜ್ಯ ಸರ್ಕಾರ, ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ವಿರುದ್ಧ ಘೋಷಣೆಗಳನ್ನು ಕೂಗಿದರು. ರಾಜ್ಯದ ಕಾಂಗ್ರೆಸ್ ಸರ್ಕಾರವು ಅಲ್ಪಸಂಖ್ಯಾತರನ್ನು ಓಲೈಕೆ ಮಾಡುವ ಮೂಲಕ, ಹಿಂದೂ ವಿರೋಧಿ ನೀತಿ ಅನುಸರಿಸುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪರಿಷತ್ತಿನ ಮುಖಂಡ ಕಿರಣ್ ಮಾತನಾಡಿ, 'ಗಣೇಶೋತ್ಸವವು ಹಿಂದೂಗಳಿಗೆ ಐತಿಹಾಸಿಕವಾಗಿ ಮತ್ತು ಭಾವನಾತ್ಮಕವಾಗಿ ಅತ್ಯಂತ ಹತ್ತಿರವಾಗಿರುವ ಹಬ್ಬ. ಸ್ವಾತಂತ್ರ ಹೋರಾಟದಲ್ಲಿ ಬ್ರಿಟಿಷರ ವಿರುದ್ಧ ಹೋರಾಡಲು ದೇಶಭಕ್ತರನ್ನು ಸಂಘಟಿಸಲು ಬಾಲಗಂಗಾಧರ್ ತಿಲಕ್ ಅವರು ಗಣೇಶ ಹಬ್ಬವನ್ನು ಸಾರ್ವಜನಿಕ ಗಣೇಶ ಹಬ್ಬವನ್ನಾಗಿ ಪರಿವರ್ತಿಸಿದರು' ಎಂದರು.

'ಅಂದಿನಿಂದ ಇಂದಿನವರೆಗೂ ಗಣೇಶೋತ್ಸವ ಪ್ರಯುಕ್ತ ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಿ ವಿಜೃಂಭಣೆಯಿಂದ ಆಚರಿಸಿಕೊಂಡು ಬರಲಾಗುತ್ತಿದೆ.



☛ ಉದಯವಾಹಿನಿ ಚಿತ್ರ

ಆದರೆ, ಇಂದು ಕಾಂಗ್ರೆಸ್ ಸರ್ಕಾರವು ಗಣೇಶೋತ್ಸವಕ್ಕೆ ಭಂಗ ತರುವಂತಹ ಕ್ರಮಗಳನ್ನು ಕೈಗೊಂಡಿದೆ. ಇದರಿಂದಾಗಿ ಹಬ್ಬಕ್ಕೆ ವಿಘ್ನಗಳು ಎದುರಾಗುತ್ತಿವೆ. ಇದೇ ಕಾರಣಕ್ಕೆ ಮದ್ದೂರಿನಲ್ಲಿ ಮೆರವಣಿಗೆ ಮೇಲೆ ಕಲ್ಲು ತೂರಾಟ ನಡೆದಿದೆ' ಎಂದು ಕಿಡಿ ಕಾರಿದರು.

ರಾಮನಗರದಲ್ಲೂ ಮುಂದೆ ಕಲ್ಲು ತೂರಾಟ ನಡೆಯಬಹುದು. ಅದಕ್ಕೆ ಅವಕಾಶ ಸಿಗದಂತೆ, ಮದ್ದೂರು ಗಣೇಶ ವಿಸರ್ಜನೆ ವೇಳೆ ಕಲ್ಲು ತೂರಿದವರನ್ನು ಕಾನೂನು ಪ್ರಕಾರ ಮಟ್ಟ ಹಾಕಬೇಕು. ಪೊಲೀಸ್ ಠಾಣೆಗೆ ಬೆಂಕಿ ಹಚ್ಚುವ ಕಿಡಿಗೇಡಿಗಳಿಗೆ ಪಾಠ ಕಲಿಸಬೇಕಿದೆ. ಜಿಲ್ಲೆಯಲ್ಲೂ ಬಾಂಗ್ಲಾ ಪ್ರಜೆಗಳು ನೆಲೆಸಿರುವ ಮಾಹಿತಿ ಪೊಲೀಸ್ ಇಲಾಖೆಗೆ ಇಲ್ಲವೇ ಇಲ್ಲೇನಾದರೂ ಕೋಮು ಗಲಭೆಯಾದರೆ ಅದಕ್ಕೆ ಇಲಾಖೆಯೇ ಹೊಣೆಯಾಗಲಿದೆ' ಎಂದರು. ಬಳಿಕ ಮುಖಂಡರು ಹೆಚ್ಚುವರಿ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರಿಗೆ ಮನವಿ ಪತ್ರ ಸಲ್ಲಿಸಿದರು. ವಿಶ್ವ ಹಿಂದೂ ಪರಿಷತ್, ಭಜರಂಗದಳದ ಶ್ರೀನಿಧಿ, ಪಲವಿ ದುರ್ಗಾವಾಹಿನಿ, ರಮೇಶ್, ಸುಹಾಸ್, ಜ್ಞಾನೇಶ್ ಬಿಜೆಪಿ ಜಿಲ್ಲಾಧ್ಯಕ್ಷ ಆನಂದಸ್ವಾಮಿ, ಬಿಜೆಪಿ ಮುಖಂಡರಾದ ಸುರೇಶ್, ರುದ್ರದೇವರು, ಜನಾರ್ದನ್, ಲಕ್ಷ್ಮಿ, ನಾಗಮ್ಮ, ಪುಷ್ಪಲತಾ , ಶಶಿಕಲಾ, ಚನ್ನಪ್ಪ, ಸಂತೋಷ್, ಚಂದ್ರಶೇಖರ್, ರಾಘವೇಂದ್ರ, ಇತರರು ಇದ್ದರು.

**ರಾಜ್ಯ ಸರ್ಕಾರವು ಹಿಂದೂಗಳ ಹಬ್ಬ ಮತ್ತು ಆಚರಣೆಗಳ ಮೇಲೆ ನಿರ್ಬಂಧ ವಿಧಿಸುತ್ತಾ ದಬ್ಬಾಳಿಕೆ ನಡೆಸುತ್ತಿದೆ. ಇದನ್ನು ಖಂಡಿಸಿ ಪ್ರತಿಭಟನೆ ನಡೆಸಲು ಮುಂದಾಗುತ್ತಿರುವ ಪರಿಷತ್‌ನ ಮುಖಂಡರು ಜಿಲ್ಲೆ ಪ್ರವೇಶ ಮಾಡದಂತೆ ನಿರ್ಬಂಧ ವಿಧಿಸಲಾಗುತ್ತಿದೆ. ಇದನ್ನು ಕೂಡಲೇ ತೆರವುಗೊಳಿಸಬೇಕು. ಸರಾಗವಾಗಿ ಗಣೇಶೋತ್ಸವದ ಮೆರವಣಿಗೆ ನಡೆಯಲು ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಬೇಕು' ಎಂದು ಆಗ್ರಹಿಸಿದರು.**

# ದತ್ತು ಪಡೆದ ಶಾಲೆ ಅಭಿವೃದ್ಧಿಗೆ ಕ್ರಮ:ಶಾಸಕ ಸುಬ್ಬಾರೆಡ್ಡಿ



• ಉದಯವಾಹಿನಿ, ಗೂಳೂರು

ತಾಲ್ಲೂಕಿನ ಗೂಳೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ರೂ.29 ಲಕ್ಷ ವೆಚ್ಚದ 2 ನೂತನ ಶಾಲಾಕೊಠಡಿಗಳನ್ನು ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಹಾಗೂ ಗ್ರಾಮದ ಹಿರಿಯ ಮುಖಂಡ ಎಸ್.ಎಸ್.ರಮೇಶಬಾಬು ಉದ್ಘಾಟಿಸಿದರು. ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಮಾತನಾಡಿ ಶಾಲೆಗೆ 75ನೇ ವರ್ಷಾಚರಣೆ ಸಂಭ್ರಮ ಇದೆ. ಶಿಕ್ಷಣ ಸಚಿವ ಮಧುಬಂಗಾರಪ್ಪನ ಅವರನ್ನು ಆಹ್ವಾನಿಸಲಾಗುವುದು. ಶಾಲೆಯನ್ನು ದತ್ತು ಪಡೆದಿದ್ದೇವೆ. ಶಾಲೆಗೆ ಅಗತ್ಯವಾದ ಕೊಠಡಿ, ಶೌಚಾಲಯ, ಕಾಂಪೌಂಡ್ ಸೇರಿದಂತೆ ಮೂಲಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರದ ಅನುದಾನದ ಜೊತೆಗೆ ಶಾಲೆಯ ಹಳೆ ವಿದ್ಯಾರ್ಥಿಗಳ, ದಾನಿಗಳ ನೆರವು ಪಡೆದು ಹೈಟೆಕ್ ಮಾದರಿ ಶಾಲೆ ಮಾಡಲಾಗುವುದು ಎಂದು ಶಾಸಕ ಸುಬ್ಬಾರೆಡ್ಡಿ ಹೇಳಿದರು. ತಾಲ್ಲೂಕಿನ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಗುಣಮಟ್ಟದ ಶಿಕ್ಷಣಕ್ಕೆ, ಉತ್ತಮವಾದ ವಾತಾವರಣ, ಅಗತ್ಯ ಮೂಲಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರದಿಂದ ಹೆಚ್ಚು ಅನುದಾನ ಬಳಕೆ ಮಾಡಲಾಗುತ್ತಿದೆ. ವಸತಿ ಶಾಲೆ ಜೊತೆಗೆ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸಲಾಗುವುದು. ಸರ್ಕಾರಿ ಶಾಲೆಗಳಲ್ಲಿ ಓದಿ, ಸರ್ಕಾರದ ಯೋಜನೆಗಳನ್ನು ಸದು ಪಯೋಗ ಪಡಿಸಿಕೊಳ್ಳಬೇಕು ಎಂದರು.

# ಮಿನಿ ನ್ಯೂಸ್

## ರಾಜಮನೆತನದವರ ಪೂಜೆ: ಅರಮನೆಗೆ ನಿರ್ಬಂಧ

• ಉದಯವಾಹಿನಿ, ಮೈಸೂರು

ಮೈಸೂರು ರಾಜಮನೆತನದವರು ಅರಮನೆಯಲ್ಲಿ ದಸರಾ ನಿಮಿತ್ತ ಧಾರ್ಮಿಕ ಕಾರ್ಯಗಳನ್ನು ಕೈಗೊಳ್ಳುವ ದಿನಗಳಲ್ಲಿ ಸಾರ್ವಜನಿಕರು. ಪ್ರವಾಸಿಗರಿಗೆ ವೀಕ್ಷಣೆಗೆ ಪ್ರವೇಶ ನಿರ್ಬಂಧಿಸಲಾಗಿದೆ. ಸಿಂಹಾಸನ ಜೋಡಣೆ ಪ್ರಯುಕ್ತ ಸೆ.16ರಂದು ಬೆಳಿಗ್ಗೆ 10ರಿಂದ ಸಂಜೆ 6ರವರೆಗೆ, ಖಾಸಗಿ ದರ್ಬಾರ್‌ನಲ್ಲಿ ಪೂಜಾ ಕಾರ್ಯದ ಪ್ರಯುಕ್ತ ಸೆ.22ರಂದು ಬೆಳಿಗ್ಗೆ 10ರಿಂದ ಮಧ್ಯಾಹ್ನ 2ರವರೆಗೆ ಪ್ರವೇಶ ಇರುವುದಿಲ್ಲ. ಅ.1ರ ಆಯುಧ ಪೂಜೆಯಂದು ಸಂಪೂರ್ಣ ದಿನ ಪ್ರವೇಶ ಇರುವುದಿಲ್ಲ. ಅ.2ರಂದು ದಸರಾ ಪಾಸ್, ಟಿಕೆಟ್ ಪಡೆದವರಿಗೆ ಪ್ರವೇಶ ಇರಲಿದೆ. ಅ.31ರಂದು ಸಿಂಹಾಸನ ವಿಸರ್ಜನೆ ಪ್ರಯುಕ್ತ ಬೆಳಿಗ್ಗೆ 10ರಿಂದ 12ರವರೆಗೆ ಪ್ರವೇಶ ಇರುವುದಿಲ್ಲ. ಸೆ.15ರಿಂದ ಅ.12ರವರೆಗೆ ಧ್ವನಿ ಮತ್ತು ಬೆಳಕು ಕಾರ್ಯಕ್ರಮ ತಾತ್ಕಾಲಿಕವಾಗಿ ರದ್ದುಪಡಿಸಲಾಗಿದೆ. ಅ.13ರಿಂದ ಎಂದಿನಂತೆ ಕಾರ್ಯಕ್ರಮ ಸಂಜೆ ಇರಲಿದೆ ಎಂದು ಎಂದು ಮೈಸೂರು ಅರಮನೆ ಆಡಳಿತ ಮಂಡಳಿಯ ಪ್ರಕಟಣೆ ತಿಳಿಸಿದೆ.

## ಆರು ಅಡಿ ಹೆಬ್ಬಾವು ರಕ್ಷಣೆ

• ಉದಯವಾಹಿನಿ, ಹಾರೋಹಳ್ಳಿ

ತಾಲ್ಲೂಕಿನ ಗುಳ್ಳಹಟ್ಟಿ ಕಾವಲ್ ಗ್ರಾಮದಲ್ಲಿ ಕಾಣಿಸಿಕೊಂಡಿದ್ದ ಆರು ಅಡಿ ಹೆಬ್ಬಾವನ್ನು ಅರಣ್ಯ ಇಲಾಖೆಯವರು ರಕ್ಷಿಸಿ ಬನ್ನೇರುಘಟ್ಟ ಅರಣ್ಯ ಪ್ರದೇಶಕ್ಕೆ ಬಿಡಲಾಗಿದೆ.

ಮಧ್ಯಾಹ್ನ ಗ್ರಾಮದಲ್ಲಿ ಮಕ್ಕಳು ಆಟ ಆಡುವಾಗ ಹೆಬ್ಬಾವು ಕಾಣಿಸಿಕೊಂಡಿದ್ದು ಮಕ್ಕಳು ಕಿರುಚಾಡಿದ್ದಾರೆ. ಗಾಬರಿಯಿಂದ ಕೂಡಲೇ ಸ್ಥಳಕ್ಕೆ ಧಾವಿಸಿದ ಗ್ರಾಮಸ್ಥರು ಹೆಬ್ಬಾವು ಹಿಡಿಯಲು ಸೆಣಸಾಟ ನಡೆಸಿದರು.



ನಂತರ ಅರಣ್ಯ ಇಲಾಖೆಯ ಸಹಯೋಗದಲ್ಲಿ ಹೆಬ್ಬಾವನ್ನು ಹಿಡಿದು ಬನ್ನೇರುಘಟ್ಟ ಅರಣ್ಯ ಪ್ರದೇಶಕ್ಕೆ ಸುರಕ್ಷಿತವಾಗಿ ಬಿಡಲಾಗಿದೆ. ಅರಣ್ಯ ಪಾಲಕರಾದ ಸಾಗರ್, ನಾಗಯ್ಯ, ಮುನಿಬೈರಯ್ಯ, ಗ್ರಾಮಸ್ಥರಾದ ಕೆಂಚಯ್ಯ, ನಾಗರಾಜು, ಡಾ.ಸತ್ಯಮೂರ್ತಿ ಇತರರು ಇದ್ದರು.

## ಪಟ್ಟಣದ 8ನೇ ವಾರ್ಡ್‌ನಲ್ಲಿ ಗಂಡ ಹೆಂಡತಿ ಮಧ್ಯೆ ಜಗಳ ನಡೆದು ಪತ್ನಿಯ ಕೊಲೆ

• ಉದಯವಾಹಿನಿ, ಗುಡಿಬಂಡೆ

ಪಟ್ಟಣದ ಎಂಟನೇ ವಾರ್ಡ್‌ನಲ್ಲಿ ಗಂಡ ಹೆಂಡತಿ ಮಧ್ಯೆ ಜಗಳ ನಡೆದು ಪತ್ನಿಯ ಕೊಲೆಯಾಗಿದೆ. ರಾಮಿಜಾಬಿ (25) ಕೊಲೆಯಾದವರು. ಈಕೆ ಪಟ್ಟಣದಲ್ಲಿ ಸುಮಾರು 3 ವರ್ಷಗಳಿಂದ ಎರಡನೇ ಗಂಡ ಬಾಬಾಜಾನ್ ಅವರೊಂದಿಗೆ ವಾಸವಾಗಿದ್ದರು. ಮಧ್ಯಾಹ್ನ ಗಂಡ ಹೆಂಡತಿ ನಡುವೆ ಕ್ಷುಲ್ಲಕ ಕಾರಣಕ್ಕೆ ಜಗಳವಾಗಿದೆ. ಜಗಳದಲ್ಲಿ ಪತ್ನಿಯನ್ನು ಗಂಡ ಬಾಬಾಜಾನ್ ಕೊಲೆ ಮಾಡಿದ್ದಾನೆ. ವಿಷಯ ತಿಳಿದ ತಕ್ಷಣ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ, ಆರೋಪಿ ಬಾಬಾಜಾನ್‌ನ್ನು ಬಂಧಿಸಿದ್ದಾರೆ. ರಮಿಜಾಬಿ ಮೂಲತಃ ಶ್ರೀನಿವಾಸಪುರ ಗ್ರಾಮದವರಾಗಿದ್ದಾರೆ. ಮೊದಲು ಮುಳಬಾಗಿಲು ತಾಲ್ಲೂಕಿನ ಅಲ್ಲಾಬಕಾಶ್ ಅವರೊಂದಿಗೆ ಮದುವೆಯಾಗಿತ್ತು.

ನಂತರ ಅವರನ್ನು ಬಿಟ್ಟು ಬಾಬಾಜಾನ್‌ನೊಂದಿಗೆ ಎರಡನೇ ಮದುವೆಯಾಗಿ ಗುಡಿಬಂಡೆ ಪಟ್ಟಣದಲ್ಲಿ ವಾಸವಾಗಿದ್ದರು. ಆಗಾಗ್ಗೆ ಇಬ್ಬರ ನಡುವೆ ಗಲಾಟೆಗಳು ಆಗುತ್ತಿದ್ದು, ಗಂಡ ಹೆಂಡತಿ ಗಲಾಟೆ ಕೊನೆಯಾಗಿ ಪತ್ನಿಯ ಕೊಲೆಯಲ್ಲಿ ಅಂತ್ಯವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸ್ಥಳಕ್ಕೆ ಚಿಕ್ಕಬಳ್ಳಾಪುರ ಪೊಲೀಸ್ ವರಿಷ್ಠಾಧಿಕಾರಿ ಕುಶಾಲ್ ಚೌಕ್ಸೆ, ಡಿವೈಎಸ್ಪಿ ಶಿವಕುಮಾರ್ ಸ್ಥಳಕ್ಕೆ ಭೇಟಿ ನೀಡಿದರು.

## ಕೆಂದೋಳಮಂದೆ ದೇವಸ್ಥಾನ ಜಮೀನು ಒತ್ತುವರಿ ಆರೋಪ

• ಉದಯವಾಹಿನಿ, ಬಂಗಾರಪೇಟೆ

ಗ್ರಾಮದ ಕೋಟೆ ಗೋಡೆ, ಅಂಜನೇಯಸ್ವಾಮಿ ದೇಗುಲ ಜಮೀನು ಒತ್ತುವರಿ ಮಾಡಿಕೊಂಡು ನಿರ್ಮಾಣ ಮಾಡುತ್ತಿರುವ ಶೆಡ್ ತೆರವುಗೊಳಿಸಲು ಅಧಿಕಾರಿಗಳು ನಿರ್ಲಕ್ಷ್ಯ ಧೋರಣೆ ಅನುಸರಿಸುತ್ತಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ತಾಲ್ಲೂಕಿನ ಬೂದಿಕೋಟೆ ಹೋಬಳಿ, ದೊಡ್ಡಪೊನ್ನಾಂಡಹಳ್ಳಿ ಕಂದಾಯ ವೃತ್ತದ ವ್ಯಾಪ್ತಿಯಲ್ಲಿರುವ ವಸತಿ ರಹಿತ ಗ್ರಾಮ ಕೆಂದೋಲಮಂದೆ. ಈ ಗ್ರಾಮದ ಗ್ರಾಮಠಾಣಾ ಸುತ್ತಲೂ ಇರುವಂತಹ ಹಳೆಯ ಕೋಟೆ ಗೋಡೆ, ಮುಜರಾಯಿ ಇಲಾಖೆಗೆ ಸೇರಿರುವ ಆಂಜನೇಯಸ್ವಾಮಿ ದೇಗುಲ ಜಮೀನನ್ನು ಒತ್ತುವರಿ ಮಾಡಿಕೊಂಡು ಭೂಗಳ್ಳರು ಶೆಡ್ ನಿರ್ಮಿಸುತ್ತಿದ್ದಾರೆ. ಇದನ್ನು ತೆರವುಗೊಳಿಸಬೇಕೆಂಬುದು ಗ್ರಾಮಸ್ಥರ ಆಗ್ರಹವಾಗಿದೆ.

ಕೋಟ್ಯಂತರ ಬೆಲೆ ಬಾಳುವ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡು ಭೂಗಳ್ಳರು ಶೆಡ್ ನಿರ್ಮಿಸುತ್ತಿದ್ದರೂ, ಕಂದಾಯ ಇಲಾಖೆ ಅಧಿಕಾರಿಗಳು ಕಣ್ಣಿದ್ದು ಕುರುಡರಂತೆ ವರ್ತಿಸುತ್ತಿದ್ದಾರೆ. ಜೊತೆಗೆ ಭೂಗಳ್ಳರನ್ನು ತೆರವುಗೊಳಿಸಲು ನಿರ್ಲಕ್ಷ್ಯ ಧೋರಣೆ ತೋರುತ್ತಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

## ಪ್ಲಾಸ್ಟಿಕ್ ಬಳಕೆ: ಗೋದಾಮು ಅಂಗಡಿಗಳ ಮೇಲೆ ದಾಳಿ

• ಉದಯವಾಹಿನಿ, ಮುಳಬಾಗಿಲು

ನಗರದ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಪ್ಲಾಸ್ಟಿಕ್ ಮಾರಾಟ ದಾಸ್ತಾನು ಮಾಡುತ್ತಿದ್ದ ಅಂಗಡಿ, ಗೋದಾಮುಗಳ ಮೇಲೆ ನಗರಸಭೆಯ ಅಧಿಕಾರಿಗಳು ದಾಳಿ ನೆಡೆಸಿ ಸುಮಾರು 180 ಕೆ.ಜಿ ಪ್ಲಾಸ್ಟಿಕ್ ಉತ್ಪನ್ನಗಳನ್ನು ವಶಕ್ಕೆ ಪಡೆದಿದ್ದಾರೆ.

ಪೌರಾಯುಕ್ತ ವಿ. ಶ್ರೀಧರ್ ಮಾತನಾಡಿ, ಪ್ಲಾಸ್ಟಿಕ್ ಪರಿಸರದ ಮಹಾ ಶತ್ರು, ಏಕ ಬಳಕೆಯ ಪ್ಲಾಸ್ಟಿಕ್ ಉತ್ಪನ್ನಗಳನ್ನು ಮಾತ್ರ ಬಳಸಬೇಕು. ಪ್ಲಾಸ್ಟಿಕ್ ಪರಿಸರದ ಮಣ್ಣಿನಲ್ಲಿ ಕರಗದೆ ಉಳಿದು ಬಿಡುತ್ತದೆ. ಇದರಿಂದ ಮಣ್ಣಿನ ಫಲವತ್ತತೆ ನಶಿಸುತ್ತದೆ. ಹೀಗಾಗಿ ನಮ್ಮ ಮುಂದಿನ ಪೀಳಿಗೆ ಸುಂದರ ಹಾಗೂ ಆರೋಗ್ಯವಂತ ಪರಿಸರದಿಂದ ವಂಚಿತವಾಗುತ್ತದೆ ಎಂದು ಹೇಳಿದರು.

ಪ್ಲಾಸ್ಟಿಕ್ ಮುಕ್ತ ಮುಳಬಾಗಿಲು ನಗರಸಭೆಯ ಗುರಿಯಾಗಿದ್ದು, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ದಾಳಿ ನಡೆಸಲಾಗುವುದು. ಇದಕ್ಕೆ ನಗರದ ಎಲ್ಲಾ ವ್ಯಾಪಾರಿಗಳು, ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಅಂತರಾಳದಿಂದ..
EDITORIAL

# ಬಿಹಾರದಲ್ಲಿ ಎಸ್‌ಐಆರ್ ಪ್ರಕ್ರಿಯೆ; ಆಧಾರ್ ಸೇರ್ಪಡೆ ಸ್ವಾಗತಾರ್ಹ



ಬಿಹಾರದಲ್ಲಿ ನಡೆದಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ' (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಅಧಿಕೃತ ಗುರುತಿನ ಚೀಟಿಯನ್ನಾಗಿ ಆಧಾರ್ ಅನ್ನೂ ಪರಿಗಣಿಸಬೇಕೆಂದು ಭಾರತೀಯ ಚುನಾವಣಾ ಆಯೋಗಕ್ಕೆ (ಇಸಿಐ) ಸುಪ್ರೀಂ ಕೋರ್ಟ್ ನೀಡಿರುವ ನಿರ್ದೇಶನ ಸ್ವಾಗತಾರ್ಹ. ಈ ನಿರ್ದೇಶನ, ಎಸ್‌ಐಆರ್' ಪ್ರಕ್ರಿಯೆಗೆ ಸಂಬಂಧಿಸಿದ ದೂರುಗಳ ವಿಚಾರಣೆಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ನಿಂದ ಅನಿವಾರ್ಯವಾಗಿದ್ದ ಮತ್ತೊಂದು ಹಸ್ತಕ್ಷೇಪ ಆಗಿದೆ. ಆಧಾರ್ ಸೇರ್ಪಡೆಯೊಂದಿಗೆ, ಪಡಿತರಚೀಟಿ ಹಾಗೂ ಪಾಸ್‌ಪೋರ್ಟ್ ಸೇರಿದಂತೆ ಗುರುತಿನ ಪುರಾವೆಯಾಗಿ ನೀಡಬಹುದಾದ ದಾಖಲೆಗಳ ಸಂಖ್ಯೆ ಹನ್ನೆರಡಕ್ಕೇರಿದೆ. ಇದರಿಂದಾಗಿ ಎಸ್‌ಐಆರ್ ಪ್ರಕ್ರಿಯೆ ಹೆಚ್ಚು ಒಳಗೊಳ್ಳುವಿಕೆಯ ಸಾಧ್ಯತೆಯನ್ನು ಹೊಂದಿದಂತಾಗಿದೆ. ಅಷ್ಟುಮಾತ್ರವಲ್ಲದೆ, ಬಿಹಾರ ವಿಧಾನಸಭಾ ಚುನಾವಣೆಗೆ ಕೆಲವು ವಾರಗಳಷ್ಟೇ ಉಳಿದಿರುವಾಗ, ಆಯೋಗ ಕೈಗೊಂಡಿರುವ 'ಎಸ್‌ಐಆರ್'ನಿಂದಾಗಿ ಎದುರಾಗಿರುವ ಸಂದಿಗ್ಧ ಪರಿಸ್ಥಿತಿಯನ್ನು ಬಯಲು ಮಾಡಿದಂತಾಗಿದೆ. ಇಸಿಐ' ಗೊತ್ತುಪಡಿಸಿದ ಹನ್ನೊಂದು ದಾಖಲೆಗಳ ಜೊತೆಗೆ ಆಧಾರ್ ಅನ್ನೂ ಪರಿಶೀಲನೆಗೆ ಪರಿಗಣಿಸುವಂತೆ ಸುಪ್ರೀಂ ಕೋರ್ಟ್ ಆಗಸ್ಟ್‌ನಲ್ಲಿಯೇ ಸೂಚಿಸಿತ್ತು.

**ಆಧಾರ್ ವಾಸಸ್ಥಳದ ಪುರಾವೆಯಷ್ಟೇ ಆಗಿದ್ದು, ಪೌರತ್ವದ ಪುರಾವೆ ಆಗದಿರುವ ಕಾರಣದಿಂದಾಗಿ ಅದನ್ನು ಪರಿಗಣಿಸುವುದು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್‌ಗೆ ಇಸಿಐ ತಿಳಿಸಿತ್ತು. ಈ ವಾದಕ್ಕೆ ಪ್ರತಿಕ್ರಿಯೆಯಾಗಿ, ಇಸಿಐ ಗೊತ್ತುಪಡಿಸಿರುವ ಪಾಸ್ ಪೋರ್ಟ್ ಹಾಗೂ ಜನನ ಪ್ರಮಾಣಪತ್ರ ಹೊರತುಪಡಿಸಿದರೆ ಉಳಿದ ದಾಖಲೆಗಳನ್ನು ಕೂಡ ಪೌರತ್ವದ ಸಾಕ್ಷ್ಯಗಳೆಂದು ಪರಿಗಣಿಸಲು ಆಗದು ಹಾಗೂ ಆ ದಾಖಲೆಗಳನ್ನು ಕೂಡ ಅಕ್ರಮವಾಗಿ ಹೊಂದುವುದು ಸಾಧ್ಯವಿದೆ ಎಂದು ಕೋರ್ಟ್ ಹೇಳಿದೆ.**

ಆದರೆ, ಬೂತ್ ಹಂತದ ಅಧಿಕಾರಿಗಳು (ಬಿಎಲ್‌ಒ) ಆಧಾರ್ ಪುರಾವೆಯನ್ನು ಒಪ್ಪಿಕೊಳ್ಳುತ್ತಿಲ್ಲ ಎನ್ನುವ ವರದಿಗಳು ಪ್ರಕಟವಾಗಿದ್ದವು. ಪ್ರಸ್ತುತ. ಆಧಾರ್ ಪುರಾವೆಯನ್ನು ಒಪ್ಪಿಕೊಳ್ಳುವಂತೆ ಸುಪ್ರೀಂ ಕೋರ್ಟ್ ಸ್ಪಷ್ಟ ನಿರ್ದೇಶನ ನೀಡುವುದರೊಂದಿಗೆ ಬಿಎಲ್ ಒಗಳಿಗೆ ಬೇರೆ ದಾರಿಯೇ ಉಳಿಯದಂತಾಗಿದೆ. ಉಳಿದ ಸೂಚಿತ ದಾಖಲೆಗಳಿಗಿಂತಲೂ ಆಧಾರ್ ಭಿನ್ನವಾಗಿದ್ದು, ಅದು ಶೇ 90ಕ್ಕೂ ಹೆಚ್ಚು ಜನಸಂಖ್ಯೆ ಹೊಂದಿರುವ ಗುರುತಿನ ಚೀಟಿಯಾಗಿದೆ.

ಗುರುತಿನ ಪುರಾವೆಯನ್ನಾಗಿ ಆಧಾರ್ ಪರಿಗಣಿಸುವುದರಿಂದಾಗಿ ಬಿಹಾರದಲ್ಲಿ ಮತದಾರರ ಪಟ್ಟಿಯಿಂದ ಹೊರಗುಳಿದಿರುವ 65 ಲಕ್ಷಕ್ಕೂ ಹೆಚ್ಚು ಮತದಾರರು ಮತ್ತೆ ತಮ್ಮ ಹೆಸರುಗಳನ್ನು ಸೇರ್ಪಡೆಗೊಳಿಸಲು ಅನುಕೂಲ ಆಗುತ್ತದೆ. ದಾಖಲೆಯ ಅಧಿಕೃತತೆಯ ಬಗ್ಗೆ ಅನುಮಾನಗಳಿದ್ದರೆ, ಅದನ್ನು ಪರಿಹರಿಸಿಕೊಳ್ಳಲು ಇಸಿಐ ಬಳಿ ಸಂಪನ್ಮೂಲಗಳಿವೆ.

ಬಿಹಾರದಲ್ಲಿನ ಮತಗಟ್ಟೆಗಳನ್ನು ತರ್ಕಬದ್ಧವಾಗಿ ಪುನರ್ ವ್ಯವಸ್ಥೆಗೊಳಿಸುವ ಇಸಿಐ ನಿರ್ಧಾರ ಎಸ್‌ಐಆರ್ ಪ್ರಕ್ರಿಯೆಗೆ ಮತ್ತೊಂದು ಗೊಂದಲವನ್ನು ಸೇರ್ಪಡೆಗೊಳಿಸಿದೆ. ಚುನಾವಣಾ ಆಯೋಗ ಹೊಸತಾಗಿ 12,817 ಮತಗಟ್ಟೆಗಳನ್ನು ಸೇರ್ಪಡೆ ಮಾಡುವುದರೊಂದಿಗೆ, ಬಿಹಾರದಲ್ಲಿನ ಮತಗಟ್ಟೆಗಳ ಸಂಖ್ಯೆ 90,712ಕ್ಕೆ ಮುಟ್ಟಿದೆ. ಇದರ ಜೊತೆಗೆ ಪ್ರತಿ ಮತಗಟ್ಟೆಯಲ್ಲಿನ ಮತದಾರರ ಸಂಖ್ಯೆಯನ್ನು 1,500ರಿಂದ 1,200ಕ್ಕೆ ಇಳಿಸಲಾಗಿದೆ.


ಚುನಾವಣೆ ಸಂದರ್ಭದಲ್ಲಿ ಮತಗಟ್ಟೆಯ ಮೇಲೆ ಹೆಚ್ಚಿನ ಒತ್ತಡ ತಗ್ಗಿಸುವ ಇಸಿಐ ಕ್ರಮ ಸ್ವಾಗತಾರ್ಹ. ಆದರೆ ಮತಗಟ್ಟೆಗಳ ಮರು ಹೊಂದಾಣಿಕೆಯೊಂದಿಗೆ ಬಿಎಲ್‌ಒಗಳನ್ನೂ ಸ್ಥಳಾಂತರಿಸಲಾಗಿದೆ. ಇದರಿಂದಾಗಿ, ಈಗಾಗಲೇ ದೂರು ಸಲ್ಲಿಸಿರುವ ಮತದಾರರು ಈಗ ತಮ್ಮ ಸಮಸ್ಯೆ ಬಗೆಹರಿಸಿಕೊಳ್ಳಲು ಹೊಸ ಬಿಎಲ್‌ಒಗಳನ್ನು ಸಂಪರ್ಕಿಸಬೇಕಾಗುತ್ತದೆ. ಎಲ್ಲಾ ದಾಖಲೆಗಳೂ ಸಂಪೂರ್ಣವಾಗಿ ಇನ್ನೂ ಡಿಜಿಟಲೀಕರಣಗೊಂಡಿಲ್ಲ ಹಾಗೂ ಕೆಲವು ಬಿಎಲ್ ಗಳು ತಮ್ಮ ನಿಕಟಪೂರ್ವ ಅಧಿಕಾರಿಗಳಿಂದ ಪಡೆದ ದಾಖಲೆಗಳ ಪರಿಶೀಲನೆಯನ್ನು ಇನ್ನಷ್ಟೇ ನಡೆಸಬೇಕಾಗಿದೆ. 'ಎಸ್‌ಐಆರ್' ಪ್ರಕ್ರಿಯೆ ಪೂರ್ಣಗೊಳ್ಳಲು ಎರಡು ವಾರಗಳಷ್ಟೇ ಉಳಿದಿರುವಾಗ, ಹೆಚ್ಚುವರಿ ಆಡಳಿತಾತ್ಮಕ ಒತ್ತಡವು ವಿಳಂಬ ಮತ್ತು ಗೊಂದಲಕ್ಕೆ ಕಾರಣವಾಗಲಿದೆ.

# ಜಾಸ್ತಿ ಚಾಕೊಲೇಟ್ ತಿಂದ್ರೆ ಕೊಲೆಸ್ಟ್ರಾಲ್ ಹೆಚ್ಚಾಗಿ ಹೃದಯಕ್ಕೆ ಸಮಸ್ಯೆ ಬರಬಹುದಂತೆ!



ಚಾಕೊಲೇಟ್ ತಿನ್ನುವ ಅಭ್ಯಾಸ ಮಾಡಿಕೊಂಡರೆ ಹೃದಯದ ಸಮಸ್ಯೆ ದೂರವಾಗುತ್ತದೆ ಎಂದು ತಜ್ಞರು ಕೂಡ ಸಲಹೆ ನೀಡುತ್ತಾರೆ, ಹಾಗಂತ ಅತಿಯಾಗಿ ಕಡಿಮೆ ಗುಣಮಟ್ಟದ ಚಾಕೊಲೇಟ್ ತಿನ್ನುವ ಅಭ್ಯಾಸ ಮಾಡಿಕೊಂಡರೆ, ರಕ್ತದಲ್ಲಿ ಕೊಲೆಸ್ಟ್ರಾಲ್ ಹೆಚ್ಚಾಗಿ ಹೃದಯದಲ್ಲಿಯೇ ಸಮಸ್ಯೆ ಕಾಣಿಸಿಕೊಳ್ಳಬಹುದು ಚಾಕೊಲೇಟ್ ಮಕ್ಕಳಿಂದ ಹಿಡಿದು ಎಲ್ಲಾ ವಯಸ್ಸಿನ ಜನರಿಗೂ ಇಷ್ಟವಾಗುವ ಸಿಹಿತಿಂಡಿ! ಮಾರುಕಟ್ಟೆಯಲ್ಲೂ ಕೂಡ ಈಗ ವಿವಿಧ ರುಚಿಯ ಹಾಗೂ ದುಬಾರಿ ಬೆಲೆಯವರೆಗೂ ಕೂಡ ಚಾಕೊಲೇಟ್ ಲಭ್ಯವಿದೆ. ಅದರಲ್ಲೂ ಸ್ವಲ್ಪ ಆರೋಗ್ಯದ ಬಗ್ಗೆ ಕಾಳಜಿ ಇರುವವರು ಹಣ ಖರ್ಚಾದರೂ ಪರವಾಗಿಲ್ಲ, ಡಾರ್ಕ್ ಚಾಕೊಲೇಟ್ ತಿನ್ನುವ ಅಭ್ಯಾಸ ಇಟ್ಟುಕೊಂಡಿರುತ್ತಾರೆ.

ಏಕೆಂದರೆ ಅದರಲ್ಲಿ ಸಕ್ಕರೆಯ ಪ್ರಮಾಣ ತುಂಬಾ ಕಡಿಮೆಯಾಗಿದೆ ಕೋಕೋ ಪೌಡರ್ ದಿಂದಲೇ ಹೆಚ್ಚಾಗಿ ಮಾಡಲ್ಪಟ್ಟಿರುತ್ತದೆ. ಆದರೆ ತಜ್ಞರು ಮಾತ್ರ ಚಾಕೊಲೇಟ್ ಸೇವನೆ ಆರೋಗ್ಯಕ್ಕೆ ಎಷ್ಟು ಹಿತಕರವೋ ಅಷ್ಟೇ ತೊಂದರೆ ಕೂಡ ಕೊಡುತ್ತದೆ ಎಂದು ಅಭಿಪ್ರಾಯಪಡುತ್ತಾರೆ! ಹೌದು ಹೆಚ್ಚಿನ ಪ್ರಮಾಣದಲ್ಲಿ ಚಾಕೊಲೇಟ್ ಅನ್ನು ಪ್ರತಿದಿನ ಹೆಚ್ಚಾಗಿ ಸೇವಿಸಿ ದರೆ ಹೃದಯ ಕಾಯಿಲೆಗಳು ಮತ್ತು ಹೃದಯಾಘಾತಕ್ಕೂ ಕಾರಣವಾಗಬಹುದು ಎಂದು ಅನೇಕ ವೈಜ್ಞಾನಿಕ ಸಂಶೋಧನೆಗಳು ಸ್ಪಷ್ಟಪಡಿಸಿವೆ.



**ಡಾರ್ಕ್ ಚಾಕೊಲೇಟ್‌ನ ಪ್ರಯೋಜನಗಳು** :ಹಾರ್ವರ್ಡ್ ಟಿಎಚ್ ಚಾನ್ ಸ್ಕೂಲ್ ಆಫ್ ಪಬ್ಲಿಕ್ ಹೆಲ್ತ್ ಪ್ರಕಾರ, ಸೀಮಿತ ಪ್ರಮಾಣದಲ್ಲಿ ಡಾರ್ಕ್ ಚಾಕೊಲೇಟ್ ತಿನ್ನುವುದರಿಂದ ದೇಹಕ್ಕೆ ಉತ್ಕರ್ಷಣ ನಿರೋಧಕಗಳು ಮತ್ತು ಫ್ಲಾವನಾಲ್‌ಗಳು ದೊರೆಯುತ್ತವೆ, ಇದು ರಕ್ತ ಪರಿಚಲನೆ ಸುಧಾರಿಸುತ್ತದೆ ಮತ್ತು ಅಪಧಮನಿಗಳನ್ನು ಆರೋಗ್ಯವಾಗಿಡುತ್ತದೆ. ಅದಕ್ಕಾಗಿಯೇ ಸ್ವಲ್ಪ ಪ್ರಮಾಣದ ಡಾರ್ಕ್ ಚಾಕೊಲೇಟ್ ಹೃದಯದ ಆರೋಗ್ಯಕ್ಕೆ ಪ್ರಯೋಜನಕಾರಿ ಎಂದು ಪರಿಗಣಿಸಲಾಗುತ್ತದೆ. ಆರೋಗ್ಯವಂತ ವ್ಯಕ್ತಿಗೆ, ಪ್ರತಿದಿನ 30 ರಿಂದ 40 ಗ್ರಾಂ ಡಾರ್ಕ್ ಚಾಕೊಲೇಟ್ ಸೇವಿಸಿದರೆ ಸಾಕು. ಆದಾಗ್ಯೂ, ಕೆಲವು ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರು ಅಥವಾ ವಿಶೇಷ ಆಹಾರ ಯೋಜನೆಯನ್ನು ಅನುಸರಿಸುವವರು ಮೊದಲು ತಮ್ಮ ಆಹಾರ ತಜ್ಞರನ್ನು ಸಂಪರ್ಕಿಸಬೇಕು. ಡಾರ್ಕ್ ಚಾಕೊಲೇಟ್ ಸೇವಿಸುವುದರಿಂದ ಹೃದಯಕ್ಕೆ ಪ್ರಯೋಜನಕಾರಿ ಯಾದ ಕೆಟ್ಟ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಇದು ಸರಿಯಾದ ರಕ್ತ ಪರಿಚಲನೆಯನ್ನು ಕಾಪಾಡಿಕೊಳ್ಳಲು, ರಕ್ತದೊತ್ತಡವನ್ನು ನಿಯಂತ್ರಿಸಲು ಪ್ರಯೋಜನಕಾರಿಯಾದ ಅನೇಕ ಪೋಷಕಾಂಶಗಳನ್ನು ಹೊಂದಿರುತ್ತದೆ. ಇದು ಅಪಧಮನಿಗಳನ್ನು ಆರೋಗ್ಯಕರವಾಗಿರಿಸುತ್ತದೆ ಮತ್ತು ಹೃದಯ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ. ಆದರೆ ನೆನಪಿಡಿ, ಇವೆಲ್ಲಾ ಆರೋಗ್ಯ ಪ್ರಯೋಜನಗಳು ಸಿಗಬೇಕೆಂದರೆ, ಚಾಕೊಲೇಟ್ ಅನ್ನು ಮಿತವಾಗಿಸೇವನೆ ಮಾಡಬೇಕು

**ಈ ಬಗ್ಗೆ ಸಂಶೋಧನೆಗಳ ಹೇಳುವ ಪ್ರಕಾರ** : ಅದೇ ರೀತಿ, ಸುಮಾರು 20,000 ಜನರನ್ನು ಒಳಗೊಂಡ ಯುರೋಪಿಯನ್ ಪ್ರಾಸ್ಪೆಕ್ಟಿವ್ ಇನ್ವೆಸ್ಟಿಗೇಷನ್ ಇನ್ಟು ಕ್ಯಾನ್ಸರ್ -ನಾರ್ಫೋಕ್ ಅಧ್ಯಯನವು, ನಿಯಮಿತವಾಗಿ ಸೀಮಿತ ಪ್ರಮಾಣದಲ್ಲಿ ಚಾಕೊಲೇಟ್ ತಿನ್ನುವವರಿಗೆ ಚಾಕೊಲೇಟ್ ತಿನ್ನದವರಿಗಿಂತ ಹೃದಯ ಕಾಯಿಲೆ ಮತ್ತು ಪಾರ್ಶ್ವವಾಯು ಬರುವ ಅಪಾಯ ಕಡಿಮೆ ಎಂದು ತೋರಿಸಿದೆ.

**ಹೆಚ್ಚು ಚಾಕೊಲೇಟ್ ತಿನ್ನುವುದರಿಂದಾಗುವ ಹಾನಿಕಾರಕ ಪರಿಣಾಮಗಳು:** ಬೊಜ್ಜು ಕ್ಯಾಲೋರಿಗಳ ಅಪಾಯ ವಿಶ್ವ ಆರೋಗ್ಯ ಸಂಸ್ಥೆ ಪ್ರಕಾರ ಹೆಚ್ಚಿನ ಕ್ಯಾಲೋರಿ ಸಕ್ಕರೆ ಸೇವನೆಯು ಬೊಜ್ಜುತನಕ್ಕೆ ಪ್ರಮುಖ ಕಾರಣವಾಗಿದೆ.

ಹಾಲು ಮತ್ತು ಬಿಳಿ ಚಾಕೊಲೇಟ್‌ಗಳಲ್ಲಿ ಸಕ್ಕರೆ ಕೊಬ್ಬು ಅಧಿಕವಾಗಿರುತ್ತದೆ. ಪ್ರತಿದಿನ ಅವುಗಳನ್ನು ಹೆಚ್ಚಿನ ಪ್ರಮಾಣದಲ್ಲಿ ತಿನ್ನುವುದರಿಂದ ತ್ವರಿತ ತೂಕ ಹೆಚ್ಚಾಗುತ್ತದೆ ಮತ್ತು ಬೊಜ್ಜು ಹೃದಯಾಘಾತದ ಅಪಾಯವನ್ನು ಹೆಚ್ಚಿಸುತ್ತದೆ.

**ಕೊಲೆಸ್ಟ್ರಾಲ್ ಮಟ್ಟದಲ್ಲಿ ಹೆಚ್ಚಳ**

**ಅಮೇರಿಕನ್ ಹಾರ್ಟ್ ಅಸೋಸಿಯೇಷನ್ ಹೇಳುವಂತೆ ಸಕ್ಕರೆ ಮತ್ತು ಸ್ಯಾಚುರೇಟೆಡ್ ಕೊಬ್ಬಿನಿಂದ ಸಮೃದ್ಧವಾಗಿರುವ ಆಹಾರ ಗಳು ದೇಹದಲ್ಲಿ ಐಆಐ (ಕೆಟ್ಟ ಕೊಲೆಸ್ಟ್ರಾಲ್) ಅನ್ನು ಹೆಚ್ಚಿಸುತ್ತವೆ. ಇದು ಅಪಧಮನಿಗಳಲ್ಲಿ ಪ್ಲೇಕ್ ಸಂಗ್ರಹವಾಗಲು ಮತ್ತು ರಕ್ತದ ಹರಿವನ್ನು ನಿಲ್ಲಿಸಲು ಕಾರಣವಾಗ ಬಹುದು, ಇದು ಹೃದಯಾಘಾತಕ್ಕೆ ಪ್ರಮುಖ ಕಾರಣವಾಗಿದೆ. ನೀವು ಚಾಕೊಲೇಟ್ ತಿನ್ನುವು ದನ್ನು ತುಂಬಾ ಇಷ್ಟಪಡುತ್ತಿದ್ದರೆ ಮತ್ತು ದಿನಕ್ಕೆ 500 ಗ್ರಾಂ ಚಾಕೊಲೇಟ್ ಸೇವಿಸಿದರೆ, ನಿಮಗೆ ಹೃದಯಾಘಾತವಾಗುವ ಅಪಾಯ ಗಮನಾರ್ಹವಾಗಿ ಹೆಚ್ಚಾಗುತ್ತದೆ.**

## ಮರದ ಮೇಲೊಂದು ಹಕ್ಕಿ



ಮರದ ಮೇಲೊಂದು ಹಕ್ಕಿ ಕೂತಿತ್ತು,
ಮರದ ನೆರಳಡಿ ಮಧುರ ಗಾನ
ಹೊಮ್ಮಿತ್ತು!
ಗಾಳಿಯಲಿ ಹಸಿರು ಎಲೆಗಳ ನಾಟ್ಯ,
ಪ್ರಕೃತಿಯ ಲಯವಿದು ಶಾಶ್ವತ ಗದ್ಯ!
ನೀರು, ಗಾಳಿ, ಬೆಟ್ಟ, ಹೊಳೆ ಎಲ್ಲಾವು ಒಂದೇ,
ಸಹಬಾಳ್ವೆಯ ಮಂತ್ರವಿದು, ಜೀವಜಗ ಎಲ್ಲಾ
ರಿಗೆಂದೆ!
ಹಕ್ಕಿಯ ಹಾಡು ನಮಗೆ ಪಾಠ ಕಲಿಸುತ್ತಿದೆ,
ಸಹಿಷ್ಣುತೆ, ಶಾಂತಿ ಬದುಕಿಗೆ ಬೆಳಕು ತರುತ್ತದೆಂದು!
ಸೂರ್ಯನ ಕಿರಣ ಮರದ ಎಲೆ ತಾಗುತ,
ಹಕ್ಕಿಯ ಪಿಸುಮಾತು ಹೃದಯವನ್ನು ಹೊಮ್ಮುತ.
ಸನಾತನ ಸಂಸ್ಕೃತಿ ನಮಗೆ ಸಾರುವುದು,
ಪ್ರಕೃತಿಗೆ ಗೌರವ ಜೀವನದ ಮೂಲ ಮೌಲ್ಯವೆಂದು!
ಎಲೆ, ಹೂವು, ಹಣ್ಣು ಎಲ್ಲಾವು ಹಂಚಿಕೊಳ್ಳುತ,
ಏಕತೆಯ ಪಾಠವಿದು, ಜಗವೆಲ್ಲ ಕಲಿಯಲಿ!
ಮರದ ಮೇಲೊಂದು ಹಕ್ಕಿ ಹಾಡಿದ ಸಹಬಾಳ್ವೆ
ಗೀತೆಯ ಮಾನವತೆಗೆ ಸಂದೇಶ ಸಹಜ ಜೀವನದಿ
ಸಾಗಿ ಅಹಂ ತೊರೆದು!


ರಚನೆ: ಅನಿಲ್ ಕುಮಾರ್. ಮ ತೇಲಂಗಿ
ಮುದ್ದೇಬಿಹಾಳ 8050168958

# ಹಿಂದೂ ನಾಯಕರಾದ ಮಹೇಶ್ ವಿಕ್ರಮ್ ಹೆಗ್ಡೆ, ಪುನೀತ್ ಕೆರೆಹಳ್ಳಿಯವರ ಬಂಧನ ಕಾನೂನು ಬಾಹಿರ

ಶ್ರೀ. ಮೋಹನ ಗೌಡ,
• ಉದಯವಾಹಿನಿ, ಬೆಂಗಳೂರು

ವಿಕ್ರಮ ಟಿವಿಯ ಸಂಪಾದಕರು ಮಹೇಶ್ ವಿಕ್ರಮ ಹೆಗಡೆ ಅವರು ಸಾಮಾಜಿಕ ಜಾಲತಾಣ Facebook ಮೂಲಕ ರಾಜ್ಯದಲ್ಲಿ ನಡೆದ ಘಟನೆಗಳ ಕುರಿತು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಅವರನ್ನು ಬಂಧಿಸಿರುವುದು ಸಂಪೂರ್ಣವಾಗಿ ಭಾರತೀಯ ಸಂವಿಧಾನದ ಕಲಂ 19(1)(a) –ವಾಕ್ ಮತ್ತು ಅಭಿವ್ಯಕ್ತಿಯ ಸ್ವಾತಂತ್ರ್ಯದ ಹಕ್ಕಿಗೆ ಧಕ್ಕೆ ತರುವ ಕೃತ್ಯವಾಗಿದೆ.

ಅದೇ ರೀತಿ, ರಾಷ್ಟ್ರ ರಕ್ಷಣಾ ಪಡೆಯ ಸಂಸ್ಥಾಪಕ ಅಧ್ಯಕ್ಷರಾದ ಪುನೀತ್ ಕೆರೆಹಳ್ಳಿ ಅವರನ್ನು, ಅವರು ಮದ್ದೂರು ಗಣೇಶೋತ್ಸವ ಮೆರವಣಿಗೆಯಲ್ಲಿ ಭಾಗವಹಿಸುತ್ತಾರೆ ಮತ್ತು ಅಲ್ಲಿ ದ್ವೇಷ ಭಾಷಣ ಮಾಡುವ ಸಾಧ್ಯತೆ ಇದೆ ಎಂಬ ನೆಪದಲ್ಲಿ ಮುಂಜಾಗ್ರತಾ ಬಂಧನಕ್ಕೆ ಒಳಪಡಿಸಿರುವುದು ಕಾನೂನು ಬಾಹಿರವಾಗಿದೆ. ಅಡಿಕಲಅ ಸೆಕ್ಷನ್ 151 ಅಡಿಯಲ್ಲಿ ಮುಂಜಾಗ್ರತಾ ಬಂಧನವು




ಗಂಭೀರ ಅಪರಾಧವನ್ನು ತಡೆಯಲು ಮಾತ್ರ ಅನ್ವಯವಾಗಬೇಕಾದರೆ, ಇಲ್ಲಿ ಯಾವುದೇ ಅಪರಾಧ ನಡೆದಿದೆ ಎಂಬುದು ಸಾಬೀತಾಗಿಲ್ಲ. ಆದ್ದರಿಂದ ಈ ಬಂಧನವು ಅಸಂವಿಧಾನಿಕವಾಗಿದೆ.

ಇಂತಹ ಕ್ರಮಗಳು ಸರ್ಕಾರದ ಪಕ್ಷಪಾತಿ ನಿಲುವನ್ನು ಬಹಿರಂಗಪಡಿಸುತ್ತವೆ. ಗಣೇಶೋತ್ಸವದ ಶಾಂತಿಯುತ ಆಚರಣೆಗಳನ್ನು ಭದ್ರಗೊಳಿಸುವ ಬದಲು, ಹಿಂದೂ ನಾಯಕರನ್ನೇ ಗುರಿಯಾಗಿಸಿ ಬಂಧಿಸುವ ಮೂಲಕ, ಸರ್ಕಾರವು ಹಿಂದೂಗಳ ಧಾರ್ಮಿಕ ಹಕ್ಕು ಮತ್ತು ವಾಕ್ ಸ್ವಾತಂತ್ರ್ಯವನ್ನು ಉಲ್ಲಂಘಿಸಿದೆ. ಹಿಂದೂ ಜನಜಾಗೃತಿ ಸಮಿತಿ ಈ ಅನ್ಯಾಯ ಬಂಧನವನ್ನು ತೀವ್ರವಾಗಿ ಖಂಡಿಸುತ್ತಿದ್ದು, ಸರ್ಕಾರಕ್ಕೆ ಕೆಳಗಿನಂತೆ ಆಗ್ರಹಿಸುತ್ತದೆ:

1. ಮಹೇಶ್ ವಿಕ್ರಮ ಹೆಗಡೆ ಮತ್ತು ಪುನೀತ್ ಕೆರೆಹಳ್ಳಿಯವರ ಬಂಧನವನ್ನು ತಕ್ಷಣವೇ ಹಿಂಪಡೆಯಬೇಕು.
2. ಭವಿಷ್ಯದಲ್ಲಿ ಯಾವುದೇ ಹಿಂದೂ ನಾಯಕ ಅಥವಾ ಧಾರ್ಮಿಕ ಕಾರ್ಯಕ್ರಮಗಳನ್ನು ರಾಜಕೀಯ ಅಥವಾ ಧಾರ್ಮಿಕ ಪಕ್ಷಪಾತದ ಆಧಾರದ ಮೇಲೆ ಗುರಿಯಾಗಿಸುವುದನ್ನು ನಿಲ್ಲಿಸಬೇಕು.
3. ಸಂವಿಧಾನಬದ್ಧ ಹಕ್ಕುಗಳ ರಕ್ಷಣೆಗೆ ಬದ್ಧವಾಗಿರಬೇಕು ಮತ್ತು ರಾಜ್ಯದ ಕಾನೂನು – ಸುವ್ಯವಸ್ಥೆಯನ್ನು ಸಮಾನತೆಯ ಆಧಾರದ ಮೇಲೆ ಪಾಲಿಸಬೇಕು.

## ಸೆಪ್ಟೆಂಬರ್ 16 ವರೆಗೆ ಮಳೆ; ಬೆಂಗಳೂರಿಗೆ ಯೆಲ್ಲೋ ಅಲರ್ಟ್



• ಉದಯವಾಹಿನಿ, ಬೆಂಗಳೂರು


ಮಳೆ ಅಬ್ಬರ ಇನ್ನೊಂದಿಷ್ಟು ದಿನ ಮುಂದುವರೆಯಲಿದ್ದು ಮುಂದಿನ ನಾಲ್ಕು ದಿನ ಅಂದರೆ ಸೆಪ್ಟೆಂಬರ್ 16ರವರೆಗೂ ಮಳೆ ಆರ್ಭಟ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ. ಸೆಪ್ಟೆಂಬರ್ 16ವರೆಗೂ ರಾಜ್ಯದ ವಿವಿಧ ಭಾಗಗಳಲ್ಲಿ ಮಳೆ ಆರ್ಭಟ ಜೋರಾಗಿರಲಿದ್ದು, ಉತ್ತರ ಹಾಗೂ ದಕ್ಷಿಣ ಕರ್ನಾಟಕ ಭಾಗದ ಹಲವು ಜಿಲ್ಲೆಗಳಲ್ಲಿ ಮುಂದಿನ ನಾಲ್ಕೈದು ದಿನ ಮಳೆ ಮತ್ತಷ್ಟು ಬಿರುಸುಗೊಳ್ಳುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

**ಬೆಂಗಳೂರಿಗೆ ಯೆಲ್ಲೋ ಅಲರ್ಟ್ ಜಾರಿ:** ಇನ್ನು ರಾಜಧಾನಿ ಬೆಂಗಳೂರಿನಲ್ಲಿ ಮಳೆ ಅಬ್ಬರ ಮತ್ತೊಂದಿಷ್ಟು ದಿನ ಮುಂದುವರೆಯುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದ್ದು, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರ, ಬಳ್ಳಾರಿ, ಮೈಸೂರು, ಮಂಡ್ಯ, ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ನೀಡಲಾಗಿದೆ. ಅಂತೆಯೇ ಉತ್ತರ ಒಳನಾಡಿನಲ್ಲಿ ಇಂದಿನಿಂದ ಮಳೆ ಜೋರಾಗಲಿದೆ. ವಿಜಯಪುರ, ಕಲಬುರಗಿ ಹಾಗೂ ಕೊಪ್ಪಳ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

# ಬಾಯಿ ರುಚಿ ಕೆಟ್ಟಿದ್ದರೆ ಖಾರ ಖಾರದ ಚಟ್ನಿ

ನೀವು ಒಂದೇ ರೀತಿಯ ಅಡುಗೆ ಸವಿದು ಹಾಗೆ ಒಂದೇ ರೀತಿ ಸಾಂಬಾರ್, ತಿಂಡಿ ಅಡುಗೆಗಳ ಸವಿದು ನಿಮ್ಮ ಬಾಯಿ ರುಚಿ ಕೆಟ್ಟಿರಬಹುದು. ಹೀಗಾಗಿ ನೀವು ಹೊಸ ರೀತಿ ಅಡುಗೆ ಮಾಡಿ ಸವಿಯುವ ಮನಸ್ಸು ಮಾಡಿರಬಹುದು. ಅದ್ರಲ್ಲೂ ನಾಲಗೆಗೆ ರುಚಿ ತರುಚ ಖಾರ ಖಾರವಾದ ಚಟ್ನಿ ಸವಿಯುವುದು ಅಂದ್ರೆ ಎಲ್ಲಾರಿಗೂ ಇಷ್ಟವಾಗುತ್ತೆ.

ಅದ್ರಲ್ಲೂ ಬಾಯಿ ರುಚಿ ಕೆಟ್ಟಿದ್ದರೆ ಈ ರೀತಿ ಬೆಳ್ಳುಳ್ಳಿ ಚಟ್ನಿ ತಿನ್ನಲೇ ಬೇಕು. ಬೆಳ್ಳುಳ್ಳಿ. ಮೆಣಸಿಕಾಯಿ ಹಾಕಿ ಮಾಡುವ ಈ ಚಟ್ನಿಯು ನಿಮ್ಮ ಹದಗೆಟ್ಟ ನಾಲಗೆಗೆ ರುಚಿ ನೀಡಲಿದೆ. ಹಾಗೆ ಎಲ್ಲಾ ಖಾದ್ಯದೊಂದಿದೆ ಅದ್ರಲ್ಲೂ ತಿಂಡಿಯೊಂದಿಗೆ ಇದನ್ನು ಸವಿಯಬಹುದು. ಊಟದೊಂದಿಗೂ ಕೂಟ ಅದ್ಭುತ ರುಚಿ ನೀಡಲಿದೆ. ಈ ಬೆಳ್ಳುಳ್ಳಿ ಹಸಿ ಮೆಣಸಿನಕಾಯಿ ಚಟ್ನಿ ಆರೋಗ್ಯದ ದೃಷ್ಟಿಯಿಂದಲೂ ಕೂಡ ಬಹಳ ಉತ್ತಮವಾಗಿರಲಿದೆ. ತಿಂಡಿಯೊಂದಿಗೆ ಹಾಗೆ ಊಟದೊಂದಿಗೆ ಸವಿಯಲು ಬಹಳ ರುಚಿ ನೀಡಲಿದೆ. ಆದ್ರೆ ಇದನ್ನು ಸರಿಯಾದ ವಿಧಾನದಲ್ಲಿ ಮಾಡಿದ್ರೆ ಮಾತ್ರ ಅದರ ರುಚಿ ದುಪ್ಪಟ್ಟಾಗುತ್ತೆ. ಹಾಗಾದ್ರೆ ನಾವಿಂದು ಮನೆಯಲ್ಲೇ ರುಚಿ ರುಚಿಯಾಗಿ ಚಟ್ನಿ ಮಾಡುವುದು ಹೇಗೆ ಅನ್ನೋದನ್ನು ತಿಳಿದುಕೊಳ್ಳೋಣ. ಇನ್ನು ಬೆಳ್ಳು, ಹಸಿ ಮೆಣಸಿನ ಚಟ್ನಿಯು ನಾಲಗೆ ರುಚಿ ಹೆಚ್ಚಿಸಲಿದೆ. ಹಾಗಾದ್ರೆ ಈ ಚಟ್ನಿ ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು, ಮಾಡುವ ವಿಧಾನವೇನು, ಮಾಡಲು ಎಷ್ಟು ಸಮಯ ಹಿಡಿಯಲಿದೆ ಎಂಬುದನ್ನು ನಾವಿಲ್ಲಿ




ತಿಳಿಯೋಣ.

**ಬೆಳ್ಳುಳ್ಳಿ ಹಸಿ ಮೆಣಸಿನ ಚಟ್ನಿ ಮಾಡುವುದು ಹೇಗೆ?** : ಮೊದಲು ಬಾಣಲೆ ಒಲೆ ಮೇಲೆ ಇಟ್ಟು 5 ಚಮಚ ಎಣ್ಣೆ ಹಾಕಿಕೊಳ್ಳಿ. ನಂತರ ಇದಕ್ಕೆ ಸಾಸಿವೆ, ಜೀರಿಗೆ ಹಾಕಿ ಬಳಿಕ ಕರಿಬೇವು, ಮೆಂತ್ಯ ಕಾಳು, 1 ಕಪ್ ಸಿಪ್ಪೆ ತೆಗೆದ ಬೆಳ್ಳಳ್ಳಿ ಹಾಕಿಕೊಂಡು ಫ್ರೈ ಮಾಡಿ. 1 ನಿಮಿಷದ ಬಳಿಕ ಕೊತ್ತಂಬರಿ ಕಾಳು ಹಾಕಿ ಚೆನ್ನಾಗಿ ಫ್ರೈ ಮಾಡಿಕೊಳ್ಳಿ. ನಂತರ ಕೊತ್ತಂಬರಿ ಸೊಪ್ಪು ಸಹ ಹಾಕಿಕೊಂಡು ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ಈಗ ಚೆನ್ನಾಗಿ ಫ್ರೈ ಮಾಡಿಕೊಳ್ಳುತ್ತಾ ಇಂಗು ಸಹ ಹಾಕಿಕೊಳ್ಳಿ ಸಣ್ಣ ಉರಿಯಲ್ಲಿ ಮಾಡಿ. 5 ನಿಮಿಷ ಬಿಟ್ಟು ಕೊನೆಯಲ್ಲಿ ಸ್ವಲ್ಪ ಅರಶಿಣ ಪುಡಿ ಹಾಕಿಕೊಂಡು ಹಾಗೆ ಹುಣಸೆ ಹುಳಿ ಕೂಡ ಹಾಕಿಕೊಂಡು, ಖಾರದ ಪುಡಿ ಹಾಕಿ ಒಲೆ ಆಫ್ ಮಾಡಿಕೊಂಡು ಇಳಿಸಿಕೊಳ್ಳಿ. ನಂತರ ಕೊನೆಯಲ್ಲಿ ಉಪ್ಪು ಹಾಕಿ ಮಿಕ್ಸ್ ಮಾಡಿಕೊಂಡು ಇಳಿಸಿ ತಣ್ಣಗಾಗಲು ಬಿಡಿ. ಈಗ ಮಿಕ್ಸಿ ಜಾರ್ ತೆಗೆದುಕೊಂಡು ಅದಕ್ಕೆ ಫ್ರೈ ಮಾಡಿಕೊಂಡ ಎಲ್ಲಾ ವಸ್ತುಗಳ ಹಾಕಿಕೊಂಡು ಬೆಲ್ಲ ಸಹ ಹಾಕಿಕೊಂಡು ರುಬ್ಬಿಕೊಳ್ಳಿ. ನುಣ್ಣಗೆ ರುಬ್ಬಿಕೊಳ್ಳಬೇಕು. ಯಾವುದೇ ಕಾರಣಕ್ಕೂ ನೀರು ಹಾಕಿಕೊಳ್ಳಬೇಡಿ. ಹಾಗೆ ಕೊನೆಯಲ್ಲಿ 2 ಹಸಿ ಮೆಣಸು ಹಾಕಿ ರುಬ್ಬಿಕೊಳ್ಳಿ. ಇದು ಚೆನ್ನಾಗಿ ಪುಡಿ ಪುಡಿಯಾಗಬೇಕು. ಇಷ್ಟಾದರೆ ನಿಮ್ಮ ಮುಂದೆ ರುಚಿ ರುಚಿ ಚಟ್ನಿ ಸಿದ್ಧವಾಗುತ್ತೆ. ಹಾಗೆ ಇದನ್ನು ನೀವು ಕೆಂಪು ಮೆಣಸು ಕೂಡ ಹಾಕಿಕೊಂಡು ಮಾಡಬಹುದು. ಆದ್ರೆ ಹಸಿ ಮೆಣಸಿನಲ್ಲಿ ಖಾರ ಹೆಚ್ಚಾಗಿ ಇರುವುದರಿಂದ ರುಚಿ ಕೂಡ ಅದ್ಭುತವಾಗುತ್ತದೆ. ತಿಂಡಿಯೊಂದಿಗೆ ಸವಿಯುತ್ತಿದ್ದರೆ ಬಾಯಲ್ಲಿ ನೀರು ಬರುತ್ತೆ. ನೀವು ಕೂಡ ಮನೆಯಲ್ಲಿ ಇದನ್ನು ಟ್ರೈ ಮಾಡಿ ನೋಡಿ

**ಬೆಳ್ಳುಳ್ಳಿ ಹಸಿ ಮೆಣಸಿನ ಚಟ್ನಿ ಮಾಡಲು ಬೇಕಾಗುವ ವಸ್ತುಗಳು**

- ಬೆಳ್ಳುಳ್ಳಿ
- ಹಸಿ ಮೆಣಸು
- ಉಪ್ಪು
- ಎಣ್ಣೆ
- ಖಾರದ ಪುಡಿ
- ಸಾಸಿವೆ
- ಜೀರಿಗೆ
- ಇಂಗು
- ಹುಣಸೆ ಹುಳಿ
- ಬೆಲ್ಲ

## ರಾಮಾಯಣ



ಹೇಮಂತ ತುವಿನ ವರ್ಣನೆ

• ಹಿಂದಿನ ಸಂಚಿಕೆಯಿಂದ

119 ನೆಯ ಅಧ್ಯಾಯ

ಭೋಗಗಳನ್ನೂ ತೊರೆದು ಭರತನು ತಪಸ್ವಿಯಾಗಿದ್ದಾನೆ. ದಶರಥ ಮಹಾರಾಜನು ಪುಣ್ಯಾತ್ಮ. ಅವನಿಗೆ ಪತ್ನಿಯಾಗಿ ಭರತನನ್ನು ಮಗನಾಗಿ ಪಡೆದ ಕೈಕೇಯಿಗೆ ಮಾತ್ರ ಆ ರೀತಿಯ ಕೆಟ್ಟ ಬುದ್ಧಿ ಹೇಗೆ ಬಂದಿರಬಹುದು ಎಂದು ನುಡಿದನು. ಆ ಮಾತನ್ನು ಕೇಳಿ ಶ್ರೀರಾಮನು ಎಲೈ ಲಕ್ಷ್ಮಣ, ನಮ್ಮ ಮಾಧ್ಯಮ ಮಾತೆಯಾದ ಕೈಕೇಯಾದೇವಿಯನ್ನು ನೀದಿಸುವುದು ಉಚಿತವಲ್ಲ. ಇನ್ನೂ ಭರತನ ಕಥಾಪ್ರಸಂಗವನ್ನೆ: ಹೇಳು, ವನವಾಸಮಾಡಬೇಕೆಂದು ನಾನು ದೃಢವಾಗಿ ನಿಶ್ಚಯಿಸಿದ್ದರೂ ಭರತನ ನೆನಪು ಬಂದರೆ ನನ್ನ ನಿಶ್ಚಯವು ಶಿಥಿಲವಾಗುತ್ತದೆ. ಈಗಲೇ ಹೋಗಿ ಅವನನ್ನು ನೋಡಬೇಕೆನ್ನಿಸುತ್ತದೆ. ಅಮೃತಕ್ಕೆ ಸಮಾನವಾದ ಭರತನ ವಿನಯೋಕ್ತಿಗಳನ್ನು ಸ್ಮರಿಸಿಕೊ, ಕೈಕೇಯಿದೇವಿಯನ್ನು ನಿಂದಿಸಬೇಡ. ಸೀತಾಸಮೇತನಾಗಿ ನಿನ್ನನ್ನು ಕೂಡಿಕೊಂಡು ಅಯೋಧ್ಯಾಪಟ್ಟಣಕ್ಕೆ ಹೋಗಿ ಮಹಾತ್ಮನಾದ ಭರತನೊಡನೆ, ಪರಾಕ್ರಮಿಯಾದ ಶತ್ರುಘ್ನನೊಡನೆ ಸಂಭಾಷಣೆ ಮಾಡುವ ಭಾಗ್ಯವು ಇನ್ನಾವಾಗ ಉಂಟಾಗುವುದೊ ಎಂದು ಹಂಬಲಿಸುತ್ತ ಸೀತಾಲಕ್ಷ್ಮಣಸಮೇತನಾಗಿ ಗೋದಾವರಿನದಿಯಲ್ಲಿ ಸ್ನಾನವನ್ನು ಮಾಡಿದನು.ಆ ಮೇಲೆ ಸಂಧ್ಯಾವಂದನೆ ಮೊದಲಾದ ನಿತ್ಯಕರ್ಮಗಳನ್ನು ನೆರವೇರಿಸಿದನು. ಹೀಗೆ ಶ್ರೀರಾಮನು ಸ್ನಾನಮಾಡಿ ಸೀತಾಲಕ್ಷ್ಮಣರೊಡಗೂಡಿ ಪಾರ್ವತಿಯೊಡನೆಯೂ ನಂದಿಯೊಡನೆಯೂ ಕೂಡಿರುವ ಶಿವನಂತೆ ಪ್ರಕಾಶಿಸುತ್ತಿದ್ದನು.

**ಶೂರ್ಪಣಖಿಯು ಶ್ರೀ ರಾಮನನ್ನು ಮೋಹಿಸಿದ್ದು:** ಗೋದಾವರೀನದಿಯಲ್ಲಿ ಸ್ನಾನಮಾಡಿ ಶ್ರೀರಾಮ, ಸೀತೆ, ಲಕ್ಷ್ಮಣರು ಪರ್ಣಶಾಲೆಗೆ ಹಿಂದಿರುಗಿದರು. ಅಲ್ಲಿ ಪೂರ್ವಾಹ್ನದ ಕೃತ್ಯಗಳನ್ನು ನೆರವೇರಿಸಿ ಶ್ರೀರಾಮನು ಲಕ್ಷ್ಮಣನೊಡನೆ ನಾನಾ ಕಥಾವಸಂಗಗಳನ್ನು ಮಾಡುತ್ತ ಕುಳಿತನು. ಸೀತೆಯೊಡನೆ ವಿರಾಜಿಸುತ್ತಿದ್ದ ಆ ರಘುನಾಥನು ಚಿತ್ರಾನಕ್ಷತ್ರದೊಂದಿಗೆ ಬೆಳಗುತ್ತಿರುವ ಚಂದ್ರನಂತೆ ಒಪ್ಪುತ್ತಿದ್ದನು. ಆ ಸಮಯದಲ್ಲಿ ಶೂರ್ಪಣಖಿಯೆಂಬ ರಾಕ್ಷಸಿಯೊಬ್ಬಳು ಅಲೆಯುತ್ತ ಅಲ್ಲಿಗೆ ಬಂದಳು. ಅವಳು ರಾವಣನ ತಂಗಿ. ಆ ರಾಕ್ಷಸಿಯು ವಿಶಾಲವಾದ ಪಕ್ಷಸ್ಥಳವುಳ್ಳವನೂ ನಿಡಿದಾದ ತೋಳುಗಳುಳ್ಳವನೂ ಕಮಲ ದಳಾಯತಾಕ್ಷನೂ ಮಹಾಶೂರನೂ ಕ್ಷತ್ರಿಯಲಕ್ಷಣೋಪೇತನೂ ಮನ್ಮಥನಂತೆ ಮನೋಹರಾ ಕಾರನೂ ಆದ ಶ್ರೀರಾಮನನ್ನು ಕಂಡು ಕಾಮಮೋಹಿತಳಾದಳು. ಶ್ರೀರಾಮನು ಸುಂದರಮುಖನೂ ಕೃಶೋದರನೂ ಆಗಿ ವಿಶಾಲಾಕ್ಷನೂ ಮನೋಜ್ಞವಾದ ಕಪ್ಪ **ತಲೆಗೂದಲುಳ್ಳವನೂ ಆಗಿದ್ದನು:** ಶೂರ್ಪಣಖಿಯಾದರೋ ದುರ್ಮುಖಿಯೂ ಮಹೋದರಿಯೂ ವಿಕೃತಾಕ್ಷಿಯೂ ಕೆಂಪು ಕೂದಲಿನವಳೂ ಆಗಿದ್ದಳು. ಶ್ರೀರಾಮನು ಮಧುರಸ್ವರವುಳ್ಳವನ ತರುಣನೂ ಗುಣಶಾಲಿಯೂ ಸಚ್ಚಾರಿತ್ರನೂ ಆಗಿದ್ದನು: ಶೂರ್ಪಣಖಿಯಾದರೋ ಕರ್ಕಶಧ್ವನಿಯುಳ್ಳವಳೂ ವೃದ್ಧೆಯೂ ದುಷ್ಟಳೂ ದುರಾಚಾರದವಳೂ ಆಗಿದ್ದಳು. ಮರದಂತೆ ವಿಕಾರವಾದ ಉಗುರುಗಳುಳ್ಳ ಆ **ಶೂರ್ಪಣಖೆಯು ಶ್ರೀರಾಮನನ್ನು ಕುರಿತು:** ಎಲೈ ಪುರುಷನೆ, ನೀನು ಜಡೆಗಳನ್ನು ಧರಿಸಿಕೊಂಡು ಈ ಸ್ತ್ರೀಯನ್ನು ಸಮೀಪದಲ್ಲಿರಿಸಿಕೊಂಡಿದ್ದೀಯೇಕೆ ? ತಪಸ್ವಿಯಾಗಿ ಬಿಲ್ಲುಬಾಣ

ಮುಂದುವರಿಯುವುದು...


# ಶ್ರಾದ್ಧವನ್ನು ಯಾವಾಗ ಮಾಡಬೇಕು?

■ ಶ್ರೀ. ವಿನೋದ ಕಾಮತ್,

**ಸಾಧಾರಣ ಯೋಗ್ಯ ತಿಥಿಗಳು** : ಸಾಮಾನ್ಯವಾಗಿ ಅಮಾವಾಸ್ಯೆ, ವರ್ಷದ ಹನ್ನೆರಡು ಸಂಕ್ರಾಂತಿಗಳು, ಚಂದ್ರ–ಸೂರ್ಯಗ್ರಹಣ, ಯುಗಾದಿ, ಮನ್ವಾದಿ ತಿಥಿಗಳು, ಅರ್ಧೋದ ಯಾದಿ ಪರ್ವಗಳು, ಮರಣ ಹೊಂದಿದ ದಿನ, ಶ್ರೋತ್ರೀಯ ಬ್ರಾಹ್ಮಣರ ಆಗಮನ ಇತ್ಯಾದಿ ತಿಥಿಗಳು ಶ್ರಾದ್ಧವನ್ನು ಮಾಡಲು ಯೋಗ್ಯವಾಗಿವೆ.

ಶ್ರಾದ್ಧವಿಧಿಯನ್ನು ಒಂದು ವಿಶಿಷ್ಟ ಕಾಲದಲ್ಲಿ ಮಾಡಲು ಆಗಲಿಲ್ಲ, ಆದುದರಿಂದ ಶ್ರಾದ್ಧವನ್ನು ಮಾಡಲಿಲ್ಲ ಎಂದು ಹೇಳಲು ಯಾರಿಗೂ ಅವಕಾಶವನ್ನು ನೀಡದ ಹಿಂದೂ ಧರ್ಮ !

ಸಾಮಾನ್ಯವಾಗಿ ಪ್ರತಿವರ್ಷ ಮರಣ ಹೊಂದಿದ ತಿಥಿಯ ದಿನ (ಆಂಗ್ಲ ದಿನದರ್ಶಿಕೆಯ ದಿನಾಂಕದಂದು ಮಾಡದೇ, ಹಿಂದೂ ಪಂಚಾಂಗದ ಪ್ರಕಾರ ಇರುವ ತಿಥಿಯಂದು) ಶ್ರಾದ್ಧವನ್ನು ಮಾಡಬೇಕು. ಮೃತ್ಯುವಿನ ತಿಥಿಯು ಗೊತ್ತಿಲ್ಲದೇ, ಕೇವಲ ತಿಂಗಳು ಮಾತ್ರ ಗೊತ್ತಿದ್ದರೆ ಆ ತಿಂಗಳ ಅಮಾವಾಸ್ಯೆಯಂದು ಶ್ರಾದ್ಧವನ್ನು ಮಾಡಬೇಕು. ಮೃತ್ಯುವಿನ ತಿಥಿ ಮತ್ತು ತಿಂಗಳು ಎರಡೂ ಗೊತ್ತಿಲ್ಲದಿದ್ದರೆ ಮಾಘ ಅಥವಾ ಮಾರ್ಗಶಿರ ಅಮಾವಾಸ್ಯೆಗೆ ಶ್ರಾದ್ಧವನ್ನು ಮಾಡಬೇಕು.



ನಿಶ್ಚಿತವಾಗಿ ಮರಣದ ತಿಥಿಯು ಗೊತ್ತಿಲ್ಲದಿದ್ದರೆ ಮರಣದ ವಾರ್ತೆಯು ತಿಳಿದ ದಿನದಂದು ಶ್ರಾದ್ಧವನ್ನು ಮಾಡಬೇಕು. ಪಿತೃಗಳ ಶ್ರಾದ್ಧವನ್ನು ಪ್ರತಿದಿನ ಮಾಡಬೇಕು. ಇದನ್ನು ನೀರಿನಿಂದ ಅಂದರೆ ಪಿತೃಗಳಿಗೆ ತರ್ಪಣವನ್ನು ನೀಡಿ ಮಾಡಬಹುದು. ಪ್ರತಿದಿನ ಮಾಡಲು ಸಾಧ್ಯವಾಗದಿದ್ದರೆ, ದರ್ಶಶ್ರಾದ್ಧವನ್ನು ಮಾಡಬೇಕು. ಇದರಿಂದ ನಿತ್ಯ ಶ್ರಾದ್ಧದ ಸಿದ್ಧಿ ಆಗುತ್ತದೆ. ದರ್ಶ ಎಂದರೆ ಅಮಾವಾಸ್ಯೆ. ಪ್ರತಿ ತಿಂಗಳ ಅಮಾವಾಸ್ಯೆಯಂದು ಮಾಡುವ ಶ್ರಾದ್ಧವೇ ದರ್ಶಶ್ರಾದ್ಧ. ಪ್ರತಿ ತಿಂಗಳು ದರ್ಶಶ್ರಾದ್ಧವನ್ನು ಮಾಡಲು ಆಗದಿದ್ದರೆ ಚೈತ್ರ, ಭಾದ್ರಪದ ಮತ್ತು ಆಶ್ವಯುಜ ಮಾಸಗಳ ಅಮಾವಾಸ್ಯೆಯಂದು ಮಾಡಬೇಕು. ದರ್ಶಶ್ರಾದ್ಧವನ್ನು ಚೈತ್ರ, ಭಾದ್ರಪದ ಮತ್ತು ಆಶ್ವಯುಜ ಮಾಸಗಳ ಅಮಾವಾಸ್ಯೆಯಂದು ಮಾಡಲು ಆಗದಿದ್ದರೆ ಭಾದ್ರಪದ ತಿಂಗಳಿನ ಪಿತೃಪಕ್ಷದಲ್ಲಿ ಮಹಾಲಯ ಶ್ರಾದ್ಧವನ್ನಾದರೂ ಅವಶ್ಯವಾಗಿ ಮಾಡಬೇಕು. ಇದೂ ಸಾಧ್ಯವಾಗದಿದ್ದರೆ ಭಾದ್ರಪದ ಅಮಾವಾಸ್ಯೆಗೆ ಎಂದರೆ ಸರ್ವಪಿತ್ರೀ ಅಮಾವಾಸ್ಯೆಯಂದು) ಶ್ರಾದ್ಧವನ್ನು ಮಾಡಬೇಕು.

**ಸರ್ವಪಿತ್ರೀ ಅಮಾವಾಸ್ಯೆಯ ಮಹತ್ವ** : ಭಾದ್ರಪದ ಅಮಾವಾಸ್ಯೆಯಂದು ನಮ್ಮ ಕುಲದಲ್ಲಿದ್ದ ಎಲ್ಲಾ ಪಿತೃಗಳನ್ನು ಉದ್ದೇಶಿಸಿ ಶ್ರಾದ್ಧ ಮಾಡಲಾಗುತ್ತದೆ. ಆದುದರಿಂದ ಈ ಅಮಾವಾಸ್ಯೆಯನ್ನು ಸರ್ವಪಿತ್ರೀ ಅಮಾವಾಸ್ಯೆ ಎಂದು ಕರೆಯಲಾಗಿದೆ.

ಪಿತೃಪಕ್ಷದ ಅಮಾವಾಸ್ಯೆಗೆ ಸರ್ವಪಿತ್ರಿ ಅಮಾವಾಸ್ಯೆ ಎನ್ನುತ್ತಾರೆ. ಈ ತಿಥಿಯಂದು ಎಲ್ಲಾರೂ ಶ್ರಾದ್ಧ ಮಾಡುವುದು ಅತ್ಯಂತ ಆವಶ್ಯಕವಾಗಿದೆ; ಏಕೆಂದರೆ ಪಿತೃಪಕ್ಷದಲ್ಲಿ ಇದು ಕೊನೆಯ ತಿಥಿಯಾಗಿದೆ. ವ್ಯಕ್ತಿಯ ಮೃತ್ಯುವಿನ ತಿಥಿಯು ತಿಳಿಯದಿದ್ದರೆ ಅವರು ಮೃತಪಟ್ಟ ತಿಂಗಳಿನ ಅಮಾವಾಸ್ಯೆಯಂದು ಶ್ರಾದ್ಧಕರ್ಮವನ್ನು ಮಾಡಬಹುದು ಎಂದು, ಹಾಗು ಅದು ಕೂಡ ತಿಳಿಯದಿದ್ದರೆ ಸರ್ವಪಿತ್ರೀ ಅಮಾವಾಸ್ಯೆಯಂದು ಶ್ರಾದ್ಧವನ್ನು ಮಾಡಬೇಕೆಂದು ಶಾಸ್ತ್ರಗಳಲ್ಲಿ ತಿಳಿಸಲಾಗಿದೆ. ಅಮಾವಾಸ್ಯೆಯು ಶ್ರಾದ್ಧ ಮಾಡಲು ಹೆಚ್ಚು ಯೋಗ್ಯವಾದ ತಿಥಿಯಾಗಿದೆ ಮತ್ತು ಪಿತೃಪಕ್ಷದ ಅಮಾವಾಸ್ಯೆಯು ಎಲ್ಲಾಕ್ಕಿಂತಲೂ ಹೆಚ್ಚು ಸೂಕ್ತವಾದ ತಿಥಿಯಾಗಿದೆ ಎಂದು ಶಾಸ್ತ್ರದಲ್ಲಿ ಹೇಳಲಾಗಿದೆ. ಇತರ ದಿನಗಳಲ್ಲಿ ಅಥವಾ ವ್ಯಕ್ತಿ ಮೃತಪಟ್ಟ ತಿಥಿಯಂದು ಶ್ರಾದ್ಧವನ್ನು ಮಾಡಲು ಆಗದಿದ್ದರೆ ಸರ್ವಪಿತ್ರೀ ಅಮಾವಾಸ್ಯೆಯಂದು ಶ್ರಾದ್ಧವನ್ನು ಮಾಡುವುದರಿಂದ ಮೃತ ವ್ಯಕ್ತಿಗೆ ಅದರ ಲಾಭವಾಗುತ್ತದೆ. ಮೃತ ವ್ಯಕ್ತಿಯ ಶ್ರಾದ್ಧವನ್ನು ಮಾಡುವ ತಿಥಿಯು ಜನನಾಶೌಚ ಅಥವಾ ಮರಣಾಶೌಚ ಇರುವ ಸಮಯದಲ್ಲಿ ಬಂದರೆ ಆಗ ಸರ್ವಪಿತ್ರೀ ಅಮಾವಾಸ್ಯೆಯಂದು ಶ್ರಾದ್ಧವನ್ನು ಮಾಡಬಹುದು. ಈ ದಿನದಂದು ಹೆಚ್ಚಿನ ಎಲ್ಲಾ ಮನೆಗಳಿಂದ ಕನಿಷ್ಟ ಒಬ್ಬ ಬ್ರಾಹ್ಮಣನನ್ನಾದರೂ ಭೋಜನಕ್ಕೆ ಕರೆಯುತ್ತಾರೆ. ಕೆಲವರಲ್ಲಿ ಬ್ರಾಹ್ಮಣರಿಗೆ ಆಹಾರಸಾಮಗ್ರಿಗಳನ್ನು ಕೊಡುವ ರೂಢಿಯಿದೆ.

**ಶ್ರಾದ್ಧಕ್ಕೆ ಯೋಗ್ಯ ಕಾಲ**

**ದಿನವನ್ನು 5 ಭಾಗಗಳಾಗಿ ಮಾಡಿದರೆ ಅದರ ನಾಲ್ಕನೆಯ ಭಾಗಕ್ಕೆ ಅಪರಾಹ್ನ ಎನ್ನುತ್ತಾರೆ. ಇದನ್ನು ಶ್ರಾದ್ಧಕ್ಕೆ ಯೋಗ್ಯಕಾಲವೆಂದು ತಿಳಿಯಬೇಕು.**

# ಮೂರು ನ್ಯಾಯಾಲಯದಲ್ಲಿ 493 ಪ್ರಕರಣ ಇತ್ಯರ್ಥ

## ವ್ಯಾಜ್ಯ ಪೂರ್ವ ಪ್ರಕರಣಗಳು ಬ್ಯಾಂಕ್ 38 ಪ್ರಕರಣಗಳು, ಕಂದಾಯ ಇಲಾಖೆಯ 1971 ವ್ಯಾಜ್ಯಪೂರ್ವ ಪ್ರಕರಣಗಳು ಇತ್ಯರ್ಥ

• ಉದಯವಾಹಿನಿ,ಚಿಂಚೋಳಿ

ಪಟ್ಟಣದ ಮೂರು ನ್ಯಾಯಾಲಯದಿಂದ 493 ಪ್ರಕರಣಗಳು ಇತ್ಯರ್ಥಪಡಿಸಿ ಇದರಲ್ಲಿ ವ್ಯಾಜ ಪೂರ್ವ ಪ್ರಕರಣಗಳು ಬ್ಯಾಂಕ್ 38 ಪ್ರಕರಣಗಳು, ಕಂದಾಯ ಇಲಾಖೆಯ 1971 ವ್ಯಾಜ್ಯಪೂರ್ವ ಪ್ರಕರಣಗಳು ಇತ್ಯರ್ಥಗೊಂಡಿರುತ್ತವೆ ಈ ಎಲ್ಲಾ ಪ್ರಕರಣಗಳಿಂದ ಒಟ್ಟು 31,56,000 ರೂ.ಗಳ ಹಣವನ್ನು ವ್ಯವಹಾರ ಆಗಿರುತ್ತದೆ ಎಂದು ತಾಲ್ಲೂಕಾ ಕಾನೂನು ಸೇವಾ ಸಮಿತಿ ತಿಳಿಸಿದೆ.

ಪಟ್ಟಣದ ನ್ಯಾಯಾಲಯದಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮದಲ್ಲಿ ಪ್ರಧಾನ ಸಿವಿಲ್ ನ್ಯಾಯಾಲಯದ ನ್ಯಾಯಾಧೀಶರಾದ ದತ್ತಕುಮಾರ ಜವಳಕರ್ ನೇತೃತ್ವದಲ್ಲಿ ಜರುಗಿತ್ತು ತದನಂತರ ಮಾತನಾಡಿದ ನ್ಯಾಯಾಧೀಶರು ಜನತಾ ನ್ಯಾಯಾಲಯದಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ಲೋಕ್ ಅದಾಲತ್ ನಡೆಸುವುದರಿಂದ ಜನರಿಗೆ ಸಮಯದ ಉಳಿತಾಯ ಹಾಗೂ ಬೇಗನೆ ನ್ಯಾಯ ದೊರಕಿಸಿ ಕೊಡುವುದು ಹಾಗೂ ಹಣದ ಉಳಿತಾಯ ಪ್ರಕರಣಗಳನ್ನು ಈ ರೀತಿ ರಾಷ್ಟ್ರೀಯ ಲೋಕ ಅದಾಲತ ನಡೆಸುವುದರಿಂದ ಆದಷ್ಟು ತೀವ್ರವಾಗಿ ಜನರಿಗೆ ಸಹಕಾರಿಯಾಗಲೆಂದು ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮವನ್ನು ಸುಪ್ರೀಂಕೋರ್ಟ ಆದೇಶದಂತೆ ನಡೆಸಲಾಗುವುದು ಎಂದು ಹೇಳಿದರು.


ಉದಯವಾಹಿನಿ ಚಿತ್ರ

**31.56 ಲಕ್ಷ ರೂ. ವ್ಯವಹಾರ**

**ಪ್ರಧಾನ ಸಿವಿಲ್ ನ್ಯಾಯಾಲಯದಲ್ಲಿ:** ಒಟ್ಟು 293 ಪ್ರಕರಣಗಳು ಕೈಗೆತ್ತಿಕೊಂಡು ಅದರಲ್ಲಿ ಎನ್‌ಐ ಎಕ್ಟ್ ಒಂದು ಪ್ರಕರಣದಿಂದ 1.50 ಲಕ್ಷ ರೂ.ಪರಿಹಾರವಾಗಿ ಇತ್ಯರ್ಥಗೊಳಿಸಲಾಯಿತು,ಹಾಗೂ 267 ಜನನ ಪ್ರಮಾಣ ಪತ್ರಕ್ಕಾಗಿ ಅರ್ಜಿಗಳು ದಾಖಲಾಗಿದ್ದು,ಇದರಲ್ಲಿ 265 ಪ್ರಕರಣಗಳು ಇತ್ಯರ್ಥಗೊಂಡಿವೆ,ಪೋಲಿಸ್ ಇಲಾಖೆಯು 19 ದಂಡ ಪ್ರಕರಣಗಳು ಇತ್ಯರ್ಥಪಡಿಸಿ,ಒಟ್ಟು 580 ಪಕ್ರರಣಗಳು ಇತ್ಯರ್ಥವಾಗಿದ್ದು,ಒಟ್ಟು ಹಣ 64,900 ರೂ. ವಸೂಲಾಗಿದೆ,ಎಸ್.ಬಿ.ಐ ಬ್ಯಾಂಕ್ ಹಾಗೂ ಕೆಜಿಬಿ ಬ್ಯಾಂಕ್ ಗಳ 39 ವ್ಯಾಜಪೂರ್ವ ಪ್ರಕರಣಗಳು ರಾಜಿಯಾಗಿದ್ದು,ಇವುಗಳಿಂದ ಒಟ್ಟು 40,20,200 ರೂ.ವಸೂಲಾಗಿದೆ,ಮತ್ತು ಕಂದಾಯ ಇಲಾಖೆಯ ಪಿ.ಎಲ್.ಸಿ ಪ್ರಕರಣ 1971 ಪ್ರಕರಣಗಳು ಮುಕ್ತಾಯವಾಗಿರುತ್ತದೆ.

ಈ ಸಂದರ್ಭದಲ್ಲಿ ವಕೀಲರ ಸಂಘದ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ, ಮಾಜಿ ಅಧ್ಯಕ್ಷ ಬಿ.ಸುದರ್ಶನ, ವಿಶ್ವನಾಥ್ ಬೆನಕಿನ್, ಜಗನ್ನಾಥ ಅಗ್ನಿಹೋತ್ರಿ, ಶಿವಶರಣಪ್ಪ ಜಾಪಟ್ಟಿ, ಶ್ರೀನಿವಾಸ ಭಂಡಿ, ಚಂದ್ರಶೇಟ್ಟಿ ಜಾಧವ, ಸಂಜುಕುಮಾರ ಮೇತ್ರಿ, ಶಂಕರ ರಾಠೋಡ್, ವಿಜಯಕುಮಾರ ರಾಠೋಡ್, ರಾಜು ರೇವನೂರ, ಸೂರ್ಯಕಾಂತ, ಮಲ್ಲಿಕಾರ್ಜುನ, ಅಲ್ಲಾಪುರ, ಅರುಣ ಹೇಗ್ಡೆ, ಭೀಮಾಶಂಕರ, ಚಂದ್ರಶೇಖರ ಮಾಲಸಾ, ಹಣಮಂತ ಹಿರೇಮನಿ, ಜಿಕೆ ಗೋಖಲೆ, ನೀಲಕಂಠ, ಮಲ್ಲಿಕಾರ್ಜುನ ಇದಲಾಯಿ, ಗಿರಿಧರ, ಜಗನ್ನಾಥ, ದೇವೀಂದ್ರಪ್ಪ, ಡಿಕೆ ಚವ್ಹಾಣ, ರಾಜಶೇಖರ ರೆಡ್ಡಿ, ರಾಜೇಂದ್ರ, ಕುಮಾರ್ ವರ್ಮಾ, ಅನೇಕ ವಕೀಲರು ಇದ್ದರು.

**ಒಟ್ಟು 215 ಪ್ರಕರಣಗಳು ಕೈಗೆತ್ತಿಗೊಂಡು ಅದರಲ್ಲಿ 205 ಪ್ರಕರಣಗಳು ಇತ್ಯರ್ಥಪಡಿಸಿ ಅವುಗಳಲ್ಲಿ ಒಂದು ಪಾಲುಗಾರಿಕೆ ಪ್ರಕರಣ ಇತ್ಯರ್ಥವಾಗಿದೆ,125 ಸಿಆರ್.ಪಿ.ಸಿ ಪ್ರಕರಣ ಒಂದು ಇತ್ಯರ್ಥವಾಗಿದೆ, ಜನನ ಪ್ರಮಾಣ ಪತ್ರಕ್ಕಾಗಿ 171 ಪ್ರಕರಣಗಳು ದಾಖಲಾಗಿದ್ದು ಅದರಲ್ಲಿ 170 ಪ್ರಕರಣಗಳನ್ನು ಇತ್ಯರ್ಥವಾಗಿವೆ, ಪೊಲೀಸ್ ಇಲಾಖೆಯ ದಂಡದ ಪ್ರಕರಣಗಳು 33 ಪ್ರಕರಣ ಮುಕ್ತಾಯಗೊಳಿಸಿ ಇದರಿಂದ ಒಟ್ಟು 40,300ರೂ. ವಸೂಲಾದೆ ಎಂದು ತಾಲ್ಲೂಕಾ ಕಾನೂನು ಸೇವಾ ಸಮಿತಿ ಪ್ರಕಟಣೆ ಹೊರಡಿಸಿ ತಿಳಿಸಿದ್ದಾರೆ.**

---

# ರಾಜಿ ಸಂಧಾನದ ಮೂಲಕ 2095 ಪ್ರಕರಣ ಇತ್ಯರ್ಥ

• ಉದಯವಾಹಿನಿ, ಬಸವನಬಾಗೇವಾಡಿ

ಪಟ್ಟಣದ ತಾಲ್ಲೂಕು ಕಾನೂನು ಸೇವಾ ಸಮಿತಿ ವತಿಯಿಂದ ಶನಿವಾರ ನ್ಯಾಯಾಲಯಗಳ ಸಂಕೀರ್ಣದಲ್ಲಿ ರಾಷ್ಟ್ರೀಯ ಲೋಕ ಅದಾಲತನ್ನು ಏರ್ಪಡಿಸಲಾಗಿತ್ತು.

ಸದರಿ ಲೋಕ ಅದಾಲತ್‌ನಲ್ಲಿ ನಾಲ್ಕು ನ್ಯಾಯಾಲಯಗಳಿಗೆ ಸಂಬಂಧಿಸಿದಂತೆ ಒಟ್ಟು 8369 ಬಾಕಿ ಇರುವ ಪ್ರಕರಣಗಳಲ್ಲಿ 3209 ಪ್ರಕರಣಗಳನ್ನು ಕೈಗೆತ್ತಿಕೊಳ್ಳಲಾಗಿತ್ತು.ಸದರಿ ಪ್ರಕರಣಗಳಲ್ಲಿ ಒಟ್ಟು 2095 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿದೆ.

ಅದರಲ್ಲಿ ಅಪರಾಧ ಪ್ರಕರಣಗಳು, ಎಂವಿಸಿ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು, ಮೆಂಟೇನೆನ್ಸ್ ಪ್ರಕರಣಗಳು , ಪಾಲು ವಾಟ್ನಿ ದಾವೆಗಳು, ಎಲ್ ಎ ಸಿ ಇಪಿ ಪ್ರಕರಣಗಳು, ಎಮ್ ವಿ ಸಿ, ಇ ಪಿ ಪ್ರಕರಣಗಳು ಅಪರಾಧ ದಂಡ ಪ್ರಕರಣಗಳನ್ನು ರಾಜಿ ಸಂಧಾನ ಮೂಲಕ ಇತ್ಯರ್ಥ ಪಡಿಸಲಾಯಿತು.

ಪೂರ್ವದಾವೆ ಪ್ರಕರಣಗಳಲ್ಲಿ, ಟ್ರಾಫಿಕ್ ಚಲನ್ ಪ್ರಕರಣಗಳು, ಕಂದಾಯ ಇಲಾಖೆಯ ಕಂದಾಯ ಅದಾಲತ್ ಪ್ರಕರಣಗಳು, ಹಾಗೂ ಬ್ಯಾಂಕಿನ ಪ್ರಕರಣಗಳು ಹಾಗೂ ಹೆಸ್ಕಾಂ ವಿಭಾಗದ ವಿದ್ಯುತ್ ಬಾಕಿ ಪಾವತಿ ಪ್ರಕರಣಗಳು, ಒಟ್ಟು ಸೇರಿ. 38919 ಪ್ರಕರಣಗಳಲ್ಲಿ 38560 ಪ್ರಕರಣಗಳು ರಾಜಿ ಸಂಧಾನದ ಮೂಲಕ ಇತ್ಯರ್ಥಗೊಂಡಿವೆ.


ಉದಯವಾಹಿನಿ ಚಿತ್ರ

ಸದರಿ ಮೇಲ್ಕಾಣಿಸಿದ ಪ್ರಕರಣಗಳನ್ನು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷರಾದ .ಶಶಿಧರ ಎಂ. ಗೌಡ, ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಈಶ್ವರ ಮುಸಲ್ಮಾರಿ, ಸದಸ್ಯ ಕಾರ್ಯದರ್ಶಿಗಳಾದ ಅಮಿತ ಘಟ್ಟಿ ಹಾಗೂ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಈರಪ್ಪ ಢವಳೇಶ್ವರ ಇವರುಗಳು ರಾಜೀಸಂಧಾನದ ಮೂಲಕ ಇತ್ಯರ್ಥ ಪಡಿಸಿರುತ್ತಾರೆ.

ಸದರಿ ಲೋಕ ಅದಾಲತ್ ನಲ್ಲಿ ಸಂಧಾನಕಾರರಾಗಿ ಬಿ.ಪಿ..ಪತ್ತಾರ,ಆಯ್.ಎ.ಪರಮಗೊಂಡ, .ಎಸ್. ಆರ್.ಕೊರಬು, ಆರ್.ಎಸ್.ಪವಾರ ವಕೀಲರುಗಳು, ತಾಲ್ಲೂಕಾ ಕಾನೂನು ಸೇವಾ ಸಮಿತಿಯ ಆಡಳಿತ ಸಹಾಯಕರು, ನ್ಯಾಯಾಲಯ ಸಿಬ್ಬಂದಿ ವರ್ಗದವರು, ಬ್ಯಾಂಕ್ ಸಿಬ್ಬಂದಿಗಳು, ಪೊಲೀಸ್ ಇಲಾಖೆಯ ಸಿಬ್ಬಂದಿಗಳು, ನ್ಯಾಯವಾದಿಗಳು ಹಾಗೂ ಇನ್ನಿತರರು ಭಾಗವಹಿಸಿದ್ದರು.


---

# ಭಾರತ-ಪಾಕಿಸ್ತಾನ ಪಂದ್ಯ ರದ್ದುಪಡಿಸಿ: ಮುತಾಲಿಕ

• ಉದಯವಾಹಿನಿ, ಬೆಳಗಾವಿ

ದುಬೈನಲ್ಲಿ ಭಾರತ ಮತ್ತು ಪಾಕಿಸ್ತಾನ ಮಧ್ಯೆ ಭಾನುವಾರ ನಿಗದಿಯಾಗಿರುವ ಏಷ್ಯಾ ಕಪ್ ಕ್ರಿಕೆಟ್ ಪಂದ್ಯ ರದ್ದುಪಡಿಸಬೇಕು ಎಂದು ಶ್ರೀ ರಾಮಸೇನೆ ಮುಖ್ಯಸ್ಥ ಪ್ರಮೋದ ಮುತಾಲಿಕ ಒತ್ತಾಯಿಸಿದರು.

ಇಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪೆಹಲ್ಗಾಮ್ ಘಟನೆ ನಡೆದು ಐದು ತಿಂಗಳಷ್ಟೇ ಆಗಿದೆ. ಅದರಲ್ಲಿ ಹತ್ಯೆಯಾದ 26 ಕುಟುಂಬದವರು ಇನ್ನೂ ಕಣ್ಣೀರು ಸುರಿಸುತ್ತಲೇ ಇದ್ದಾರೆ. ಪಾಕ್ ವಿರುದ್ಧ ಅವರ ಸಿಟ್ಟು ಇನ್ನೂ ಜೀವಂತವಾಗಿದೆ. ಹೀಗಿರುವಾಗ ಇಷ್ಟು ಆತುರದಲ್ಲಿ ಪಾಕಿಸ್ತಾನ ತಂಡದೊಂದಿಗೆ ಭಾರತ ತಂಡದವರು ಆಟವಾಡುವ ಅವಶ್ಯಕತೆ ಮತ್ತು ಅನಿವಾರ್ಯತೆ ಏನಿತ್ತು ಎಂದು ಪ್ರಶ್ನಿಸಿದರು. ಪಾಕಿಸ್ತಾನ ತಂಡದೊಂದಿಗೆ ಆಟವಾಡಲು ನಮಗೆ ದೇಶಾಭಿಮಾನ ಇಲ್ಲವೇ? ಮತ್ತು ಕೇಂದ್ರ ಸರ್ಕಾರಕ್ಕೆ ಸ್ವಾಭಿಮಾನ ಇಲ್ಲವೇ? ಭಯೋತ್ಪಾದಕ ರಾಷ್ಟ್ರಕ್ಕೆ ಆಟವಾಡಲು ಏಕೆ ಹೋಗಿದ್ದೀರಿ. ಈ ನಾಟಕ ಆಡುವುದನ್ನು ಬಿಡಬೇಕು ಎಂದು ಆಗ್ರಹಿಸಿದರು. ಹಿಂದೂಗಳ ಸುರಕ್ಷತೆ ದೃಷ್ಟಿಯಿಂದ ದೇಶದಲ್ಲಿ ಮೂರು ಬಾರಿ ಬಿಜೆಪಿ ಅಧಿಕಾರಕ್ಕೆ ಬಂದಿದೆ. ಆಪರೇಷನ್ ಸಿಂಧೂರ ಕಾರ್ಯಾಚರಣೆ ನಂತರ, ಎಲ್ಲವನ್ನೂ ಬಹಿಷ್ಕರಿಸಿದ್ದೀರಿ. ಪಾಕ್ ಜತೆಗಿನ ಎಲ್ಲಾ ಸಂಬಂಧ ಕಡಿತಗೊಳಿಸಿದ್ದೀರಿ. ಈಗ ಕ್ರಿಕೆಟ್ ಆಡುತ್ತಿರುವುದು ದೇಶಕ್ಕೆ ಮಾಡಿದ ದ್ರೋಹ ಎಂದು ಆರೋಪಿಸಿದರು.



### ಒಲೈಕೆ ಇರುವವರೆಗೂ ಈ ರೀತಿ ಘಟನೆ

**ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ಮುಸ್ಲಿಂ ಸಮುದಾಯದವರು ಕಲ್ಲುತೂರಾಟ ನಡೆಸಿದ ಘಟನೆ ನಡೆದಿರುವುದು ಇದೇ ಮೊದಲಲ್ಲ, ಕೊನೇ ಅಲ್ಲ. ಕೆಲವರ ಮಾನಸಿಕತೆ ಬದಲಾಗುವವರೆಗೂ ಈ ರೀತಿಯ ಘಟನೆ ನಡೆಯುತ್ತವೆ. ಕಾಂಗ್ರೆಸ್‌ನವರು ಮಾಡುತ್ತಿರುವ ಮುಸ್ಲಿಮರ ಓಲೈಕೆಯೇ ಇದಕ್ಕೆ ಕಾರಣ. ಇಂಥ ಕೃತ್ಯ ಕೈಗೊಳ್ಳುವವರಿಗೆ ಹಿಂದೂ ಸಮಾಜ ಉತ್ತರ ಕೊಡುತ್ತದೆ ಎಂದು ಪ್ರಮೋದ ಮುತಾಲಿಕ ಹೇಳಿದರು. ಇಂದು ಮದರಸಾದಲ್ಲಿ ವಿಷ ತುಂಬುವ ಕೆಲಸವಾಗುತ್ತಿದೆ. ಪೊಲೀಸರು ತಪ್ಪಿತಸ್ಥರಿಗೆ ತಕ್ಕ ಶಿಕ್ಷೆ ನೀಡಬೇಕೇ ಹೊರತು, ರಾಜಕೀಯ ನಾಯಕರ ಅನತಿಯಂತೆ ಕೆಲಸ ಮಾಡಬಾರದು. ದೇಶದ್ರೋಹದ ಕೆಲಸವನ್ನು ಪೊಲೀಸರು ಮಾಡಬಾರದು ಎಂದರು.**

**ಪಾಕಿಸ್ತಾನದ ಜತೆ ಆಟವಾಡುವ ಮಾನಸಿಕತೆ ಏನು? ಕೇವಲ ಹಣದ ಅವಶ್ಯಕತೆಯೇ ಎಂದು ಪ್ರಶ್ನಿಸಿದ ಮುತಾಲಿಕ, ನಿಮಗೆ ಹಣ ಬೇಕಾದರೆ ಹೇಳಿ. 100 ಕೋಟಿ ಹಿಂದೂಗಳು ಸೇರಿಕೊಂಡು ಸಾಕಷ್ಟು ಹಣ ನೀಡುತ್ತೇವೆ. ನಾವು ಈ ಪಂದ್ಯ ಬಹಿಷ್ಕರಿಸುತ್ತೇವೆ ಎಂದರು.**

---

# 19 ಗ್ರಾಮಗಳ ಸೇರ್ಪಡೆಗೆ ಪತ್ರಗಳು ನಡುವೆ ಶಾಸಕದ್ವಯರು ಪರ ವಿರೋಧ ವ್ಯಕ್ತ

• ಉದಯವಾಹಿನಿ, ಸಿಂಧನೂರು

ಸಿಂಧನೂರು ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ತುರ್ವಿಹಾಳ ಪಟ್ಟಣ ಹಾಗೂ ಗುಂಜಳ್ಳಿ ಹೋಬಳಿಗಳಲ್ಲಿ ಬರುವ 19ಗ್ರಾಮಗಳನ್ನು ಮಸ್ಕಿ ತಾಲ್ಲೂಕು ಸೇರ್ಪಡೆ ಮಾಡುವ ವಿಚಾರವಾಗಿ ಬಹಳಷ್ಟು ಚರ್ಚೆಗೆ ಗ್ರಾಸವಾಗಿದ್ದು. ಇದರ ನಡುವೆ ಸಿಂಧನೂರು ಮತ್ತು ಮಸ್ಕಿ ಶಾಸಕರುಗಳು ಯಾರಿಗೂ ತಿಳಿಯದೆ ತಮ್ಮ ಪ್ರಭಾವವನ್ನು ವರ್ಚಸ್ಸು ಮೂಲಕ ಒಳ ಒಳಗೆ ಪರ -ವಿರೋಧಗಳ ನಡುವೆ ಪತ್ರಗಳು ಸಚಿವರಲ್ಲಿ ಹಾಗೂ ಜಿಲ್ಲಾಧಿಕಾರಿ ಕಚೇರಿಯಲ್ಲಿ ಓಡಾಡುತ್ತಿದ್ದು. ಪತ್ರದ ಚೆಂಡು ಇದರಲ್ಲಿ ಯಾರು ಬ್ಯಾಟ್ಸ್ ಮ್ಯಾನ್ ಯಾಗಿ ಹೊರಹೊಮ್ಮಿತ್ತಾರ ಕಾದು ನೋಡಬೇಕಿದೆ. ಹಲವು ದಶಕಗಳಿಂದ ಸಿಂಧನೂರು ಒಂದೇ ಕ್ಷೇತ್ರವಾಗಿದ್ದು. ತುರ್ವಿಹಾಳ, ಗುಂಜಳ್ಳಿ ಹೋಬಳಿಯಲ್ಲಿ ಬರುವ 19 ಗ್ರಾಮಗಳ ಎಲ್ಲವೂ ಸಿಂಧನೂರು ಕ್ಷೇತ್ರದ ವ್ಯಾಪ್ತಿಗೆ ಒಳಪಡುತ್ತಿದ್ದವು.ಯಾವಾಗ ಮಸ್ಕಿ ಕ್ಷೇತ್ರ ವಾಗಿ ಹೊರಬಿತ್ತು. ಎರಡು ತಾಲ್ಲೂಕು ಅಣ್ಣ-ತಮ್ಮಂದಿರು ಆಗಿ ಬಿಂಬಿತವಾಗಿರುವ.


ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ

ಈ ಎರಡು ವಿಧಾನ ಸಭಾ ಕ್ಷೇತ್ರಗಳ ಶಾಸಕರುಗಳು 19 ಗ್ರಾಮಗಳಲ್ಲಿ ಹಿಡಿತವನ್ನು ಸಾಧಿಸುವ ನಿಟ್ಟಿನಲ್ಲಿ ತಮ್ಮ ವೋಟ್ - ಬ್ಯಾಂಕ್‌ಗಳು ಗಿಟ್ಟಿಸಿಕೊಳ್ಳುವ ಉದ್ದೇಶದಿಂದ ಶಾಸಕ ಹಂಪನಗೌಡ ಬಾದರ್ಲಿ ಹಾಗೂ ಮಸ್ಕಿ ಶಾಸಕ ಬಸನಗೌಡ ಪಾಟೀಲ್ ತುರ್ವಿಹಾಳ ಇಬ್ಬರೂ ಪತ್ರಗಳು ಜಿಲ್ಲಾ ಉಸ್ತುವಾರಿ ಸಚಿವರಿಗೆ ನೀಡಿರುವ ಹಿನ್ನೆಲೆಯಲ್ಲಿ ಪರ - ವಿರೋಧ ಚರ್ಚೆಗಳು ನಡೆದಿರುವುದು ಈಗ ತುರ್ವಿಹಾಳ ಹಾಗೂ ಗುಂಜಳ್ಳಿ ಹೋಬಳಿ ವ್ಯಾಪ್ತಿಯ ಜನರಲ್ಲಿ ಆತಂಕದ ಮನೆಮಾಡಿದೆ.

ತುರುವಿಹಾಳ ಹಾಗೂ ಗುಂಜಳ್ಳಿ ವ್ಯಾಪ್ತಿಯಲ್ಲಿ ಬರುವ ಕೆಲ ಗ್ರಾಮಗಳ ಸುಮಾರು 60 ರಿಂದ 65 ಕಿಮೀ. ದೂರ ವಾಗಿದ್ದು.


ಮಸ್ಕಿ ಶಾಸಕ ಬಸನಗೌಡ ಪಾಟೀಲ್ ತುರುವಿಹಾಳ

ಅಗತ್ಯವಾದ ಕೆಲಸ ಕಾರ್ಯಗಳಿಗೆ ತೆರಳಲು ಸಾಧ್ಯವಾಗಿಲ್ಲ. ಇದರ ನಡುವೆ ಮಸ್ಕಿ ಕ್ಷೇತ್ರದಲ್ಲಿ ಬಸ್ ಸೌಕರ್ಯ ಹಾಗೂ ಇತರ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಕೊರತೆ ಇದೆ. ಈಗಾಗಿ ಸಿಂಧನೂರು ತಾಲ್ಲೂಕು ಸೂಕ್ತ ಎನ್ನುವ ಮಾತುಗಳು ಜನರಲ್ಲಿ ಕೇಳಿ ಬರುತ್ತದೆ. ಈ ಸಮಸ್ಯೆಯು ಬಾದರ್ಲಿ ಪತ್ರಕ್ಕೆ ವಿರೋಧ ವಾಗಿದ್ದು ಕಂಡುಬರುತ್ತದೆ. ಇಬ್ಬರೂ ಶಾಸಕರುಗಳು ತಮ್ಮ ವೋಟ್ ಬ್ಯಾಂಕ್ ಗಿಟ್ಟಿಸಿಕೊಳ್ಳುವ ನಿಟ್ಟಿನಲ್ಲಿ ಪರ - ವಿರೋಧ ನಡುವೆ (ಇಬ್ಬರೂ ಜಗಳದಲ್ಲಿ) ಕೂಸು ಬಡವಾಯಿತು ಎಂಬಂತೆಯೇ ತುರುವಿಹಾಳ, ಗುಂಜಳ್ಳಿ ಹೋಬಳಿಯ ಜನರಲ್ಲಿ ಮನೆಮಾಡಿದೆ.

ಆದರೆ ಜನರಿಗಾಗುವ ಸಮಸ್ಯೆಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳು ಯಾವ ರೀತಿಯ ಮನ್ನಣೆಗೆ ತಂದು ಸಮಸ್ಯೆಗಳು ಇತರ್ಥ ಮಾಡುತ್ತಾರೋ ಅಥವಾ ಇಲ್ಲವೋ ಕಾದು ನೋಡಬೇಕಿದೆ.

**ಸಿಂಧನೂರು ತಾಲ್ಲೂಕಿನ ಗುಂಜಳ್ಳಿ ವ್ಯಾಪ್ತಿಯ 3 ಮತ್ತು ತುರುವಿಹಾಳ ವ್ಯಾಪ್ತಿಯಲ್ಲಿ ಬರುವ 3 ಗ್ರಾಮ ಪಂಚಾಯಿತಿಯ 19 ಗ್ರಾಮಗಳು ಮಸ್ಕಿ ಕ್ಷೇತ್ರಕ್ಕೆ ಸೇರಿಸಬೇಕೆಂದು ಶಾಸಕ ಹಂಪನಗೌಡ ಬಾದರ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಗೆ ಹಾಗೂ ಜಿಲ್ಲಾಧಿಕಾರಿಗಳಿಗೆ ಪತ್ರ ಸಲ್ಲಿಸಿದ್ದು. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಮಸ್ಕಿ ಹಾಗೂ ಸಿಂಧನೂರು ತಾಲ್ಲೂಕು ತಹಶೀಲ್ದಾರ್ ಅವರಿಗೆ ಇದರ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿ ಸಂಪೂರ್ಣ ಮಾಹಿತಿ ಜೊತೆಗೆ ದಾಖಲೆಗಳೊಂದಿಗೆ ವರದಿಯನ್ನು ಎರಡು ದಿನಗಳ ಒಳಗಾಗಿ ಕಛೇರಿಗೆ ತಲುಪಿಸಿ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.**

---

# ಪ್ರಿಯಕರನೊಂದಿಗೆ ಸೇರಿ ಹೆತ್ತ ಮಗುವನ್ನೇ ಉಸಿರುಗಟ್ಟಿಸಿ ಕೊಂದ ತಾಯಿ

• ಉದಯವಾಹಿನಿ, ಹಾವೇರಿ

ಅನೈತಿಕ ಸಂಬಂಧಕ್ಕೆ ಅಡ್ಡಿಯಾಗಿದ್ದಾಳೆಂದು ಪ್ರಿಯಕರನೊಂದಿಗೆ ಸೇರಿ ಹೆತ್ತ ಮಗುವನ್ನೇ ಉಸಿರುಗಟ್ಟಿಸಿ ತಾಯಿ ಕೊಲೆ ಮಾಡಿರುವ ಘಟನೆ ಹಾವೇರಿ ಜಿಲ್ಲೆಯ ರಾಣೇಬೆನ್ನೂರು ತಾಲ್ಲೂಕಿನ ಗುಡ್ಡದ ಆನ್ವೇರಿ ಗ್ರಾಮದಲ್ಲಿ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಮೃತ ಮಗುವನ್ನು ಪ್ರಿಯಾಂಕಾ (4) ಎಂದು ಗುರುತಿಸಲಾಗಿದೆ. ರಾಣೇಬೆನ್ನೂರು ನಗರದ ಎಕೆಜಿ ಕಾಲನಿ ಗಂಗಮ್ಮ ಗುತ್ತಲ (36) ಹಾಗೂ ಗೌರಿಶಂಕರ ನಗರದ ಅಣ್ಣಪ್ಪ ಮಡಿವಾಳರ (40) ಕೊಲೆ ಮಾಡಿದ ಆರೋಪಿಗಳು ಎಂದು ಗುರುತಿಸಲಾಗಿದೆ.

ಆರೋಪಿಗಳಿಬ್ಬರು ಅನೈತಿಕ ಸಂಬಂಧ ಹೊಂದಿದ್ದರು. ಹೀಗಾಗಿ ಆರೋಪಿ ಗಂಗಮ್ಮ ಎರಡು ತಿಂಗಳ ಹಿಂದೆ ತನ್ನ ಪತಿಯನ್ನು ಬಿಟ್ಟು, ಮಗಳನ್ನು ಕರೆದುಕೊಂಡು ಅಣ್ಣಪ್ಪನ ಜೊತೆ ಗುಡ್ಡದ ಆನ್ವೇರಿ ಗ್ರಾಮದಲ್ಲಿ ವಾಸವಾಗಿದ್ದರು. ಆದರೆ ಈ ನಡುವೆ ತಮ್ಮ ಅಕ್ರಮ ಸಂಬಂಧಕ್ಕೆ ಮಗಳು ಅಡ್ಡಿಯಾಗುತ್ತಿದ್ದಾಳೆಂದು ಭಾವಿಸಿ, ಆಕೆಯ ಕೊಲೆಗೆ ಸಂಚು ರೂಪಿಸಿದ್ದರು.

ಅದರಂತೆ ಆ.5ರಂದು ಮಗಳನ್ನು ಉಸಿರುಗಟ್ಟಿಸಿ ಕೊಲೆ ಮಾಡಿ, ಬಳಿಕ ಹಾವೇರಿ ತಾಲ್ಲೂಕಿನ ಕುರಗುಂದ ಗ್ರಾಮದ ತುಂಗಾ ಮೇಲ್ದಂಡೆ ಯೋಜನೆಯ ಕಾಲುವೆ ಬಳಿ ಸುಟ್ಟು ಹಾಕಲು ಪ್ರಯತ್ನಿಸಿದ್ದರು. ನಂತರ ಬಾಲಕಿಯ ಅರ್ಧದೇಹ ಸುಟ್ಟ ಸ್ಥಿತಿಯಲ್ಲಿ ಪತ್ತೆಯಾಗಿದ್ದನ್ನು ಕಂಡ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದರು.


ಉದಯವಾಹಿನಿ ಚಿತ್ರ

ಘಟನಾ ಸ್ಥಳಕ್ಕೆ ಭೇಟಿ ನೀಡಿದ್ದ ಗುತ್ತಲ ಠಾಣೆ ಪೊಲೀಸರು ಬಾಲಕಿಯನ್ನು ಅಪರಿಚಿತ ಶವ ಎಂದು ಪರಿಗಣಿಸಿ, ಅಂತ್ಯಸಂಸ್ಕಾರ ನೆರವೇರಿಸಿದ್ದರು.

ಇದರಿಂದ ಬೇಸತ್ತ ಪತಿ ಮಂಜುನಾಥ ಮಗಳನ್ನು ಕೊಡಿಸುವಂತೆ ಶಹರ ಠಾಣೆ ಪಿಎಸ್‌ಐ ಗಡ್ಡಪ್ಪ ಗುಂಜುಟಗಿ ಮೊರೆ ಹೋಗಿದ್ದಾನೆ. ಆಗ ಪಿಎಸ್‌ಐ ಮಗಳ ವಿಚಾರವಾದರೆ ಕೂಡಲೇ ಬಗೆಹರಿಸುವೆ ಎಂದು ಗಂಗಮ್ಮ ಮತ್ತು ಅಣ್ಣಪ್ಪನನ್ನು ಕರೆತಂದು ವಿಚಾರಿಸಿದಾಗ ಕೊಲೆ ಪ್ರಕರಣ ಬೆಳಕಿಗೆ ಬಂದಿದೆ. ಸದ್ಯ ಪೊಲೀಸರು ಇಬ್ಬರು ಆರೋಪಿಗಳನ್ನು ವಶಕ್ಕೆ ಪಡೆದು, ಹೆಚ್ಚಿನ ವಿಚಾರಣೆ ನಡೆಸಿದ್ದಾರೆ. ಈ ಕುರಿತು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಅವಳಿಗೆ ಹುಷಾರಿಲ್ಲ

**ಇದೆಲ್ಲ ನಡೆದ ಸ್ವಲ್ಪ ದಿನಗಳ ಬಳಿಕ ಆರೋಪಿ ಗಂಗಮ್ಮಳ ಪತಿ ಮಂಜುನಾಥ ಮಗುವನ್ನು ನೀಡುವಂತೆ ಬೇಡಿಕೊಂಡಿದ್ದನು. ನೀನು ಅವನ ಜೊತೆಗೆ ಇರು, ಆದರೆ ನನ್ನ ಮಗಳನ್ನು ನನಗೆ ಕೊಟ್ಟುಬಿಡು ಎಂದು ಪಟ್ಟುಹಿಡಿದ್ದಿದ್ದ. ಆಗ ಗಂಗಮ್ಮ ಮಗಳು ಮೈಸೂರಿನಲ್ಲಿದ್ದಾಳೆ, ಅವಳಿಗೆ ಹುಷಾರಿಲ್ಲ, ಆಸ್ಪತ್ರೆಯಲ್ಲಿದ್ದಾಳೆ ಎಂದು ಕಥೆ ಕಟ್ಟಿ, ಒಂದು ತಿಂಗಳು ಕಾಲಕಳೆದಿದ್ದಳು.**

---

# ಏರ್‌ಪೋರ್ಟ್ ನಿರ್ವಹಣೆ ರಾಜ್ಯ ಸರ್ಕಾರಕ್ಕೆ ವಹಿಸಿ ದೊಡ್ಡ ತಪ್ಪು ಮಾಡಿಬಿಟ್ಟೆ: ಬಿ.ವೈ ರಾಘವೇಂದ್ರ

• ಉದಯವಾಹಿನಿ, ಶಿವಮೊಗ್ಗ

ವಿಮಾನ ನಿಲ್ದಾಣವನ್ನು ರಾಜ್ಯ ಸರ್ಕಾರದ ನಿರ್ವಹಣೆಗೆ ಕೊಟ್ಟು ದೊಡ್ಡ ತಪ್ಪು ಮಾಡಿಬಿಟ್ಟೆ ಎಂದು ಸಂಸದ ಬಿ.ವೈ. ರಾಘವೇಂದ್ರ ಬೇಸರ ವ್ಯಕ್ತಪಡಿಸಿದರು. ನಗರದ ಡಿಸಿ ಕಚೇರಿ ಆವರಣದಲ್ಲಿ ಮಾಧ್ಯಮಗಳ ಜೊತೆ ಅವರು ಮಾತನಾಡಿದರು. ಈ ವೇಳೆ, ವಿಮಾನ ಶಿವಮೊಗ್ಗದಲ್ಲಿ ಲ್ಯಾಂಡ್ ಆಗದೆ ಹುಬ್ಬಳ್ಳಿಗೆ ತೆರಳಿತ್ತು. ಹುಬ್ಬಳ್ಳಿಯಿಂದ ರಸ್ತೆ ಮಾರ್ಗವಾಗಿ ನಾನು ಶಿವಮೊಗ್ಗಕ್ಕೆ ಆಗಮಿಸಿದೆ. ನಮ್ಮೂರಿನಲ್ಲೇ ವಿಮಾನ ನಿಲ್ದಾಣವಿದ್ದರೂ ಇನ್ನೊಂದು ಊರಿಗೆ ಹೋಗಿ ಬರುವಂತಹ ದುಸ್ಥಿತಿ ಇದೆ ಎಂದು ಬೇಸರವಾಗುತ್ತದೆ.

ನಮ್ಮ ತಂದೆ ಮುಖ್ಯಮಂತ್ರಿ ಆಗಿದ್ದಾಗ ವಿಮಾನ ನಿಲ್ದಾಣದ ನಿರ್ವಹಣೆಯನ್ನು ರಾಜ್ಯ ಸರ್ಕಾರಕ್ಕೆ ವಹಿಸಿಬಿಟ್ಟೆ. ಇದು ನಾನು ಮಾಡಿದ ದೊಡ್ಡ ತಪ್ಪು ಎಂದು ಈಗ ಅನಿಸಲು ಶುರುವಾಗಿದೆ. ವಿಮಾನ ನಿಲ್ದಾಣದ ನಿರ್ವಹಣೆಯನ್ನು ಭಾರತೀಯ ವಿಮಾನಯಾನ ಪ್ರಾಧಿಕಾರಕ್ಕೆ ವಹಿಸಿದ್ದರೆ ಎಲ್ಲಾ ಕೆಲಸಗಳು ಸುಗಮವಾಗುತ್ತಿತ್ತು. ನೈಟ್ ಲ್ಯಾಂಡಿಂಗ್ ವ್ಯವಸ್ಥೆಗೆ ಪೂರಕವಾದ ಉಪಕರಣಗಳನ್ನು ತರಿಸಿ ಮೂರು ತಿಂಗಳಾಗಿದೆ. ಇವುಗಳ ಅಳವಡಿಕೆಗೆ ಎರಡರಿಂದ ಮೂರು ಕೋಟಿ ರೂ. ಅಗತ್ಯವಿದೆ. ಟೆಂಡರ್ ಕರೆಯಲು ವಿಳಂಬವಾಗುತ್ತಿದೆ.


ಉದಯವಾಹಿನಿ ಚಿತ್ರ

ಇದರ ಬದಲು ನಿರ್ಮಿತಿ ಕೇಂದ್ರಕ್ಕೆ ವಹಿಸಿದ್ದರೆ ಟೆಂಡರ್ ರಹಿತವಾಗಿ ಕಾಮಗಾರಿ ಪೂರ್ಣಗೊಳಿಸುತ್ತಿದ್ದರು.

ಸರ್ಕಾರ ಒಂದು ಕೋಟಿ ರೂ. ಕೊಡಲು ಸಂಪುಟ ಸಭೆ ನಡೆಸಬೇಕು ಎನ್ನುತ್ತಿದೆ. ರಾಜ್ಯ ಸರ್ಕಾರದಿಂದ ಹಣ ಕೊಡಲೂ ವಿಳಂಬವಾಗುತ್ತಿದೆ. ಕೆಲಸ ಆರಂಭಿಸಲೂ ತಡವಾಗುತ್ತಿದೆ. ಇದರಿಂದ ನಮಗೆ ದೊರೆಯಬೇಕಿದ್ದ ಅವಕಾಶ ಬೇರೆಯವರ ಪಾಲಾಗುತ್ತಿದೆ ಎಂದು ಬೇಸರ ಹೊರಹಾಕಿದ್ದಾರೆ. ಸರ್ಕಾರ ಕೂಡಲೇ ನೈಟ್ ಲ್ಯಾಂಡಿಂಗ್ ಉಪಕರಣಗಳನ್ನು ಅಳವಡಿಸಿ ಕೊಡಬೇಕು. ಆ ಬಳಿಕ ದೆಹಲಿಯಲ್ಲಿ ಚರ್ಚೆ ನಡೆಸಿ ಮತ್ತಷ್ಟು ವಿಮಾನಗಳನ್ನು ತರಿಸುವ ಪ್ರಯತ್ನ ಮಾಡುತ್ತೇನೆ. ಇಲ್ಲವಾದಲ್ಲಿ ಇಂತಹ ಮೋಡದ ವಾತಾವರಣ ಇದ್ದರೆ ಅನೇಕ ವಿಮಾನಗಳು ರದ್ದಾಗುತ್ತವೆ ಎಂದಿದ್ದಾರೆ.

---

# ರಾಜ್ಯದಲ್ಲಿರುವುದು ಅಭಿವೃದ್ಧಿ ಶೂನ್ಯ ಸರ್ಕಾರ: ಗೋವಿಂದ ಕಾರಜೋಳ

## ಮನೆಗಂದಾಯ, ನೀರಿನ ಕರ, ವಿದ್ಯುತ್ ದರ ಹೆಚ್ಚಿಸಿ ಜನಸಾಮಾನ್ಯರ ಬದುಕಿನ ಮೇಲೆ ಬರೆ ಹಾಕಿದ್ದಾರೆ


• ಉದಯವಾಹಿನಿ, ಗದಗ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡೂವರೆ ವರ್ಷಗಳಾದವು. ಆದರೆ, ಸ್ವಾತಂತ್ರ್ಯ ಬಂದು ಇಷ್ಟು ವರ್ಷಗಳ ಅವಧಿಯಲ್ಲಿ ಇಂತಹ ಕೆಟ್ಟ, ಭ್ರಷ್ಟ ಹಾಗೂ ಅಭಿವೃದ್ಧಿ ಶೂನ್ಯ ಸರ್ಕಾರವನ್ನು ನೋಡಿಲ್ಲ ಎಂದು ಸಂಸದ ಗೋವಿಂದ ಕಾರಜೋಳ ಟೀಕಿಸಿದರು. ನೀರಾವರಿ ಯೋಜನೆಗಳು, ಹೊಸ ರಸ್ತೆ ಕೆಲಸಗಳು ಆಗಿಲ್ಲ. ಬೆಲೆಗಳು ಗಗನಕ್ಕೇರಿವೆ. ಮದ್ಯದ ಬೆಲೆ ಶೇ 400ರಷ್ಟು ಹೆಚ್ಚಾಗಿದೆ. ಮನೆಗಂದಾಯ, ನೀರಿನ ಕರ, ವಿದ್ಯುತ್ ದರ ಹೆಚ್ಚಿಸಿ ಜನಸಾಮಾನ್ಯರ ಬದುಕಿನ ಮೇಲೆ ಬರೆ ಹಾಕಿದ್ದಾರೆ. ಎರಡು ವರ್ಷಗಳ ಬಜೆಟ್‌ನಲ್ಲಿ 38 ಸಾವಿರ ಕೋಟಿ ಎಸ್‌ಇಪಿ ಟಿಎಸ್‌ಪಿ ಹಣವನ್ನು ಕಾಂಗ್ರೆಸ್ ಸರ್ಕಾರ ಅನ್ಯ ಕಾರ್ಯಕ್ರಮಗಳಿಗೆ ಬಳಕೆ ಮಾಡಿಕೊಂಡಿದೆ ಎಂದು ಪತ್ರಿಕಾಗೋಷ್ಠಿಯಲ್ಲಿ ಹರಿಹಾಯ್ದರು.

ಜಾತಿ ಧರ್ಮಗಳ ನಡುವೆ ವಿಷ ಬೀಜ ಬಿತ್ತುವ ಕೆಲಸವನ್ನು ಕಾಂಗ್ರೆಸ್ ಮಾಡುತ್ತಿದೆ. ಹಿಂದೂ ಹಬ್ಬಗಳ ಸಂದರ್ಭದಲ್ಲಿ ಕೋಮು ಗಲಭೆ ಸೃಷ್ಟಿಸಿ ಪೊಲೀಸರ ಸರ್ಪಗಾವಲು ಹಾಕುವ ಮೂಲಕ ಹಬ್ಬಗಳನ್ನು ನೆಮ್ಮದಿಯಾಗಿ ಆಚರಿಸಲು ತಡೆ ಒಡ್ಡುತ್ತಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ ಎಂದು ಹರಿಹಾಯ್ದರು.

ಅಹಿಂದ ನಾಯಕ ಎಂದು ಕರೆದುಕೊಳ್ಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೋಮು ಸೌಹಾರ್ದ ಹಾಳು ಮಾಡುತ್ತಿದ್ದಾರೆ. ಒಡೆದಾಳುವ ನೀತಿಯಲ್ಲಿ ಸಿಎಂ ನಿಸ್ಸಿಮರು ಎಂದು ಆರೋಪ ಮಾಡಿದರು.

ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರ ಎಸ್‌ಸಿಗೆ ಶೇ 17, ಎಸ್‌ಟಿಗೆ ಶೇ 7ರಷ್ಟು ಮೀಸಲಾತಿ ಹೆಚ್ಚಿಸಿದ್ದರು. ಆದರೆ, ಕಾಂಗ್ರೆಸ್ ಶಾಸಕರು ಎಸ್‌ಸಿ, ಎಸ್‌ಟಿ ಮೀಸಲಾತಿ ಹೆಚ್ಚಳ ಮಾಡಿಲ್ಲ ಎಂದು ಸದನದಲ್ಲಿ ಸುಳ್ಳು ಹೇಳಿದ್ದರು. ಈಗ ಶೇ 17ರಷ್ಟು ಮೀಸಲಾತಿಯಲ್ಲಿ ಎಡ, ಬಲ, ತೃತೀಯ ಎಂದು ಕಾಂಗ್ರೆಸ್ ಹಂಚಿಕೆ ಮಾಡಿದೆ. ಹಾಗಿದ್ದರೆ ಶೇಕಡ 17ರಷ್ಟು ಮೀಸಲು ಎಲ್ಲಿಂದ ಬಂತು ಎಂದು ಪ್ರಶ್ನಿಸಿದರು. ಬಿಜೆಪಿ ಗದಗ ಜಿಲ್ಲಾ ಘಟಕದ ಅಧ್ಯಕ್ಷ ರಾಜು ಕುರಡಗಿ, ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಮುಖಂಡರಾದ ಮಂಜು ನಾಥ ಮುಳಗುಂದ, ವಿಜಯಲಕ್ಷ್ಮಿ ಮಾನಿ, ಎಂ.ಎಂ.ಹಿರೇಮಠ ಇದರು.



### ಪ್ರಧಾನಿ ಮೋದಿ ಅಭಿನವ ಬಸವಣ್ಣ

**ಪ್ರಧಾನಿ ನರೇಂದ್ರ ಮೋದಿ ಅಭಿನವ ಬಸವಣ್ಣ ಇದ್ದಂತೆ' ಎಂದು ಸಂಸದ ಗೋವಿಂದ ಕಾರಜೋಳ ಹೇಳಿದರು. 12ನೇ ಶತಮಾನದಲ್ಲಿ ಮಹಿಳಾ ಸಮಾನತೆಗಾಗಿ ಬಸವಣ್ಣ ಹೋರಾಡಿದ್ದರು. ಈಗ ಪ್ರಧಾನಿ ದಿಟ್ಟ ಹೆಜ್ಜೆ ಇರಿಸಿದ್ದಾರೆ. 2028ರ ಚುನಾವಣೆಯಲ್ಲಿ ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿಗೆ ಕಾನೂನು ಬರಲಿದೆ. ಮಹಿಳೆಯರಿಗೆ ಹೆಚ್ಚಿನ ರಾಜಕೀಯ ಪ್ರಾತಿನಿಧ್ಯ ಸಿಗಲಿದೆ ಎಂದು ಸುದ್ದಿಗಾರರಿಗೆ ತಿಳಿಸಿದರು. ಮಹಿಳಾ ಮೀಸಲಾತಿ ಜಾರಿಗಾಗಿಯೇ ಕೇಂದ್ರ ಸರ್ಕಾರ ಜನಗಣತಿ, ಜಾತಿಗಣತಿಗೆ ನಿರ್ಧರಿಸಿದೆ. 2028ಕ್ಕೂ ಮುನ್ನ ಮಧ್ಯಂತರ ಚುನಾವಣೆ ನಡೆದರೆ ಈ ಕಾನೂನು ಅನ್ವಯಿಸುವುದಿಲ್ಲ.**

### ತಿದ್ದುಪಡಿ ಮಾಡದಿದ್ದರೆ ಹೋರಾಟ

**ನ್ಯಾಯಮೂರ್ತಿ ನಾಗಮೋಹನದಾಸ್, ಮಾಧುಸ್ವಾಮಿ ವರದಿ ವೈಜ್ಞಾನಿಕವಾಗಿದ್ದು ಸರ್ಕಾರ ಅವರ ವರದಿಯನ್ನು ಸಂಪೂರ್ಣ ಜಾರಿಗೊಳಿಸಬೇಕಿತ್ತು,ಆದರೆ ಸಚಿವರಾದ ಡಾ. ಜಿ. ಪರಮೇಶ್ವರ ಶಿವಾನಂದ ತಂಗಡಗಿ ಮಹದೇವಪ್ಪ ಅವರು ಯಾವ ಜನಾಂಗಕ್ಕೂ ಉಪಯೋಗವಾಗದಂತಹ ಒಳಮೀಸಲಾತಿ ಜಾರಿಗೆ ತರಲು ತಿಪ್ಪೆ ಸಾರಿಸುವ ಕೆಲಸ ಮಾಡಿದ್ದಾರೆ. ಸರ್ಕಾರಕ್ಕೆ ಈಗಲೂ ತಿದ್ದುಪಡಿ ಮಾಡಲು ಅವಕಾಶವಿದೆ. ತಿದ್ದುಪಡಿಗೆ ಮುಂದಾಗದಿದ್ದರೆ ಸರ್ಕಾರ ಬಗ್ಗಿಸಲು ಹೋರಾಟ ಮಾಡಲಾಗುವುದು, 'ಸೆ. 22ರಂದು ಆರಂಭವಾಗುವ ಜಾತಿಗಣತಿಗೆ ನಮ್ಮ ಸಂಪೂರ್ಣ ವಿರೋಧವಿದೆ. ಒಳ ಮೀಸಲಾತಿ ಸಂಬಂಧ ನಡೆದಿರುವ ಈಗಾಗಲೇ ವೈಜ್ಞಾನಿಕ ಜಾತಿಗಣತಿ ಆಗಿದೆ. ಹಾಗಾಗಿ ಮತ್ತೊಮ್ಮೆ ಗಣತಿ ಮಾಡುವುದು ಸರಿಯಲ್ಲ' ಎಂದರು.**

---

## ಮಿನಿ ನ್ಯೂಸ್

# ಬಿದರಕುಂದಿ ಪರಿವಾರದಿಂದ ಗುರು ನಮನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮುದ್ದೇಬಿಹಾಳ

ವಿದ್ಯೆ ನೀಡಿದ ಗುರುಗಳು, ಮಾರ್ಗದರ್ಶನ ಮಾಡಿದ ಹಿರಿಯರು, ನೆರವಾದ ಸ್ನೇಹಿತರು ಜೀವನದ ನಿಜವಾದ ಆಧಾರಸ್ತಂಭಗಳು ಎಂದು ಕೆಎಎಸ್ ಅಧಿಕಾರಿ ಹಾಗೂ ಸಚಿವ ಶರಣಬಸಪ್ಪ ದರ್ಶನಾಪುರ ಅವರ ಆಪ್ತ ಕಾರ್ಯದರ್ಶಿ ಡಾ. ಶ್ರೀಶೈಲ ಬಿದರಕುಂದಿ ಹೇಳಿದರು.

ಹುಡ್ಕೋದಲ್ಲಿನ ಪಂಜುರ್ಲಿ ಸಭಾಂಗಣದಲ್ಲಿ ಸ್ನೇಹಿತರ ಬಳಗ ಹಾಗೂ ಬಿದರಕುಂದಿ ಪರಿವಾರದ ವತಿಯಿಂದ, ಕರ್ನಾಟಕ ಕೋ ಆಪ್ ಬ್ಯಾಂಕ್ ಪ್ರಧಾನ ವ್ಯವಸ್ಥಾಪಕ ಮಲ್ಲಿಕಾರ್ಜುನ ಬಿದರಕುಂದಿ ನೇತೃತ್ವದಲ್ಲಿ ಶನಿವಾರ ಗುರು ನಮನ ಕಾರ್ಯಕ್ರಮ ನಡೆಯಿತು. ಮುಖ್ಯ ಅತಿಥಿ ಪ್ರೊ। ಬಿ.ಎಂ.ಹಿರೇಮಠ 'ಬಡತನ ಪಾಠ ಕಲಿಸುತ್ತದೆ, ವಿದ್ಯೆ ವಿನಯತೆಗೆ ದಾರಿ ಮಾಡಿಕೊಡುತ್ತದೆ' ಎಂದರು. ಪ್ರೊ. ಎಸ್.ಜಿ.ನಂದಿ ಗುರು-ಹಿರಿಯರನ್ನು ಗೌರವಿಸುವುದು ಭಾರತೀಯ ಸಂಸ್ಕೃತಿಯ ಸಂಕೇತ ಎಂದು ಅಭಿಪ್ರಾಯಪಟ್ಟರು. ಅಧ್ಯಕ್ಷ ಎ.ಬಿ. ಸುಂಕದ ಜ್ಞಾನಕ್ಕಿಂತ ದೊಡ್ಡದಿಲ್ಲ ಎಂದರು.

ಡಾ. ಎಸ್.ಎಸ್.ದೇಸಾಯಿ, ಪ್ರೊ. ರಾಜನಾರಾಯಣ ನಲವಡೆ ಗುರುಗಳ ಮಹತ್ವದ ಕುರಿತು ಮಾತನಾಡಿದರು. ವೇದಿಕೆಯಲ್ಲಿ ಅಕ್ಕಮಹಾದೇವಿ ಬಿದರಕುಂದಿ, ನಿವೃತ್ತ ಶಿಕ್ಷಕ ಸಾಹಿತಿ ಎಸ್.ಬಿ.ಕನ್ನೂರ, ಬಸವರಾಜ ಬಿದರಕುಂದಿ, ಗುರುಲಿಂಗ ಜಂಗಮ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ 35-40 ಮಂದಿ ಗುರುಗಳು, ಹಿರಿಯರು, ಸ್ನೇಹಿತರನ್ನು ಸನ್ಮಾನಿಸಲಾಯಿತು ಮಲ್ಲಿಕಾರ್ಜುನ ಮತ್ತು ಡಾ. ಶ್ರೀ ಶೈಲರನ್ನು ಸನ್ಮಾನಿಸಿ ಅಭಿನಂದಿಸಿದರು. ಚಂದ್ರಶೇಖರ ಪ್ಯಾಟಿಗೌಡರ ಪ್ರಾರ್ಥನೆ ಸಲ್ಲಿಸಿದರು. ಪ್ರಶಾಂತ ಮೋಟ ನಿರೂಪಿಸಿದರು. ಮಲ್ಲಿಕಾರ್ಜುನ ಬಿದರಕುಂದಿ ವಂದಿಸಿದರು.

# ಗಣೇಶ ವಿಸರ್ಜನೆ ವೇಳೆ ಡಿಜೆ ಬಂದ್ ಖಂಡಿಸಿ ಪ್ರತಿಭಟನೆ ಲಾಠಿ ಪ್ರಹಾರ

• ಉದಯವಾಹಿನಿ, ಕೊಪ್ಪಳ

ಇಲ್ಲಿನ ಗಂಗಾವತಿ ನಗರದ ಗಾಂಧಿ ಸರ್ಕಲ್‌ನಲ್ಲಿ ತಡರಾತ್ರಿ 2 ಗಂಟೆ ಸುಮಾರಿಗೆ ಪೊಲೀಸರು ಡಿಜೆ ಬಂದ್ ಮಾಡಲು ಮುಂದಾದ ಮೇಲೆ ಯುವಕರು ಪ್ರತಿಭಟನೆಗೆ ಮುಂದಾಗಿದ್ದು, ಪೊಲೀಸರು ಲಘು ಲಾಠಿ ಪ್ರಹಾರ ನಡೆಸಿದ ಘಟನೆ ನಡೆದಿದೆ. ಛಲುವಾದಿ ಓಣಿಯ ಯುವಕ ಮಂಡಳಿಯವರು ಗಣೇಶ ವಿಸರ್ಜನೆ ಮೆರವಣಿಗೆ ಮಾಡಿಕೊಂಡು ಗಣೇಶ ವೃತ್ತದವರೆಗೂ ಆಗಮಿಸಿದ್ದಾರೆ. ಸಮಯ ರಾತ್ರಿ 2 ಗಂಟೆ ಆಗಿರುವ ಹಿನ್ನೆಲೆಯಲ್ಲಿ ಪೊಲೀಸರು ಡಿಜೆ ಬಂದ್ ಮಾಡಿ ಗಣೇಶ ವಿಸರ್ಜನೆ ಮೆರವಣಿಗೆ ನಡೆಸುವಂತೆ ಸೂಚಿಸಿದ್ದಾರೆ. ಒಪ್ಪದ ಯುವಕರು ಡಿಜೆ ಹಾಕಿಕೊಂಡು ಡ್ಯಾನ್ಸ್ ಮಾಡಲು ಮುಂದಾಗಿದ್ದಾರೆ.

ಒತ್ತಾಯದ ಮೇಲೆ ಪೊಲೀಸರು ಡಿಜೆ ಬಂದ್‌ಮಾಡಿಸಿದ್ದಾರೆ. ನಂತರ ಪೊಲೀಸರು ಡಿಜೆ ಬಂದ್ ಮಾಡಿಸಿದ್ದನ್ನು ಖಂಡಿಸಿ ಪ್ರತಿಭಟನೆ ನಡೆಸಿದರು. ದಲಿತರ ಗಣೇಶ ಹಬ್ಬ ಆಚರಣೆಗೆ ಪೊಲೀಸರಿಂದ ವಿರೋಧ ಎಂದು ಘೋಷಣೆ ಕೂಗುತ್ತಾ ರಸ್ತೆಯಲ್ಲಿ ಕುಳಿತು ಪ್ರತಿಭಟನೆ ನಡೆಸಿದರು. ಅಧಿಕಾರಿಗಳು ಮನವೊಲಿಸಲು ಮುಂದಾಗಿದ್ದರು. ಆದ್ರೂ ಪ್ರಯೋಜನವಾಗದ ಹಿನ್ನೆಲೆ ಲಘು ಲಾಠಿ ಪ್ರಹಾರ ನಡೆಸಿ, ಪ್ರತಿಭಟನೆ ಚದುರಿಸಿದರು. ನಂತರ ಮತ್ತೆ ದಲಿತ ಯುವಕ ಸಂಘದವರು ಡಿಜೆ ಬಂದ್ ಮಾಡಲು ಬಿಡುವುದಿಲ್ಲ ಎಂದು ಘೋಷಣೆ ಕೂಗಿಕೊಂಡು, ಡಿಜೆ ಹಾಕುವವರೆಗೂ ಗಣೇಶ ವಿಸರ್ಜನೆ ಮಾಡುವುದಿಲ್ಲ ಎಂದು ಪಟ್ಟು ಹಿಡಿದರು. ನಂತರ ಪೊಲೀಸ ಇಲಾಖೆಯ ಅಧಿಕಾರಿಗಳು ಯುವಕರ ಮನವೊಲಿಸಿ, ಡಿಜೆ ಬಂದ್ ಮಾಡಿ, ಗಣೇಶ ವಿಸರ್ಜನೆಗೆ ಕಳುಹಿಸಲಾಯಿತು. ಸ್ಥಳದಲ್ಲಿಯೇ ಎಸ್ಪಿ, ಡಿವೈಎಸ್ಪಿ ಸೇರಿದಂತೆ ಇತರ ಅಧಿಕಾರಿಗಳು ಇದ್ದರು.

# ಜಿಲ್ಲೆಯಾದ್ಯಂತ ಧಾರಾಕಾರ ಮಳೆಗೆ ಕೆರೆಯಂತಾದ ರಸ್ತೆಗಳು

• ಉದಯವಾಹಿನಿ, ರಾಯಚೂರು

ಜಿಲ್ಲೆಯಾದ್ಯಂತ ಸುರಿಯುತ್ತಿರುವ ಧಾರಾಕಾರ ಮಳೆಗೆ ರಸ್ತೆಗಳು ಕೆರೆಯಂತಾಗಿದ್ದು, ವಾಹನ ಸವಾರರು ಪರದಾಡುವಂತಾಗಿದೆ. ಜಿಲ್ಲೆಯ ದೇವದುರ್ಗ ಪಟ್ಟಣದ ರಸ್ತೆಗಳು ಜಲಾವೃತಗೊಂಡಿದೆ. ಪರಿಣಾಮ ವಾಹನ ಸವಾರರ ಜೊತೆಗೆ ನಡೆದುಕೊಂಡು ಹೋಗುವವರಿಗೂ ಸಮಸ್ಯೆಯುಂಟಾಗಿದೆ.

ರಸ್ತೆಯಲ್ಲಿ ನಿರ್ಮಾಣವಾಗಿರುವ ದೊಡ್ಡ ಗುಂಡಿಗಳಿಂದಾಗಿ ಮಳೆ ಬಂದರೆ ಸಾಕು ಬೈಕ್ ಸಾವಾರರು ಸಂಕಷ್ಟ ಎದುರಿಸುತ್ತಿದ್ದಾರೆ. ಅದಲ್ಲದೇ ಮಿನಿ ವಿಧಾನಸೌಧ ಕಚೇರಿ ಮುಂಭಾಗದಲ್ಲಿ ನೀರು ನಿಂತ ಪರಿಣಾಮ ಜನರು ಪರದಾಡುತ್ತಿದ್ದಾರೆ. ಇನ್ನೂ ಪಟ್ಟಣದ ಉಪ್ಪಾರ ಓಣಿ, ಆನಂದ ಟಾಕೀಸ್ ರಸ್ತೆ, ಹಳೆ ಬಸ್ ನಿಲ್ದಾಣ ರಸ್ತೆಯಲ್ಲೆಲ್ಲಾ ಚರಂಡಿ ನೀರು ಹರಿದಿದೆ. ಜಿಲ್ಲೆಯ ಲಿಂಗಸುಗೂರು, ಸಿಂಧನೂರು ತಾಲ್ಲೂಕು ಸೇರಿದಂತೆ ಹಲವೆಡೆ ಭರ್ಜರಿ ಮಳೆಯಾಗಿದೆ.

# ಮತ್ತೆ ಭೂಕುಸಿತ ಗೇರುಸೊಪ್ಪ ವಿದ್ಯುತ್ ಉತ್ಪಾದನಾ ಘಟಕ ಬಳಿಯೇ ಕುಸಿತ

• ಉದಯವಾಹಿನಿ, ಕಾರವಾರ

ಉತ್ತರ ಕನ್ನಡ ಜಿಲ್ಲೆಯಲ್ಲಿ ಮತ್ತೆ ಭೂಕುಸಿತವಾಗಿದೆ. ಗೇರುಸೊಪ್ಪ ವಿದ್ಯುತ್ ಉತ್ಪಾದನಾ ಘಟಕದ ಬಳಿಯೇ ಧರೆ ಕುಸಿದಿದೆ. ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ತಾಲ್ಲೂಕಿನ ಗೇರುಸೊಪ್ಪ ಜಲಾಶಯದ ಬಳಿ ಘಟನೆ ನಡೆದಿದೆ. ಈ ಹಿಂದೆ ಅಬ್ಬರದ ಮಳೆ ಹಿನ್ನೆಲೆಯಲ್ಲಿ ಜಲಾಶಯದಿಂದ ಹೆಚ್ಚಿನ ಪ್ರಮಾಣದಲ್ಲಿ ನೀರು ಬಿಡಲಾಗಿತ್ತು. 20 ಸಾವಿರ ಕ್ಯೂಸೆಕ್‌ಗೂ ಅಧಿಕ ನೀರು ಬಿಟ್ಟ ಹಿನ್ನೆಲೆಯಲ್ಲಿ ಜಲಾಶಯದ ತಡೆಗೋಡೆ ಪಕ್ಕದಲ್ಲೇ ಧರೆ ಕುಸಿದಿತ್ತು. ಇದೀಗ ಒಂದು ಭಾಗದ ಧರೆ ಕುಸಿದು ಮರಗಳು ಬಿದ್ದಿವೆ.




ಮತ್ತೆ ಹೆಚ್ಚಿನ ಮಳೆಯಾದಲ್ಲಿ ಡ್ಯಾಂನ ತಡೆಗೋಡೆ ವರೆಗೂ ಕುಸಿಯುವ ಸಾಧ್ಯತೆ ಇದೆ. ಡ್ಯಾಂನ ಎಡಭಾಗದ ಧರೆ ಕುಸಿದಿರುವುದರಿಂದ ಜಲಾಶಯಕ್ಕೆ ಯಾವುದೇ ಹಾನಿಯಿಲ್ಲ.

### ಕಮ್ಚಾಟ್ಕಾದಲ್ಲಿ ಮತ್ತೆ 7.4 ತೀವ್ರತೆಯ ಪ್ರಬಲ ಭೂಕಂಪ; ಕಡಿಮೆ ಗಾತ್ರದ ಸುನಾಮಿ ಅಲೆಗಳ ಎಚ್ಚರಿಕೆ

# ಪದೇ ಪದೇ ಭೂಕಂಪನಕ್ಕೆ ತುತ್ತಾಗುತ್ತಿರುವ ರಷ್ಯಾದ ಕಮ್ಚಾಟ್ಕಾ

**ಮಸ್ಕೋ:** ರಷ್ಯಾದ ಪೂರ್ವ ಕರಾವಳಿ ಕಮ್ಚಾಟ್ಕಾದಲ್ಲಿ ಮತ್ತೆ ಭೂಕಂಪ ಸಂಭವಿಸಿದ್ದು, ರಿಕ್ಟರ್ ಮಾಪಕದಲ್ಲಿ 7.4 ತೀವ್ರತೆ ದಾಖಲಾಗಿದೆ. ಇತ್ತೀಚೆಗಷ್ಟೇ ಇದೇ ಭಾಗದಲ್ಲಿ ಸಂಭವಿಸಿದ ಭಾರೀ ಭೂಕಂಪನದಿಂದ ಭಾರೀ ಗಾತ್ರದ ಸುನಾಮಿ ಅಲೆಗಳು ಎದ್ದಿದ್ದವು. ಈ ಕುರಿತು ಮಾಹಿತಿ ನೀಡಿರುವ ಅಮೆರಿಕದ ಯುಎಸ್ ಭೂ ವೈಜ್ಞಾನಿಕ ಸಮೀಕ್ಷೆ, ಭೂಕಂಪದ ಕೇಂದ್ರಬಿಂದುದಿಂದ 300 ಕಿಲೋಮೀಟರ್ ಒಳಗಿನ ಕರಾವಳಿಯಲ್ಲಿ ಅಪಾಯಕಾರಿ ಅಲೆಗಳು ಕಾಣಿಸಬಹುದು ಎಂದು ಎಚ್ಚರಿಸಿದೆ. ಪೆಸಿಫಿಕ್ ಸುನಾಮಿ ಎಚ್ಚರಿಕೆ ಕೇಂದ್ರ, ಕೂಡ, ಕಮ್ಚಾಟ್ಕಾ ಭಾಗದಲ್ಲಿ ಕಡಿಮೆ ಗಾತ್ರದ ಸುನಾಮಿ ಅಲೆಗಳು ಕಾಣಿಸಲಿವೆ ಎಂದು ಸಂದೇಶ ರವಾನಿಸಿದೆ.

ಪೆಸಿಫಿಕ್ ರಿಂಗ್ ಆಫ್ ಫೈಯರ್ ಪಟ್ಟಿಯಲ್ಲಿರುವ ಕಮ್ಚಾಟ್ಕಾ ಪರ್ಯಾಯ ದ್ವೀಪದಲ್ಲಿ, ಕಳೆದ ಆಗಸ್ಟ್‌ನಲ್ಲಿ 8.8ರ ತೀವ್ರತೆಯ ಭೂಕಂಪ ಸಂಭವಿಸಿತ್ತು. ಇದು ಪೆಸಿಫಿಕ್‌ನಾದ್ಯಂತ ನಾಲ್ಕು ಮೀಟರ್ ಎತ್ತರದ ಸುನಾಮಿ ಅಲೆಗಳನ್ನು ಸೃಷ್ಟಿಸಿತ್ತು. ರಷ್ಯಾದ ಕಮ್ಚಾಟ್ಕಾ ಪ್ರದೇಶದಲ್ಲಿ ಸಂಭವಿಸುತ್ತಿರುವ ಸರಣಿ ಭೂಕಂಪನಗಳು ನೆರೆಯ ಜಪಾನ್ ಮೇಲೂ ಪರಿಣಾಮ ಬೀರುತ್ತಿದ್ದು, ಅಲ್ಲಿಯೂ ಭೂಮಿ ನಡುಗಿದ ಮತ್ತು ಸುನಾಮಿ ಅಲೆಗಳು ಕಾಣಿಸಿಕೊಂಡ ಘಟನೆಗಳು ವರದಿಯಾಗಿವೆ. ಸದ್ಯ ಸಂಭವಿಸಿರುವ ಭೂಕಂಪನವು 7.4 ತೀವ್ರತೆಯನ್ನು ದಾಖಲಿಸಿದ್ದು, ಕಮ್ಚಾಟ್ಕಾ ಪ್ರದೇಶದಾದ್ಯಂತ ಭೂಮಿ ನಡುಗಿದ ಅನುಭವವಾಗಿದೆ.



ಪೆಟ್ರೋಪಾವ್ಲೋವ್ಸ್ಕ್ - ಕಾಮ್ಚಾಟ್ಸ್ಕಿಯ ಪೂರ್ವ-ಆಗ್ನೇಯಕ್ಕೆ 120 ಮೈಲುಗಳಷ್ಟು ದೂರದಲ್ಲಿ, 22 ಮೈಲುಗಳಷ್ಟು ಆಳದಲ್ಲಿ ಭೂಕಂಪನದ ಕೇಂದ್ರ ಪತ್ತೆಯಾಗಿದೆ ಎಂದು ಯುಎಸ್‌ಜಿಎಸ್ ವರದಿ ಮಾಡಿದೆ. ಅಲ್ಲದೇ ಕಮ್ಚಾಟ್ಕಾ ಪ್ರದೇಶದಲ್ಲಿರುವ ಕ್ರಾಶೆನ್ನಿನಿಕೋವ್ ಜ್ವಾಲಾಮುಖಿ 600 ವರ್ಷಗಳ ಬಳಿಕ ಸ್ಫೋಟಗೊಳ್ಳಲು, ಈ ಭಾರೀ ಭೂಕಂಪ ಕಾರಣವಾಗಿತ್ತು. ಇದೀಗ ಮತ್ತೆ ಅದೇ ಭಾಗದಲ್ಲಿ ಭೂಕಂಪ ಸಂಭವಿಸಿದ್ದು, ಈ ಸರಣಿ ಭೂಕಂಪನಗಳು ಕಮ್ಚಾಟ್ಕಾ ಪ್ರದೇಶದ ನಿವಾಸಿಗಳಲ್ಲಿ ಆತಂಕಕ್ಕೆ ಕಾರಣವಾಗಿವೆ.

ಈ ಬಾರಿಯ ಭೂಕಂಪನಿಂದ ಅಪಾಯಕಾರಿ ಸುನಾಮಿ ಅಲೆಗಳ ಭೀತಿ ಇಲ್ಲವಾದರೂ, ರಿಕ್ಟರ್ ಮಾಪಕದಲ್ಲಿ ದಾಖಲಾದ ಭೂಕಂಪನ ತೀವ್ರತೆ ಆತಂಕಕ್ಕೆ ಕಾರಣವಾಗಿದೆ. ಇಷ್ಟೇ ಅಲ್ಲದೇ ಮತ್ತೆ ಸರಣಿ ಭೂಕಂಪನಗಳು ಸಂಭವಿಸುವ ಅಪಾಯ ಕೂಡ ಇದೆ. 2011ರಲ್ಲಿ ಜಪಾನ್‌ನಲ್ಲಿ 9.1 ತೀವ್ರತೆಯ ಭೂಕಂಪ ಸಂಭವಿಸಿತ್ತು. ಈ ಭೂಕಂಪ ಭಾರೀ ಸುನಾಮಿಗೆ ಕಾರಣವಾಗಿ, 15,000ಕ್ಕೂ ಹೆಚ್ಚು ಜನರು ತಮ್ಮ ಪ್ರಾಣ ಕಳೆದುಕೊಂಡಿದ್ದರು. ಅದಾದ ಬಳಿಕ ಕಳೆದ ಜು., ಆ.ನಲ್ಲಿ ಸಂಭವಿಸಿದ 8.8 ತೀವ್ರತೆಯ ಭೂಕಂಪನ ರಷ್ಯಾ, ಜಪಾನ್, ಅಲಾಸ್ಕಾದಲ್ಲಿ ಸುನಾಮಿ ಅಲೆಗಳಿಗೆ ಕಾರಣವಾಗಿತ್ತು. ಒಟ್ಟಿನಲ್ಲಿ ಪೆಸಿಫಿಕ್ ಪ್ರದೇಶ ಪದೇ ಪದೇ ಪ್ರಾಕೃತಿಕ ವಿಕೋಪಕ್ಕೆ ತುತ್ತಾಗುತ್ತಿರುವುದು ಜಾಗತಿಕ ಭೂವಿಜ್ಞಾನಶಾಸ್ತ್ರಜ್ಞರಲ್ಲಿ ಆತಂಕ ಮೂಡಿಸಿದೆ.

**ಕಳೆದ ಆಗಸ್ಟ್‌ನಲ್ಲಿ ರಷ್ಯಾದಲ್ಲಿ ಸಂಭವಿಸಿದ್ದ 8.8 ಭೂಕಂಪನ, ಇತ್ತೀಚಿನ ವರ್ಷಗಳಲ್ಲಿ ದಾಖಲಾದ ಅತ್ಯಂತ ಪ್ರಬಲವಾದ ಭೂಕಂಪಗಳಲ್ಲಿ ಒಂದಾಗಿತ್ತು. ಇದು ಹವಾಯಿ, ಜಪಾನ್ ಮತ್ತು ಅಮೆರಿಕದ ಅಲಾಸ್ಕಾ ಕರಾವಳಿಗೂ ಸುನಾಮಿ ಅಲೆಗಳು ಅಪ್ಪಳಿಸಲು ಕಾರಣವಾಗಿತ್ತು. ಜಪಾನ್‌ನಲ್ಲಿ ಸುಮಾರು ಎರಡು ಮಿಲಿಯನ್ ಜನರನ್ನು ಕರಾವಳಿ ಭಾಗದಿಂದ ಸ್ಥಳಾಂತರಿಸಲಾಗಿತ್ತು.**

## ಭಾರೀ ಮಳೆ ಹೆಲಿಕಾಪ್ಟರ್ ಬಿಟ್ಟು ರಸ್ತೆ ಮಾರ್ಗದಲ್ಲೇ ಚುರಾಚಾಂದ್‌ಪುರಕ್ಕೆ ಮೋದಿ ಪ್ರಯಾಣ

**ಇಂಫಾಲ:** ಮಣಿಪುರದ ರಾಜಧಾನಿ ಇಂಫಾಲದಲ್ಲಿ ಭಾರೀ ಮಳೆಯಾಗುತ್ತಿದ್ದ ಕಾರಣ ಪ್ರಧಾನಿ ನರೇಂದ್ರ ಮೋದಿಯವರು ರಸ್ತೆ ಮಾರ್ಗದಲ್ಲೇ ಚುರಾಚಾಂದ್‌ಪುರಕ್ಕೆ ಪ್ರಯಾಣ ಬೆಳೆಸಿದ್ದಾರೆ. ಮಳೆಯಿಂದಾಗಿ ಹೆಲಿಕಾಪ್ಟರ್ ಹಾರಾಟಕ್ಕೆ ಹವಾಮಾನ ಅನುಕೂಲಕರವಾಗಿಲ್ಲ ಎಂದು ಅಧಿಕಾರಿಗಳು ಪ್ರಧಾನಿಗೆ ಮಾಹಿತಿ ನೀಡಿದರು. ಇದರಿಂದ ಹೆಲಿಕಾಪ್ಟರ್ ಬಳಕೆಯನ್ನು ಮೊಟಕುಗೊಳಿಸಲಾಯಿತು. ಬಳಿಕ ಮೋದಿಯವರು ಸುಮಾರು 61 ಕಿ.ಮೀ ಪ್ರಯಾಣ ಮಾಡಿ, ಚುರಾಚಾಂದ್‌ಪುರ ತಲುಪಿದ್ದಾರೆ.



ಇದಕ್ಕೂ ಮುನ್ನ ಜನರೊಂದಿಗೆ ಸಂವಹನ ನಡೆಸಲು ಎಷ್ಟೇ ಸಮಯ ಆದರೂ ಪ್ರಯಾಣ ಮಾಡಲು ಸಿದ್ಧ ಎಂದು ಮೋದಿಯವರು ಹೇಳಿದರು ಎಂದು ಮೂಲಗಳು ತಿಳಿಸಿವೆ.

ಚುರಾಚಾಂದ್‌ಪುರದಲ್ಲಿ ತಮ್ಮ ರಸ್ತೆ ಪ್ರಯಾಣದ ಅನುಭವವನ್ನು ಜನರೊಂದಿಗೆ ಹಂಚಿಕೊಂಡಿರುವ ಅವರು, ಮಣಿಪುರದ ಜನರ ಉತ್ಸಾಹಕ್ಕೆ ನಾನು ನಮಸ್ಕರಿಸುತ್ತೇನೆ. ಭಾರೀ ಮಳೆಯಲ್ಲೂ ಇಲ್ಲಿಗೆ ಇಷ್ಟೊಂದು ಸಂಖ್ಯೆಯಲ್ಲಿ ಬಂದಿದ್ದೀರಿ. ನಿಮ್ಮ ಪ್ರೀತಿಗೆ ನಾನು ಕೃತಜ್ಞ. ಭಾರೀ ಮಳೆಯಿಂದಾಗಿ ನನ್ನ ಹೆಲಿಕಾಪ್ಟರ್‌ನಲ್ಲಿ ಬರಲು ಸಾಧ್ಯವಾಗಲಿಲ್ಲ. ಆದ್ದರಿಂದ ರಸ್ತೆ ಮಾರ್ಗದಲ್ಲಿ ಬಂದೆ. ನಾನು ರಸ್ತೆಯ ಮೂಲಕ ಬಂದಿದ್ದು ಒಳ್ಳೆಯದೇ ಆಯ್ತು ಎಂದು ನನ್ನ ಹೃದಯ ಹೇಳುತ್ತದೆ. ದಾರಿಯುದ್ದಕ್ಕೂ ತ್ರಿವರ್ಣ ಧ್ವಜವನ್ನು ಕೈಯಲ್ಲಿ ಹಿಡಿದುಕೊಂಡು ಎಲ್ಲರೂ ನನ್ನನ್ನು ಪ್ರೀತಿಯಿಂದ ಸ್ವಾಗತ ಮಾಡಿದ್ದಾರೆ. ನನ್ನ ಜೀವನದಲ್ಲಿ ಈ ಕ್ಷಣವನ್ನು ನಾನು ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ಹಿಂಸಾಚಾರ ಪೀಡಿತ ರಾಜ್ಯದ ಜನರ ಜೀವನವನ್ನು ಮತ್ತೆ ಸರಿದಾರಿಗೆ ತರಲು ಕೇಂದ್ರ ಸರ್ಕಾರ ಪ್ರಯತ್ನ ಮಾಡುತ್ತಿದೆ. ನಾನು ನಿಮ್ಮೊಂದಿಗಿದ್ದೇನೆ ಎಂಬ ಭರವಸೆಯನ್ನು ನೀಡುತ್ತೇನೆ. ಭಾರತ ಸರ್ಕಾರ ಮಣಿಪುರದ ಜನರೊಂದಿಗಿದೆ. ಎಲ್ಲಾ ಗುಂಪುಗಳು ತಮ್ಮ ಕನಸುಗಳನ್ನು ನನಸಾಗಿಸಲು ಶಾಂತಿಯ ಮಾರ್ಗ ಅನುಸರಿಸಬೇಕು ಎಂದು ಮನವಿ ಮಾಡಿದ್ದಾರೆ. 2023 ರಲ್ಲಿ ಜನಾಂಗೀಯ ಹಿಂಸಾಚಾರ ಭುಗಿಲೆದ್ದ ನಂತರ ಅವರು ರಾಜ್ಯಕ್ಕೆ ನೀಡಿದ ಮೊದಲ ಭೇಟಿ ಇದಾಗಿದೆ. ಮಣಿಪುರದಲ್ಲಿ ಮೇ 2023ರಲ್ಲಿ ಪ್ರಾಬಲ್ಯ ಹೊಂದಿರುವ ಮೈತೇಯಿ ಸಮುದಾಯ ಮತ್ತು ಕುಕಿ ಬುಡಕಟ್ಟು ಜನಾಂಗದ ನಡುವೆ ಜನಾಂಗೀಯ ಘರ್ಷಣೆಗಳು ಭುಗಿಲೆದ್ದಿತ್ತು. ಈ ಹಿಂಸಾಚಾರದಲ್ಲಿ 250ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ. ಹಿಂಸಾಚಾರದಿಂದಾಗಿ 60,000 ಜನರನ್ನು ಸರ್ಕಾರ ನಿರ್ಮಿಸಿದ್ದ ತಾತ್ಕಾಲಿಕ ಶಿಬಿರಗಳಿಗೆ ಸ್ಥಳಾಂತರಿಸಲಾಗಿತ್ತು.

# ಸುಂಕ ಸಮರದಿಂದಾಗಿ ಭಾರತ ದೂರವಾಗಿದೆ: ಟ್ರಂಪ್

### ಅಂತೂ ಸತ್ಯ ಒಪ್ಪಿಕೊಂಡ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್

**ಊರೆಲ್ಲಾ ಕೊಳ್ಳೆ ಹೊಡೆದ ಮೇಲೆ ಕೋಟೆ ಬಾಗಿಲು ಹಾಕಿದಂತೆ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಸುಂಕ ಸಮರದಿಂದ ಭಾರತವನ್ನು ದೂರ ಮಾಡಿಕೊಂಡ ಮೇಲೆ ಪಶ್ಚಾತ್ತಾಪ ಪಟ್ಟುಕೊಳ್ಳುತ್ತಿದ್ದಾರೆ. ತಮ್ಮ ಹೆಚ್ಚುವರಿ ಸುಂಕಗಳು ಭಾರತ-ಅಮೆರಿಕ ಸಂಬಂಧದ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿದೆ ಎಂಬ ಸತ್ಯವನ್ನು ಡೊನಾಲ್ಡ್ ಟ್ರಂಪ್ ಬಹಿರಂಗವಾಗಿ ಒಪ್ಪಿಕೊಂಡಿದ್ದಾರೆ. ಅಮೆರಿಕದ ಖಾಸಗಿ ಸುದ್ದಿವಾಹಿನಿ ಜೊತೆ ಮಾತನಾಡಿರುವ ಅಧ್ಯಕ್ಷರು, ಸುಂಕಗಳಿಂದಾಗಿ ಭಾರತವನ್ನು ದೂರ ಮಾಡಿಕೊಂಡಿರುವುದು ನಿಜ.**
**-ಡೊನಾಲ್ಡ್ ಟ್ರಂಪ್, ಅಮೆರಿಕ ಅಧ್ಯಕ್ಷ**

**ವಾಷಿಂಗ್ಟನ್:** ರಷ್ಯಾದ ತೈಲ ಖರೀದಿಗೆ ಸಂಬಂಧಿಸಿದಂತೆ ಭಾರತದ ಸರಕುಗಳ ಮೇಲೆ ಶೇ. 50ರಷ್ಟು ಸುಂಕ ವಿಧಿಸುವುದರಿಂದ, ಎರಡೂ ದೇಶಗಳ ನಡುವಿನ ಸಂಬಂಧ ಹದಗೆಟ್ಟಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇದೇ ಮೊದಲ ಬಾರಿಗೆ ಬಹಿರಂಗವಾಗಿ ಒಪ್ಪಿಕೊಂಡಿದ್ದಾರೆ. ಫಾಕ್ಸ್ ಫ್ರೆಂಡ್ಸ್ ಕಾರ್ಯಕ್ರಮಕ್ಕೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಡೊನಾಲ್ಡ್ ಟ್ರಂಪ್, ಭಾರತಕ್ಕೆ ಹೆಚ್ಚುವರಿ ಸುಂಕಗಳನ್ನು ಹೇರಿದ್ದು, ಆ ರಾಷ್ಟ್ರದೊಂದಿಗಿನ ಅಮೆರಿಕದ ಸಂಬಂಧಗಳ ಮೇಲೆ ಪರಿಣಾಮ ಬೀರಿದೆ ಎಂದು ಹೇಳಿದ್ದಾರೆ.

ಆದರೆ ಉಕ್ರೇನ್ ಮೇಲಿನ ರಷ್ಯಾದ ಆಕ್ರಮಣ ತಡೆಗಟ್ಟುವ ಸದುದ್ದೇಶದಿಂದ ಇಂತಹ ನಿರ್ಧಾರ ತೆಗೆದುಕೊಂಡಿದ್ದಾಗಿಯೂ ಅಮೆರಿಕ ಅಧ್ಯಕ್ಷರು ಸ್ಪಷ್ಟಪಡಿಸಿದ್ದಾರೆ. ಭಾರತವು ರಷ್ಯಾ ತೈಲದ ಅತಿದೊಡ್ಡ ಗ್ರಾಹಕ ರಾಷ್ಟ್ರವಾಗಿದೆ. ಈ ವ್ಯಾಪಾರದಿಂದ ಬರುವ ಹಣದಿಂದ ಉಕ್ರೇನ್ ಮೇಲೆ ರಷ್ಯಾ ತನ್ನ ಆಕ್ರಮಣವನ್ನು ಮುಂದುವರೆಸಿದೆ.

ನಾವು ಇದನ್ನು ತಡೆಗಟ್ಟುವ ಉದ್ದೇಶದಿಂದ ರಷ್ಯಾದೊಂದಿಗೆ ಕಚ್ಚಾತೈಲ ವ್ಯಾಪಾರ ಮಾಡುವ ರಾಷ್ಟ್ರಗಳ ಮೇಲೆ ದಂಡನಾತ್ಮಕ ಸುಂಕ ವಿಧಿಸುವ ತೀರ್ಮಾನ ಮಾಡಿದೆವು. ಆದರೆ ಇದರಿಂದ ಭಾರತ ಅಮೆರಿಕ ಸಂಬಂಧಗಳ ಮೇಲೆ ಪರಿಣಾಮ ಬೀರಿದೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

**ದೊಡ್ಡ ವಿಷಯ ಎಂದ ಟ್ರಂಪ್:** ಭಾರತದೊಂದಿಗಿನ ಸಂಬಂಧಗಳು ಹದಗೆಡುತ್ತಿರುವುದು ನಿಜಕ್ಕೂ ದೊಡ್ಡ ವಿಷಯ ಎಂದಿರುವ ಡೊನಾಲ್ಡ್ ಟ್ರಂಪ್, ನಾವು ಹೀಗಾಗಲು ಬಿಡುವುದಿಲ್ಲ ಎಂದು ಭರವಸೆ ನೀಡಿದ್ದಾರೆ. ಭಾರತದಲ್ಲಿ ಅಮೆರಿಕ ವಿರೋಧಿ ಭಾವನೆ ಬೆಳೆಯುತ್ತಿರುವುದು ನಿಜವಾದರೂ, ನಾವು ಶೀಘ್ರದಲ್ಲೇ ಸಂಬಂಧಗಳನ್ನು ಮೊದಲಿನ ಸಾಮಾನ್ಯ ರೂಪಕ್ಕೆ ತರುತ್ತೇವೆ ಎಂದು ಅಮೆರಿಕ ಅಧ್ಯಕ್ಷರು ಆಶಾಭಾವನೆ ವ್ಯಕ್ತಪಡಿಸಿದ್ದಾರೆ. ನಾವು ಭಾರತ-ಅಮೆರಿಕ ಸಂಬಂಧ ಸುಧಾರಣೆ ಪ್ರಯತ್ನ ಆರಂಭಿಸಿದ್ದೇವೆ. ಭಾರತ ಕೂಡ ನಮ್ಮ ಪ್ರಯತ್ನಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸುತ್ತಿದೆ. ಶೀಘ್ರದಲ್ಲೇ ಉಭಯ ದೇಶಗಳ ನಡುವೆ ವ್ಯಾಪಾರ ಒಪ್ಪಂದ ಮಾತುಕತೆಗಳು ನಡೆಯಲಿವೆ. ಎಲ್ಲವೂ ಸರಿ ಹೋಗಲಿದೆ ಎಂಬ ಭರವಸೆ ನನಗಿದೆ ಎಂದು ಡೊನಾಲ್ಡ್ ಟ್ರಂಪ್ ಅವರು ಖಾಸಗಿ ಸುದ್ದಿವಾಹಿನಿಗೆ ನೀಡಿದ ಸಂದರ್ಶನದಲ್ಲಿ ನುಡಿದರು.



ಭಾರತದೊಂದಿಗೆ ವ್ಯಾಪಾರ ಅಡೆತಡೆಗಳನ್ನು ಪರಿಹರಿಸಲು ತಮ್ಮ ಆಡಳಿತವು ಮಾತುಕತೆಗಳನ್ನು ಮುಂದುವರಿಸುತ್ತಿದೆ. ರಾಜತಾಂತ್ರಿಕ ಸಂಬಂಧವನ್ನು ಮರುಹೊಂದಿಸುವಿಕೆಯ ಸಂಕೇತವಾಗಿ, ನಾನು ಭಾರತದ ಪ್ರಧಾನಮಂತ್ರಿ ಮೋದಿ ಅವರೊಂದಿಗೆ ದೂರವಾಣಿ ಕರೆಯಲ್ಲಿ ಮಾತನಾಡಲಿದ್ದೇನೆ. ಅಷ್ಟು ಸುಲಭವಾಗಿ ಭಾರತ-ಅಮೆರಿಕ ಸಂಬಂಧಗಳು ಮುರಿದು ಬೀಳುವುದಿಲ್ಲ ಎಂದು ಅಮೆರಿಕ ಅಧ್ಯಕ್ಷರು ಅಭಿಪ್ರಾಯಪಟ್ಟರು. ಹೌದು, ವ್ಲಾಡಿಮಿರ್ ಪುಟಿನ್ ನಿಜಕ್ಕೂ ನನ್ನ ತಾಳ್ಮೆಯನ್ನು ಪರೀಕ್ಷಿಸುತ್ತಿದ್ದಾರೆ. ಯುದ್ಧ ನಿಲ್ಲಿಸುವ ನಮ್ಮೆಲ್ಲಾ ಪ್ರಯತ್ನಗಳಿಗೂ ಪುಟಿನ್ ಅಡ್ಡಗಾಲು ಹಾಕುತ್ತಿರುವುದನ್ನು ಸಹಿಸಲು ಸಾಧ್ಯವಿಲ್ಲ. ರಷ್ಯಾ ಅಧ್ಯಕ್ಷರಿಗೆ ಶಾಂತಿ ಬೇಡವಾದರೆ ನಮಗೂ ಬೇರೆ ಆಯ್ಕೆಗಳಿವೆ ಎಂದು ಡೊನಾಲ್ಡ್ ಟ್ರಂಪ್ ಎಚ್ಚರಿಕೆಯ ಧಾಟಿಯಲ್ಲಿ ಮಾತನಾಡಿದ್ದಾರೆ.


ರಷ್ಯಾ-ಉಕ್ರೇನ್ ಯುದ್ಧ ನಿಲ್ಲಿಸಲು ತಮ್ಮ ಆಡಳಿತ ನಡೆಸುತ್ತಿರುವ ಪ್ರಯತ್ನಗಳನ್ನು ಶ್ಲಾಘಿಸಿದ ಡೊನಾಲ್ಡ್ ಟ್ರಂಪ್, ಈ ವಿಷಯಕ್ಕೆ ನಾವು ನೀಡಿರುವ ಆದ್ಯತೆಯನ್ನು ವ್ಲಾಡಿಮಿರ್ ಪುಟಿನ್ ಗೌರವಿಸಬೇಕು ಎಂದು ಸೂಚ್ಯವಾಗಿ ಹೇಳಿದ್ದಾರೆ. ಆದಾಗ್ಯೂ, ಕದನ ವಿರಾಮ ಒಪ್ಪಂದದ ಬಗ್ಗೆ ಈಗಲೂ ನಾವು ಸಕಾರಾತ್ಮಕವಾಗಿದ್ದೇವೆ ಎಂದು ಅಮೆರಿಕ ಅಧ್ಯಕ್ಷರು ಹೇಳಿದ್ದಾರೆ.

**ಪುಟಿನ್ ತಾಳ್ಮೆ ಪರೀಕ್ಷಿಸುತ್ತಿದ್ದಾರೆ**

**ಇನ್ನು ಉಕ್ರೇನ್ ಯುದ್ಧಕ್ಕೆ ಸಂಬಂಧಿಸಿದಂತೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿರುವ ಡೊನಾಲ್ಡ್ ಟ್ರಂಪ್, ಶಾಂತಿ ಮಾತುಕತೆಗೆ ಬ್ರೇಕ್ ಹಾಕುವ ಮೂಲಕ ಅವರು ತಮ್ಮ ತಾಳ್ಮೆಯನ್ನು ಪರೀಕ್ಷೆ ಮಾಡುತ್ತಿದ್ದಾರೆ ಎಂದು ಅಸಮಾಧಾನ ಹೊರಹಾಕಿದ್ದಾರೆ.**

## ರಷ್ಯಾದ ತೈಲ ಖರೀದಿ ರಾಷ್ಟ್ರಗಳ ಮೇಲೆ ಸುಂಕ ವಿಧಿಸಲು ಜಿ7 ದೇಶಗಳಿಗೆ ಅಮೆರಿಕ ಕರೆ

**ವಾಷಿಂಗ್ಟನ್:** ಚೀನಾ ಸೇರಿದಂತೆ ರಷ್ಯಾದಿಂದ ತೈಲ ಖರೀದಿ ರಾಷ್ಟ್ರಗಳ ಮೇಲೆ ಸುಂಕ ವಿಧಿಸುವಂತೆ ಅಮೆರಿಕ ತನ್ನ ಜಿ7 ದೇಶಗಳಿಗೆ ಕರೆ ನೀಡಿದೆ. ಉಕ್ರೇನ್ ವಿರುದ್ಧದ ಯುದ್ಧವನ್ನು ಸಕ್ರಿಯಗೊಳಿಸಲು ಬಯಸುವ ದೇಶಗಳ ಮೇಲೆ ಸಂಭಾವ್ಯ ಸುಂಕ ವಿಧಿಸುವ ಕುರಿತು 7 ರಾಷ್ಟ್ರಗಳ ಹಣಕಾಸು ಸಚಿವರು ನಡೆದ ಜಿ7 ಸಭೆಯಲ್ಲಿ ಚರ್ಚಿಸಿದರು. ಕೆನಡಾ ಹಣಕಾಸು ಸಚಿವ ಫ್ರಾಂಕೋಯಿಸ್-ಫಿಲಿಪ್ ಷಾಂಪೇನ್ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ಉಕ್ರೇನ್ ವಿರುದ್ಧ ಯುದ್ಧವನ್ನು ಕೊನೆಗಾಣಿಸಲು ರಷ್ಯಾದ ಮೇಲೆ ಸಾಧ್ಯವಾದಷ್ಟು ಒತ್ತಡ ಹೆಚ್ಚಿಸುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು. ಜೊತೆಗೆ ರಷ್ಯಾದ ಯುದ್ಧದ ಪ್ರಯತ್ನಕ್ಕೆ ಸಹಕಾರ ನೀಡುತ್ತಿರುವ ದೇಶಗಳ ಮೇಲೆ ಮತ್ತಷ್ಟು ನಿರ್ಬಂಧ ಹಾಗೂ ಸುಂಕದಂತಹ ಆರ್ಥಿಕ ಕ್ರಮಗಳನ್ನು ಕೈಗೊಳ್ಳಲು ಚರ್ಚೆ ನಡೆಸಿರುವುದಾಗಿ ತಿಳಿದುಬಂದಿದೆ. ಸಭೆಯ ಬಳಿಕ ಅಮೆರಿಕದ ವ್ಯಾಪಾರ ಪ್ರತಿನಿಧಿ ಜೇಮಿಸನ್ ಗ್ರೀರ್, ಅಮೆರಿಕದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಜಂಟಿ ಹೇಳಿಕೆ ಬಿಡುಗಡೆ ಮಾಡಿದರು.



ರಷ್ಯಾದಿಂದ ತೈಲ ಖರೀದಿಸುವ ರಾಷ್ಟ್ರಗಳ ಮೇಲೆ ಸುಂಕ ವಿಧಿಸಲು ಅಮೆರಿಕದೊಂದಿಗೆ ಸೇರಬೇಕು ಕರೆ ನೀಡಲಾಗಿದೆ. ಪುಟಿನ್ ಅವರ ಯುದ್ಧ ತಂತ್ರವನ್ನು ಕೊನೆಗೊಳಿಸಬೇಕಾದ್ರೆ, ಹಣಕಾಸು ಒದಗಿಸುವುದನ್ನು ಕಡಿತಗೊಳಿಸಬೇಕು. ಅರ್ಥಹೀನ ಹತ್ಯೆಯನ್ನು ತಡೆಯಲು ಇದೊಂದೇ ಮಾರ್ಗ, ಆರ್ಥಿಕ ಒತ್ತಡ ಸೃಷ್ಟಿಸಿದ್ರೆ, ಯುದ್ಧ ತಾನಾಗೇ ನಿಲ್ಲುತ್ತದೆ ಎಂದು ಹೇಳಿದ್ದಾರೆ. ಇದಕ್ಕೂ ಮುನ್ನ ಅಮೆರಿಕದ ಖಜಾನೆ ವಕ್ತಾರರು, ಜಿ7 ಮತ್ತು ಯುರೋಪಿಯನ್ ಒಕ್ಕೂಟ ರಾಷ್ಟ್ರಗಳಿಗೆ ರಷ್ಯಾದ ತೈಲ ಖರೀದಿಯನ್ನು ನಿಲ್ಲಿಸುವಂತೆ ಒತ್ತಡ ಹೇರುವಂತೆ ಕರೆ ನೀಡಿದ್ದರು.

**ಸುಂಕ ವಿಧಿಸಿದ್ದೇಕೆ?:** ರಷ್ಯಾದಿಂದ ಭಾರತ ತೈಲ ಖರೀದಿಸುತ್ತಿದೆ. ಈ ಮೂಲಕ ಉಕ್ರೇನ್ ವಿರುದ್ಧದ ಯುದ್ಧಕ್ಕೆ ಫಂಡಿಂಗ್ ಮಾಡುತ್ತಿದೆ ಅನ್ನೋದು ಟ್ರಂಪ್ ಅವರ ಬಲವಾದ ವಾದ. ಅದಕ್ಕಾಗಿ ಈ ಹಿಂದೆ ವಿಧಿಸಿದ್ದ 25% ಆಮದು ಸುಂಕವನ್ನ ಕಳೆದ ಆಗಸ್ಟ್ 27ರಿಂದ 50%ಗೆ ಏರಿಸಿದೆ. ಆದ್ರೆ ಪಾಕಿಸ್ತಾನದ ಆಮದಿನ ಮೇಲೆ ಟ್ರಂಪ್ 19% ಸುಂಕ ಮಾತ್ರ ವಿಧಿಸಿದ್ದಾರೆ.

## ಭ್ರಷ್ಟಾಚಾರ ನಿಯಂತ್ರಣಕ್ಕೆ ಅಲ್ಬೇನಿಯಾ ಕ್ರಮ

**ಪ್ರಿಸ್ಟಿನಾ:** ಸಾರ್ವಜನಿಕ ಕೆಲಸಗಳು, ಅಭಿವೃದ್ಧಿ ಕಾಮಗಾರಿಗಳು, ಟೆಂಡರ್ ಹೀಗೇ ಸರ್ಕಾರದ ಕಾರ್ಯಕ್ರಮಗಳು ಭ್ರಷ್ಟಾಚಾರ ಮುಕ್ತ ಆಗಿರಲು ಅಲ್ಬೇನಿಯಾ ಸರ್ಕಾರವು ಕೃತಕ ಬುದ್ಧಿಮತ್ತೆಯನ್ನೇ ಸಚಿವೆಯನ್ನಾಗಿ ನೇಮಿಸಿದೆ.

ನಾಲ್ಕನೇ ಅವಧಿಗೆ ಎದಿ ರಾಮ ಅವರು ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡಿದ್ದಾರೆ. ಇದೇ ಅವಧಿಯಲ್ಲಿ ಲಂಚ, ಬೆದರಿಕೆ ಅಥವಾ ಸ್ವಜನ ಪಕ್ಷಪಾತವನ್ನು ತಡೆಯುವ ನಿಟ್ಟಿನಲ್ಲಿ ಡೀಲ್ಲಾ ಅರ್ಥಾತ್ ಸೂರ್ಯ ಎಂಬ ಕೃತಕ ಬುದ್ಧಿಮತ್ತೆಯನ್ನೇ ಸಚಿವೆಯನ್ನಾಗಿ ನೇಮಿಸಿದ್ದಾರೆ.

ಸಾರ್ವಜನಿಕ ಟೆಂಡರ್, ಸರ್ಕಾರಿ ಗುತ್ತಿಗೆಗಳು, ಖಾಸಗಿ ಕಂಪನಿಗಳ ವಿವಿಧ ಯೋಜನೆಗಳನ್ನು ಇದು ನಿರ್ವಹಿಸಲಿದೆ. ವೈಯಕ್ತಿಕವಾಗಿ ಕಚೇರಿಯಲ್ಲಿ ಲಭ್ಯವಿರದ ಆದರೆ ವರ್ಚುವಲ್ ಆಗಿ ಲಭ್ಯವಿರುವ ಮೊದಲ ಸಂಪುಟ ದರ್ಜೆ ಸಚಿವ ಡೀಲ್ಲಾ.



ಸಾರ್ವಜನಿಕ ಟೆಂಡರ್‌ಗಳು ಶೇ. 100ರಷ್ಟು ಭ್ರಷ್ಟಾಚಾರ ರಹಿತವಿರುವ ಅಲ್ಬೇನಿಯಾ ಸರ್ಕಾರಕ್ಕೆ ಡೀಲ್ಲಾ ನೆರವಾಗಲಿದೆ ಎಂದು ಪ್ರಧಾನಿ ಎದಿ ತಿಳಿಸಿದ್ದಾರೆ. ಅಲ್ಬೇನಿಯಾದಲ್ಲಿ ಮಾದಕದ್ರವ್ಯ, ಶಸ್ತ್ರಾಸ್ತ್ರಗಳ ಕಳ್ಳಸಾಗಣೆ ನಡೆಸುವ ಗ್ಯಾಂಗ್‌ಗಳು ನಿರಂತರವಾಗಿ ಭ್ರಷ್ಟಾಚಾರ ನಡೆಸುತ್ತಿವೆ. ಈ ಗ್ಯಾಂಗ್‌ಗಳು ಈಗ ಸರ್ಕಾರದ ಪಡಸಾಲೆವರೆಗೂ ತಲುಪಿವೆ. ಇದನ್ನು ನಿಯಂತ್ರಿಸಲು ಮುಂದಾಗಿರುವ ಪ್ರಧಾನಿ ಡೀಲ್ಲಾರನ್ನು ಸಚಿವರನ್ನಾಗಿ ನೇಮಿಸಿದೆ ಎಂದೆನ್ನಲಾಗಿದೆ. ಅಲ್ಬೇನಿಯಾದ ಸದ್ಯದ ಆಡಳಿತ ಪರಿಸ್ಥಿತಿಯಿಂದಾಗಿ ಐರೋಪ್ಯ ಒಕ್ಕೂಟಗಳು ಆ ರಾಷ್ಟ್ರವನ್ನು ದೂರವಿಟ್ಟಿವೆ. ಆದರೆ 2030ರ ಹೊತ್ತಿಗೆ ದೇಶದ ಚಿತ್ರಣವನ್ನೇ ಬದಲಿಸುವ ನಿರ್ಣಯವನ್ನು ಪ್ರಧಾನಿ ರಾಮ ತೆಗೆದುಕೊಂಡಿದ್ದಾರೆ ಎಂದೆನ್ನಲಾಗಿದೆ.

ಡೀಲ್ಲಾ ಮೇಲ್ವಿಚಾರಣೆಯನ್ನು ಯಾರು ಮಾಡಲಿದ್ದಾರೆ ಎಂಬ ಮಾಹಿತಿಯನ್ನು ಸರ್ಕಾರ ನೀಡಿಲ್ಲ. ಕೃತಕ ಬುದ್ಧಿಮತ್ತೆಯನ್ನೇ ಯಾರಾದರು ಯಾಮಾರಿಸಿದರೆ ಮುಂದೇನು ಎಂಬುದನ್ನೂ ತಿಳಿಸಿಲ್ಲ. ಡೀಲ್ಲಾ ನೇಮಕಕ್ಕೆ ಕೆಲವರು ಅಪಸ್ವರ ಎತ್ತಿದ್ದಾರೆ. ಅಲ್ಬೇನಿಯಾದಲ್ಲಿ ಡೀಲ್ಲಾ ಕೂಡಾ ಭ್ರಷ್ಟ ಆಗಲಿದೆ ಎಂದು ಫೇಸ್‌ಬುಕ್‌ನಲ್ಲಿ ಒಬ್ಬರು ಬರೆದು ಕೊಂಡಿದ್ದಾರೆ.

## ಹಿಮಾಚಲ ಪ್ರದೇಶದ ಬಿಲಾಸ್ಪುರದಲ್ಲಿ ಮೇಘಸ್ಫೋಟ

**ಶಿಮ್ಲಾ:** ಹಿಮಾಚಲ ಪ್ರದೇಶದ ಬಿಲಾಸ್ಪುರ ಜಿಲ್ಲೆಯಲ್ಲಿ ಶನಿವಾರ ಬೆಳಗ್ಗಿನ ಜಾವ ಮೇಘಸ್ಫೋಟ ಸಂಭವಿಸಿದ ಪರಿಣಾಮ ಹಲವಾರು ವಾಹನಗಳು ಅವಶೇಷಗಳಡಿ ಹೂತುಹೋಗಿದ್ದು, ಅಪಾರ ಪ್ರಮಾಣದ ಬೆಳೆಹಾನಿಯುಂಟಾಗಿದೆ. ನೈನಾ ದೇವಿ ವಿಧಾನಸಭಾ ಕ್ಷೇತ್ರದ ನಮ್ಹೋಲ್ ಪ್ರದೇಶದ ಗುತ್ರಹಾನ್ ಗ್ರಾಮದಲ್ಲಿ ಮೇಘಸ್ಫೋಟ ಸಂಭವಿಸಿದೆ. ಘಟನೆಯಲ್ಲಿ ಯಾವುದೇ ಸಾವುನೋವು ಸಂಭವಿಸಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ರಾಜ್ಯ ರಾಜಧಾನಿ ಶಿಮ್ಲಾದಲ್ಲಿ ದಟ್ಟ ಮಂಜು ಆವರಿಸಿದ್ದು, ಕಡಿಮೆ ಗೋಚರತೆಯ ಪರಿಣಾಮ ವಾಹನ ಸವಾರರು ಪರದಾಡಬೇಕಾಯಿತು. ಶನಿವಾರ ಮತ್ತು ಭಾನುವಾರ ರಾಜ್ಯದ ಅನೇಕ ಭಾಗಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದ್ದು, ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಅಟ್ಟಾರಿ-ಲೇಹ್ ರಸ್ತೆ, ಆಟ್-ಸೈಂಜ್ ರಸ್ತೆ, ಅಮೃತಸರ-ಭೋಟಾ ರಸ್ತೆ ಸೇರಿದಂತೆ ಒಟ್ಟು 503 ರಸ್ತೆಗಳನ್ನು ಬಂದ್ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇತ್ತೀಚಿನ ಪ್ರವಾಹ ಮತ್ತು ಭೂಕುಸಿತಗಳಿಂದಾಗಿ ರಾಜ್ಯದಲ್ಲಿ ಸುಮಾರು 953 ವಿದ್ಯುತ್ ಪರಿವರ್ತಕಗಳು ಮತ್ತು 336 ನೀರು ಸರಬರಾಜು ಯೋಜನೆಗಳು ಅಸ್ತವ್ಯಸ್ತಗೊಂಡಿವೆ ಎಂದು ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರ ತಿಳಿಸಿದೆ. ರಾಜ್ಯದಲ್ಲಿ ಜೂನ್ 20ರಿಂದ ಸೆಪ್ಟೆಂಬರ್ 12ರವರೆಗೆ ಒಟ್ಟು 386 ಜನರು ಸಾವನ್ನಪ್ಪಿದ್ದಾರೆ. 386 ಮಂದಿ ಪೈಕಿ 218 ಜನರು ಮಳೆ ಸಂಬಂಧಿತ ಘಟನೆಗಳಲ್ಲಿ ಸಾವನ್ನಪ್ಪಿದರೆ, 168 ಜನರು ರಸ್ತೆ ಅಪಘಾತಗಳಲ್ಲಿ ಸಾವನ್ನಪ್ಪಿದ್ದಾರೆ. ಹಠಾತ್ ಪ್ರವಾಹ ಮತ್ತು ಭೂಕುಸಿತಗಳಿಂದಾಗಿ ರಾಜ್ಯವು 4,465 ಕೋಟಿ ರೂ. ನಷ್ಟವನ್ನು ಅನುಭವಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಹಿಮಾಚಲ ಪ್ರದೇಶದಲ್ಲಿ ಜೂನ್ 1ರಿಂದ ಸೆಪ್ಟೆಂಬರ್ 12ರವರೆಗೆ ಸರಾಸರಿ 967.2 ಮಿ.ಮೀ ಮಳೆಯಾಗಿದೆ.



# ನೇಪಾಳದ ಹಂಗಾಮಿ ಪ್ರಧಾನಿಯಾಗಿ ಸುಶೀಲಾ ಕಾರ್ಕಿ ಆಯ್ಕೆ

### ಕೊನೆಗೂ ನೇಪಾಳಕ್ಕೆ ಸಿಕ್ಕಿದರು ಪ್ರಧಾನಿ, ಹಂಗಾಮಿ ಪಿಎಂ ಆಗಿ ಅಧಿಕಾರ ಸ್ವೀಕರಿಸಿದ ನಿವೃತ್ತ ನ್ಯಾಯಮೂರ್ತಿ

**ಕಠ್ಮಂಡು:** ಯುವಜನತೆಯ ಕ್ಷಿಪ್ರಕ್ರಾಂತಿಯಿಂದ ರಾಜಕೀಯ ಬಿಕ್ಕಟ್ಟು ತಲೆದೋರಿರುವ ನೇಪಾಳದ ಹಂಗಾಮಿ ಪ್ರಧಾನಿಯಾಗಿ ಸುಪ್ರೀಂ ಕೋರ್ಟ್ ನಿವೃತ್ತ ಮುಖ್ಯ ನ್ಯಾಯಮೂರ್ತಿ ಸುಶೀಲಾ ಕಾರ್ಕಿ ಅಧಿಕಾರ ವಹಿಸಿಕೊಂಡಿದ್ದಾರೆ. ದೇಶದ ಸುಪ್ರೀಂ ಕೋರ್ಟ್‌ನ ಮೊದಲ ಮಹಿಳಾ ಮುಖ್ಯ ನ್ಯಾಯಮೂರ್ತಿಯಾಗಿದ್ದ ಸುಶೀಲಾ ಕಾರ್ಕಿ ಅವರು ನೇಪಾಳದ ಮೊದಲ ಮಹಿಳಾ ಪ್ರಧಾನಿಯೂ ಆಗುವ ಮೂಲಕ ವಿಶೇಷ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಸರಳ ಸಮಾರಂಭದಲ್ಲಿ ನೇಪಾಳ ಅಧ್ಯಕ್ಷ ರಾಮಚಂದ್ರ ಪೌಡೆಲ್ ಅವರು ಹಂಗಾಮಿ ಪ್ರಧಾನಿ ಸುಶೀಲಾ ಕಾರ್ಕಿ ಅವರಿಗೆ ಅಧಿಕಾರ ಗೌಪ್ಯತೆಯ ಪ್ರತಿಜ್ಞಾವಿಧಿ ಬೋಧಿಸಿದರು.

ಕೆ.ಪಿ. ಶರ್ಮಾ ಓಲಿ ನೇತೃತ್ವದ ಸರಕಾರ ಪತನಕ್ಕೆ ಕಾರಣವಾಗಿದ್ದ ಜನರೇಷನ್ ಝೆಡ್ ಮುಖಂಡರ ಜತೆ ಹೊಸ ನಾಯಕನ ಆಯ್ಕೆ ಸಂಬಂಧ ನೇಪಾಳ ಅಧ್ಯಕ್ಷ ರಾಮಚಂದ್ರ ಪೌಡೆಲ್, ಸೇನಾ ಮುಖ್ಯಸ್ಥ ಅಶೋಕ್ ರಾಜ್ ಸಿಗ್ದೇಲ್ ಸಮಾಲೋಚನೆ ನಡೆಸಿದರು. ಹೋರಾಟಗಾರರ ಎರಡು ಗುಂಪುಗಳ ಮನವೊಲಿಸಿ ಸುಶೀಲಾ ಕಾರ್ಕಿ ಅವರನ್ನು ಮಧ್ಯಂತರ ಸರಕಾರದ ಮುಖ್ಯಸ್ಥರಾಗಿ ಒಮ್ಮತದಿಂದ ಆಯ್ಕೆ ಮಾಡಲಾಯಿತು. ಮುಂದಿನ ಸಂಸತ್ ಚುನಾವಣೆ ನಡೆಯುವ ತನಕ ಕಾರ್ಕಿ ಅವರು ಮಧ್ಯಂತರ ಸರಕಾರ ಮುನ್ನಡೆಸಲಿದ್ದಾರೆ. ಸಂಸತ್ ವಿಸರ್ಜಿಸುವುದು, ಭ್ರಷ್ಟರ ವಿರುದ್ಧ ಕ್ರಮ ಜರುಗಿಸುವುದು ಸೇರಿದಂತೆ ಹಲವು ಷರತ್ತುಗಳ ಮೇಲೆ ಸುಶೀಲಾ ನಾಯಕತ್ವಕ್ಕೆ ಜನರೇಷನ್ ಝೆಡ್ ಗುಂಪುಗಳು ಒಪ್ಪಿಕೊಂಡಿವೆ. ನಾಯಕತ್ವ ಆಯ್ಕೆ ವಿಚಾರದಲ್ಲಿ ಇಬ್ಭಾಗಗೊಂಡಿದ್ದ ಜನ್ ಝೆಡ್ ಗುಂಪುಗಳ ನಡುವೆ ಸಹಮತ ಮೂಡಿಸಿ ಸುಶೀಲಾ ಕಾರ್ಕಿ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿದು ಬಂದಿದೆ.



ದೇಶದ ಮೊದಲ ಮಹಿಳಾ ಪಿಎಂ

**ಬನಾರಸ್ ವಿವಿಯಲ್ಲಿ ಉನ್ನತ ಅಧ್ಯಯನ ಮಾಡಿದ್ದ ಕಾರ್ಕಿ:** ನೇಪಾಳದ ನೂತನ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡಿರುವ ಸುಶೀಲಾ ಕಾರ್ಕಿ ಅವರು 1952ರ ಜೂನ್ 7 ರಂದು ಬಿರತ್‌ನಗರದಲ್ಲಿ ಜನಿಸಿದರು. ನೇಪಾಳದಲ್ಲಿಯೇ ಬಿಎ ಪದವಿ (1972) ಮುಗಿಸಿದ ಸುಶೀಲಾ ಕಾರ್ಕಿ ಅವರು 1975ರಲ್ಲಿ ಭಾರತದ ಹಿಂದೂ ಬನರಾಸ್ (ವಾರಣಾಸಿ) ವಿಶ್ವವಿದ್ಯಾಲಯದಲ್ಲಿ ರಾಜಕೀಯ ಶಾಸ್ತ್ರದಲ್ಲಿ ಎಂಎ ಸ್ನಾತಕೋತ್ತರ ಪದವಿ ಪಡೆದುಕೊಂಡರು. ನೇಪಾಳದ ತ್ರಿಭುವನ್ ವಿವಿಯಲ್ಲಿ (1978) ಕಾನೂನು ಪದವಿ ಪಡೆದರು. 1979ರಲ್ಲಿ ವಕೀಲ ವೃತ್ತಿ ಆರಂಭಿಸಿದರು. 2007ರಲ್ಲಿ ಹಿರಿಯ ವಕೀಲರಾಗಿ ನೇಮಕಗೊಂಡರು.

2009ರಲ್ಲಿ ಸುಪ್ರೀಂ ಕೋರ್ಟ್ ಹಂಗಾಮಿ ನ್ಯಾಯಮೂರ್ತಿಯಾಗಿ ನೇಮಕವಾದರು. 2010ರಲ್ಲಿ ಕಾಯಂ ನ್ಯಾಯಮೂರ್ತಿಯಾಗಿ ನೇಮಕಗೊಂಡರು. ಸಂಸತ್‌ನಲ್ಲಿ ನೇಪಾಳಿ ಕಾಂಗ್ರೆಸ್ ಮಂಡಿಸಿದ ಮಹಾಭಿಯೋಗ ಅಂಗೀಕಾರಗೊಂಡ ಹಿನ್ನೆಲೆಯಲ್ಲಿ 2017ರಲ್ಲಿ ಸುಶೀಲಾ ಕಾರ್ಕಿ ಅವರನ್ನು ನ್ಯಾಯಮೂರ್ತಿ ಹುದ್ದೆಯಿಂದ ವಜಾಗೊಳಿಸಲಾಯಿತು. ಸಾರ್ವಜನಿಕವಾಗಿ ತೀವ್ರ ವಿರೋಧ ವ್ಯಕ್ತವಾಗುತ್ತಿದ್ದಂತೆ ವಜಾ ಆದೇಶ ಹಿಂಪಡೆಯಲಾಯಿತು. 2016ರಿಂದ 2017ರ ವರೆಗೆ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸಿದರು.

**ಜೆನ್ ಝೆಡ್ ಚಳವಳಿಗೆ ಜಯ**

**ಜನರೇಷನ್ ಝೆಡ್ ದಂಗೆಯಿಂದ ಅರಾಜಕ ಸ್ಥಿತಿಯತ್ತ ಸಾಗಿದ್ದ ನೇಪಾಳದಲ್ಲಿ ಯುವಜನರ ಆಶೋತ್ತರದಂತೆ ಮಧ್ಯಂತರ ಸರಕಾರ ರಚನೆಯಾಗಿದೆ. ಭ್ರಷ್ಟಾಚಾರ, ಸಾಮಾಜಿಕ ಜಾಲತಾಣಗಳ ಮೇಲೆ ನಿಷೇಧದ ವಿರುದ್ಧ ಬೀದಿಗಿಳಿದಿದ್ದ ಜನರೇಷನ್ ಝೆಡ್ ಕ್ರಾಂತಿಕಾರಿ ಚಳವಳಿಗೆ ಕೆ.ಪಿ. ಶರ್ಮಾ ಓಲಿ ನೇತೃತ್ವದ ಸರಕಾರ ಪತನವಾಗಿತ್ತು. ಮೂರು ದಿನಗಳ ಸಂಘರ್ಷದಲ್ಲಿ ಭಾರತೀಯ ಮೂಲದ ಒಬ್ಬರು ಸೇರಿ 51 ಮಂದಿ ಮೃತಪಟ್ಟಿದ್ದರು. ಸುಪ್ರೀಂ ಕೋರ್ಟ್, ಪ್ರಧಾನಿ, ಮಾಜಿ ಪ್ರಧಾನಿಗಳ ನಿವಾಸ, ಸಚಿವರ ವಸತಿ ಗೃಹ, ಪಂಚತಾರಾ ಹೋಟೆಲ್‌ಗಳಿಗೆ ಬೆಂಕಿ ಹಚ್ಚಲಾಗಿತ್ತು. ಹೋರಾಟದ ವೇಳೆ 1,300 ಜನ ಗಾಯಗೊಂಡಿದ್ದರು.**

**ಸುಶೀಲಾ ಆಯ್ಕೆಗೆ ಹೊಂದಾಣಿಕೆ**

**ಸುಶೀಲಾ ಅವರನ್ನು ಹಂಗಾಮಿ ಸರಕಾರದ ಮುಖ್ಯಸ್ಥರಾಗಿ ನೇಮಿಸಲು ಸಂವಿಧಾನಕ್ಕೆ ಕೆಲವೊಂದಿಷ್ಟು ಹೊಂದಾಣಿಕೆ ಮಾಡಲಾಗಿದೆ. ಸಾಂವಿಧಾನಿಕ ಪರಮಾಧಿಕಾರ ಬಳಸಿಕೊಂಡ ಅಧ್ಯಕ್ಷ ರಾಮಚಂದ್ರ ಪೌಡೆಲ್ ಅವರು ಸುಶೀಲಾ ಅವರನ್ನು ಸಂಸತ್‌ನ ಮೇಲ್ಮನೆ ಸದಸ್ಯರಾಗಿ ನೇಮಕ ಮಾಡಿದರು. ನೇಪಾಳ ಸಂವಿಧಾನದ ಪ್ರಕಾರ ಸಂಸತ್‌ನ ಸದಸ್ಯರು ಮಾತ್ರ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಳ್ಳುವ ಅವಕಾಶವಿದೆ.**

## ಮಿನಿ ನ್ಯೂಸ್

### ರಷ್ಯಾದ ಅತಿದೊಡ್ಡ ತೈಲ ಟರ್ಮಿನಲ್ ಮೇಲೆ ಉಕ್ರೇನ್ ಡ್ರೋನ್ ದಾಳಿ

**ನವದೆಹಲಿ:** ಬಾಲ್ಟಿಕ್ ಸಮುದ್ರದಲ್ಲಿರುವ ರಷ್ಯಾದ ಮಾಸ್ಕೋದ ಅತಿದೊಡ್ಡ ತೈಲ ಟರ್ಮಿನಲ್ ಮೇಲೆ ಕೈವ್ ಡ್ರೋನ್ ದಾಳಿ ನಡೆಸಿದೆ. ಇದರಿಂದ ಉಕ್ರೇನ್ ಮತ್ತು ರಷ್ಯಾ ನಡುವಿನ ಯುದ್ಧ ಮತ್ತೆ ತೀವ್ರಗೊಂಡಿದೆ. ಉಕ್ರೇನಿಯನ್ ಅಧಿಕಾರಿಗಳ ಪ್ರಕಾರ, ರಷ್ಯಾದ ಲೆನಿನ್‌ಗ್ರಾಡ್ ಪ್ರದೇಶದ ಪ್ರಿಮೊಸ್ಕ್ ತೈಲ ಬಂದರನ್ನು ಗುರಿಯಾಗಿಸಿಕೊಂಡು ಈ ದಾಳಿ ನಡೆದಿದೆ. ಬಾಲ್ಟಿಕ್ ಪೈಪ್‌ಲೈನ್ ವ್ಯವಸ್ಥೆಯ ಕೊನೆಯ ನಿಲ್ದಾಣವಾದ ಪ್ರಿಮೊಸ್ಕ್ ತೈಲ ಬಂದರಿನ ಮೇಲೆ ನಡೆದ ಡ್ರೋನ್ ದಾಳಿಯಿಂದ ಎರಡು ಹಡಗುಗಳು ಹಾನಿಗೊಳಗಾದವು. ಆದರೆ, ಡ್ರೋನ್ ದಾಳಿಗೆ ರಷ್ಯಾದ ರಕ್ಷಣಾ ಅಧಿಕಾರಿಗಳು ಇನ್ನೂ ಪ್ರತಿಕ್ರಿಯಿಸಿಲ್ಲ. ಡ್ರೋನ್ ದಾಳಿಯ ಸಮಯದಲ್ಲಿ ಡಿಕ್ಕಿ ಹೊಡೆದ ಎರಡು ಟ್ಯಾಂಕರ್‌ಗಳನ್ನು ಕುಸ್ಟೊ ಮತ್ತು ಕೈ ಯುನ್ ಎಂದು ಗುರುತಿಸಲಾಗಿದೆ. ಕಸ್ಟೊವನ್ನು ಸೊಲ್ವಿಸ್ಟ್ ಕಾರ್ಪ್ ಒಡೆತನದಲ್ಲಿದೆ. ಕೈ ಯುನ್ ಅನ್ನು ಅಕ್ರೋನಿಕ್ಸ್ ಲಿಮಿಟೆಡ್ ಒಡೆತನದಲ್ಲಿದೆ. ಜಾಗತಿಕ ಮಾಧ್ಯಮ ವರದಿಗಳ ಪ್ರಕಾರ, ಈ ಎರಡು ಹಡಗುಗಳು ಸೀಶೆಲ್‌ನಲ್ಲಿ ನೋಂದಾಯಿಸಲ್ಪಟ್ಟಿವೆ.

ಇತ್ತೀಚೆಗೆ, ರಷ್ಯಾ, ಉಕ್ರೇನ್ ಪರಸ್ಪರ ಡ್ರೋನ್ ದಾಳಿಗಳನ್ನು ತೀವ್ರಗೊಳಿಸಿವೆ. ನಿರ್ಣಾಯಕ ಮೂಲಸೌಕರ್ಯವನ್ನು ಗುರಿಯಾಗಿರಿಸಿಕೊಳ್ಳುವ ಗುರಿಯನ್ನು ಹೊಂದಿವೆ. ಡ್ರೋನ್ ದಾಳಿಗಳು ರಷ್ಯನ್ನರಿಗೆ ವಿಶೇಷವಾಗಿ ತೀವ್ರವಾಗಿವೆ. ಆಗಸ್ಟ್‌ನಲ್ಲಿ ನಡೆದ ಡ್ರೋನ್ ದಾಳಿಯಲ್ಲಿ ಉಕ್ರೇನ್ ರಷ್ಯಾದ ತೈಲ ಸಂಸ್ಕರಣಾ ಸಾಮರ್ಥ್ಯದ ಶೇ. 20ರಷ್ಟು ನಿಷ್ಕ್ರಿಯವಾಗಿದೆ. ಈ ವಾರದ ಆರಂಭದಲ್ಲಿ ನ್ಯಾಟೋ ಸದಸ್ಯ ಪೋಲೆಂಡ್ ತನ್ನ ವಾಯುಪ್ರದೇಶದ ಮೇಲೆ ದೊಡ್ಡ ಸಂಖ್ಯೆಯ ರಷ್ಯಾದ ಡ್ರೋನ್ ಹೊಡೆದುರುಳಿಸಿರುವುದಾಗಿ ಹೇಳಿಕೊಂಡಿತ್ತು.

### ತಾಯಿಯನ್ನೇ ಕೊಂದ ಭಾರತ ಮೂಲದ ವ್ಯಕ್ತಿಗೆ ಜೀವಾವಧಿ ಶಿಕ್ಷೆ

**ಲಂಡನ್:** ತಾಯಿಯನ್ನು ಹತ್ಯೆ ಮಾಡಿದ್ದ ಆರೋಪದ ಮೇಲೆ ಭಾರತ ಮೂಲದ ವ್ಯಕ್ತಿಗೆ ಬ್ರಿಟನ್ ನ್ಯಾಯಾಲಯವು ಶನಿವಾರ ಜೀವಾವಧಿ ಶಿಕ್ಷೆ ವಿಧಿಸಿದೆ. 2024ರ ಸೆಪ್ಟೆಂಬರ್‌ನಲ್ಲಿ ಟಿವಿ ರಿಮೋಟ್‌ಗಾಗಿ ತಾಯಿ ಮತ್ತು ಮಗನ ನಡುವೆ ನಡೆದ ಜಗಳವು ಕೊಲೆಯಲ್ಲಿ ಅಂತ್ಯವಾಗಿತ್ತು. ಭಾರತ ಮೂಲದ ಸುರ್ಜಿತ್ ಸಿಂಗ್ (39) ಎನ್ನುವ ವ್ಯಕ್ತಿಯು, ತನ್ನ ತಾಯಿ ಮೊಹಿಂದರ್ ಕೌರ್ (76) ಅವರನ್ನು ಬರ್ಮಿಂಗ್ಹಾಮ್‌ನಲ್ಲಿರುವ ಮನೆಯಲ್ಲಿ ಹತ್ಯೆ ಮಾಡಿದ್ದ. ಘಟನೆಯ ನಂತರ ಆರೋಪಿಯನ್ನು ಬರ್ಮಿಂಗ್ಹಾಮ್ ಪೊಲೀಸರು ಬಂಧಿಸಿದ್ದರು. ತನಿಖೆಯ ವೇಳೆ ಸುರ್ಜಿತ್ ಸಿಂಗ್ ಅವರ ರಕ್ತದಲ್ಲಿ ಆಲ್ಕೋಹಾಲ್ ಅಂಶ ಕಂಡುಬಂದಿತ್ತು. ಆರೋಪಿಗೆ ಬ್ರಿಟನ್ ನ್ಯಾಯಾಲಯವು ಜೀವಾವಧಿ ಶಿಕ್ಷೆ ಘೋಷಿಸಿದ್ದು, ಕನಿಷ್ಠ 15 ವರ್ಷಗಳ ಸೆರೆವಾಸ ಅನುಭವಿಸಬೇಕಿದೆ.

### ಪ್ರಧಾನಿ ಸುಶೀಲಾ ಕಾರ್ಕಿಗೆ ನರೇಂದ್ರ ಮೋದಿ ಅಭಿನಂದನೆ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ನೇಪಾಳದ ನೂತನ ಪ್ರಧಾನಿಯಾಗಿ ಆಯ್ಕೆಯಾಗಿರುವ ಸುಶೀಲಾ ಕಾರ್ಕಿ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ. ನೇಪಾಳದ ಮಧ್ಯಂತರ ಸರ್ಕಾರದ ಪ್ರಧಾನಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ಸುಶೀಲಾ ಕಾರ್ಕಿ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು. ನೇಪಾಳದ ಸಹೋದರ-ಸಹೋದರಿಯರ ಶಾಂತಿ, ಪ್ರಗತಿ, ಸಮೃದ್ಧಿಗೆ ಭಾರತ ಸಂಪೂರ್ಣವಾಗಿ ಬದ್ಧವಾಗಿದೆ ಎಂದು ಮೋದಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ನೇಪಾಳದ ಮಧ್ಯಂತರ ಸರ್ಕಾರದ ನೂತನ ಪ್ರಧಾನಿಯಾಗಿ ಸುಪ್ರೀಂ ಕೋರ್ಟ್‌ನ ನಿವೃತ್ತ ಮುಖ್ಯ ನ್ಯಾಯಮೂರ್ತಿ ಸುಶೀಲಾ ಕಾರ್ಕಿ (73) ಅವರು ಶುಕ್ರವಾರ ರಾತ್ರಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ನೇಪಾಳದ ಮೊದಲ ಮಹಿಳಾ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಕಾರ್ಕಿ ಅವರಿಗೆ ಅಧ್ಯಕ್ಷ ರಾಮಚಂದ್ರ ಪೌದೆಲ್, ಉಪಾಧ್ಯಕ್ಷ ರಾಮ ಸಹಾಯ್ ಯಾದವ್, ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಪ್ರಕಾಶ್ ಮಾನ್ ಸಿಂಗ್ ರಾವತ್ ಸೇರಿದಂತೆ ಅನೇಕರು ಶುಭ ಹಾರೈಸಿದ್ದಾರೆ. ಜೆನ್-ಝಿ ಪ್ರತಿಭಟನೆಯಿಂದಾಗಿ ಈ ವಾರದ ಆರಂಭದಲ್ಲಿ ಪ್ರಧಾನಿ ಕೆ.ಪಿ. ಶರ್ಮಾ ಓಲಿ ಅವರ ದಿಢೀರ್ ರಾಜೀನಾಮೆಯ ನಂತರ ನೇಪಾಳದಲ್ಲಿ ತಲೆದೋರಿದ್ದ ರಾಜಕೀಯ ಅನಿಶ್ಚಿತತೆಗೆ ಇದರೊಂದಿಗೆ ತೆರೆಬಿದ್ದಂತಾಗಿದೆ.

### ಮಕ್ಕಳ ಸಾವು: ಕೋವಿಡ್ ಲಸಿಕೆಯ ಸಾಧ್ಯತೆ ಎಂದ ಟ್ರಂಪ್ ಆಡಳಿತ, ತನಿಖೆ

**ವಾಷಿಂಗ್ಟನ್:** ಅಮೆರಿಕದಲ್ಲಿ ಮೃತಪಟ್ಟ 25 ಮಕ್ಕಳ ಸಾವಿಗೆ ಕೋವಿಡ್ ಲಸಿಕೆ ಕಾರಣವಿರಬಹುದು ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸರ್ಕಾರದ ಆರೋಗ್ಯಾಧಿಕಾರಿಗಳು ಚಿಂತನೆ ನಡೆಸಿದ್ದಾರೆ ಎಂದು ವರದಿಯಾಗಿದೆ. ಕೋವಿಡ್ ಲಸಿಕೆಯ ಅಡ್ಡ ಪರಿಣಾಮ ಅಥವಾ ಕೆಟ್ಟ ಅನುಭವವನ್ನು ಆಧರಿಸಿ ಫೆಡರಲ್ ಲಸಿಕೆಯ ಅಡ್ಡ ಪರಿಣಾಮ ವರದಿ ವ್ಯವಸ್ಥೆಗೆ ಸಲ್ಲಿಕೆಯಾದ ಮಾಹಿತಿ ಅನ್ವಯ ಈ ನಿರ್ಧಾರಕ್ಕೆ ಈ ನಾಲ್ವರು ಅಧಿಕಾರಿಗಳ ಸಮಿತಿ ಬಂದಿದೆ ಎಂದು ವಾಷಿಂಗ್ಟನ್ ಪೋಸ್ಟ್ ವರದಿ ಮಾಡಿದೆ. ಅಮೆರಿಕ ಆಹಾರ ಮತ್ತು ಔಷಧ ನಿಯಂತ್ರಣ ಮತ್ತು ರೋಗ ನಿಯಂತ್ರಣ ಮತ್ತು ತಡೆಗಟ್ಟುವ ಕೇಂದ್ರದ ಸಿಬ್ಬಂದಿ ನಿರಂತರವಾಗಿ ವಿಶ್ಲೇಷಣೆ ಮತ್ತು ಇನ್ನಿತರ ಸುರಕ್ಷತಾ ಮಾಹಿತಿ ಆಧರಿಸಿ ಈ ನಿರ್ಧಾರಕ್ಕೆ ಬರಲಾಗಿದೆ ಎಂದು ಅಮೆರಿಕದ ಆರೋಗ್ಯ ಮತ್ತು ಮಾನವ ಸೇವೆಗಳ ವಿಭಾಗದ ಅಧಿಕಾರಿಗಳು ತಿಳಿಸಿದ್ದಾರೆ.

ಲಸಿಕೆಯ ಸುರಕ್ಷತಾ ಮಾಹಿತಿಯನ್ನು ಸಾರ್ವಜನಿಕವಾಗಿ ಬಿಡುಗಡೆ ಮಾಡದ ಹೊರತು ಇದನ್ನು ಶುದ್ಧ ಊಹಾಪೋಹ ಎಂದು ಹೇಳಿಕೆಯಲ್ಲಿ ಸೇರಿಸಲಾಗಿದೆ. ಹೊಸ ಕೋವಿಡ್ ಲಸಿಕೆ ಶಿಫಾರಸುಗಳಿಗೆ ಪ್ರಸ್ತುತ ಮಕ್ಕಳ ಸಾವಿನ ಪ್ರಕರಣಗಳನ್ನು ಸೇರಿಸಲು ಸಿಡಿಸಿಗೆ ಟ್ರಂಪ್ ಆಡಳಿತ ನಿರ್ಧರಿಸಿದೆ ಎನ್ನಲಾಗಿದೆ. ಮಾಡೆರ್ನಾ ಕೋವಿಡ್ ಲಸಿಕೆ ಪಡೆದ 90 ರಾಷ್ಟ್ರಗಳಲ್ಲಿರುವ ಮಕ್ಕಳು ಅಥವಾ ಗರ್ಭಿಣಿಯರಲ್ಲಿ ಯಾವುದೇ ಅಡ್ಡ ಪರಿಣಾಮ ಬೀರಿದ ವರದಿಯಾಗಿಲ್ಲ ಎಂದು ಕಂಪನಿ ತನ್ನ ಇ-ಮೇಲ್ ಹೇಳಿಕೆಯಲ್ಲಿ ತಿಳಿಸಿದೆ. ಬಯೋಎನ್‌ಟೆಕ್ ಜತೆಗೂಡಿ ಅಭಿವೃದ್ಧಿಪಡಿಸಿದ ಲಸಿಕೆಯನ್ನು ಶತಕೋಟಿಗೂ ಅಧಿಕ ಜನರಿಗೆ ನೀಡಲಾಗಿದೆ. ಇವರಲ್ಲಿ ವಯಸ್ಕರು, ಯುವಕರು, ಮಕ್ಕಳು ಸೇರಿದ್ದಾರೆ.

ಸುರಕ್ಷತೆ ಮತ್ತು ವೈರಾಣು ವಿರುದ್ಧ ಪರಿಣಾಮಕಾರಿ ಹೋರಾಟ ನಡೆಸಿದ ವರದಿಗಳು ದಾಖಲಾಗಿವೆ ಎಂದು ಫೈಜರ್ ಹೇಳಿದೆ. ತಾನು ಅಭಿವೃದ್ಧಿಪಡಿಸಿದ ಕೋವಿಡ್ ಲಸಿಕೆಯ ಕ್ಲಿನಿಕಲ್ ಡಾಟಾ, ನೈಜ ಸಾಕ್ಷಿಗಳು ಎಫ್‌ಡಿಎಗೆ ಲಭ್ಯವಿದೆ. ಇದರೊಂದಿಗೆ ಜಗತ್ತಿನಾದ್ಯಂತ ಇರುವ ಔಷಧ ನಿಯಂತ್ರಕರು ಮತ್ತು ವಿಜ್ಞಾನಿಗಳು ಹಾಗೂ ಸಾರ್ವಜನಿಕ ಆರೋಗ್ಯದ ವೈದ್ಯಕೀಯ ತಜ್ಞರು ಇದನ್ನು ಪರಿಶೀಲಿಸಿ ಸುರಕ್ಷಿತ ಎಂದಿದ್ದಾರೆ ಎಂದು ನೊವಾವ್ಯಾಕ್ಸ್ ತಿಳಿಸಿದೆ.



# ಕೆಡಿ ಸಿನಿಮಾ ಸೆಟ್‌ನಲ್ಲಿ ಕಿಚ್ಚ ಸುದೀಪ್

ಕೆಡಿ' ಸಿನಿಮಾ ಸೆಟ್‌ನಲ್ಲಿ ಸುದೀಪ್, ಧ್ರುವ ಸರ್ಜಾ ನಟಿಸಿ, ಪ್ರೇಮ್ ನಿರ್ದೇಶನ ಮಾಡುತ್ತಿರುವ ಬಹುತಾರಾಗಣದ ಪ್ಯಾನ್ ಇಂಡಿಯಾ ಸಿನಿಮಾ 'ಕೆಡಿ' ಶೂಟಿಂಗ್ ಭರದಿಂದ ಸಾಗಿದೆ. ಭರ್ಜರಿ ಆಕ್ಷನ್ ಸಿನಿಮಾ ಅನ್ನು ಪ್ರೇಮ್ ತೆರೆಗೆ ತರುವ ಪ್ರಯತ್ನದಲ್ಲಿದ್ದು, ಈಗಾಗಲೇ ಬಿಡುಗಡೆ ಆಗಿರುವ ಟೀಸರ್‌ನಲ್ಲಿ ರಕ್ತದ ಓಕುಳಿಯನ್ನೇ ಹರಿಸಿದ್ದಾರೆ. ಧ್ರುವ ಸರ್ಜಾ ನಾಯಕರಾಗಿರುವ ಈ ಸಿನಿಮಾದಲ್ಲಿ ಹಲವು ದೊಡ್ಡ ಸ್ಟಾರ್‌ಗಳನ್ನು ಅತಿಥಿ ಪಾತ್ರಗಳಿಗೆ ಹಾಕಿಕೊಂಡಿದ್ದು, ಇದೀಗ ಮತ್ತೊಬ್ಬ ಪ್ಯಾನ್ ಇಂಡಿಯಾ ಸ್ಟಾರ್ ಸುದೀಪ್ ಅವರು ಸಹ 'ಕೆಡಿಗೆ ಕೈಜೋಡಿಸಿದಂತಿದೆ.

ಧ್ರುವ ಸರ್ಜಾ ನಟಿಸುತ್ತಿರುವ 'ಕೆಡಿ' ಸಿನಿಮಾದ ಚಿತ್ರೀಕರಣ ಹೈದರಾಬಾದ್‌ನ ರಾಮೋಜಿ ಫಿಲಂ ಸಿಟಿ ಸ್ಟುಡಿಯೋನಲ್ಲಿ ನಡೆಯುತ್ತಿದೆ. ಸಿನಿಮಾ ಚಿತ್ರೀಕರಣಕ್ಕಾಗಿ ದೊಡ್ಡ ರೈಲಿನ ಸೆಟ್ ಹಾಕಿ ಆಕ್ಷನ್ ದೃಶ್ಯದ ಚಿತ್ರೀಕರಣವನ್ನು ಮಾಡಲಾಗುತ್ತಿದೆ. ಸಿನಿಮಾ ಸೆಟ್‌ಗೆ ಕಿಚ್ಚ ಸುದೀಪ್ ಭೇಟಿ ನೀಡಿದ್ದು, ಸಿನಿಮಾದ ಅತಿಥಿ ಪಾತ್ರದಲ್ಲಿ ಕಿಚ್ಚ ನಟಿಸಲಿದ್ದಾರೆಯೇ ಎಂಬ ಅನುಮಾನ ವ್ಯಕ್ತವಾಗಿದೆ.

ಸುದೀಪ್ ಅವರು ಈ ಹಿಂದೆ ಪ್ರೇಮ್ ನಿರ್ದೇಶನದ 'ದಿ ವಿಲನ್' ಸಿನಿಮಾನಲ್ಲಿ ನಟಿಸಿದ್ದಾರೆ. ಆದರೆ ಆ ಸಿನಿಮಾ ನಿರೀಕ್ಷಿತ ಮಟ್ಟದಲ್ಲಿ ಪ್ರೇಕ್ಷಕರನ್ನು ತಲುಪಿರಲಿಲ್ಲ. ಇದೀಗ ಹಲವು ಸ್ಟಾರ್ ನಟ-ನಟಿಯರನ್ನು ಗುಡ್ಡೆ ಹಾಕಿಕೊಂಡು ಪ್ರೇಮ್ ಅವರು 'ಕೆಡಿ' ಸಿನಿಮಾ ಮಾಡುತ್ತಿದ್ದು, ಧ್ರುವ ಸರ್ಜಾ ಪಾಲಿಗೆ ಇದು ಮಹತ್ವದ ಸಿನಿಮಾ ಆಗಿದೆ. ಧ್ರುವ ಸರ್ಜಾ, ಸುದೀಪ್ ಅವರ ಆಪ್ತ ನಟ ಆಗಿರುವ ಕಾರಣ, ಇದೀಗ ಸುದೀಪ್ 'ಕೆಡಿ' ಸಿನಿಮಾನಲ್ಲಿ ಮಹತ್ವದ ಅತಿಥಿ ಪಾತ್ರದಲ್ಲಿ ನಟಿಸಲು ಒಪ್ಪಿಕೊಂಡಿದ್ದಾರೆ ಎಂಬ ಮಾತುಗಳು ಕೇಳಿ ಬರುತ್ತಿದೆ. ಆದರೆ ಈ ಬಗ್ಗೆ ಅಧಿಕೃತ ಮಾಹಿತಿ ಇನ್ನಷ್ಟೆ ಚಿತ್ರತಂಡದಿಂದ ಹೊರಬೀಳಬೇಕಿದೆ.



# ದಿಶಾ ಪಟಾನಿ ಮನೆ ಬಳಿ ಗುಂಡಿನ ದಾಳಿ

ಉತ್ತರ ಪ್ರದೇಶದ ಬರೇಲಿಯಲ್ಲಿರುವ ಬಾಲಿವುಡ್‌ನಟಿ ದಿಶಾ ಪಟಾನಿ ಅವರ ಮನೆ ಹೊರಗೆ ತಡರಾತ್ರಿ ಗುಂಡಿನ ದಾಳಿ ನಡೆದಿದೆ. ಬೈಕ್‌ನಲ್ಲಿ ಬಂದ ಇಬ್ಬರು ದುಷ್ಕರ್ಮಿಗಳು ಗುಂಡು ಹಾರಿಸಿದ್ದಾರೆ. ಬೆಳಗ್ಗಿನ ಜಾವ 3:30ರ ಸುಮಾರಿಗೆ, ಬೈಕ್‌ನಲ್ಲಿ ಬಂದ ಇಬ್ಬರು ದುಷ್ಕರ್ಮಿಗಳು ದಿಶಾ ಪಟಾನಿ ಅವರ ಮನೆಯ ಮೇಲೆ ಮೂರರಿಂದ ನಾಲ್ಕು ಸುತ್ತು ಗುಂಡುಹಾರಿಸಿದ್ದಾರೆ. ಗೋಲ್ಡಿ ಬ್ರಾರ್ ಗ್ಯಾಂಗ್ ಗುಂಡಿನ ದಾಳಿ ಹೊಣೆಯನ್ನ ಹೊತ್ತುಕೊಂಡಿದೆ. ಸದ್ಯ ಘಟನೆಯಲ್ಲಿ ಯಾರೊಬ್ಬರೂ ಗಾಯಗೊಂಡಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಈ ಘಟನೆಯು ಪ್ರದೇಶದಲ್ಲಿ ಕೋಲಾಹಲ ಸೃಷ್ಟಿಸಿದ್ದು ಮಾಹಿತಿ ಪಡೆದ ನಂತರ, ದಿಶಾ ಪಟಾನಿ ಅವರ ಮನೆ ಮುಂದೆ ಭಾರೀ ಪೊಲೀಸ್ ಪಡೆ ನಿಯೋಜಿಸಲಾಗಿದೆ.

ದಾಳಿ ಹೊಣೆ ಹೊತ್ತುಕೊಂಡಿರುವ ಗೋಲ್ಡಿ ಬ್ರಾರ್ ಗ್ಯಾಂಗ್ ಸೋಷಿಯಲ್ ಮೀಡಿಯಾ ಪೋಸ್ಟ್‌ವೊಂದನ್ನು ಹಂಚಿಕೊಂಡಿದೆ. ಹಿಂದಿಯಲ್ಲಿ ಬರೆಯಲಾದ ಪೋಸ್ಟ್‌ನಲ್ಲಿ ಇಬ್ಬರು ಪುರುಷರ ಹೆಸರನ್ನು ಉಲ್ಲೇಖಿಸಲಾಗಿದೆ. ಜೊತೆಗೆ ಇದು ಚಿತ್ರೋದ್ಯಮಕ್ಕೆ ನೀಡಲಾದ ಎಚ್ಚರಿಕೆ ಎಂದೂ ಕೂಡ ಬರೆದುಕೊಂಡಿದೆ.

**ಪತ್ರದಲ್ಲಿ ಏನಿದೆ?:** ಎಲ್ಲಾ ಸಹೋದರರಿಗೆ ರಾಮ್ ರಾಮ್ ನಾನು, ವೀರೇಂದ್ರ ಚರಣ್, ಮಹೇಂದ್ರ ಶರಣ್ (ದೆಲಾನಾ).

ಸಹೋದರರೇ, ಖುಷ್ಬೂ ಪಟಾನಿ/ದಿಶಾ ಪಟಾನಿ (ಬಾಲಿವುಡ್ ನಟಿ) ಮನೆಯಲ್ಲಿ (ವಿಲ್ಲಾ ನಂ. 40, ಸಿವಿಲ್ ಲೈನ್ಸ್, ಬರೇಲಿ, ಯುಪಿ) ನಡೆದ ಗುಂಡಿನ ದಾಳಿಯನ್ನು ನಾವು ಮುಗಿಸಿದ್ದೇವೆ. ಅವರು ನಮ್ಮ ಪೂಜ್ಯ ಸಂತರನ್ನು (ಪ್ರೇಮಾನಂದ ಜಿ ಮಹಾರಾಜ್ ಮತ್ತು ಅನಿರುದ್ಧಾಚಾರ್ಯ ಜಿ ಮಹಾರಾಜ್) ಅವಮಾನಿಸಿದ್ದಾರೆ. ಅಲ್ಲದೇ ನಮ್ಮ ಸನಾತನ ಧರ್ಮವನ್ನು ಅವಮಾನಿಸಲು ಪ್ರಯತ್ನಿಸಿದರು.

ನಮ್ಮ ದೇವತೆಗಳ ಮೇಲಿನ ಅವಮಾನ ಸಹಿಸಲಾಗದು. ಇದು ಕೇವಲ ಟ್ರೈಲರ್ ಅಷ್ಟೇ. ಮುಂದಿನ ಬಾರಿ, ಅವರು ಅಥವಾ ಬೇರೆ ಯಾರಾದರೂ ನಮ್ಮ ಧರ್ಮದ ಬಗ್ಗೆ ಅಗೌರವ ತೋರಿಸಿದ್ರೆ, ಅವರ ಮನೆಯಲ್ಲಿ ಯಾರೂ ಜೀವಂತವಾಗಿ ಉಳಿಯುವುದಿಲ್ಲ ಎಂದು ಎಚ್ಚರಿಕೆ ನೀಡಿದೆ. ಇನ್ನೂ ಘಟನೆ ಬಳಿಕ ನೆರೆಹೊರೆಯ ಜನ ಭಯಭೀತರಾಗಿದ್ದಾರೆ. ಕುಟುಂಬಸ್ಥರು ಆತಂಕಗೊಂಡಿದ್ದಾರೆ. ಮಾಹಿತಿ ಪಡೆದ ಪೊಲೀಸರು ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸಿದ್ದು, ಇಬ್ಬರು ಬೈಕ್ ಸವಾರರು ಸಿಸಿಟಿವಿಯಲ್ಲಿ ಕಾಣಿಸಿಕೊಂಡಿದ್ದಾರೆ. ಏತನ್ಮಧ್ಯೆ, ಗುಂಡು ಹಾರಿಸಿದ ಯುವಕರನ್ನು ಹಿಡಿಯಲು ಹಲವಾರು ತಂಡಗಳನ್ನು ರಚಿಸಲಾಗಿದೆ ಎಂದು ಬರೇಲಿ ಎಸ್‌ಎಸ್‌ಪಿ ಅನುರಾಗ್ ಆರ್ಯ ಹೇಳಿದ್ದಾರೆ. ಇದರೊಂದಿಗೆ, ಸುತ್ತಮುತ್ತಲಿನ ಪ್ರದೇಶದ ಸಿಸಿಟಿವಿ ದೃಶ್ಯಾವಳಿಗಳನ್ನು ಸಹ ಸ್ಕ್ಯಾನ್ ಮಾಡಲಾಗುತ್ತಿದೆ.



# ಗೆಳತಿಯರ ಜೊತೆ ಇಟಲಿಗೆ ಹಾರಿದ

ನಟಿ ಶರ್ಮಿಳಾ ಮಾಂಡ್ರೆ ಸಿನಿಮಾ ಕೆಲಸಗಳಿಂದ ಬಿಡುವು ಸಿಕ್ಕಾಗಲೆಲ್ಲಾ ಪ್ರವಾಸ ಕೈಗೊಳ್ಳುತ್ತಾರೆ. ಅವರು ಐರೋಪ್ಯ ರಾಷ್ಟ್ರಗಳಿಗೆ ಆಗಿಂದಾಗ್ಗೆ ಪ್ರವಾಸ ಕೈಗೊಳ್ಳುತ್ತಿರುತ್ತಾರೆ. ಈ ಬಾರಿ ಏಳು ದಿನಗಳ ಪ್ರವಾಸದಲ್ಲಿರುವ ಶರ್ಮಿಳಾ ಮಾಂಡ್ರೆ, ಗೆಳತಿಯರ ಜತೆಯಲ್ಲಿ ಇಟಲಿಯ ಬೀಚುಗಳಲ್ಲಿ ಕಾಲ ಕಳೆದು, ಅಲ್ಲಿನ ಪ್ರಕೃತಿ ಸೌಂದರ್ಯವನ್ನು ಸವಿಯುತ್ತಿದ್ದಾರೆ. ಸಾಕಷ್ಟು ಐರೋಪ್ಯ ದೇಶಗಳಿಗೆ ಭೇಟಿ ನೀಡಿರುವ ನಟಿ ಶರ್ಮಿಳಾ ಮಾಂಡ್ರೆ ತಮ್ಮ ಪ್ರವಾಸದ ಕುರಿತು ವಿವರಿಸುತ್ತ, 'ಈ ಬಾರಿ ಅಮಾಲ್ಫಿ ಕರಾವಳಿ ಭಾಗದ ರಮಣೀಯ ತಾಣಗಳಿಗೆ ಭೇಟಿ ನೀಡಿದ್ದೇನೆ. ಇಟಲಿಯ ಪೊಸಿಟಾನೋ, ಕ್ಯಾಪ್ರಿ ಕರಾವಳಿ ತಾಣಗಳನ್ನು ನೋಡಿದ್ದಾಗಿದೆ. ಇದಾದ ನಂತರ ಜಗದ್ವಿಖ್ಯಾತ ರೋಮ್ ನಗರ ಹಾಗೂ ಟಸ್ಕನಿಗೆ ತೆರಳುತ್ತಿದ್ದೇನೆ. ಇಟಲಿಯ ಬೀಚುಗಳು ತುಂಬಾನೆ ಸುಂದರವಾಗಿರುತ್ತವೆ. ಈ ಬೀಚುಗಳ ವಿಶೇಷ ಅಂದ್ರೆ, ಇವು ಸುತ್ತ ಬೆಟ್ಟ ಹಾಗು ಗುಡ್ಡದಿಂದ ಆವೃತವಾಗಿರುತ್ತವೆ. ಈ ಬೆಟ್ಟಗಳ ಮೇಲಿನ ಮನೆಗಳು ಈ ಬೀಚುಗಳನ್ನು ಇನ್ನಷ್ಟು ಅದ್ಭುತವಾಗಿ ಕಾಣುವಂತೆ ಮಾಡುತ್ತವೆ. ಉಳಿದ ಯೂರೋಪ್ ಖಂಡದ ಬೀಚುಗಳಿಗೆ ಹೋಲಿಸಿದ್ರೆ ಇಟಲಿಯ ಬೀಚುಗಳು ಒಂದಕ್ಕಿಂತ ಒಂದು ಈ ಎಲ್ಲಾ ಬಗೆಯ ನೋಟಗಳನ್ನು ಒಳಗೊಂಡ ಬೀಚುಗಳು ಇಟಲಿ ದೇಶ ಒಂದರಲ್ಲೇ ಇರುವುದು ಮತ್ತಷ್ಟು ವಿಶೇಷ' ಎಂದಿದ್ದಾರೆ.


# ನೀವು ಊಹಿಸಿದಂತೆ ಕಥೆ ನಡೆಯಲ್ಲ:ಕಿರಣ್



ಕಿರಣ್ ರಾಜ್ ಅವರು 'ಕನ್ನಡತಿ' ಧಾರಾವಾಹಿ ಮೂಲಕ ಜನಪ್ರಿಯತೆ ಪಡೆದವರು. ಅವರು ಈಗ 'ಕರ್ಣ' ಧಾರಾವಾಹಿ ಮೂಲಕ ಜೀ ಕನ್ನಡ ಪ್ರೇಕ್ಷಕರ ಎದುರು ಬಂದಿದ್ದಾರೆ. ಅವರು 'ಕರ್ಣ' ಧಾರಾವಾಹಿ ಬಗ್ಗೆ, ಅದರ ಕಥೆ ಬಗ್ಗೆ ದೊಡ್ಡ ಹಿಂಟ್ ಒಂದನ್ನು ನೀಡಿದ್ದಾರೆ. ನೀವು ಅಂದುಕೊಂಡಂತೆ ಧಾರಾವಾಹಿ ಕಥೆ ನಡೆಯಲ್ಲ. ಅದಕ್ಕೆ ವಿರುದ್ಧವಾಗಿಯೇ ಕಥೆ ಸಾಗುತ್ತದೆ' ಎಂದು ಅವರು ಹೇಳಿದ್ದಾರೆ. ಈ ಮೂಲಕ ಮುಂದೆ ಏನಾಗುತ್ತದೆ ಎಂಬ ಕುತೂಹಲ ಮೂಡಿದೆ.

ಯಾವುದೇ ಹೊಸ ಧಾರಾವಾಹಿ ಆರಂಭ ಆದರೂ ಆರಂಭದ ಹಂತದಲ್ಲಿ ಸಾಕಷ್ಟು ಸುದ್ದಿ ಆಗುತ್ತದೆ. ಧಾರಾವಾಹಿಯ ಕಥೆ ಹಾಗೆ ಸಾಗಬಹುದು, ಹೀಗೆ ಸಾಗಬಹುದು ಎಂದೆಲ್ಲ ಊಹಿಸಲಾಗುತ್ತದೆ. ಕರ್ಣ ಧಾರಾವಾಹಿಯಲ್ಲೂ ಅದು ಮುಂದುವರಿದಿದೆ. ಈ ಧಾರಾವಾಹಿ ಬಗ್ಗೆ ವಿವಿಧ ರೀತಿಯ ಊಹೆಗಳು ಬರುತ್ತಿವೆ. ಆದರೆ, ಹಾಗಾಗೋದಿಲ್ಲ ಎಂಬುದು ಕಿರಣ್ ರಾಜ್ ಅವರ ಮಾತು. ಅವರು ಸಂದರ್ಶನ ಒಂದರಲ್ಲಿ ಈ ಬಗ್ಗೆ ಹೇಳಿದ್ದಾರೆ.

'ನಿಧಿನ ಮದುವೆ ಆಗ್ತೀರಾ, ನಿತ್ಯಾನ ಮದುವೆ ಆಗ್ತಾರಾ ಎಂದು ಕೇಳುತ್ತಾ ಇದ್ದಾರೆ' ಎಂಬುದಾಗಿ ಸಂದರ್ಶಕರು ಕೇಳಿದರು. ಆಗ ಕಿರಣ್ ರಾಜ್ ಅವರು, ಎಪಿಸೋಡ್‌ನಲ್ಲಿ ಅವರೇ ಹಾಕುತ್ತಾರೆ, ಆಗ ನೋಡಿ' ಎಂದು ಕಿರಣ್ ರಾಜ್ ಹೇಳಿದ್ದಾರೆ. 'ನೀವು ಏನು ನಿರೀಕ್ಷಿಸುತ್ತೀರೋ ಅದಂತೂ ಆಗಲ್ಲ. ನಮ್ಮ ವಿಮರ್ಶೆ ಮೇಲೆ ಕಥೆ ಬರೆಯಲಾಗುತ್ತದೆ ಎಂದು ಎಲ್ಲರೂ ಊಹಿಸುತ್ತಾರೆ. ಆದರೆ, ಅದಕ್ಕೆ ವಿರುದ್ಧವಾಗಿ ಮಾಡಿದಾಗಲೇ ಟಿಆರ್‌ಪಿ ಹೆಚ್ಚುತ್ತದೆ' ಎಂದು ಕಿರಣ್ ರಾಜ್ ಹೇಳಿದ್ದಾರೆ.



# ಜನ ಬೈದರು ಪರವಾಗಿಲ್ಲ, ನಮಗೆ ಮಕ್ಕಳು ಬೇಡ; ಸಂಗೀತಾ ಭಟ್

ಸಂಗೀತಾ ಭಟ್ ನಟನೆಯ ಕಮಲ್ ಶ್ರೀದೇವಿ ಸಿನಿಮಾದ ಟ್ರೈಲರ್ ಲಾಂಚ್ ಇತ್ತೀಚೆಗೆ ನಡೆದಿದೆ. ಪತ್ನಿಗೆ ಸಾಥ್ ನೀಡಲು ಪತಿ ಸುದರ್ಶನ್ ರಂಗಪ್ರಸಾದ್ ಈವೆಂಟ್‌ನಲ್ಲಿ ಭಾಗಿಯಾಗಿದ್ದರು. ಈ ವೇಳೆ, ಸಿನಿಮಾ, ತಮ್ಮ ವೈಯಕ್ತಿಕ ಜೀವನ ಸೇರಿದಂತೆ ಹಲವು ವಿಚಾರಗಳನ್ನ ಮಾಧ್ಯಮಗಳ ಜೊತೆ ಹಂಚಿಕೊಂಡಿದ್ದಾರೆ. ನಟಿ ಸಂಗೀತಾ ಭಟ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದರೆ, ಅವರ ಪತಿ ಸುದರ್ಶನ್ ರಂಗಪ್ರಸಾದ್ ಅವರು ಭಾಗ್ಯಲಕ್ಷ್ಮೀಧಾರಾವಾಹಿಯ ತಾಂಡವ್ ಪಾತ್ರದ ಮೂಲಕ ಸಖತ್ ಫೇಮಸ್ ಆಗಿದ್ದಾರೆ. ಇದೀಗ ಈ ದಂಪತಿ ತಮ್ಮ ವೈಯಕ್ತಿಕ ಜೀವನದಲ್ಲಿ ಮಕ್ಕಳನ್ನ ಹೊಂದದಿರಲು ಕಾರಣವೇನು ಅನ್ನೋದರ ಬಗ್ಗೆ ಮಾತನಾಡಿದ್ದಾರೆ. **ಮಕ್ಕಳು ಬೇಡ ಅನ್ನೋ ನಿರ್ಧಾರ ಯಾಕೆ?:** ನಮಗೆ ಮೊದಲಿನಿಂದಲೂ ಜವಾಬ್ದಾರಿಯನ್ನ ಬಯಸುವುದಿಲ್ಲ. ನೋಡುವ ಜನ ಬಾಯಿಗೆ ಬಂದಂತೆ ನಮ್ಮನ್ನು ಬೈದುಕೊಳ್ಳಬಹುದು. ಏನು ಜವಾಬ್ದಾರಿ ಬೇಡ ಅಂದರೆ ಮಕ್ಕಳು ಬೇಡಾ ಅಂತಾನಾ ಅಂತ. ಆದರೆ, ಅದು ಹಾಗಲ್ಲ. ನಮಗೆ ನಮ್ಮ ಜೀವನದಲ್ಲಿ ಆದಂತಹ ಘಟನೆಗಳು ಏನಿದೆ, ಅದರಿಂದ ಇನ್ನೊಂದು ಜೀವಿನಾ ಈ ಯೂನಿವರ್ಸ್‌ಗೆ ತರುವುದು ಬೇಡ ಅನ್ನೋದು ಒಂದು ಕಾರಣ ಎಂದಿದ್ದಾರೆ ನಟಿ ಸಂಗೀತಾ ಭಟ್. ಇನ್ನೊಂದು, ನಾವು ಈಗಿರುವ ಸಿಚ್ಯೂವೇಷನ್‌ನಲ್ಲಿ ತುಂಬಾ ಎಕ್ಸ್ ಪೆನ್‌ಸೀವ್ ಇದೆ. ಅದು ಜೋಕ್ ಅಲ್ಲವೇ ಅಲ್ಲ. ಒಂದು ಮಗುವನ್ನ ಇಲ್ಲಿಗೆ ತಂದು, ಅದನ್ನ ನೋಡಿಕೊಂಡು, ಅದಕ್ಕೆ ಬೇಕಾದಂತಹ ಜೀವನ ಕೊಡೋದು, ಅದಕ್ಕೆ ಸನಮ್ಮ ಲೈಫ್‌ನ ನಾವು ತ್ಯಾಗ ಮಾಡೋದು ಆ ರೋಲರ್ ಕೋಸ್ಟರ್ ನಮಗೆ ಬೇಡ ಎಂದ್ದಾರೆ.



# ಬಾಂಗ್ಲಾದೇಶ ವಿರುದ್ಧ ಗೆದ್ದ ಲಂಕಾ

ಏಷ್ಯಾಕಪ್ ಐದನೇ ಪಂದ್ಯವು ಗ್ರೂಪ್ ಬಿ ತಂಡಗಳಾದ ಬಾಂಗ್ಲಾದೇಶ ಮತ್ತು ಶ್ರೀಲಂಕಾ ನಡುವೆ ನಡೆಯಿತು. ಈ ಪಂದ್ಯವನ್ನು ಏಕಪಕ್ಷೀಯ ರೀತಿಯಲ್ಲಿ ಗೆದ್ದುಕೊಳ್ಳುವಲ್ಲಿ ಯಶಸ್ವಿಯಾದ ಶ್ರೀಲಂಕಾ ತಂಡ ಟೂರ್ನಿಯಲ್ಲಿ ಗೆಲುವಿನ ಆರಂಭ ಪಡೆದುಕೊಂಡಿದೆ. ಇತ್ತ ತನ್ನ ಮೊದಲ ಪಂದ್ಯದಲ್ಲಿ ಹಾಂಗ್ ಕಾಂಗ್ ವಿರುದ್ಧ ಸುಲಭ ಜಯ ದಾಖಲಿಸಿದ್ದ ಬಾಂಗ್ಲಾದೇಶ ತಂಡ, ಲಂಕಾ ವಿರುದ್ಧ ಬ್ಯಾಟಿಂಗ್ ಹಾಗೂ ಬೌಲಿಂಗ್ ಎರಡೂ ವಿಭಾಗದಲ್ಲೂ ಸಪ್ಪೆ ಪ್ರದರ್ಶನ ನೀಡಿತು. ಮೊದಲು ಬ್ಯಾಟಿಂಗ್ ಮಾಡಿದ ಬಾಂಗ್ಲಾ ತಂಡ 140 ರನ್ ಕಲೆಹಾಕಿದರೆ, ಈ ಗುರಿ ಬೆನ್ನಟ್ಟಿದ ಶ್ರೀಲಂಕಾ ತಂಡ 4 ವಿಕೆಟ್‌ಗಳನ್ನು ಕಳೆದುಕೊಂಡು 14.4 ಓವರ್‌ಗಳಲ್ಲಿ ಜಯದ ನಗೆ ಬೀರಿತು.

ಶೂನ್ಯಕ್ಕೆ 2 ವಿಕೆಟ್ ಪತನ: ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಬಾಂಗ್ಲಾದೇಶ ತಂಡಕ್ಕೆ ಕಳಪೆ ಆರಂಭ ಸಿಕ್ಕಿತು. ತಂಡದ ಆರಂಭಿಕರಿಬ್ಬರು ಯಾವುದೇ ರನ್ ಕಲೆಹಾಕದೆ ಶೂನ್ಯಕ್ಕೆ ವಿಕೆಟ್ ಒಪ್ಪಿಸಿದರು. ಕೇವಲ ಐದು ಎಸೆತಗಳ ಅಂತರದಲ್ಲಿ ತಂಡದ ಇಬ್ಬರೂ ಆರಂಭಿಕ ಬ್ಯಾಟ್ಸ್‌ಮನ್‌ಗಳು ಪೆವಿಲಿಯನ್‌ಗೆ ಮರಳಿದರು. ಮೊದಲ ಓವರ್‌ನ ಕೊನೆಯ ಎಸೆತದಲ್ಲಿ, ನುವಾನ್ ತುಷಾರ ಅವರು ತಂಜಿದ್ ಹಸನ್ ಅವರನ್ನು ಬೌಲ್ಡ್ ಮಾಡಿದರು. ಇದಾದ ನಂತರ, ದುಷ್ಮಂತ ಚಮೀರ, ಪರ್ವೇಜ್ ಹುಸೇನ್ ಎಮನ್ ಅವರನ್ನು ಔಟ್ ಮಾಡಿದರು.

**ಝೂಕಿರ್ ಮತ್ತು ಶಮೀಮ್ ಹೋರಾಟ:** ಆ ಬಳಿಕ ಬಂದ ತೌಹೀದ್ ಹೃದಯ್ ಕೂಡ ಎಂಟು ರನ್ ಗಳಿಸಿ ರನೌಟ್ ಆದರು. ಬಾಂಗ್ಲಾದೇಶಕ್ಕೆ ನಾಲ್ಕನೇ ಹೊಡೆತ ನೀಡಿದ ವನಿಂದು ಹಸರಂಗ ಮೆಹದಿ ಹಸನ್ ಅವರನ್ನು ಎಲ್ಬಿಡಬ್ಲ್ಯೂ ಔಟ್ ಮಾಡಿದರು. ನಾಯಕ ಲಿಟನ್ ದಾಸ್ ಕೂಡ ಕೇವಲ 28 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಆದಾಗ್ಯೂ, ಕೆಳಕ್ರಮಾಂಕದಲ್ಲಿ ಒಂದಾದ ಝೂಕಿರ್ ಮತ್ತು ಶಮೀಮ್ 70 ಕ್ಕೂ ಹೆಚ್ಚು ರನ್‌ಗಳ ಪಾಲುದಾರಿಕೆಯನ್ನು ಹಂಚಿಕೊಂಡು ಬಾಂಗ್ಲಾದೇಶದ ಸ್ಕೋರ್ ಅನ್ನು 139 ರನ್‌ಗಳಿಗೆ ಕೊಂಡೊಯ್ದರು. ಇವರಿಬ್ಬರು ಕ್ರಮವಾಗಿ 41 ಮತ್ತು 42 ರನ್ ಗಳಿಸಿ ಅಜೇಯರಾಗಿ ಉಳಿದರು. ಇತ್ತ ಶ್ರೀಲಂಕಾ ಪರ ಹಸರಂಗ ಎರಡು ವಿಕೆಟ್ ಪಡೆದರೆ, ನುವಾನ್ ತುಷಾರ ಮತ್ತು ದುಷ್ಮಂತ ಚಮೀರ ತಲಾ ಒಂದು ವಿಕೆಟ್ ಪಡೆದರು.

ಈ ಗುರಿ ಬೆನ್ನಟ್ಟಿದ ಶ್ರೀಲಂಕಾ ತಂಡ ಕೂಡ ಕಳಪೆ ಆರಂಭವನ್ನೇ ಕಂಡಿತು. ವೇಗಿ ಮುಸ್ತಾಫಿಜುರ್ ರೆಹಮಾನ್ ಎರಡನೇ ಓವರ್‌ನಲ್ಲಿ ಕುಶಾಲ್ ಮೆಂಡಿಸ್ ಅವರನ್ನು ಬಲಿಪಶುವನ್ನಾಗಿ ಮಾಡಿದರು. ಆದರೆ ಆ ಬಳಿಕ ಜೊತೆಯಾದ ಪಾತುಮ್ ನಿಸ್ಸಂಕಾ ಹಾಗೂ ಕಾಮಿಲ್ ಮಿಶಾರ ಎರಡನೇ ವಿಕೆಟ್‌ಗೆ 95 ರನ್‌ಗಳ ಜೊತೆಯಾಟವನ್ನಾಡುವ ಮೂಲಕ ತಂಡದ ಗೆಲುವನ್ನು ಖಚಿತಪಡಿಸಿದರು. ಈ ವೇಳೆ ಭರ್ಜರಿ ಅರ್ಧಶತಕ ಸಿಡಿಸಿದ ಆರಂಭಿಕ ನಿಸ್ಸಂಕಾ 34 ಎಸೆತಗಳಲ್ಲಿ 50 ರನ್ ಬಾರಿಸಿ ಔಟಾದರೆ, ಕಾಮಿಲ್ ಮಿಶಾರ ಅಜೇಯ 46 ರನ್‌ಗಳ ಇನ್ನಿಂಗ್ಸ್ ಆಡಿ ತಂಡವನ್ನು ಗೆಲುವಿನ ದಡ ಮುಟ್ಟಿಸಿದರು.

# ವೇಗವಾಗಿ ಬೌಲ್ ಮಾಡುವ ಮನಸ್ಥಿತಿಯಲ್ಲಿ ನಾನಿಲ್ಲ: ಪಾಕ್ ವೇಗಿ

ಏಷ್ಯಾಕಪ್‌ನಲ್ಲಿ ನಾಳೆ ಭಾರತ ಹಾಗೂ ಪಾಕಿಸ್ತಾನ ನಡುವೆ ಮಹತ್ವದ ಪಂದ್ಯ ನಡೆಯಲಿದೆ. ಈ ಪಂದ್ಯಕ್ಕಾಗಿ ಉಭಯ ತಂಡಗಳು ಈಗಾಗಲೇ ಸಜ್ಜಾಗಿವೆ. ಆದಾಗ್ಯೂ ಈ ಪಂದ್ಯಕ್ಕೂ ಮುನ್ನ ಪಾಕಿಸ್ತಾನದ ವೇಗದ ಬೌಲರ್ ಹ್ಯಾರಿಸ್ ರೌಫ್ ತಮ್ಮ ವೇಗದ ಬೌಲಿಂಗ್ ಬಗ್ಗೆ ಮಹತ್ವದ ಹೇಳಿಕೆ ನೀಡಿದ್ದಾರೆ. ಭಾರತ ವಿರುದ್ಧದ ಪಂದ್ಯಕ್ಕೂ ಮುನ್ನ ಮಾತನಾಡಿರುವ ಹ್ಯಾರಿಸ್ ರೌಫ್ ಇನ್ನು ಮುಂದೆ ಕೇವಲ ವೇಗವಾಗಿ ಬೌಲಿಂಗ್ ಮಾಡುವುದರ ಮೇಲೆ ಹೆಚ್ಚು ಗಮನ ಹರಿಸುವುದಿಲ್ಲ ಎಂದಿದ್ದಾರೆ. ಗಂಟೆಗೆ 150 ಕಿ.ಮೀ ವೇಗದಲ್ಲಿ ಬೌಲಿಂಗ್ ಮಾಡುವ ಹ್ಯಾರಿಸ್ ರೌಫ್ ಈ ರೀತಿಯ ಹೇಳಿಕೆ ನೀಡಿರುವುದು ಕೆಲವರಲ್ಲಿ ಅಚ್ಚರಿ ಮೂಡಿಸಿದೆ.



**ಹ್ಯಾರಿಸ್ ರೌಫ್ ಹೇಳಿದ್ದೇನು:** ಏಷ್ಯಾಕಪ್ ಪ್ರಸಾರಕರೊಂದಿಗೆ ಮಾತನಾಡುಡಿರುವ ಹ್ಯಾರಿಸ್ ರೌಫ್, 'ಈಗ ತಮ್ಮ ಮನಸ್ಥಿತಿ ಮೊದಲಿನಂತಿಲ್ಲ, ನನಗೆ ವೇಗದ ಚೆಂಡನ್ನು ಎಸೆಯುವ ಮನಸ್ಥಿತಿ ಇಲ್ಲ. ಈಗ ಬ್ಯಾಟ್ಸ್‌ಮನ್‌ಗಳು ವೇಗದ ಚೆಂಡುಗಳ ಮೇಲೆ ವಿಚಿತ್ರ ಹೊಡೆತಗಳನ್ನು ಆಡುತ್ತಾರೆ. ಆಧುನಿಕ ಕಾಲಕ್ಕೆ ಅನುಗುಣವಾಗಿ ನಾನು ನನ್ನ ಕೌಶಲ್ಯವನ್ನು ಬದಲಾಯಿಸಿದ್ದೇನೆ. ಟಿ20 ಕ್ರಿಕೆಟ್‌ನಲ್ಲಿ ನಿಮಗೆ ಒಳ್ಳೆಯ ದಿನವಿದ್ದರೆ, ನೀವು ಅದ್ಭುತಗಳನ್ನು ಮಾಡಬಹುದು. ಟಿ20 ಕ್ರಿಕೆಟ್ ದಿನಕ್ಕೆ ತಕ್ಕಂತೆ ನಡೆಯುತ್ತದೆ. ನಿಮಗೆ ಒಳ್ಳೆಯ ದಿನವಿದ್ದರೆ, ಕೆಟ್ಟ ಚೆಂಡಿನಲ್ಲೂ ವಿಕೆಟ್ ಪಡೆಯಬಹುದು. ಇತ್ತೀಚಿನ ದಿನಗಳಲ್ಲಿ, ಉತ್ತಮ ಚೆಂಡುಗಳ ಮೇಲೆ ಬಹಳಷ್ಟು ಉತ್ತಮ ಹಿಟ್‌ಗಳನ್ನು ಮಾಡಲಾಗುತ್ತಿದೆ ಎಂದಿದ್ದಾರೆ.

**ಹ್ಯಾರಿಸ್ ರೌಫ್ ಲಯದಲಿಲ್ಲ:** ಹ್ಯಾರಿಸ್ ರೌಫ್ ಇದುವರೆಗೆ 89 ಟಿ20 ಪಂದ್ಯಗಳಲ್ಲಿ 124 ವಿಕೆಟ್‌ಗಳನ್ನು ಪಡೆದಿದ್ದಾರೆ ಆದರೆ ಅವರ ಎಕಾನಮಿ ದರ 8.34 ಆಗಿದೆ. ಭಾರತದ ವಿರುದ್ಧದ ಅವರ ಪ್ರದರ್ಶನದ ಬಗ್ಗೆ ಮಾತನಾಡಿದರೆ, ಅವರ ಎಕಾನಮಿ ದರ 8.15 ಆಗಿದ್ದು, ಆಡಿರುವ 5 ಪಂದ್ಯಗಳಲ್ಲಿ 7 ವಿಕೆಟ್‌ಗಳನ್ನು ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಆದರೆ ಇಲ್ಲಿ ಗಮನಿಸಬೇಕಾದ ಅಂಶವೆಂದರೆ ಅವರು ಭಾರತದ ವಿರುದ್ಧ ಪ್ರಮುಖ ಸಂದರ್ಭಗಳಲ್ಲಿ ರನ್‌ಗಳನ್ನು ನೀಡಿದ್ದಾರೆ, ಇದರಿಂದಾಗಿ ಪಾಕಿಸ್ತಾನ ಸೋಲನ್ನು ಎದುರಿಸಿದೆ. 2022 ರ ಟಿ20 ವಿಶ್ವಕಪ್‌ನಲ್ಲಿ, ವಿರಾಟ್ ಕೊಹ್ಲಿ ಇದೇ ರೌಫ್ ಓವರ್‌ನಲ್ಲಿ ಎರಡು ಸಿಕ್ಸರ್‌ಗಳನ್ನು ಬಾರಿಸುವ ಮೂಲಕ ಪಾಕಿಸ್ತಾನದಿಂದ ಜಯವನ್ನು ಕಸಿದುಕೊಂಡಿದ್ದರು. ಈಗ ಏಷ್ಯಾಕಪ್‌ನಲ್ಲಿ ಹ್ಯಾರಿಸ್ ಏನು ಮಾಡುತ್ತಾರೆ ಎಂಬುದನ್ನು ನೋಡುವುದು ಆಸಕ್ತಿದಾಯಕವಾಗಿರುತ್ತದೆ.

# ಸಾಲ್ಟ್ ಬೆಂಕಿ ಆಟಕ್ಕೆ ಹರಿಣರ ಪಡೆ ಛಿದ್ರ




ಫಿಲ್ ಸಾಲ್ಟ್ ಬೆಂಕಿ ಶತಕ ಹಾಗೂ ಇತರ ಬ್ಯಾಟರ್‌ಗಳ ಸ್ಫೋಟಕ ಆಟದಿಂದಾಗಿ ದಕ್ಷಿಣ ಆಫ್ರಿಕಾ ವಿರುದ್ಧ 2ನೇ ಟಿ20 ಪಂದ್ಯದಲ್ಲಿ ಇಂಗ್ಲೆಂಡ್ ಹಲವು ದಾಖಲೆಗಳನ್ನು ಪುಡಿಗಟ್ಟಿದೆ.

ಟಾಸ್ ಸೋತು ಮೊದಲ ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್ ರನ್‌ಗಳ ಸುರಿಮಳೆಯನ್ನೇ ಸುರಿಸಿತು.

ಈ ಮೂಲಕ ಅಂತಾರಾಷ್ಟ್ರೀಯ ಟಿ20ಯಲ್ಲಿ 3ನೇ ಗರಿಷ್ಠ ಸ್ಕೋರ್ ಮಾಡುವ ಮೂಲಕ ಹೊಸ ದಾಖಲೆಯನ್ನು ಸೃಷ್ಟಿಸಿತು. ಇಂಗ್ಲೆಂಡ್ ಕೇವಲ 2 ವಿಕೆಟ್ ಕಳೆದುಕೊಂಡು 304 ರನ್ ಕಲೆಹಾಕಿದ್ದು, ಇದು ಅಂತಾರಾಷ್ಟ್ರೀಯ ಟಿ20 ಕ್ರಿಕೆಟ್‌ನಲ್ಲಿ ಗಳಿಸಿದ 3ನೇ ಗರಿಷ್ಠ ರನ್ ಆಗಿದೆ. ಮೊದಲು ಬ್ಯಾಟ್ ಮಾಡಿದ್ದ ತಂಡ ತಂಡ 12.1 ಓವರ್‌ನಲ್ಲೇ 200ರ ಗಡಿ ದಾಟಿತು. ಇದೂ ಕೂಡ ಟಿ20ಯಲ್ಲಿ ಯಾವುದೇ ತಂಡದ ಪೈಕಿ ಗರಿಷ್ಠ ರನ್ ಆಗಿದೆ. ಇಂಗ್ಲೆಂಡ್ 20 ಓವರ್‌ಗಳಲ್ಲಿ ನೀಡಿದ್ದ 304 ರನ್‌ಗಳ ಗೆಲುವಿನ ಗುರಿಯನ್ನು ಬೆನ್ನಟ್ಟಿದ್ದ ದಕ್ಷಿಣ ಆಫ್ರಿಕಾ 16.1 ಓವರ್‌ಗಳಲ್ಲೇ ಆಲೌಟ್ ಆಯಿತು. ಐಡೆನ್ ಮಾರ್ಕ್ರಾಮ್ 20 ಎಸೆತಗಳಲ್ಲಿ 41 ರನ್, ಬ್ಜೋರ್ನ್ ಫೋರ್ಟುಯಿನ್ 16 ಎಸೆತಗಳಲ್ಲಿ 32 ರನ್, ಟ್ರಿಸ್ಟಾನ್ ಸ್ಟಬ್ಸ್ 25 ಎಸೆತಗಳಲ್ಲಿ 23 ರನ್, ಡೊನೊವನ್ ಪೆರೀರಾ 11 ಎಸೆತಗಳಲ್ಲಿ 23 ರನ್ ಕಲೆಹಾಕಿದರು. ಜೋಫ್ರಾ ಆರ್ಚರ್, ಸ್ಯಾಮ್ ಕರನ್ ಬೌಲಿಂಗ್ ಅಬ್ಬರಕ್ಕೆ ಮಣಿದು ದಕ್ಷಿಣ ಆಫ್ರಿಕಾ ಒಟ್ಟು 158 ರನ್‌ಗಳಿಸಿ ಪರಾಭವಗೊಂಡರು. ಇದಕ್ಕೂ ಮುನ್ನ ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್‌ನ ಆರಂಭಿಕ ಆಟಗಾರ ಫಿಲ್ ಸಾಲ್ಟ್ 39 ಎಸೆತಗಳಲ್ಲೇ ಶತಕ ಪೂರ್ಣಗೊಳಿಸಿ, ಇಂಗ್ಲೆಂಡ್ ಪರ ಅತಿ ವೇಗದ ಶತಕದ ದಾಖಲೆ ಬರೆದರು.

ಒಟ್ಟು 60 ಎಸೆತಗಳಲ್ಲಿ 15 ಬೌಂಡರಿ, 8 ಸಿಕ್ಸರ್‌ನೊಂದಿಗೆ ಔಟಾಗದೇ 141 ರನ್ ಗಳಿಸಿ, ಲಿವಿಂಗ್‌ಸ್ಟೋನ್ (42 ಎಸೆತ) ಹೆಸರಲ್ಲಿದ್ದ ದಾಖಲೆ ಮುರಿದರು. ಇದು ಇಂಗ್ಲೆಂಡ್ ಪರ ಟಿ20ಯಲ್ಲಿ ಬ್ಯಾಟರೊಬ್ಬರು ಗಳಿಸಿದ ಗರಿಷ್ಠ ರನ್. ಇನ್ನುಳಿದಂತೆ ಬಟ್ಲರ್ 30 ಎಸೆತಕ್ಕೆ 83, ಜಾಕೊಬ್ ಬೆಥಲ್ 14 ಎಸೆತಕ್ಕೆ 26, ನಾಯಕ ಹ್ಯಾರಿ ಬ್ರೂಕ್ 21 ಎಸೆತಕ್ಕೆ ಔಟಾಗದೇ 41 ರನ್ ಸಿಡಿಸಿದರು.

# ಭಾರತ- ಪಾಕ್ ಪಂದ್ಯಕ್ಕೆ ಭಾರತದಲ್ಲಿ ಭಾರಿ ವಿರೋಧ ಬಹಿಷ್ಕರಿಸುವಂತೆ ಒತ್ತಾಯ

2025 ರ ಏಷ್ಯಾಕಪ್‌ನಲ್ಲಿ ಭಾರತ ಮತ್ತು ಪಾಕಿಸ್ತಾನ ಸೆಪ್ಟೆಂಬರ್ 14 ರಂದು ದುಬೈನಲ್ಲಿ ಪರಸ್ಪರ ಮುಖಾಮುಖಿಯಾಗಲಿವೆ. ಆಪರೇಷನ್ ಸಿಂಧೂರ್ ನಂತರ ಎರಡೂ ತಂಡಗಳು ಮೊದಲ ಬಾರಿಗೆ ಮುಖಾಮುಖಿಯಾಗಲಿವೆ. ಈ ಪಂದ್ಯದ ಬಗ್ಗೆ ಭಾರತದಲ್ಲಿ ಸಾಕಷ್ಟು ಪ್ರತಿಭಟನೆ ವ್ಯಕ್ತವಾಗುತ್ತಿದೆ. ಈ ಪಂದ್ಯವನ್ನು ರದ್ದುಗೊಳಿಸುವಂತೆ ಸೋಶಿಯಲ್ ಮೀಡಿಯಾದಲ್ಲಿ ಒತ್ತಾಯ ಮಾಡಲಾಗುತ್ತಿದೆ. ದೇಶಕ್ಕಿಂತ ಕ್ರಿಕೆಟ್ ಮುಖ್ಯವಲ್ಲ, ಪಾಕಿಸ್ತಾನಕ್ಕೆ ಬುದ್ಧಿ ಕಲಿಸಬೇಕೆಂದರೆ, ಅವರ ವಿರುದ್ಧ ಯಾವುದೇ ಪಂದ್ಯವನ್ನು ಆಡಬಾರದು ಎಂದು ಭಾರತೀಯರು ಒತ್ತಾಯಿಸುತ್ತಿದ್ದಾರೆ. ಹಾಗೆಯೇ ಭಾರತೀಯರಿಗೆ ಕರೆಕೊಟ್ಟಿರುವ ನೆಟ್ಟಿಗರು ಭಾರತ ಹಾಗೂ ಸಪಾಕಿಸ್ತಾನ ನಡುವಿನ ಪಂದ್ಯವನ್ನು ಯಾರು ನೋಡಬೇಡಿ ಎಂದಿದ್ದಾರೆ.

**ಭಾರತದಲ್ಲಿ ಭಾರಿ ವಿರೋಧ:** ಮೇಲೆ ಹೇಳಿದಂತೆ ಪಾಕಿಸ್ತಾನ ವಿರುದ್ಧದ ಪಂದ್ಯದ ಬಗ್ಗೆ ಭಾರತದಲ್ಲಿ ಸಾಕಷ್ಟು ವಿರೋಧ ವ್ಯಕ್ತವಾಗಿದೆ. ಪೆಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ, ಭಾರತವು ಆಪರೇಷನ್ ಸಿಂಧೂರ್ ನಡೆಸಿ ಪಾಕಿಸ್ತಾನದಲ್ಲಿರುವ ಭಯೋತ್ಪಾದಕ ಶಿಬಿರವನ್ನು ನಾಶಪಡಿಸಿತ್ತು. ಅಂದಿನಿಂದ, ಎರಡೂ ದೇಶಗಳ ನಡುವೆ ಉದ್ವಿಗ್ನತೆ ಉಂಟಾಗಿದೆ. ಇದು ಕ್ರೀಡೆಗಳ ಮೇಲೂ ಪರಿಣಾಮ ಬೀರಿತು. ಪಾಕಿಸ್ತಾನದ ಹಾಕಿ ತಂಡ ಏಷ್ಯಾಕಪ್ ಆಡಲು ಭಾರತಕ್ಕೆ ಬಂದಿರಲಿಲ್ಲ, ಆದರೆ ಯುಎಇಯಲ್ಲಿ ನಡೆಯುತ್ತಿರುವ 2025 ರ ಏಷ್ಯಾಕಪ್‌ನಲ್ಲಿ ಟೀಂ ಇಂಡಿಯಾ ಸೆಪ್ಟೆಂಬರ್ 14 ರಂದು ದುಬೈನಲ್ಲಿ ಪಾಕಿಸ್ತಾನ ವಿರುದ್ಧ ಪಂದ್ಯವನ್ನು ಆಡಲಿದೆ. ಇದು ಭಾರತೀಯರ ಕೆಂಗಣ್ಣಿಗೆ ಗುರಿಯಾಗಿದೆ. ಈ ಹಿಂದೆ ನಡೆದಿದ್ದ ಲೆಜೆಂಡ್ಸ್ ಚಾಂಪಿಯನ್ ಶಿಪ್‌ನಲ್ಲಿ ಭಾರತ ತಂಡ ಪಾಕಿಸ್ತಾನ ವಿರುದ್ಧ ಪಂದ್ಯವನ್ನಾಡಲು ನಿರಾಕರಿಸಿ ಪಂದ್ಯಾವಳಿಯಿಂದ ತನ್ನ ಹೆಸರನ್ನು ಹಿಂಪಡೆದುಕೊಂಡಿತ್ತು. ಇದೀಗ ಟೀಂ ಇಂಡಿಯಾ ಕೂಡ ಅದೇ ದಾರಿಯನ್ನು ಅನುಸರಿಸಬೇಕು ಎಂಬುದು ಭಾರತೀಯರ ಆಗ್ರಹವಾಗಿದೆ.



**ಟೀಕೆಗೆ ಗುರಿಯಾದ ಬಿಸಿಸಿಐ:** ಒತ್ತಾಯದ ನಡುವೆಯೂ ಪಾಕಿಸ್ತಾನದ ವಿರುದ್ಧ ಪಂದ್ಯವನ್ನಾಡಲು ಸಿದ್ಧವಾಗಿರುವ ಬಿಸಿಸಿಐ ಅನ್ನು ಸಾಮಾಜಿಕ ಜಾಲತಾಣಗಳಲ್ಲಿ ತೀವ್ರವಾಗಿ ಟೀಕಿಸಲಾಗುತ್ತಿದೆ. ಆದಾಗ್ಯೂ ಅಭಿಮಾನಿಗಳ ಆಕ್ರೋಶವನ್ನು ಗಮನದಲ್ಲಿಟ್ಟುಕೊಂಡು ಪಾಕಿಸ್ತಾನದ ವಿಚಾರವಾಗಿ ಕ್ರೀಡಾ ಸಚಿವಾಲಯ ಹೊಸ ನೀತಿಯನ್ನು ಜಾರಿಗೆ ತಂದಿರುವುದಾಗಿ ತಿಳಿಸಿತ್ತು. ಅದರಲ್ಲಿ ಭಾರತ ತಂಡವು ಪಾಕಿಸ್ತಾನದ ವಿರುದ್ಧ ಯಾವುದೇ ದ್ವಿಪಕ್ಷೀಯ ಸರಣಿಯನ್ನು ಆಡುವುದಿಲ್ಲ. ಅಲ್ಲದೆ, ಭಾರತ ತಂಡವು ಯಾವುದೇ ಪಂದ್ಯಾವಳಿ ಅಥವಾ ಪಂದ್ಯಕ್ಕಾಗಿ ಪಾಕಿಸ್ತಾನಕ್ಕೆ ಹೋಗುವುದಿಲ್ಲ. ಪಾಕಿಸ್ತಾನ ತಂಡಕ್ಕೂ ಭಾರತದಲ್ಲಿ ಆಡಲು ಅವಕಾಶ ನೀಡುವುದಿಲ್ಲ. ಆದರೆ ಏಷ್ಯಾಕಪ್ ಬಹುರಾಷ್ಟ್ರೀಯ ಪಂದ್ಯಾವಳಿಯಾಗಿರುವುದರಿಂದ ನಾವು ಭಾರತ ಕ್ರಿಕೆಟ್ ತಂಡವನ್ನು ಅದರಲ್ಲಿ ಆಡುವುದನ್ನು ತಡೆಯುವುದಿಲ್ಲ ಎಂದು ಸಚಿವಾಲಯ ಸ್ಪಷ್ಟವಾಗಿ ತಿಳಿಸಿತ್ತು. ಈ ಕಾರಣದಿಂದಾಗಿ ಬಿಸಿಸಿಐ ಕೂಡ ಏಷ್ಯಾಕಪ್‌ನಲ್ಲಿ ಪಾಕಿಸ್ತಾನದ ವಿರುದ್ಧ ತಂಡವನ್ನು ಕಣಕ್ಕಿಳಿಸುತ್ತಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966